
ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 315, ಪುಟಗಳು: 8, ಗುರುವಾರ, 22 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3





ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines


### ಸುಭಾಷಿತ

ನಮ್ಮೆಲ್ಲ ಸಮಸ್ಯೆಗಳು ಪರಿಹಾರಗೊಳ್ಳುವ ತನಕ ಚಳವಳಿಗಳನ್ನು ಜೀವಂತವಾಗಿಟ್ಟಿರುವುದು ಅತ್ಯಗತ್ಯ. । ಕುವೆಂಪು

### ಪಂಚಾಂಗ

(ಗುರುವಾರ 22, ಆಗಸ್ಟ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು,
- ಶ್ರಾವಣ ಮಾಸ, ಕೃಷ್ಣ ಪಕ್ಷ,
- ತೃತೀಯ ತಿಥಿ, ಪೂರ್ವಭಾದ್ರ ನಕ್ಷತ್ರ
- ರಾಹುಕಾಲ- 01:57 PM 03:28 PM
- ಗುಳಿಕಕಾಲ - 09:24 AM 10:55 AM
- ಯಮಗಂಡಕಾಲ - 06:22 AM 07:53 AM

## ಸಾವಿರಾರು ಅನಾಥ ಮಕ್ಕಳನ್ನು ಸಲಹಿದ್ದ ಜಾಮ್ ಸಾಹೇಬ್ ಸ್ಮಾರಕಕ್ಕೆ

# ಪ್ರಧಾನಿ ಮೋದಿ ನಮನ

**ಪೋಲೆಂಡ್:** ''ನಿಮ್ಮನ್ನು ಅನಾಥ ಎಂದುಕೊಳ್ಳಬೇಡಿ ನಾನು ನಿಮ್ಮ ತಂದೆ'' ಎಂದು ಮಕ್ಕಳಿಗೆ ಅಭಯ ನೀಡಿ ಸಾವಿರಾರು ಅನಾಥ ಮಕ್ಕಳನ್ನು ಸಲಹಿದ್ದ ಜಾಮ್ ಸಾಹಿಬ್ ಸ್ಮಾರಕಕ್ಕೆ ಪ್ರಧಾನಿ ನರೇಂದ್ರ ಮೋದಿ ನಮಸ್ಕರಿಸಿದ್ದಾರೆ. ಪೋಲೆಂಡ್ ಭೇಟಿ ನೀಡಿದ್ದ ಪ್ರಧಾನಿ ಮೋದಿ, ಎರಡನೇ ಮಹಾ ಯುದ್ಧದ ಸಂದರ್ಭದಲ್ಲಿ ಯಹೂದಿ ಮಕ್ಕಳ ಜೀವ ಉಳಿಸಿದ್ದ ಮಹಾರಾಜ ಜಾಮ್ ಸಾಹೇಬರನ್ನು ನೆನೆದಿದ್ದಾರೆ.

ನವನಗರದ ಮಹಾರಾಜ ಜಾಮ್ ಸಾಹೇಬ್ ಪೋಲೆಂಡ್ ನಿಂದ ಭಾರತಕ್ಕೆ ಕರೆತರುವ ಮೂಲಕ ಅನೇಕ ಯಹೂದಿಗಳ ಜೀವವನ್ನು ಉಳಿಸಿದ್ದರು ಮಾತ್ರವಲ್ಲದೆ ಅವರನ್ನು ಸ್ವಂತ ಮಕ್ಕಳಂತೆ ನೋಡಿಕೊಂಡಿದ್ದರು. ಪ್ರಧಾನಿ ನರೇಂದ್ರ ಮೋದಿ ಬುಧವಾರ ಪೋಲೆಂಡ್ ತಲುಪಿದ್ದಾರೆ. ಪೋಲೆಂಡ್‌ನ ಉಪ ಪ್ರಧಾನಿ ಅವರನ್ನು ಸ್ವಾಗತಿಸಲು ವಿಮಾನ ನಿಲ್ದಾಣದಲ್ಲಿ ನಿಂತಿದ್ದರು. ವಾರ್ಸಾದ ಹೋಟೇಲ್‌ಗೆ ಪ್ರಧಾನಿ ಮೋದಿ ಆಗಮಿಸಿದ ತಕ್ಷಣ ಅಲ್ಲಿದ್ದ ನೂರಾರು ಭಾರತೀಯರು ಅವರನ್ನು ಸ್ವಾಗತಿಸಿದರು.

ಗೌರವಾರ್ಥವಾಗಿ ಭಾರತ್ ಮಾತಾ ಕಿ ಜೈ ಎಂಬ ಘೋಷಣೆಗಳು ಮೊಳಗಿದವು. ಸ್ವಲ್ಪ ಸಮಯದ ನಂತರ ಅವರು ನವನಗರದ ಜಾಮ್ ಸಾಹೇಬ್ ಸ್ಮಾರಕವನ್ನು ತಲುಪಿದರು. ಇದು ಗುಜರಾತ್‌ನೊಂದಿಗೆ ವಿಶೇಷ ಸಂಪರ್ಕವನ್ನು ಹೊಂದಿರುವ ಸ್ಥಳವಾಗಿದೆ. ಪೋಲೆಂಡ್‌ನ 1000 ಅನಾಥ ಮಕ್ಕಳನ್ನು ಪೋಷಕರಾಗಿ ಬೆಳೆಸಿದ ಭಾರತೀಯ ಮಹಾರಾಜರ ಹೆಸರನ್ನು ಈ ಸ್ಮಾರಕಕ್ಕೆ ಇಡಲಾಗಿದೆ.





ಆಗ ಮಕ್ಕಳಿಗೆ, ನಿಮ್ಮನ್ನು ಅನಾಥರೆಂದು ಪರಿಗಣಿಸಬೇಡಿ, ನಾನೇ ನಿಮ್ಮ ತಂದೆ' ಎಂದು ಹೇಳಿದ್ದರು. ಪ್ರಧಾನಿ ಮೋದಿ ಆ ಸ್ಥಳಕ್ಕೆ ತೆರಳಿ 80 ವರ್ಷಗಳ ಹಿಂದಿನ ಘಟನೆಯನ್ನು ನೆನಪಿಸಿಕೊಂಡರು. ವಾರ್ಸಾದ ನವನಗರದಲ್ಲಿ ನಿರ್ಮಿಸಲಾದ ಜಾಮ್ ಸಾಹೇಬ್ ಸ್ಮಾರಕವನ್ನು ಗುಜರಾತ್‌ನ ನವನಗರದ (ಈಗ ಜಾಮ್‌ನಗರ) ಮಾಜಿ ಮಹಾರಾಜ ಜಾಮ್ ಸಾಹೇಬ್ ದಿಗ್ವಿಜಯ್‌ಸಿನ್ಹ ಜಿ ರಂಜಿತ್‌ಸಿಂನ್ಹ ಜಿ ಜಡೇಜಾ ಅವರಿಗೆ ಸಮರ್ಪಿಸಲಾಗಿದೆ. ವಾರ್ಸಾದ ಜನರು ಅವನನ್ನು ಬಹಳ ಗೌರವದಿಂದ ನೋಡುತ್ತಾರೆ.

ಜಾಮ್ ಸಾಹೇಬ್ 1895 ರಲ್ಲಿ ಸರೋದ್ ನಲ್ಲಿ ಜನಿಸಿದರು. ಅವರು ರಾಜ್‌ಕುಮಾರ್ ಕಾಲೇಜು, ಮಾಲ್ವೆರ್ನ್ ಕಾಲೇಜು ಮತ್ತು ಯೂನಿವರ್ಸಿಟಿ ಕಾಲೇಜ್ ಲಂಡನ್‌ನಲ್ಲಿ ಅಧ್ಯಯನ ಮಾಡಿದರು. 1919 ರಲ್ಲಿ, ಅವರನ್ನು ಬ್ರಿಟಿಷ್ ಸೈನ್ಯದಲ್ಲಿ ಎರಡನೇ ಲೆಫ್ಟಿನೆಂಟ್ ಮಾಡಲಾಯಿತು.

ಪುಟ 2

# ಇಂದು ಸಚಿವ ಸಂಪುಟ ಸಭೆ

## ರಾಜ್ಯಪಾಲರ ವಿರುದ್ಧವೇ ಅಧಿಕಾರ ಚಲಾವಣೆಗೆ ಮುಂದಾದ ಕೈ ಸರ್ಕಾರ!

**ಬೆಂಗಳೂರು:** ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿರುವ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನಡೆಯ ವಿರುದ್ಧ ಸಿಡಿದೆದ್ದಿರುವ ಕಾಂಗ್ರೆಸ್, ಇದೀಗ ರಾಜ್ಯಪಾಲರ ವಿರುದ್ಧವೇ ಅಧಿಕಾರ ಚಲಾವಣೆಗೆ ಮುಂದಾಗಿದೆ. ಇಂದು ಬೆಳಗ್ಗೆ 11 ಗಂಟೆಗೆ ರಾಜ್ಯ ಸಚಿವ ಸಂಪುಟ ಸಭೆ ಕರೆಯಲಾಗಿದ್ದು, ಬಿಜೆಪಿ ಜೆಡಿಎಸ್ ಮಿತ್ರಪಕ್ಷಗಳ ನಾಯಕರ ವಿರುದ್ಧದ ಪ್ರಕರಣಗಳ ಬಗ್ಗೆ ನಿರ್ಣಯ ಕೈಗೊಳ್ಳುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

ಸಚಿವ ಸಂಪುಟ ಸಭೆಯಲ್ಲಿ ಬಿಜೆಪಿ, ಜೆಡಿಎಸ್ ನಾಯಕರ ವಿರುದ್ಧದ ಕೇಸ್‌ಗಳ ಬಗ್ಗೆ ನಿರ್ಣಯ ಕೈಗೊಳ್ಳುವ ಸಾಧ್ಯತೆ ಇದೆ. ಮೈತ್ರಿ ನಾಯಕರ ಮೇಲಿನ ಪ್ರಕರಣಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲರಿಗೆ ಸಲಹೆ ನೀಡಿ ನಿರ್ಣಯ ಕೈಗೊಳ್ಳಲಿರುವ ಸಾಧ್ಯತೆ ಇದೆ.

**ಆರ್ಟಿಕಲ್ 163 ಅಡಿ ಅಧಿಕಾರ ಚಲಾವಣೆಗೆ ಸಿದ್ದು ಪಡೆ ಸಿದ್ಧ:** ಸಂವಿಧಾನದ ವಿಧಿ 163 ಅಡಿ ಇರುವ ಅಧಿಕಾರ ಚಲಾಯಿಸಲು ಕಾಂಗ್ರೆಸ್ ಸರ್ಕಾರ ನಿರ್ಧರಿಸಿದೆ. ಇದರ ಅಡಿ ರಾಜ್ಯಪಾಲರ ಬಳಿ ಬಾಕಿ ಇರುವ ಪ್ರಾಸಿಕ್ಯೂಷನ್ ಅರ್ಜಿಗಳ ವಿಲೇವಾರಿಗೆ ಸಲಹೆ ನೀಡಲಿದೆ. ರಾಜ್ಯಪಾಲರ ಬಳಿ ಬಿಜೆಪಿ ಜೆಡಿಎಸ್ ನಾಯಕರ ಪ್ರಾಸಿಕ್ಯೂಷನ್ ಅರ್ಜಿ ಬಾಕಿ ಇರುವ ಹಿನ್ನೆಲೆ ಈ ಕ್ರಮ ಕೈಗೊಳ್ಳಲು ಸರ್ಕಾರ ಮುಂದಾಗಿದೆ ಎನ್ನಲಾಗಿದೆ.

163 ನೇ ವಿಧಿಯ ಅಡಿಯಲ್ಲಿ ರಾಜ್ಯಪಾಲರಿಗೆ ಸಲಹೆ ನೀಡುವ ಅಧಿಕಾರ ರಾಜ್ಯ ಸಚಿವ ಸಂಪುಟಕ್ಕೆ ಇದೆ. ಇದೇ ಅಧಿಕಾರವನ್ನು ಬಳಸಿ ರಾಜ್ಯಪಾಲರಿಗೆ ಸರ್ಕಾರ ಸಲಹೆ ನೀಡಲಿದೆ.

ಪುಟ 2



## ಸಂಕ್ಷಿಪ್ತ ಸುದ್ದಿ

### ಇಬ್ಬರು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ್ದ ಆರೋಪಿ

## ಮನೆ ಧ್ವಂಸ



**ಬದ್ಲಾಪುರ:** ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಬದ್ಲಾಪುರದ ಶಾಲೆಯೊಂದರಲ್ಲಿ ಇಬ್ಬರು ಅಪ್ರಾಪ್ತ ಮಕ್ಕಳಿಗೆ ಲೈಂಗಿಕ ಕಿರುಕುಳ ನೀಡಿದ್ದ ಆರೋಪಿಯ ಮನೆಯನ್ನು ಸ್ಥಳೀಯರು ಧ್ವಂಸಗೊಳಿಸಿದ್ದಾರೆ. ಆರೋಪಿ ಅಕ್ಷಯ್ ಶಿಂಧೆ ಎಂಬಾತನನ್ನು ಈಗಾಗಲೇ ಪೊಲೀಸರು ಬಂಧಿಸಿದ್ದು, ಆತನ ಮನೆಯನ್ನು ಧ್ವಂಸಗೊಳಿಸಲಾಗಿದೆ. ಕೋಪಗೊಂಡ ಸ್ಥಳೀಯರು ಅಕ್ಷಯ್ ಶಿಂಧೆ ಅವರ ಮನೆಗೆ ನುಗ್ಗಿ ಗಾಜು ಒಡೆದು, ಎಲೆಕ್ಟ್ರಾನಿಕ್ ಉಪಕರಣಗಳನ್ನು ಒಡೆದು ಧ್ವಂಸಗೊಳಿಸಿದ್ದಾರೆ. ಪುಟ 2

### ದರ್ಶನ್ ವಿರುದ್ಧ ಸಿದ್ಧವಾದ

## ಚಾರ್ಜ್ ಶೀಟ್



**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಕೇಸ್ ನಲ್ಲಿ ನಟ ದರ್ಶನ್ ವಿರುದ್ಧ ಪೊಲೀಸರು ಚಾರ್ಜ್ ಶೀಟ್ ಸಲ್ಲಿಕೆ ಮಾಡಲು ಸಿದ್ಧತೆ ಮಾಡಿಕೊಂಡಿದ್ದಾರೆ. ದರ್ಶನ್ ಹಾಗೂ ಅವರ ಗ್ಯಾಂಗ್ ವಿರುದ್ಧ 3ರಿಂದ 4 ಸಾವಿರ ಪುಟಗಳ ಚಾರ್ಜ್ ಶೀಟ್ ಸಲ್ಲಿಕೆ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ದರ್ಶನ್ ಮತ್ತು ಗ್ಯಾಂಗ್ ರೇಣುಕಾ ಸ್ವಾಮಿ ಅವರನ್ನು ಕರೆತಂದಾಗಿನಿಂದ ನಾಲ್ವರ ಸರೆಂಡರ್ ಆಗುವವರೆಗಿನ ವೃತ್ತಾಂತವನ್ನು ತೋರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ವರದಿ ಆಗಿದೆ.

ದರ್ಶನ್ ಖ್ಯಾತ ಸೆಲೆಬ್ರಿಟಿ. ಹೀಗಾಗಿ, ಇದು ಹೈ ಪ್ರಾಫೈಲ್ ಕೇಸ್ ಎನಿಸಿಕೊಂಡಿದೆ. ಹೀಗಾಗಿ, ಘಟನೆಯ ಕುರಿತು ಹಲವು ಸಾಕ್ಷ್ಯಾಧಾರಗಳನ್ನು ಪೊಲೀಸರು ಕಲೆ ಹಾಕಿದ್ದಾರೆ. ಹಲವು ಆಯಾಮಗಳಲ್ಲಿ ಪ್ರಕರಣದ ಸೂಕ್ಷ್ಮತೆ ಅರಿತು ಪೊಲೀಸರು ಕೆಲಸ ಮಾಡಿದ್ದಾರೆ.

ರೇಣುಕಾ ಸ್ವಾಮಿ ಕೊಲೆ ಕೇಸ್ ನಲ್ಲಿ ಸಿಆರ್ ಪಿಸಿ 164 ಅಡಿ ಹೇಳಿಕೆ ದಾಖಲು ಮಾಡಿಕೊಳ್ಳಲಾಗಿದೆ. ಪುಟ 2

### 15 ದಿನ ಮುಂಚಿತವಾಗಿಯೇ ಅಲರ್ಟ್ ಆದ ಪೊಲೀಸರು

## ಗಣೇಶ ಹಬ್ಬಕ್ಕೆ ಎಲ್ಲೆಡೆ ಹದ್ದಿನ ಕಣ್ಣು

**ಬೆಂಗಳೂರು:** ಇಡೀ ದೇಶದೆಲ್ಲೆಡೆ ಸದ್ದು-ಗದ್ದಲದಿಂದ ನಡೆಯುವ ಗೌರಿ-ಗಣೇಶ ಹಬ್ಬಕ್ಕೆ ಕೆಲವೇ ದಿನಗಳು ಮಾತ್ರ ಬಾಕಿ ಇವೆ. ಈ ಹಿನ್ನೆಲೆ 15 ದಿನ ಮುಂಚಿತವಾಗಿಯೇ ಬಂದೋಬಸ್ತ್ ಕೈಗೊಳ್ಳುವ ಬಗ್ಗೆ ಪೊಲೀಸರು ಸಿದ್ಧತೆ ಶುರು ಮಾಡಿದ್ದಾರೆ. ಅಹಿತಕರ ಘಟನೆ ನಡೆಯದಂತೆ ಶಾಂತಿಯುತವಾಗಿ ಹಬ್ಬ ಆಚರಿಸುವಂತೆ ನೋಡಿಕೊಳ್ಳಲು ಮುಂಜಾಗ್ರತಾ ಕ್ರಮಕ್ಕೆ ಮುಂದಾಗಿದ್ದಾರೆ. ಹಬ್ಬದ ವೇಳೆ ಯಾವುದೇ ಸಮಸ್ಯೆ, ತೊಂದರೆ ಆಗದಂತೆ ಎಚ್ಚರ ವಹಿಸಲು ಸಿದ್ಧತೆ ನಡೆದಿದೆ.



ಹಬ್ಬಕ್ಕೆ ನಗರ ಪೊಲೀಸರಿಂದ ಏರಿಯಾ ಡಾಮಿನೇಷನ್ ಸ್ಟ್ರಾಟಜಿ ರೂಪಿಸಲಾಗಿದೆ. ಎಲ್ಲಾ ಠಾಣಾ ವ್ಯಾಪ್ತಿಯ ರೌಡಿಶೀಟರ್ ಗಳನ್ನು ಠಾಣೆಗೆ ಕರೆಸಿ ವಾರ್ನ್ ಮಾಡಲಾಗಿದೆ. ಗಣೇಶ ಕೂರಿಸಿದಾಗ, ಅಥವಾ ವಿಸರ್ಜನೆ ವೇಳೆ ಯಾವುದೇ ಗಲಾಟೆ ಮಾಡುವಂತಿಲ್ಲ. ಸಮಸ್ಯೆ ಆಗಬಾರದೆಂದು ವಾರ್ನಿಂಗ್ ಕೊಡಲಾಗಿದೆ. ಇನ್ನು ರಾತ್ರಿ ಸಮಯದಲ್ಲಿ ಪುಂಡಾಟ ನಡೆಸುವವರ ಮೇಲೂ ಹದ್ದಿನ ಕಣ್ಣಿಡಲಾಗುತ್ತಿದೆ. ಪ್ರಸ್ತುತ ಏರಿಯಾದಲ್ಲಿ ಯಾಱರ ನಡುವೆ ಹಳೆಯ ವೈಷಮ್ಯವಿದೆ. ಅವರೇನಾದ್ರೂ, ಗಣಪತಿ ಕೂರಿಸ್ತಿದ್ದಾರಾ ಎಂಬ ಬಗ್ಗೆಯೂ ಪರಿಶೀಲನೆ ನಡೆಸಲಾಗುತ್ತಿದೆ. ಈ ಹಿಂದೆ ಗಲಾಟೆ ಮಾಡಿಕೊಂಡವರನ್ನು ಈಗಾಗಲೇ ಕರೆಸಿ ವಾರ್ನಿಂಗ್ ಕೊಡಲಾಗಿದೆ. ಪುಂಡಾಟ ಮಾಡುವ ಯುವಕರಿಗೂ ಪೊಲೀಸರು ಖಡಕ್ ಎಚ್ಚರಿಕೆ ನೀಡಿದ್ದಾರೆ. ಪುಟ 2

## ಬೆಂಗಳೂರಿನಲ್ಲಿ ಇವಿ ಟೆಸ್ಟಿಂಗ್ ಲ್ಯಾಬ್

### ದಕ್ಷಿಣ ಭಾರತದಲ್ಲಿ ಎನ್‌ಟಿಎಚ್‌ನ ಮೊದಲ ಪರೀಕ್ಷಾ ಕೇಂದ್ರ

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಉತ್ಕೃಷ್ಟ ಇವಿ ಪರೀಕ್ಷಾ ಕೇಂದ್ರ ಆರಂಭವಾಗುತ್ತಿದೆ. ಜಕ್ಕೂರಿನ ಆರ್ ಆರ್ ಎಸ್ ಎಲ್ ಕ್ಯಾಂಪ್ ನ ನ್ಯಾಷನಲ್ ಟೆಸ್ಟ್ ಹೌಸ್ ನ ಇವಿ ಪರೀಕ್ಷಾ ಕೇಂದ್ರವನ್ನು ಇಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಉದ್ಘಾಟನೆ ಮಾಡುತ್ತಿದ್ದಾರೆ. ಎನ್ ಟಿಎಚ್ ನ ಇವಿ ಟೆಸ್ಟಿಂಗ್ ಫೆಸಿಲಿಟಿ ಈಗ ದಕ್ಷಿಣ ಭಾರತದಲ್ಲೂ ಹೆಚ್ಚಾಗಲಿದೆ. ಎಲೆಕ್ಟ್ರಿಕ್ ವಾಹನ ಉದ್ಯಮದ ಬೆಳವಣಿಗೆಗೆ ಈ ಟೆಸ್ಟಿಂಗ್ ಸರ್ವಿಸ್ ಬಹಳ ಅಗತ್ಯ.

ಜಕ್ಕೂರಿನ ರೀಜನಲ್ ರೆಫರೆನ್ಸ್ ಸ್ಟ್ಯಾಂಡರ್ಡ್ ಲ್ಯಾಬೊರೇಟರಿಯ ಕ್ಯಾಂಪ್ ನಲ್ಲಿ ನಿರ್ಮಾಣವಾಗಿರುವ ಟೆಸ್ಟಿಂಗ್ ಲ್ಯಾಬೊರೇಟರಿಯಲ್ಲಿ ಇವಿ ಬ್ಯಾಟರಿ ಟೆಸ್ಟ್ ಮಾಡುವ ಉಪಕರಣ ಇರುತ್ತದೆ. ಎಲೆಕ್ಟ್ರಿಕಲ್ ಸೇಫ್ಟಿ, ಇಎಂಸಿ, ಇಎಂಎಫ್, ಎಫ್ ಸಿಸಿ, ಐಎಸ್ ಇಡಿ, ಫಂಕ್ಷನಲ್ ಸೇಫ್ಟಿ, ಡ್ಯೂರಬಿಲಿ ಇತ್ಯಾದಿ ನಾನಾ ರೀತಿಯ ಪರೀಕ್ಷೆಗಳನ್ನು ಈ ಉಪಕರಣ ಮಾಡಬಲ್ಲುದು.



ಎಲೆಕ್ಟ್ರಿಕ್ ವಾಹನಗಳನ್ನು ಮಾರಾಟಕ್ಕೆ ಇಡಲಾಗುವ ಮುನ್ನ ಈ ಪರೀಕ್ಷಾ ಕೇಂದ್ರದಲ್ಲಿ ಕಟ್ಟುನಿಟ್ಟಿನ ಪರೀಕ್ಷೆಗಳಿಗೆ ಒಳಗಾಗುತ್ತವೆ. ಸರ್ಕಾರ ನಿಗದಿ ಮಾಡಿದ ಗುಣಮಟ್ಟ ಮಾನದಂಡಗಳನ್ನು ಈ ವಾಹನಗಳು ಪೂರೈಸುತ್ತವಾ ಇಲ್ಲವಾ ಎಂಬುದನ್ನು ಇಲ್ಲಿ ದೃಢಪಡಿಸಲಾಗುತ್ತದೆ. ಈ ಹೊಸ ಇವಿ ಟೆಸ್ಟಿಂಗ್ ಸೌಲಭ್ಯ ದಕ್ಷಿಣ ಭಾರತದಲ್ಲಿ ಎಲೆಕ್ಟ್ರಿಕಲ್ ವೆಹಿಕಲ್ ಉದ್ಯಮಕ್ಕೆ ಪುಷ್ಟಿ ನೀಡಿ, ಅದರ ಬೆಳವಣಿಗೆಗೆ ಸಹಕಾರ ನೀಡುತ್ತದೆ.

ಕೇಂದ್ರ ಗ್ರಾಹಕ ವ್ಯವಹಾರ ಇಲಾಖೆಗೆ ಸೇರಿದ ನ್ಯಾಷನಲ್ ಟೆಸ್ಟ್ ಹೌಸ್ ದೇಶಾದ್ಯಂತ ಇವಿ ಟೆಸ್ಟಿಂಗ್ ಲ್ಯಾಬ್ ಗಳನ್ನು ಹೊಂದಿದೆ. ಕೋಲ್ಕತಾ, ಮುಂಬೈ, ಚೆನ್ನೈ, ಘಾಜಿಯಾಬಾದ್, ಗುವಾಹತಿ, ಜೈಪುರ್ ಮತ್ತು ವಾರಾಣಸಿಯಲ್ಲಿ ಲ್ಯಾಬ್ ಗಳಿವೆ.

ಪುಟ 2

### ತಮಿಳುನಾಡು ಚುನಾವಣೆಗೆ ನಟ ದಳಪತಿ ವಿಜಯ್ ಸಿದ್ಧತೆ

## ಪಕ್ಷದ ಚಿಹ್ನೆ ಬಿಡುಗಡೆ

**ಚೆನ್ನೈ:** ನಟ ದಳಪತಿ ವಿಜಯ್ ರಾಜಕೀಯ ಪಯಣ ಆರಂಭಗೊಂಡಿದೆ. ಇಂದು ಪಕ್ಷದ ಚಿಹ್ನೆಯನ್ನು ಬಿಡುಗಡೆ ಮಾಡಿದ್ದಾರೆ. ತಮಿಳಗ ವೆಟ್ರಿ ಕಳಗಂ ಎಂಬ ರಾಜಕೀಯ ಪಕ್ಷವನ್ನು ಫೆಬ್ರವರಿಯಲ್ಲಿ ಪ್ರಾರಂಭಿಸಿದ್ದರು. ವಿಜಯ್ ಅವರ ಪಕ್ಷವು 2026ರಲ್ಲಿ ನಡೆಯಲಿರುವ ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಬಹುದು ಎಂದು ಹೇಳಲಾಗುತ್ತಿದೆ. ಇದೀಗ ದಳಪತಿ ವಿಜಯ್ ಗುರುವಾರ ತಮ್ಮ ರಾಜಕೀಯ ಪಕ್ಷದ ಬಾವುಟ ಹಾಗೂ ಚಿಹ್ನೆಯನ್ನು ಬಿಡುಗಡೆ ಮಾಡಿದ್ದಾರೆ.

2026ರಲ್ಲಿ ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ ಈ ವರ್ಷದ ಫೆಬ್ರವರಿಯಲ್ಲಿ ನಟ ದಳಪತಿ ವಿಜಯ್ ಅವರು ರಾಜಕೀಯ ಪಕ್ಷವನ್ನು



ಪ್ರಾರಂಭಿಸುವುದಾಗಿ ಘೋಷಿಸಿದ್ದರು. ಇದರೊಂದಿಗೆ 2026ರಲ್ಲಿ ನಡೆಯಲಿರುವ ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸುವುದಾಗಿಯೂ ವಿಜಯ್ ಹೇಳಿದ್ದರು. ಈ ವರ್ಷ ನಡೆದ ಲೋಕಸಭೆ ಚುನಾವಣೆಯಲ್ಲಿ ದಳಪತಿ ವಿಜಯ್ ಯಾವುದೇ ಮೈತ್ರಿ ಅಥವಾ ಪಕ್ಷವನ್ನು ಬೆಂಬಲಿಸಲಿಲ್ಲ. ಪುಟ 2

### ಅನ್ನಭಾಗ್ಯ ಫಲಾನುಭವಿಗಳಿಗೆ ಶುಭ ಸುದ್ದಿ

# ಸಿಗಲಿದೆ 10 ಕೆಜಿ ಉಚಿತ ಅಕ್ಕಿ

**ಬೆಂಗಳೂರು:** ಅನ್ನಭಾಗ್ಯ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕಾರ್ಡುದಾರರಿಗೆ ಉಚಿತ ಅಕ್ಕಿ ನೀಡುವುದಕ್ಕಾಗಿ ಕರ್ನಾಟಕಕ್ಕೆ ಅಕ್ಕಿ ಪೂರೈಸಲು ಸಿದ್ಧವಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಅಕ್ಕಿ ಪೂರೈಸುವ ಬಗ್ಗೆ ಭಾರತೀಯ ಆಹಾರ ನಿಗಮ (ಎಫ್‌ಸಿಐ) ಈಗಾಗಲೇ ಘೋಷಣೆ ಮಾಡಿದೆ. ಹೀಗಾಗಿ ಫಲಾನುಭವಿಗಳಿಗೆ ಈಗ ನೀಡುತ್ತಿರುವ 170 ರೂಪಾಯಿಗಳ ಬದಲಿಗೆ 5 ಕೆಜಿ ಅಕ್ಕಿ ಹೆಚ್ಚು ಸಿಗುವ ಸಾಧ್ಯತೆಯಿದೆ.

ಅನ್ನಭಾಗ್ಯ ಯೋಜನೆಗೆ ಅಕ್ಕಿ ನೀಡುವಂತೆ ರಾಜ್ಯ ಸರ್ಕಾರ ಮಾಡಿದ್ದ ಮನವಿಯನ್ನು ಕೇಂದ್ರ ಸರ್ಕಾರ ಕಳೆದ ವರ್ಷ ತಿರಸ್ಕರಿಸಿತ್ತು. ಇದು ರಾಜ್ಯ ಸರ್ಕಾರ ಮತ್ತು ಕೇಂದ್ರದ ನಡುವೆ ವಾಕ್ಸಮರಕ್ಕೆ ಕಾರಣವಾಯಿತು. ಆದರೆ, ಇದೀಗ ಕೇಂದ್ರ ಸರ್ಕಾರ ನಿರ್ಧಾರ ಬದಲಾಯಿಸಿದೆ.

ಕರ್ನಾಟಕ ಸರ್ಕಾರವು ಅನ್ನಭಾಗ್ಯ ಯೋಜನೆಗಾಗಿ 2.38 ಲಕ್ಷ ಟನ್ ಅಕ್ಕಿಯನ್ನು ಪೂರೈಸಲು ಮನವಿ



ಮಾಡಿದೆ. ಅದನ್ನು ಪೂರೈಸಲು ನಾವು ಸಿದ್ಧರಿದ್ದೇವೆ ಎಂದು ಎಫ್‌ಸಿಐನ ಬೆಂಗಳೂರಿನ ಪ್ರಾದೇಶಿಕ ಕಚೇರಿಯ ಪ್ರಧಾನ ವ್ಯವಸ್ಥಾಪಕ ಮಹೇಶ್ವರಪ್ಪ ಬಿಜಿ ಬುಧವಾರ ತಿಳಿಸಿದ್ದಾರೆ.

### ಕಳೆದ ವರ್ಷ ಕರ್ನಾಟಕಕ್ಕೆ ಅಕ್ಕಿ ಪೂರೈಸದ್ದೇಕೆ?

ಕಳೆದ ವರ್ಷ ಮುಂಗಾರು ಮಳೆಯ ಕೊರತೆಯು ಅಕ್ಕಿ ದಾಸ್ತಾನಿನ ಮೇಲೆ ಪರಿಣಾಮ ಬೀರಿತ್ತು. ಹೀಗಾಗಿ ದೇಶೀಯ ಮುಕ್ತ ಮಾರುಕಟ್ಟೆ ಮಾರಾಟ ಯೋಜನೆ ಸ್ಥಗಿತಗೊಳಿಸಲಾಗಿತ್ತು. ಆ ಕಾರಣದಿಂದ ರಾಜ್ಯ ಸರ್ಕಾರದ ಮನವಿಯನ್ನು ಪರಿಗಣಿಸಿರಲಿಲ್ಲ. ಈ ವರ್ಷ ಉತ್ತಮ ಮಳೆಯಾಗಿದ್ದು, ಎಫ್‌ಸಿಐ (ಕರ್ನಾಟಕ ವಿಭಾಗ) 7.42 ಲಕ್ಷ ಟನ್ ಅಕ್ಕಿ ದಾಸ್ತಾನು ಹೊಂದಿದ್ದು, 2025 ರ ಮಾರ್ಚ್‌ವರೆಗೆ ಕೆಜಿಗೆ 28 ರೂ.ನಂತೆ ರಾಜ್ಯಕ್ಕೆ ಪೂರೈಸಲು ಸಿದ್ಧವಾಗಿದೆ ಎಂದು ಮಹೇಶ್ವರಪ್ಪ ಮಾಹಿತಿ ನೀಡಿದ್ದಾರೆ.

ಅಕ್ಕಿ ಖರೀದಿ ಕುರಿತು ಭಾರತೀಯ ಆಹಾರ ನಿಗಮದ ಅಧಿಕಾರಿಗಳೊಂದಿಗೆ ರಾಜ್ಯ ಸರ್ಕಾರ ಗುರುವಾರ ಸಭೆ ನಡೆಸಲಿದೆ ಎಂದು ಅವರು ತಿಳಿಸಿದ್ದಾರೆ.

ಕರ್ನಾಟಕಕ್ಕೆ ಅಕ್ಕಿ ಪೂರೈಸಲು ಕೇಂದ್ರ ಸರ್ಕಾರ ಸಿದ್ಧವಿದೆ ಎಂದು ಕೇಂದ್ರ ಆಹಾರ ಇಲಾಖೆ ಸಚಿವ ಪ್ರಲ್ಹಾದ್ ಜೋಶಿ ಕೆಲವು ದಿನಗಳ ಹಿಂದಷ್ಟೇ ಹೇಳಿದ್ದರು.

# ರಿಟ್ ಅರ್ಜಿಯಲ್ಲಿ ಕೋರ್ಟ್ ಕಣ್ತಪ್ಪಿಸಿದ್ದಾರೆ



**ಮೈಸೂರು:** ಮುಡಾ ಹಗರಣದ ಸಂಬಂಧ ರಿಟ್ ಅರ್ಜಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನ್ಯಾಯಾಲಯದ ಕಣ್ತಪ್ಪಿಸಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತ ಸ್ನೇಹಮಹಿ ಕೃಷ್ಣ ಗಂಭೀರ ಆರೋಪ ಮಾಡಿದ್ದಾರೆ. ಇವರು ಸಿಎಂ ವಿರುದ್ಧ ಮುಡಾ ಹಗರಣ ವಿಚಾರವಾಗಿ ದೂರು ನೀಡಿರುವವರಲ್ಲಿ ಒಬ್ಬರಾಗಿದ್ದಾರೆ.

» **ದೂರದಾರ ಸ್ನೇಹಮಹಿ ಕೃಷ್ಣ ಗಂಭೀರ ಆರೋಪ**

ಪತ್ನಿ ಪಾರ್ವತಿ ಮುಡಾಗೆ ಪತ್ರ ಬರೆದಿರುವುದು ಸಿದ್ದರಾಮಯ್ಯ ಅವರಿಗೆ ಮೊದಲೇ ಗೊತ್ತಿತ್ತು. ಸಿದ್ದರಾಮಯ್ಯ ಒಟ್ಟು 713 ಪುಟಗಳ ದಾಖಲೆ ಒಳಗೊಂಡ ರಿಟ್ ಅರ್ಜಿ ಹಾಕಿದ್ದಾರೆ. 531ನೇ ಪುಟವಾಗಿ ಪಾರ್ವತಿ ಬರೆದ ಅರ್ಜಿಯ ಮೊದಲ ಪುಟ ಇದೆ. ಆದರೆ 532ನೇ ಪುಟದಲ್ಲಿ ಪಾರ್ವತಿ ಅವರು ಬರೆದ ಪತ್ರದ ಎರಡನೇ ಪುಟ ಇಲ್ಲ ಎಂದು ಅವರು ದೂರಿದ್ದಾರೆ. ಅದರಲ್ಲಿಯೂ ಎರಡನೇ ಪುಟಕ್ಕೆ ವೈಟ್ನರ್ ಹಾಕಿ ಸಾಲೊಂದನ್ನು ಅಳಿಸಲಾಗಿದೆ. 532ನೇ ಪುಟದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ನಡಾವಳಿ ಪತ್ರ ಇದೆ. ವೈಟ್ನರ್ ಹಾಕಿ ಅಳಿಸಿರುವ ಕಾರಣಕ್ಕಾಗಿ ಎರಡನೇ ಪುಟ ಬಿಟ್ಟು ಕೇವಲ ಒಂದು ಪುಟ ಮಾತ್ರ ಕೋರ್ಟ್‌ಗೆ ಕೊಟ್ಟಿದ್ದಾರೆ. ಆ ಮೂಲಕ ರಾಜ್ಯ ಜನರಿಗೆ ಹಾಗೂ ಕೋರ್ಟ್‌ಗೆ ಸತ್ಯ ಮುಚ್ಚಿಡುತ್ತಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ.

ಇದೇ ವಿಚಾರದಲ್ಲಿ ರಾಜ್ಯಪಾಲರಿಗೆ ಬರೆದಿರುವ ಶೋಕಾಸ್ ನೋಟಿಸ್ ನಲ್ಲೂ ಸಿಎಂ ಉಲ್ಲೇಖಿಸಿದ್ದಾರೆ. ಶೋಕಾಸ್ ನೋಟಿಸ್ ಉತ್ತರದ 30 ನೇ ಪುಟದಲ್ಲಿ ತಮ್ಮ ಪತ್ನಿ ಪತ್ರ ಬರೆದ ಮಾಹಿತಿ ಕೊಟ್ಟಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ನ್ಯಾಯಾಲಯಕ್ಕೆ ಸತ್ಯ ಮುಚ್ಚಿಟ್ಟಿರುವುದು ನ್ಯಾಯಾಂಗ ನಿಂದನೆಯಾಗುತ್ತದೆ. 29 ರಂದು ವಿಚಾರಣೆಯ ಸಂದರ್ಭದಲ್ಲಿ ಎಲ್ಲಾ ವಿಚಾರವನ್ನು ನ್ಯಾಯಾಲದ ಗಮನಕ್ಕೆ ತರುತ್ತೇವೆ. ಸಿಎಂ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕರಣ ದಾಖಲು ಮಾಡುವಂತೆ ಮನವಿ ಮಾಡುತ್ತೇವೆ ಎಂದು ಸ್ನೇಹಮಹಿಕೃಷ್ಣ ಹೇಳಿದ್ದಾರೆ.

ಮುಡಾ ಹಗರಣ ಬೆಳಕಿಗೆ ಬಂದ ಮೇಲೆ ಅಧಿಕಾರಿಗಳು ದಾಖಲೆಯನ್ನು ತಿರುಚಿದ್ದಾರೆಯೇ ಎಂಬ ಅನುಮಾನ ಬುಧವಾರವೇ ವ್ಯಕ್ತವಾಗಿತ್ತು. ಸಿದ್ದರಾಮಯ್ಯ ಪತ್ನಿ ತಮ್ಮ ಭೂಮಿಗೆ 50:50 ಅನುಪಾತದಲ್ಲಿ ಪರ್ಯಾಯ ನಿವೇಶನ ಕೊಡುವಂತೆ ಮನವಿ ಮಾಡಿ ಸಲ್ಲಿಸಿರುವ ಪತ್ರದಲ್ಲಿ, ಯಾವ ಸ್ಥಳದಲ್ಲಿ ಪರ್ಯಾಯ ನಿವೇಶನ ಕೊಡಬೇಕು ಎಂದು ಬರೆದ ಜಾಗಕ್ಕೆ ವೈಟ್ ನರ್ ಹಾಕಿರುವುದು ಬೆಳಕಿಗೆ ಬಂದಿತ್ತು.

# ಸಿಎಂ ಪತ್ನಿ ಅವರ ಪತ್ರ ತಿದ್ದುಪಡಿ ಆಗಿಲ್ಲ

**ಬೆಂಗಳೂರು:** ದಾಖಲಾತಿ ತಿದ್ದುವ ಪರಿಸ್ಥಿತಿ ನಮಗೆ ಬಂದಿಲ್ಲ. ಸಿಎಂ ಪತ್ನಿ ಅವರ ದಾಖಲಾತಿ ತಿದ್ದುಪಡಿ ಆಗಿಲ್ಲ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಸ್ಪಷ್ಟನೆ ನೀಡಿದ್ದಾರೆ. ಹೆಲಿಕಾಪ್ಟರ್‌ನಲ್ಲಿ ಹೋಗಿ ಬಂದವರು ದಾಖಲಾತಿ ತಿದ್ದಿರಬಹುದು ಎಂಬ ಕುಮಾರಸ್ವಾಮಿ ಆರೋಪಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದರು. ದಾಖಲೆ ತಿದ್ದುವಂತ ಪರಿಸ್ಥಿತಿ ನಮಗೆ ಬಂದಿಲ್ಲ. ಅಂತಹ ನೀಚ ಕೆಲಸಕ್ಕೆ ನಾವ್ಯಾರೂ ಇಳಿದಿಲ್ಲ. ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆ ಇದೆ. ಅಲ್ಲಿ ಬೇರೆನೋ ಆಗಿದೆ



ಅನ್ನೋದು ಅಲ್ಲ. ಇದು ನಮ್ಮ ಪೋರ್ಟ್ ಪೋಲೀಯೋ ಅಲ್ಲ. ಏನು ತಪ್ಪಾಗೋದೆ ಇಲ್ವಾ? ಜಮೀನಿಗೆ ಪರಿಹಾರ ನೀಡಿಲ್ಲ. ಅಷ್ಟೇ ವಿಸ್ತೀರ್ಣದ ಜಮೀನು ಎಂದು ಹೇಳಿದ್ದಾರೆ. ಅಲ್ಲಿ ವರ್ಷ ತಪ್ಪಾಗಿರಬಹುದು. ಇಲ್ಲವೇ ಸಮಾನಾಂತರ ಬಡಾವಣೆಯಲ್ಲಿ ನೀಡುವಂತೆ ಕೋರುತ್ತೇನೆ ಎಂದು ಬಹಳ ಸ್ಪಷ್ಟವಾಗಿಯೇ ಹೇಳಿದ್ದಾರೆ. ವಿಜಯನಗರ ಲೇಔಟ್ ಅಲ್ಲಿ ಅಂತ ಎಲ್ಲಿ ಬರೆದಿದ್ದಾರೆ? ಸಮಾನಾಂತರ ಜಾಗದಲ್ಲಿ ಅಂತ ಬರೆದಿದ್ದಾರೆ. ಮಾಧ್ಯಮಗಳು ಎಲ್ಲವನ್ನು ನೋಡಿ ಹಾಕಬೇಕು ಎಂದು ಮಾಧ್ಯಮಗಳ ಮೇಲೆ ಅನುಮಾನ ವ್ಯಕ್ತಪಡಿಸಿದರು. ತಿದ್ದುವಂತ ನೀಚ ಕೃತ್ಯವನ್ನು ಯಾರು ಮಾಡಿಲ್ಲ. ಕುಮಾರಸ್ವಾಮಿ ಹೇಳಿಕೆಗೆ ನಾನು ಮಾತನಾಡಲ್ಲ. ಅವರು ಯಾವತ್ತೂ ಹೆಲಿಕಾಪ್ಟರ್‌ನಲ್ಲಿ ಹೋಗೇ ಇಲ್ವಾ? ಕುಮಾರಸ್ವಾಮಿಗೆ ನಾನು ಹೇಳ್ತೇನೆ ನಿಮ್ಮಲ್ಲಿ ಏನೇ ದಾಖಲೆ ಇದ್ದರೂ ಕೋರ್ಟ್‌ಗೆ ಕೊಡಿ. ಯಾಕೆ ನೀವು ಸುಮ್ಮನೆ ಅಪ ಪ್ರಚಾರ ಮಾಡುತ್ತೀರಿ. ನ್ಯಾಯಾಧೀಶರೇ ನಾವು ಬಗೆಹರಿಸುತ್ತೇವೆ ಅಂದಿದ್ದಾರೆ. ಅಲ್ಲಿಯವರೆಗೆ ಕಾಯೋಕೆ ಏನು? ಏನೇ ದಾಖಲಾತಿ ಇದ್ದರು ನೀವು ಕೋರ್ಟ್ ಕೊಡಿ. ನ್ಯಾಯಾಲಯ ಅದನ್ನು ಪರಿಗಣಿಸುತ್ತದೆ ಎಂದು ಕಿಡಿಕಾರಿದರು.

# ರಕ್ತದಾನ ಎಲ್ಲದಕ್ಕಿಂತ ಶ್ರೇಷ್ಠ ದಾನ

## ಯುವ ಸಮೂಹ ಸಾಮಾಜಿಕ ಕಳಕಳಿಯ ಕಾರ್ಯಕ್ರಮ

**ಬೆಂಗಳೂರು:** ನಾವು ನೀಡುವ ರಕ್ತದಿಂದ ಒಂದು ಜೀವ ಉಳಿಯುತ್ತೆ ಅನ್ನುವುದಾದರೆ ಅದಕ್ಕಿಂತ ಮಹತ್ಕಾರ್ಯ ಇನ್ನೊಂದಿಲ್ಲ ಅದರಲ್ಲೂ ಇಂದಿನ ಯುವ ಸಮೂಹ ರಕ್ತದಾನದಂತಹ ಸಾಮಾಜಿಕ ಕಳಕಳಿಯ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ಮಲ್ಲಿಗೆ ಎಜುಕೇಶನ್ ಸೊಸೈಟಿಯ ನಿರ್ದೇಶಕ ಡಾ.ಶಿವಕುಮಾರಸ್ವಾಮಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ದಾಸರಹಳ್ಳಿ ಕ್ಷೇತ್ರದ ಚಿಕ್ಕಬಾಣವಾರ ಸಮೀಪದ ಮಲ್ಲಿಗೆ ಕಾಲೇಜ್ ಆಪ್ ಪಾರ್ಮಸಿ ಹಾಗೂ ನರ್ಸಿಂಗ್ ಕಾಲೇಜಿನಲ್ಲಿ ಮಲ್ಲಿಗೆ ಎಜುಕೇಷನ್ ಪೌಂಡೇಷನ್, ಬೆಂಗಳೂರು ಮತ್ತು ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ವತಿಯಿಂದ ಅಯೋಜಿಸಲಾಗಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅಪಘಾತ, ಶಸ್ತ್ರಚಿಕಿತ್ಸೆ, ಡೆಂಗಿಜ್ವರ , ಹೆರಿಗೆ ಇನ್ನಿತರೆ ಅನೇಕ ತುರ್ತು ಸಂದರ್ಭಗಳಲ್ಲಿ ರಕ್ತದ ಅಲಭ್ಯತೆಯಿಂದಲೇ ಸಾಕಷ್ಟು ಮಂದಿ ಮೃತಪಡುತ್ತಾರೆ . ರಕ್ತದಾನದಿಂದ ಸಮಾಜದ ಸ್ವಾಸ್ಥ್ಯ ಕಾಪಾಡಬಹುದಲ್ಲದೆ ವೈಯಕ್ತಿಕವಾಗಿ ನಮ್ಮ ಆರೋಗ್ಯದ ವಿಷಯದಲ್ಲಿ ಲಾಭವಿದೆ ಹಾಗಾಗಿ ರಕ್ತದಾನ ಮಾಡಲು ಅರ್ಹರಿರುವವರು ನಿಯಮಿತವಾಗಿ ರಕ್ತದಾನ ಅಗತ್ಯ ಮಾಡಿ ಜೀವ ಉಳಿಸಿಬಹುದು ಹಾಗೆಯೇ ವಿದ್ಯಾಲಯಗಳು ಕೂಡ ರಕ್ತದಾನದ ಮಹತ್ವವನ್ನು ವಿದ್ಯಾರ್ಥಿಗಳಿಗೆ ಮತ್ತಷ್ಟು ಮೂಡಿಸಬೇಕಿದೆ ಎಂದರು.

ಮಲ್ಲಿಗೆ ಎಜುಕೇಶನ್ ಪೌಂಡೇಷನ್ ಟ್ರಸ್ಟಿ ಕಲಾ ಶ್ರೀರಾಮ್ ಮಾತನಾಡಿ ರಕ್ತದಾನ ಮಾಡುವುದರಿಂದ




ನಮಗೇನು ತೊಂದರೆಯಾಗುವುದಿಲ್ಲ ಆರೋಗ್ಯವಂತ ವ್ಯಕ್ತಿ ಎಷ್ಟು ಸಲ ಬೇಕಾದರೂ ರಕ್ತದಾನ ಮಾಡಬಹುದು. ಇಂತಹ ಶಿಬಿರಗಳಲ್ಲಿ ಪಾಲ್ಗೊಂಡು ರಕ್ತ ನೀಡಿದರೆ ಅದು ಮುಂದೊಂದು ದಿನ ಒಬ್ಬರ ಜೀವ ಉಳಿಸಲು ಸಹಾಯವಾಗುತ್ತದೆ ಹಾಗಾಗಿ ಸಾಮಾಜಿಕ ಜವಾಬ್ದಾರಿ ಎಲ್ಲರಿಗೂ ಇರಬೇಕು ಎಂದರು

ರಕ್ತದಾನ ಶಿಬಿರದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಮಾತನಾಡಿ, ಎಷ್ಟೋ ಮಂದಿಯಲ್ಲಿ ರಕ್ತದಾನ ಕುರಿತು ಇನ್ನೂ ಸಹ ಮೂಢನಂಬಿಕೆ, ತಪ್ಪು ಕಲ್ಪನೆಗಳಿವೆ, ಪ್ರಸ್ತುತ ಪರಿಸ್ಥಿತಿಯಲ್ಲಿ ಸಮಾಜದಲ್ಲಿ ರಕ್ತದಾನದ ಮಹತ್ವ ಅರಿಯಬೇಕಿದೆ, ನಮ್ಮ ಆರೋಗ್ಯವನ್ನು ಕಾಯ್ದುಕೊಳ್ಳಲು ಕೂಡ ರಕ್ತದಾನ ಸಹಕಾರಿ ಆಗಲಿದೆ ಎಂದರು.

ರಕ್ತದಾನ ಶಿಬಿರದಲ್ಲಿ ಮುಖ್ಯ ಅತಿಥಿಗಳಾಗಿ ಮಲ್ಲಿಗೆ ಎಜುಕೇಶನ್ ಪೌಂಡೇಷನ್ ಟ್ರಸ್ಟಿ ಕಲಾಶ್ರೀರಾಮ್, ಗೌರ್ನರ್ ಕೌನ್ಸಿಲಿಂಗ್ ಸದಸ್ಯರಾದ ಸ್ವಾತಿ ಶ್ರೀರಾಮ್,ಮಲ್ಲಿಗೆ ಎಜುಕೇಶನ್ ಸೊಸೈಟಿಯ ನಿರ್ದೇಶಕ ಡಾ.ಶಿವಕುಮಾರಸ್ವಾಮಿ, ಪ್ರಿನ್ಸಿಪಾಲ್ ಡಾ.ರಾಜೇಶ್ವರಿ,ವೈಸ್ ಪ್ರೀನ್ಸಿಪಾಲ್ , ಡಾ.ಎಸ್ ವಿ ರಾಜೇಂದ್ರ, ಎನ್ ಎಸ್ ಎಸ್ ಆಫೀಸರ್‌ಗಳಾದ ನವೀನ್ ಕುಮಾರ್, ಸಲೇಟ್ ಕುರಿಯನ್, ಕೋಆರ್ಡಿನೇಟರ್ ಸಜನ್ ಸುಬ್ರಮಣಿ, ರೆಡ್ ಕ್ರಾಸ್ ಸಂಸ್ಥೆಯವರು ,ಉಪಾನ್ಯಾಸಕರು, ವಿಧ್ಯಾರ್ಥಿಗಳು ಭಾಗವಹಿಸಿದ್ದರು.

ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ರಕ್ತದಾನ ಶಿಬಿರದಲ್ಲಿ ಪಾಲ್ಗೊಂಡು ರಕ್ತದಾನ ಮಾಡಿದ ಎಲ್ಲರಿಗೂ ಪ್ರಮಾಣ ಪತ್ರನೀಡಲಾಯಿತು.

# ಮುಡಾ ಹಗರಣ ಬೆಳಕಿಗೆ ಬಂದ ಮೇಲೆ ಸಿಎಂ ಪತ್ನಿ ಬರೆದ ಪತ್ರ ತಿರುಚಿದ್ರಾ ಅಧಿಕಾರಿಗಳು?

**ಮೈಸೂರು:** ಮುಡಾ ಹಗರಣ ಬೆಳಕಿಗೆ ಬಂದ ಮೇಲೆ ಅಧಿಕಾರಿಗಳು ದಾಖಲೆಯನ್ನು ತಿರುಚಿದ್ದಾರೆಯೇ? ಸಿಎಂ ಸಿದ್ದರಾಮಯ್ಯ ಪತ್ನಿ ತಮ್ಮ ಭೂಮಿಗೆ 50:50 ಅನುಪಾತದಲ್ಲಿ ಪರ್ಯಾಯ ನಿವೇಶನ ಕೊಡುವಂತೆ ಮನವಿ ಮಾಡಿ ಸಲ್ಲಿಸಿರುವ ಪತ್ರವನ್ನೇ ತಿರುಚಿದ್ದಾರೆಯೇ ಎಂಬ ಅನುಮಾನ ಇದೀಗ ಮೂಡಿದೆ. ಯಾವ ಸ್ಥಳದಲ್ಲಿ ಪರ್ಯಾಯ ನಿವೇಶನ ಕೊಡಬೇಕು ಎಂದು ಬರೆದ ಜಾಗಕ್ಕೆ ವೈಟ್‌ನರ್ ಹಾಕಿರುವುದು ಬೆಳಕಿಗೆ ಬಂದಿದೆ.



ವಿಜಯನಗರದ 2 ಮತ್ತು ಮೂರನೇ ಹಂತದಲ್ಲೇ ನಿವೇಶನ ಕೊಡುವಂತೆ ಸಿದ್ದರಾಮಯ್ಯ ಪತ್ನಿ ಕೇಳಿದ್ದರೇ ಎಂಬ ಪ್ರಶ್ನೆಯೂ ಈಗ ಉದ್ಭವಿಸಿದೆ. ವೈಟ್‌ನರ್ ಹಾಕಿ ಅಳಿಸಿರುವುದರಿಂದ ಈ ಪ್ರಶ್ನೆ ಮೂಡಿದೆ.

ಇದೀಗ ಸಿಎಂ ಪತ್ನಿ ಬರೆದ ಪತ್ರ ಬಹಿರಂಗವಾಗಿರುವುದರಿಂದ ಪ್ರಕರಣಕ್ಕೆ ಹೊಸ ಟ್ವಿಸ್ಟ್ ದೊರೆತಂತಾಗಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸಿಎಂ ಪತ್ನಿ ಪಾರ್ವತಮ್ಮ ಬರೆದ ಪತ್ರ ಲಭ್ಯವಾಗಿದ್ದು, ಪ್ರಾಧಿಕಾರ ಬಡಾವಣೆ ನಿರ್ಮಿಸಿ ನಿವೇಶನ ಹಂಚಿದ ಮೇಲೆ ಆ ಜಮೀನನ್ನು ಸಿಎಂ ಪತ್ನಿಯ ಸಹೋದರ ಖರೀದಿಸಿದ್ದರೇ ಎಂಬ ಪ್ರಶ್ನೆಗೂ ಕಾರಣವಾಗಿದೆ. ಸಿಎಂ ಪತ್ನಿ ಪ್ರಾಧಿಕಾರಕ್ಕೆ ಬರೆದ ಪತ್ರದಲ್ಲಿ ಅದರ ಸ್ಪಷ್ಟ ಉಲ್ಲೇಖ.

ಪತ್ರದಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ 2001 ರಲ್ಲೇ ದೇವನೂರು ಮೂರನೇ ಹಂತದ ಬಡಾವಣೆ ನಿರ್ಮಾಣ ಮಾಡಿ ನಿವೇಶನ ಹಂಚಿದೆ ಎಂದು ಪತ್ರದಲ್ಲಿ ನಮೂದಾಗಿದೆ. ಕೆಸರೆ ಗ್ರಾಮದ ಜಮೀನನ್ನು ದೇವನೂರು ಮೂರನೇ ಹಂತದ ಬಡಾವಣೆ ನಿರ್ಮಾಣಕ್ಕಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಸ್ವಾಧೀನ ಪಡಿಸಿಕೊಂಡಿತ್ತು. ಆದರೆ, ಈ ಜಮೀನನ್ನು ಸಿಎಂ ಪತ್ನಿ ಸಹೋದರ ಖರೀದಿ ಮಾಡಿರುವುದು 2004 ರಲ್ಲಿ. ಹಾಗಾದರೆ ಸ್ವಾಧೀನ ಪಡಿಸಿಕೊಂಡು ನಿವೇಶನ ಹಂಚಿದ ಜಾಗವನ್ನು ಸಿಎಂ ಸಹೋದರ ಹೇಗೆ ಖರೀದಿ ಮಾಡಿದರು ಎಂಬ ಪ್ರಶ್ನೆಯೂ ಉದ್ಭವಿಸಿದೆ.

## ನನ್ನ ಮಕ್ಕಳನ್ನು ಗುಂಡು ಹೊಡೆದು ಸಾಯಿಸಿ

# ರೌಡಿಶೀಟರ್ ತಂದೆ ಅಳಲು

**ಹುಬ್ಬಳ್ಳಿ:** ರೌಡಿ ಶೀಟರ್ ಅಫ್ತಾಬ್ ಕರಡಿಗುಡ್ಡ ಮೇಲೆ ಕಸಬಾಪೇಟೆ ಪೊಲೀಸರು ಫೈರಿಂಗ್ ನಡೆಸಿದ್ದಾರೆ.

ಕಳೆದ ಎರಡು ದಿನಗಳ ಹಿಂದೆ ಹುಬ್ಬಳ್ಳಿಯಲ್ಲಿ ರೌಡಿಗಳ ಗ್ಯಾಂಗ್ ವಾರ್ ನಡೆದಿತ್ತು. ರೌಡಿಗಳಾದ ಜಾವೂರ್ ಬೇಫಾರಿ, ಅಪ್ತಾಭ್ ಗ್ಯಾಂಗ್ ನಡುವೆ ವಾರ್ ನಡೆದಿದ್ದು, ಹಳೇ ದ್ವೇಷದ ಹಿನ್ನಲೆ ಜಾವೂರ್ ಮೇಲೆ ಅಪ್ತಾಭ್ ಅಟ್ಯಾಕ್ ಮಾಡಿದ್ದ. ಕೊಲೆ ಮಾಡಲು ಯತ್ನಿಸಿ ಪರಾರಿಯಾಗಲು ಯತ್ನ ಮಾಡಿದ್ದಾನೆ. ಈ ವೇಳೆ ಪೊಲೀಸರ ಮೇಲೂ ಹಲ್ಲೆಗೆ ಮುಂದಾಗಿದ್ದ. ಹೀಗಾಗಿ ಕಸಬಾಪೇಟೆ ಪೊಲೀಸರು ಅಪ್ತಾಭ್ ಕಾಲಿಗೆ ಗುಂಡು ಹೊಡೆದಿದ್ದರು.

ಗುಂಡುಹೊಡೆದ ನಂತರ ಹುಧಾ ಪೊಲೀಸ್ ಕಮೀಷನರ್ ಶಶಿಕುಮಾರ್ ಆರೋಪಿ ಮನೆಗೆ ಭೇಟಿ ನೀಡಿದ್ದರು. ಆರೋಪಿ ತಂದೆ ಮಹಮ್ಮದ್ ಗೌಸ್‌ನ್ನು ಜೊತೆ ಮಾತನಾಡಿದ್ದರು.

ಮಕ್ಕಳಿಬ್ಬರು ಕೊಲೆ ಯತ್ನ ಪ್ರಕರಣದಲ್ಲಿ ಭಾಗಿಯಾದಕ್ಕೆ



ತಂದೆ ಕಣ್ಣೀರು ಹಾಕಿದ್ದಾರೆ. ಮಕ್ಕಳಿಂದ ಮರ್ಯಾದೆ ಹೋಗಿದೆ. ಅವರನ್ನು ಗುಂಡು ಹೊಡೆದು ಸಾಯಿಸಿ ಬಿಡಿ ಎಂದು ಕಮೀಷನರ್ ಮುಂದೆ ಕಣ್ಣೀರು ಹಾಕಿ ಬೇಸರ ವ್ಯಕ್ತಪಡಿಸಿದರು. ಮಕ್ಕಳಿಗೆ ಬುದ್ಧಿ ಹೇಳಿ, ಇಲ್ಲದಿದ್ದರೆ ನಾವೇ ಹೇಳುತ್ತೇವೆ ಎಂದು ಕಮೀಷನರ್ ಪೋಷಕರಿಗೆ ಧೈರ್ಯ ತುಂಬಿದ್ದಾರೆ.

# ರಾಜ್ಯಪಾಲರಿಗೆ ಬಂತು ಬುಲೆಟ್ ಪ್ರೂಫ್ ಕಾರು!

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಬೆನ್ನಲ್ಲೇ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಬುಲೆಟ್ ಪ್ರೂಫ್ ಕಾರನ್ನು ಬಳಸಲು ಆರಂಭಿಸಿದ್ದಾರೆ.

ಮುಡಾ ಪ್ರಕರಣದ ಹಿನ್ನೆಲೆ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಬಳಿಕ ರಾಜ್ಯದಲ್ಲಿ ಕೆಲವು ಕಡೆ ಪ್ರತಿಭಟನೆಗಳು ನಡೆಯುತ್ತಿವೆ. ಈ ಪ್ರತಿಭಟನೆಯಿಂದಾಗಿ ರಾಜ್ಯಾಪಾಲರು ಎಚ್ಚರಿಕೆಯ ನಡೆಯನ್ನು ತೋರಿಸಿದ್ದಾರೆ. ಇಷ್ಟು ದಿನ ಅವಕಾಶ ಇದ್ದರೂ ನಾರ್ಮಲ್ ಇನ್ನೋವಾ ಕಾರನ್ನು ಬಳಸುತ್ತಿದ್ದ ರಾಜ್ಯಪಾಲರು ಇದೀಗ ಬುಲೆಟ್ ಪ್ರೂಫ್ ಕಾರನ್ನು ಬಳಸಲು



ಆರಂಭಿಸಿದ್ದಾರೆ. ರಾಜ್ಯಪಾಲರು ಅಧಿಕಾರ ಸ್ವೀಕರಿಸಿದಾಗಲೇ ಬುಲೆಟ್ ಪ್ರೂಫ್ ಕಾರಿನ ವ್ಯವಸ್ಥೆ ಮಾಡಲಾಗಿತ್ತು. ಆದರೆ ಆ ಕಾರನ್ನು ವಾಪಸ್ ಕಳುಹಿಸಿದ್ದರು. ಈಗ ಮತ್ತೆ ಗುಪ್ತಚರ ಇಲಾಖೆಯಿಂದ ಸೂಚನೆ ಬಂದ ನಂತರ ಬುಲೆಟ್ ಪ್ರೂಫ್ ಕಾರಿನ ವ್ಯವಸ್ಥೆ ಮಾಡಲಾಗಿದೆ.

ಶನಿವಾರ ಮಧ್ಯಾಹ್ನ ಇಂದೋರ್‌ಗೆ ತೆರಳಿದ್ದ ರಾಜ್ಯಪಾಲರು ಮಂಗಳವಾರ ರಾತ್ರಿ ವಾಪಸಾಗಿದ್ದಾರೆ. ಇಂದು ನಡೆಯಬೇಕಿದ್ದ ಸಾರ್ವಜನಿಕ ಕಾರ್ಯಕ್ರಮವೊಂದನ್ನು ಸೇರಿ ಆ.29ರ ತನಕ ಪೂರ್ವ ನಿಗದಿಯಾಗಿದ್ದ ಎಲ್ಲಾ ಸಾರ್ವಜನಿಕ ಕಾರ್ಯಕ್ರಮಗಳನ್ನು ರದ್ದುಗೊಳಿಸಲಾಗಿದೆ.

# ಸಿದ್ದರಾಮಯ್ಯರನ್ನ ಒಂದು ನಟೋರಿಯಸ್ ಗ್ಯಾಂಗ್ ಖೆಡ್ಡಾಗೆ ಕೆಡವಿದೆ

**ಚಿಕ್ಕಮಗಳೂರು:** ನಾವು ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಲೆ ಮಾತ್ರ ಆರೋಪ ಮಾಡುತ್ತಿಲ್ಲ, ಒಂದು ನಟೋರಿಯಸ್ ಗ್ಯಾಂಗ್ ಸಿಎಂರನ್ನು ಬಳಸಿಕೊಂಡಿದೆ ಎಂದು ಪರಿಷತ್ ಬಿಜೆಪಿ ಸದಸ್ಯ ಸಿ.ಟಿ.ರವಿ ಹೊಸ ಬಾಂಬ್ ಸಿಡಿಸಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ತಮ್ಮ ಹಗರಣಗಳಿಗೆ ರಕ್ಷಣೆ ಇರಲಿ ಎಂದು ಸಿದ್ದರಾಮಯ್ಯರನ್ನು ನಟೋರಿಯಸ್ ಗ್ಯಾಂಗ್ ಖೆಡ್ಡಾಗೆ ಕೆಡವಿಕೊಂಡಿದೆ ಎಂದು ಹೇಳಿದ್ದಾರೆ.

ಎಷ್ಟು ಡಿನೋಟಿಫೈ ಮಾಡಿದ್ದಾರೆ, ಯಾವ ಕಾರಣಗಳಿಗೆ ಮಾಡಿದ್ದಾರೆ. ಯಾರ್ಯಾರಿಗೆ ಬದಲಿ ನಿವೇಶನ ಕೊಟ್ಟಿದ್ದಾರೆ ಎಲ್ಲವೂ ಹೊರಬರುತ್ತೆ. ಸೆಟ್ಲ್‌ಮೆಂಟ್ ಡೀಡ್ ಅನ್ನುವುದೇ ಪ್ರಾಧಿಕಾರದಲ್ಲಿ ಇರುವುದಿಲ್ಲ. ಎಲ್ಲರೂ ದೊಡ್ಡ ದೊಡ್ಡ ಪ್ರಭಾವಿಗಳೇ ಇರೋದು. ನಮ್ಮ ಬಳಿ ಆರೋಪ ಸಾಬೀತು ಮಾಡುವ ಕೆಲ ದಾಖಲೆಗಳಿವೆ ಎಂದಿದ್ದಾರೆ.

ನಮ್ಮ ಹತ್ತಿರವು ಕೆಲ ದಾಖಲೆಗಳಿವೆ

ಮೂಡ ಪ್ರಕರಣ ಬೆಳಕಿಗೆ ಬಂದ ತಕ್ಷಣ ನಗರ ಅಭಿವೃದ್ಧಿ ಸಚಿವ ಭೈರತಿ ಬಸವರಾಜ್ ಮೈಸೂರಿಗೆ ಹೋಗಿ ದಾಖಲೆ ತೆಗೆದುಕೊಂಡು ಹೋಗಿದ್ದಾರೆ ಎಂಬ ಆರೋಪ ಕೇಳಿ ಬಂದಿತ್ತು. ತನಿಖೆ ಕೊಡುವ ಮೂರು ದಿನದ ಮುಂಚೆ ವಾರಗಟ್ಟಲೆ ಮೈಸೂರಿನಲ್ಲಿ ಕುಳಿತ್ತಿದ್ದರು. ಕೆಲವು ದಾಖಲೆಗಳನ್ನು ಇಲ್ಲದಂತೆ ಮಾಡಿದ್ದಾರೆ. ಹಳೆಯ ಅಧಿಕಾರಿಗಳನ್ನು ಕರೆಸಿ ಸಹಿ ಮಾಡಿಸಿದ್ದಾರೆ ಎಂಬ ದೂರು ನಮಗೆ



ಬಂದಿತ್ತು. ನಾವು ತನಿಖೆಗೆ ಆಗ್ರಹಿಸಿ ಬೆಂಗಳೂರಿನಿಂದ ಮೈಸೂರುವರೆಗೂ ಪಾದಯಾತ್ರೆ ಮಾಡಿದ್ದೇವೆ. ಸ್ವಜನಪಕ್ಷಪಾತ, ಅಧಿಕಾರ ದುರುಪಯೋಗ, ಭ್ರಷ್ಟಾಚಾರ ಮೂರು ನಡೆಸಿದೆ. ನಮ್ಮ ಹತ್ತಿರವು ಕೆಲ ದಾಖಲೆಗಳಿವೆ. ನ್ಯಾಯಾಲಯ ತನಿಖೆಗೆ ಆದೇಶ ನೀಡಿದ ಬಳಿಕ ದಾಖಲೆಗಳನ್ನು ನೀಡುತ್ತೇವೆ. ನ್ಯಾಯಾಲಯದ ತೀರ್ಪನ್ನ ಎದುರು ನೋಡುತ್ತಿದ್ದೇವೆ ಎಂದು ಹೇಳಿದ್ದಾರೆ.

ಕೇವಲ ಸಿದ್ದರಾಮಯ್ಯನವರ ಕುಟುಂಬ ಮಾತ್ರ ಈ ಹಗರಣದಲ್ಲಿ ಭಾಗಿಯಾಗಿಲ್ಲ. 1600ಕ್ಕೂ ಹೆಚ್ಚು ನಿವೇಶನಗಳನ್ನ ಇದೆ ರೀತಿ ಪರಬಾರಿ ಮಾಡಲಾಗಿದೆ ಎಂಬ ಆರೋಪ ಇದೆ. ಇದು ಅತಿ ದೊಡ್ಡ ಹಗರಣ. ಮೈಸೂರಿನಂತಹ ಸ್ಥಳದಲ್ಲೇ ಹೀಗಾಗಿರುವಾಗ ಬೆಂಗಳೂರಿನಲ್ಲಿ ಎಷ್ಟಾಗಿರಬಹುದು. ಬೇರೆ ಬೇರೆ ನಗರ ಅಭಿವೃದ್ಧಿ ಪ್ರಾಧಿಕಾರದಲ್ಲೂ ಅಕ್ರಮ ನಡೆದಿರುವ ಸಾಧ್ಯತೆ ಇದೆ. ಇದೇ ಕಾರಣಕ್ಕೆ ವಿಧಾನಸಭೆ ವಿಧಾನಪರಿಷತ್‌ನಲ್ಲಿ ಚರ್ಚೆಗೆ ಒತ್ತಾಯ ಮಾಡಿದ್ದು, ದುರ್ದೈವದ ಸಂಗತಿ ಎಂದರೆ ಆಡಳಿತ ಪಕ್ಷ ಚರ್ಚೆಗೂ ಅವಕಾಶ ಕೊಡಲಿಲ್ಲ. ಸಿದ್ದರಾಮಯ್ಯ ಒಂದು ಪತ್ರ ಇದ್ದರೆ ತೋರಿಸಿ ಅಂತಾರೆ. ಅವರ ಪತ್ನಿಯೇ ಬರೆದ ಪತ್ರ ಇದೆ. ಕೆಸವೆ ಗ್ರಾಮದಲ್ಲಿ 2001ರಲ್ಲಿ ನಗರ ಅಭಿವೃದ್ಧಿ ಪ್ರಾಧಿಕಾರ ಡೆವಲಪ್ ಮಾಡಿದೆ. ಎಲ್‌ಎನ್‌ಟಿ ಕಂಪನಿ ಅವರಿಗೆ ಗುತ್ತಿಗೆ ಕೊಟ್ಟಿರುವ ದಾಖಲೆಗಳಿವೆ ಎಂದಿದ್ದಾರೆ.

12 ನಿವೇಶನಗಳನ್ನ 2003ರಲ್ಲಿ ಹಂಚಿಕೆ ಆಗಿರುವುದಕ್ಕೆ ದಾಖಲೆಗಳಿವೆ. ಅಭಿವೃದ್ಧಿ ಆಗಿರುವ ಜಾಗವನ್ನು ಇವರ ಭಾವ ತೆಗೆದುಕೊಂಡಿರುವುದೇ ಅಪರಾಧ. ಮೂಲ ವಾರಸುದಾರರು ಅಲ್ಲದವರ ಬಳಿ ಜಾಗ ತೆಗೆದುಕೊಂಡಿದ್ದಾರೆ. ಜಾಗ ಖರೀದಿ ಇಂದ ಹಿಡಿದು ಕನ್ವರ್ಷನ್‌ವರೆಗೂ ಅಕ್ರಮವೇ ನಡೆದಿದೆ. ಸಿದ್ದರಾಮಯ್ಯ ಅರ್ಧ ಸತ್ಯ ಹೇಳುತ್ತಿದ್ದಾರೆ. ಪೂರ್ಣ ಸತ್ಯ ಮುಂಚೆ ಸಿದ್ದರಾಮಯ್ಯ ಅವರಿಗೆ ಗೊತ್ತಿತ್ತೋ ಇಲ್ವೋ ಅಥವಾ ಗೊತ್ತಿಲ್ವೋ. ಆದರೆ ಇವಾಗ ಸಿದ್ದರಾಮಯ್ಯ ಅವರಿಗೆ ಪೂರ್ಣ ಸತ್ಯ ಗೊತ್ತಾಗಿದೆ. ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟ ಕೂಡಲೇ ಸಿದ್ದರಾಮಯ್ಯ ಸೇರಿದಂತೆ ಇಡಿ ಕಾಂಗ್ರೆಸ್‌ಗೆ ದಿಗಿಲು ಬಂತು. ತಪ್ಪೇ ನಡೆದಿಲ್ಲ ಅಂದ್ರೆ, ಯಾವ ತನಿಕೆ ಮಾಡಿದ್ರೇನು? ತಪ್ಪು ನಡೆದಿದೆ ಎಂದು ಮನವರಿಕೆ ಯಾದ ಮೇಲೆ ಇಡೀ ಕಾಂಗ್ರೆಸ್ ಭಯಕ್ಕೆ ಬಿದ್ದಿದೆ. ನೀವು ಶುದ್ಧವಾಗಿದ್ದರೆ ಯಾರು ಯಾವ ತನಿಖೆ ಬೇಕಾದರೂ ಮಾಡಿದ್ರು, ಏನಾಗುತ್ತೆ ಎಂದು ಹೇಳಿದ್ದಾರೆ.

## ಮಂಡ್ಯದಲ್ಲಿ ಪತಿ-ಪತ್ನಿ ಸಾವು

# ನೇಣು ಬಿಗಿದ ಸ್ಥಿತಿಯಲ್ಲಿ ಹೆಂಡತಿ ಶವ ಪತ್ತೆ

**ಮಂಡ್ಯ:** ಜಿಲ್ಲೆಯ ಕೆ.ಆರ್.ಪೇಟೆ ತಾಲೂಕಿನ ಗದ್ದೆಹೊಸೂರು ಗ್ರಾಮದಲ್ಲಿ ಪತಿ, ಪತ್ನಿ ಅನುಮಾನಾಸ್ಪದ ವಾಗಿ ಸಾವಿಗೀಡಾಗಿರುವ ಘಟನೆ ನಡೆದಿದೆ.

ಸ್ವಾತಿ (21), ಮೋಹನ್ ಮೃತ ದುರ್ದೈವಿಗಳು. ನೇಣು ಬಿಗಿದ ಸ್ಥಿತಿಯಲ್ಲಿ ಸ್ವಾತಿ ಮೃತದೇಹ ಪತ್ತೆಯಾಗಿದೆ. ಮಹಿಳೆ ಸಾವಿನ ಬೆನ್ನಲ್ಲೇ ಸ್ವಾತಿ ಪತಿ ಹಾಗೂ ಆತನ ಪೋಷಕರು ಪರಾರಿಯಾಗಿದ್ದರು. ಬಳಿಕ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಇತ್ತ ಮಹಿಳೆ ಸಾವಿನಿಂದ ಆಕ್ರೋಶಿತರಾದರ ಸಂಬಂಧಿಗಳು ಮನೆಗೆ ಬೆಂಕಿ ಇಟ್ಟು, ಪೀಠೋಪಕರಣ ಧ್ವಂಸ ಮಾಡಿ ದಾಂಧಲೆ ಸೃಷ್ಟಿಸಿದ್ದಾರೆ.

ಮರಣೋತ್ತರ ಪರೀಕ್ಷೆಗಾಗಿ ಆದಿಚುಂಚನಗಿರಿ ಆಸ್ಪತ್ರೆಗೆ ಮೃತದೇಹ ರವಾನಿಸಲಾಗಿದೆ. ಪೊಲೀಸರು ನಾಪತ್ತೆಯಾಗಿರುವ ಗಂಡ ಹಾಗೂ ಅವನ ಮನೆಯವರಿಗಾಗಿ ಶೋಧಕ್ಕೆ ಮುಂದಾದರು.

ಪತ್ನಿ ಸಾವಿನ ಬೆನ್ನಲ್ಲೇ ಮೋಹನ್ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಕೆರೆಯಿಂದ ಮೋಹನ್ ಶವ ಹೊರತೆಗೆಯಲಾಗಿದೆ. ಗ್ರಾಮಸ್ಥರ ಸಹಾಯದೊಂದಿಗೆ ಶವ ಹೊರ ತೆಗೆದು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ.

ಪತಿ, ಪತ್ನಿ ಸಾವಿನ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಗ್ರಾಮದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದ್ದ ಹಿನ್ನೆಲೆ ಪೊಲೀಸರ ಬಿಗಿ ಭದ್ರತೆ ಕಲ್ಪಿಸಲಾಗಿದೆ. ಮೃತ ಸ್ವಾತಿ ಗಂಡನ ಮನೆ, ಕೊಬ್ಬರಿ ಗೋಡೌನ್‌ಗೆ ಬೆಂಕಿ ಬಿದ್ದಿದೆ. ಗೋಡೌನ್‌ನಲ್ಲಿದ್ದ ಲಕ್ಷಾಂತರ ಮೌಲ್ಯದ ಕೊಬ್ಬರಿ ಸುಟ್ಟು ಕರಕಲಾಗಿದೆ.

ಎರಡು ವರ್ಷದ ಹಿಂದೆಯಷ್ಟೆ ಸ್ವಾತಿ-ಮೋಹನ್ ಇಬ್ಬರೂ ಮದುವೆಯಾಗಿದ್ದರು. ಮೃತ ದಂಪತಿಗೆ



ಒಂದು ವರ್ಷದ ಹೆಣ್ಣು ಮಗುವಿದೆ. ತಂದೆ, ತಾಯಿ, ಪತ್ನಿ ಜೊತೆ ತೋಟದ ಮನೆಯಲ್ಲಿಯೇ ಮೋಹನ್ ವಾಸವಿದ್ದ. ಸಣ್ಣ-ಪುಟ್ಟ ವಿಚಾರಕ್ಕೆ ಆಗಾಗ ಪತಿ-ಪತ್ನಿ ನಡುವೆ ಜಗಳವಾಗುತ್ತಿತ್ತು. ನಿನ್ನೆ ಸಂಜೆ ತವರು ಮನೆಯಿಂದ ಪತ್ನಿ ಸ್ವಾತಿಯನ್ನ ತನ್ನ ಮನೆಗೆ ಕರೆತಂದಿದ್ದ. ಮಗುವನ್ನ ಅತ್ತೆ ಮನೆಯಲ್ಲಿಯೇ ಬಿಟ್ಟು ಬಂದಿದ್ದ. ಮನೆಗೆ ಬಂದ ಕೆಲ ಹೊತ್ತಲ್ಲೆ ಗಂಡ-ಹೆಂಡತಿ ನಡುವೆ ಜಗಳವಾಗಿದೆ. ಒಂದು ಗಂಟೆ ಬಳಿಕ ಬಾವನ ಮನೆಗೆ ಮಗು ಕರೆದುಕೊಂಡು ಬಂದಿದ್ದ ಸ್ವಾತಿ ಸಹೋದರನಿಗೆ ಶಾಕ್ ಕಾದಿತ್ತು.

ಈ ವೇಳೆ ನೇಣುಬಿಗಿದ ಸ್ಥಿತಿಯಲ್ಲಿ ಸ್ವಾತಿ ಮೃತದೇಹವಿತ್ತು. ಅತ್ತ ಪತಿ ಮೋಹನ್ ಪರಾರಿಯಾಗಿದ್ದ. ಮನೆ ಬಳಿಗ ಬಂದ ಸ್ವಾತಿ ಕುಟುಂಸ್ಥರು ದಾಂಧಲೆ ನಡೆಸಿದ್ದಾರೆ. ಮನೆಗೆ ನುಗ್ಗಿ ಪೀಠೋಪಕರಣ ಧ್ವಂಸ ಮಾಡಿದ್ದಾರೆ. ಮನೆಯ ಕಿಟಕಿ ಗಾಜು ಹೊಡೆದು ಆಕ್ರೋಶ ಹೊರಹಾಕಿದ್ದಾರೆ. ಆಕ್ರೋಶಿತ ಗುಂಪಿನಿಂದ ಕೊಬ್ಬರಿ ಶೇಖರಿಸಿದ್ದ ಮನೆಗೆ ಬೆಂಕಿ ಹಚ್ಚಲಾಗಿದೆ. 10 ಲಕ್ಷಕ್ಕೂ ಅಧಿಕ ಮೌಲ್ಯದ ಕೊಬ್ಬರಿ ಸುಟ್ಟು ಕರಕಲಾಗಿದೆ. ಈ ನಡುವೆ ಬೆಳಗ್ಗೆ ಮನೆ ಸಮೀಪದ ಕೆರೆಯಲ್ಲಿಯೇ ಮೋಹನ್ ಶವ ಪತ್ತೆಯಾಗಿದೆ.

## ನಮಿಸಿದ ಪ್ರಧಾನಿ ಮೋದಿ

ಅವರು ಸುಮಾರು 20 ವರ್ಷಗಳ ಕಾಲ ಸೇನೆಯಲ್ಲಿ ಸೇವೆ ಸಲ್ಲಿಸಿದರು. ರಜಪೂತಾನ ರೈಫಲ್ಸ್ ಗೆ ಸೇರಿ ಲೆಫ್ಟಿನೆಂಟ್ ಜನರಲ್ ಆದರು. ಅವರ ಚಿಕ್ಕಪ್ಪ ಮತ್ತು ಪ್ರಸಿದ್ಧ ಕ್ರಿಕೆಟಿಗ ಕೆಎಸ್ ರಂಜಿತ್ ಅವರ ಮರಣದ ನಂತರ, ಜಾಮ್ ಸಾಹೇಬ್ 1933 ರಿಂದ 1948 ರವರೆಗೆ ನವನಗರದ ಮಹಾರಾಜರಾಗಿದ್ದರು. ಅವರು ರಾಜ್ ಕೋಟ್‌ನ ರಾಜ್‌ಕುಮಾರ್ ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರಾಗಿ ದೀರ್ಘಕಾಲ ಸೇವೆ ಸಲ್ಲಿಸಿದ್ದರು.

ಪೋಲೆಂಡ್ನೊಂದಿಗಿನ ಸಂಬಂಧವು ಹೇಗೆ ಬೆಳೆಯಿತು ಕಥೆ ಸುಮಾರು 80 ವರ್ಷಗಳಷ್ಟು ಹಳೆಯದು. ಎರಡನೇ ಮಹಾಯುದ್ಧದ ಸಮಯದಲ್ಲಿ ಅನಾಥರಾಗಿದ್ದ ಸುಮಾರು 1000 ಯಹೂದಿ ಮಕ್ಕಳನ್ನು ಪೋಲೆಂಡ್‌ನಿಂದ ಜಾಮ್ ಸಾಹೇಬ್ ಸೈಬೀರಿಯಾದಿಂದ ಭಾರತಕ್ಕೆ ಕರೆತಂದರು. ಅವರಿಗಾಗಿ ಅರಮನೆಯ ಬಾಗಿಲು ತೆರೆಯಲಾಯಿತು. ಈ ಮಕ್ಕಳ ರಕ್ಷಕರಾಗಿ ಸೇವೆ ಸಲ್ಲಿಸಿದರು. ಈ ಮಕ್ಕಳನ್ನು ಪೋಲೆಂಡ್‌ನಿಂದ ಸೋವಿಯತ್ ಒಕ್ಕೂಟವು ಸೈಬೀರಿಯಾದ ನಿರಾಶ್ರಿತರ ಶಿಬಿರಕ್ಕೆ ಕಳುಹಿಸಿತು. ಸ್ವತಃ ಮಹಾರಾಜರೂ ಮಕ್ಕಳನ್ನು ಭೇಟಿಯಾಗಲು ಹೋಗುತ್ತಿದ್ದರು. ಅವರಿಗಾಗಿ ಕಲಾ ಸ್ಟುಡಿಯೋಗಳು, ನಾಟಕ ಗುಂಪುಗಳು ಮತ್ತು ಸಾಂಸ್ಕೃತಿಕ ಕೇಂದ್ರಗಳನ್ನು ಸಹ ನಿರ್ಮಿಸಲಾಯಿತು. ಅಷ್ಟೇ ಅಲ್ಲ, ಈ ಮೂಲಕ ಇನ್ನೂ 5000 ಮಕ್ಕಳಿಗೆ ಸಹಾಯ ಮಾಡಿದ್ದಾರೆ.

ಮಾರ್ಚ್ 2016 ರಲ್ಲಿ, ಪೋಲೆಂಡ್ ಸಂಸತ್ತು ನವನಗರದಲ್ಲಿ ಜಾಮ್ ಸಾಹೇಬ್ ಸ್ಮಾರಕವನ್ನು ನಿರ್ಮಿಸಲು ನಿರ್ಧರಿಸಿತು. ಪೋಲೆಂಡ್‌ನ ವಾರ್ಸಾದಲ್ಲಿ ಜಾಮ್ ಸಾಹೇಬ್ ಹೆಸರಿನಲ್ಲಿ ಶಾಲೆಯನ್ನು ತೆರೆಯಲಾಗಿದೆ. ಜಾಮ್‌ನಗರದಲ್ಲಿ ಜಾಮ್ ಸಾಹೇಬ್ ತೆರೆದ ಶಿಬಿರವು 1945 ರವರೆಗೆ ನಡೆಯಿತು ಮತ್ತು ನಂತರ ಮುಚ್ಚಲಾಯಿತು.

ಏಕೆಂದರೆ ಎಲ್ಲ ಮಕ್ಕಳನ್ನು ಕೊಲ್ಹಾಪುರಕ್ಕೆ ಕಳುಹಿಸಲಾಗಿತ್ತು. ಇಂದು 300 ಎಕರೆ ಪ್ರದೇಶದಲ್ಲಿ ಸೈನಿಕ ಶಾಲೆ ಇದ್ದು, ಆ ಮಕ್ಕಳ ನೆನಪಿಗಾಗಿ ನಿರ್ಮಿಸಲಾಗಿದೆ. ಕೊಲ್ಹಾಪುರ ಸ್ಮಾರಕಕ್ಕೂ ಪ್ರಧಾನಿ ಮೋದಿ ಭೇಟಿ ನೀಡಿದರು. ಪೋಲಿಷ್ ಮಕ್ಕಳಿಗೆ ಆಶ್ರಯ ನೀಡಿದ ಕೊಲ್ಲಾಪುರದ ಹಳ್ಳಿಯ ನೆನಪಿಗಾಗಿ ಈ ಸ್ಮಾರಕವನ್ನು ನಿರ್ಮಿಸಲಾಗಿದೆ.

ಮಕ್ಕಳನ್ನು 1945 ರಲ್ಲಿ ಕೊಲ್ಹಾಪುರದ ವಲಿವಾಡೆಗೆ ಕರೆದೊಯ್ಯಲಾಯಿತು. ಇಲ್ಲಿನ ವಾತಾವರಣ ಪೋಲೆಂಡಿನ ಮಕ್ಕಳಿಗೆ ಹೊಂದಿಕೆಯಾಗುವುದರಿಂದ ವಾಲಿವಾಡೆಯನ್ನು ಆಯ್ಕೆ ಮಾಡಿಕೊಳ್ಳಲಾಯಿತು. ಈ ಸ್ಥಳವು ಮುಂಬೈ ನಗರದ ದಕ್ಷಿಣಕ್ಕೆ ಸುಮಾರು 500 ಕಿಲೋಮೀಟರ್ ದೂರದಲ್ಲಿದೆ. ಕೊಲ್ಹಾಪುರದಲ್ಲಿ ಸ್ಮಶಾನವೂ ಇದ್ದು, ಇದನ್ನು 2014ರಲ್ಲಿ ತೆರೆಯಲಾಗಿದೆ.

## ಸಂಪುಟ ಸಭೆ

**ಯಾರಿಗೆಲ್ಲ ಇದೆ ಪ್ರಶಸಿಕ್ಯೂಷನ್ ಭೀತಿ:** ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಲು ಲೋಕಾಯುಕ್ತ ಎಸ್‌ಐಟಿ ಈಗಾಗಲೇ ಮನವಿ ಮಾಡಿದೆ. ಇದರ ಜೊತೆಗೆ ಮಾಜಿ ಸಚಿವೆ ಶಶಿಕಲಾ ಜೊಲ್ಲೆ, ಮಾಜಿ ಸಚಿವ ಮುರುಗೇಶ ನಿರಾಣಿ, ಮಾಜಿ ಸಚಿವ ಜನಾರ್ದನ ರೆಡ್ಡಿ ವಿರುದ್ಧದ ಪ್ರಾಸಿಕ್ಯೂಷನ್ ಅರ್ಜಿ ಬಾಕಿ ಇದೆ. ಈ ಪ್ರಾಸಿಕ್ಯೂಷನ್ ಅರ್ಜಿಗಳ ಇತ್ಯರ್ಥಕ್ಕೆ ಸರ್ಕಾರ ಸಲಹೆ ರವಾನಿಸಲಿದೆ.

ಈ ಅರ್ಜಿಗಳ ಇತ್ಯರ್ಥ ಮಾಡಿ ಎಂದು ಸಲಹೆ ನೀಡಲಿದೆ. ಆ ಮೂಲಕ, ಸಿಎಂ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ನೀಡಿದ್ದಕ್ಕೆ ಸರ್ಕಾರ ರಾಜ್ಯಪಾಲರಿಗೆ ಕೌಂಟರ್ ಕೊಡಲಿದೆ.

## ಇವಿ ಟೆಸ್ಟಿಂಗ್ ಲ್ಯಾಬ್

ಬೆಂಗಳೂರಿನಲ್ಲಿ ಇಂದು ಉದ್ಘಾಟನೆಯಾಗುತ್ತಿರುವುದು ಎನ್ ಟಿಎಚ್ ನ ದಕ್ಷಿಣ ಭಾರತದ ಮೊದಲ ಲ್ಯಾಬ್ ಆಗಿದೆ.

## ಮೊದಲನೇ ಪುಟದಿಂದ...

ಜಕ್ಕೂರಿನಲ್ಲಿರುವ ಈ ಲ್ಯಾಬ್ ಅನ್ನು ಇಂದು ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಷಿ ಉದ್ಘಾಟಿಸುತ್ತಿದ್ದಾರೆ. ಇಲಾಖೆಯ ಜಂಟಿ ಕಾರ್ಯದರ್ಶಿ ಅನುಪಮ್ ಮಿಶ್ರಾ, ಹೆಚ್ಚುವರಿ ಕಾರ್ಯದರ್ಶಿ ಭರತ್ ಖೇರಾ, ಲೀಗಲ್ ಮೆಟ್ರೋಲಜಿಯ ನಿರ್ದೇಶಕ ಆಶುತೋಷ್ ಅಗರ್ವಾಲ್, ನ್ಯಾಷನಲ್ ಟೆಸ್ಟ್ ಹೌಸ್ ನ ಮಹಾನಿರ್ದೇಶಕ ಡಾ. ಅಲೋಕ್ ಕುಮಾರ್ ಶ್ರೀವಾಸ್ತವ ಮೊದಲಾದವರು ಈ ಸಂದರ್ಭದಲ್ಲಿ ಇರಲಿದ್ದಾರೆ.

## ಎಲ್ಲೆಡೆ ಹದ್ದಿನ ಕಣ್ಣು

ಪ್ರತೀ ವರ್ಷದಂತೆ ಈ ವರ್ಷವೂ ಗೌರಿ-ಗಣೇಶ ಹಬ್ಬದ ವೇಳೆ ಶಾಂತಿ-ಸುವ್ಯವಸ್ಥೆ ಪಾಲನೆ, ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ಪೊಲೀಸರು ಹೆಚ್ಚಿನ ಗಮನ ಕೊಟ್ಟಿದ್ದಾರೆ. ನಿನ್ನೆ ನಗರ ಪೊಲೀಸ್ ಇಲಾಖೆ ಹಾಗೂ ಬಿಬಿಎಂಪಿ ಅಧಿಕಾರಿಗಳು ಸಭೆ ನಡೆಸಿ ಮಾರ್ಗಸೂಚಿಗಳ ಬಗ್ಗೆ ಚರ್ಚಿಸಿದ್ದಾರೆ. ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಮಾತನಾಡಿ, ಹಬ್ಬ ಯಾವ ರೀತಿ ಆಚರಿಸಬೇಕು ಸೇರಿದಂತೆ ಏನೆಲ್ಲಾ ನಿಬಂಧನೆಗಳ ಪಾಲಿಸಬೇಕು ಹಾಗೂ ತಾಂತ್ರಿಕವಾಗಿ ಏನೆಲ್ಲಾ ಕ್ರಮಗಳನ್ನು ಅನುಸರಿಸಬೇಕು ಎಂಬುದರ ಬಗ್ಗೆ ಚರ್ಚಿಸಲಾಗಿದೆ. ಅಲ್ಲದೆ ಸಾರ್ವಜನಿಕರು ಕುಂದುಕೊರತೆ ತಿಳಿಸಿದ್ದು, ಈ ಬಗ್ಗೆ ಆಲಿಸಲಾಗಿದೆ. ಹಬ್ಬದ ಹಿನ್ನೆಲೆಯಲ್ಲಿ ಶೀಘ್ರದಲ್ಲಿ ಮಾರ್ಗಸೂಚಿ ಹೊರಡಿಸುವುದಾಗಿ ತಿಳಿಸಿದ್ದಾರೆ.

## ಪಕ್ಷದ ಚಿಹ್ನೆ ಬಿಡುಗಡೆ

ಮೂರು ವರ್ಷಗಳಲ್ಲಿ 9.74 ಲಕ್ಷ ಕೋಟಿ ರೂ. ಬಂಡವಾಳ ರಾಜ್ಯಕ್ಕೆ ಬಂದಿದೆ: ಸ್ಟಾಲಿನ್ ಮತ್ತೊಂದೆಡೆ, ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರು ಕಳೆದ ಮೂರು ವರ್ಷಗಳಲ್ಲಿ ರಾಜ್ಯವು 9.74 ಲಕ್ಷ ಕೋಟಿ ರೂಪಾಯಿಗಳ ಹೂಡಿಕೆಯನ್ನು ಆಕರ್ಷಿಸಿದೆ, ಇದು 31 ಲಕ್ಷ ಹೊಸ ಉದ್ಯೋಗಗಳನ್ನು ಸೃಷ್ಟಿಸಿದೆ ಎಂದು ಹೇಳಿದರು.

ತಮಿಳುನಾಡಿನಲ್ಲಿ 68,773 ಕೋಟಿ ರೂಪಾಯಿ ಮೌಲ್ಯದ ಯೋಜನೆಗಳಿಗೆ ಶಂಕುಸ್ಥಾಪನೆ ಮಾಡಿದ ಸ್ಟಾಲಿನ್, ಈ ಯೋಜನೆಗಳು ಸುಮಾರು ಒಂದು ಲಕ್ಷ ಜನರಿಗೆ ಉದ್ಯೋಗವನ್ನು ಒದಗಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

## ಮನೆ ಧ್ವಂಸ

ಇದಕ್ಕೂ ಮೊದಲು ಥಾಣೆ ನ್ಯಾಯಾಲಯವು ಶಿಂಧೆಯ ಪೊಲೀಸ್ ಕಸ್ಟಡಿಯನ್ನು ಆಗಸ್ಟ್ 26 ರವರೆಗೆ ವಿಸ್ತರಿಸಿತ್ತು. ಶಾಲೆಯ ಅಟೆಂಡರ್ ಆಗಿರುವ ಆರೋಪಿಯನ್ನು ಥಾಣೆ ಜಿಲ್ಲೆಯ ಕಲ್ಯಾಣ್‌ನಲ್ಲಿ ಮ್ಯಾಜಿಸ್ಟ್ರೇಟ್ ಮುಂದೆ ವ್ಯಾಪಕ ಭದ್ರತಾ ವ್ಯವಸ್ಥೆಗಳ ನಡುವೆ ಹಾಜರುಪಡಿಸಲಾಯಿತು.

ಶಾಲೆಯ ವಿಶ್ರಾಂತಿ ಕೊಠಡಿಯಲ್ಲಿ ನಾಲ್ಕು ವರ್ಷದ ಇಬ್ಬರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ. ಕಳೆದ ವಾರ ಬಾಲಕಿಯೊಬ್ಬಳು ತನ್ನ ಅನುಭವವನ್ನು ಪೋಷಕರ ಬಳಿ ಹೇಳಿಕೊಂಡ ನಂತರ ಘಟನೆ ಬೆಳಕಿಗೆ ಬಂದಿದೆ. ಆರೋಪಿಯನ್ನು ಆಗಸ್ಟ್ 17 ರಂದು ಅಧಿಕಾರಿಗಳು ವಶಕ್ಕೆ ತೆಗೆದುಕೊಂಡಿದ್ದರು.

ಇದು ರಾಜ್ಯಾದ್ಯಂತ ಕೋಲಾಹಲಕ್ಕೆ ಕಾರಣವಾಗಿದ್ದು, ಹಲವಾರು ಪ್ರತಿಭಟನಾಕಾರರು ಬೀದಿಗಿಳಿದು ಸಾರ್ವಜನಿಕ ಆಸ್ತಿಗಳನ್ನು ಧ್ವಂಸಗೊಳಿಸಿದರು ಮತ್ತು ಅಧಿಕಾರಿಗಳ ಮೇಲೆ ದಾಳಿ ನಡೆಸಿದರು. 500 ಪ್ರತಿಭಟನಾಕಾರರ ವಿರುದ್ಧ ಎಫ್ ಐಆರ್ ದಾಖಲಿಸಲಾಗಿದ್ದು, ಹಿಂದಿನ ದಿನ ಬದ್ಲಾಪುರದಲ್ಲಿ ಭುಗಿಲೆದ್ದ ಪ್ರತಿಭಟನೆಗೆ ಸಂಬಂಧಿಸಿದಂತೆ 72 ಜನರನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ.

ಬಂಧಿತ ವ್ಯಕ್ತಿಗಳು ಇತರ ಅಪರಾಧಗಳ ಜೊತೆಗೆ ಗಲಭೆ, ವಿಧ್ವಂಸಕತೆ ಮತ್ತು ಸಾರ್ವಜನಿಕ ಅಧಿಕಾರಿಗಳ ಮೇಲೆ ಹಲ್ಲೆಗೆ ಸಂಬಂಧಿಸಿದ ಆರೋಪಗಳನ್ನು ಎದುರಿಸಬೇಕಾಗುತ್ತದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪಟ್ಟಣದಲ್ಲಿ ಇಂಟರ್ ನೆಟ್ ಸೇವೆಯನ್ನು ಸ್ಥಗಿತಗೊಳಿಸಲಾಗಿದೆ, ಶಾಲೆಗಳನ್ನು ಮುಚ್ಚಲಾಗಿತ್ತು. ಪ್ರತಿಭಟನೆಯ ವೇಳೆ ರೈಲ್ವೆ ನಿಲ್ದಾಣ ಮತ್ತು ಬದ್ಲಾಪುರದ ಇತರ ಭಾಗಗಳಲ್ಲಿ ಕಲ್ಲು ತೂರಾಟದ ಘಟನೆಗಳು ನಡೆದವು. ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಹೆಚ್ಚುವರಿ ಪೊಲೀಸರನ್ನು ನಿಯೋಜಿಸಲಾಗಿದೆ.

## ಚಾರ್ಜ್ ಶೀಟ್

ಪೊಲೀಸರ ಮುಂದೆ ಒಂದು ಹೇಳಿಕೆ ನೀಡುವ ಸಾಕ್ಷಿಗಳು, ಕೋರ್ಟ್ ಮುಂದೆ ಬೇರೆಯದೇ ಹೇಳಿಕೆ ನೀಡುತ್ತಾರೆ. ಹೀಗಾಗಬಾರದು ಎನ್ನುವ ಕಾರಣಕ್ಕೆ ಒಟ್ಟಾರೆ 25 ಸಾಕ್ಷ್ಯಗಳನ್ನು ಕರೆತಂದು ನ್ಯಾಯಾಧೀಶರ ಮುಂದೆ ಹೇಳಿಕೆ ದಾಖಲು ಮಾಡಲಾಗಿದೆ. ಇದು ಪ್ರಕರಣದಲ್ಲಿ ಪ್ರಮುಖ ಎನಿಸಿಕೊಂಡಿದೆ.

ಪ್ರಕರಣದ ತನಿಖೆಗೆ ಈಗಾಗಲೇ ಎರಡೂವರೆ ಲಕ್ಷ ರೂಪಾಯಿ ಖರ್ಚಾಗಿದೆ. ಸದ್ಯ ಪೊಲೀಸ್ ಟೀಂ ಎಲ್ಲದಕ್ಕೂ ಹಣದ ಲೆಕ್ಕ ಇಟ್ಟಿದೆ. ಪ್ರತಿಯೊಂದು ಅಂಶಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿ ದಾಖಲು ಮಾಡಿಕೊಳ್ಳಲಿದೆ. ಕೃತ್ಯದಲ್ಲಿ ಆರೋಪಿಗಳ ಪಾತ್ರದ ಕುರಿತು ಉಲ್ಲೇಖ ಮಾಡಲಾಗುತ್ತದೆ.

ರೇಣುಕಾ ಸ್ವಾಮಿ ಕೊಲೆ ಕೇಸ್ ನಲ್ಲಿ ಸದ್ಯ ದರ್ಶನ್ ಅವರು 'ಎ2' ಆರೋಪಿ ಆಗಿದ್ದಾರೆ. ಅವರನ್ನು 'ಎ1' ಆರೋಪಿ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಹೇಳಲಾಗುತ್ತಿದೆ.



ಕೋಲಾರ ಜಿಲ್ಲೆಯ ಎಸ್.ಎನ್.ಆರ್ ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾ ಆಸ್ಪತ್ರೆ ಮತ್ತು ವಸತಿ ಗೃಹಗಳ ಮೂಲಭೂತ ಸೌಕರ್ಯಗಳ ಉನ್ನತೀಕರಣ ಕಾಮಗಾರಿಗಳಿಗೆ ಶಂಕು ಸ್ಥಾಪನೆಯನ್ನು ನೆರವೇರಿಸಿದರು. ಸ್ಥಳೀಯ ಶಾಸಕರಾದ ಕೊತ್ತೂರು ಮಂಜುನಾಥ್, ಎಂಎಲ್ಸಿ ಅನಿಲ್ ಕುಮಾರ್, ಜಿಲ್ಲಾಧಿಕಾರಿಗಳು ಸೇರಿದಂತೆ ಕಾರ್ಯಕರ್ತರು ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

# ಉಚಿತ ಆರೋಗ್ಯ, ಕ್ಯಾನ್ಸರ್ ತಪಾಸಣಾ ಶಿಬಿರ

**ಚಾಮರಾಜನಗರ :** ಚಾಮರಾಜನಗರ ತಾಲ್ಲೂಕಿನ ದಡದಹಳ್ಳಿ ಗ್ರಾಮದ ಅಂಬೇಡ್ಕರ್ ಭವನದಲ್ಲಿ ಮೈಸೂರಿನ ಓಡಿಪಿ ಸಂಸ್ಥೆ ಹಾಗೂ ಸಂತ ಜೋಸೆಫರ ಆಸ್ಪತ್ರೆಯ ವತಿಯಿಂದ ಕ್ಯಾನ್ಸರ್ ಹಾಗೂ ವಿವಿಧ ರೀತಿಯ ರೋಗಗಳನ್ನು ತಪಾಸಣೆ ನಡೆಸಲಾಯಿತು.

ಆರೋಗ್ಯ ತಪಾಸಣಾ ಶಿಬಿರವನ್ನು ಹೆಬ್ಬಸೂರಿನ ಗ್ರಾಮ ಪಂಚಾಯಿತ್ ಅಧ್ಯಕ್ಷೆ ಪದ್ಮ.ಕೆ ಉದ್ಘಾಟಿಸಿದರು.

ಓಡಿಪಿ ಸಂಸ್ಥೆಯ ಸಂಯೋಜಕಿ ಯಮುನಾ ಅವರು ಮಾತನಾಡಿ ಕ್ಯಾನ್ಸರ್ ಎಂಬ ಮಾರಕ ರೋಗ ದೈನಂದಿನಯಾಂತ್ರಿಕ ಬದುಕಿನ ನಡುವೆ ಕಲಬೆರಕೆ ಆಹಾರ ಸೇವನೆ ವಿಷಕಾರಿಕ ಆಹಾರ ಸೇವನಯಿಂದ ಹೆಚ್ಚಾಗಿ ಕಂಡುಬರುತ್ತದೆ. ಈ ನಿಟ್ಟಿನಲ್ಲಿ 2019 ನವೆಂಬರ್ ನಿಂದ ಮೈಸೂರಿನ ಓಡಿಪಿ ಸಂಸ್ಥೆಯಲ್ಲಿ ನಿರಂತರವಾಗಿ ಸ್ಪರ್ಶ ಎಂಬ ಕ್ಯಾನ್ಸರ್ ತಡೆ ಅಭಿಯಾನವನ್ನು ಪ್ರಾರಂಭಿಸಿದೆ, ಪ್ರಸ್ತುತ ಕಾರಿತಾಸ್ ಇಂಡಿಯಾ ನವದೆಹಲಿ, ಸಂಘ ಮಿತ್ರ ಗ್ರಾಮೀಣ ಹಣಕಾಸು ಸೇವಾ ಸಂಸ್ಥೆ. ಮೈಸೂರು ಇದರ ಪ್ರಯೋಜಕತ್ವದ ಅಭಿಯಾನ ದಡಿ ಕ್ಯಾನ್ಸರ್ ತಡೆಗಾಗಿ ಜಾಗೃತಿ, ಅರಿವು, ಕೈ ತೋಟ ನಿರ್ಮಾಣ, ಆರೋಗ್ಯ ತಪಾಸಣೆ, ಉಚಿತ ಕ್ಯಾನ್ಸರ್ ತಪಾಸಣೆ ಚಿಕಿತ್ಸೆಗಾಗಿ ಕ್ಯಾನ್ಸರ್ ರೋಗದ ಪ್ರಾರಂಭದ ಹಂತದಲ್ಲಿ ಪತ್ತೆ ಹಚ್ಚಿ ಅದೇಷ್ಟೋ ರೋಗಿಗಳನ್ನು ಜೀವಂತವಾಗಿರುವಂತೆ ಸಮಾಲೋಚನೆ ಜಾಲಬಂಧ



ಮೇಲ್ವಿಚಾರಣೆ, ಅನುಸರಣೆ ಮಾಡುತ್ತಿದೆ ಎಂದರು. ಆರೋಗ್ಯ ತಪಾಸಣಾ ಶಿಬಿರದಲ್ಲಿ ಮೈಸೂರಿನ ದಂತ ವೈದ್ಯ ಡಾ.ನಿತೀನ್, ಡಾ. ಜೆನೀಫರ್, ಮತ್ತು ಶುಶ್ರೂಷಕಿಯರು, ಗ್ರಾಪಂ ಸದಸ್ಯ ಮೂರ್ತಿ, ಗೋವಿಂದರಾಜು, ಪ್ರತಿಮಾ ಗ್ರಾಪಂ ಕಾರ್ಯದರ್ಶಿ ಪ್ರಕಾಶ್ ವಲಯ ಸಂಯೋಜಕರಾದ ಸಿದ್ದರಾಜು, ಎಲ್.ಡಿ ಯೋಜನೆ ಕ್ಷೇತ್ರ ಸಂಯೋಜಕಿ ಪರಮೇಶ್ವರಿ, ಕಾರ್ಯಕರ್ತರಾದ ಸಾಕಮ್ಮ, ಸುಮಿತ್ರ, ಹಾಗೂ ಚಾಮರಾಜನಗರದ ಮಹಿಳೋದಯ ಮಹಿಳಾ ಒಕ್ಕೂಟದ ಪ್ರತಿನಿಧಿಗಳು ಹಾಜರಿದ್ದರು.

ಈ ಸಂದಭದಲ್ಲಿ 130 ಜನರಿಗೆ ಆರೋಗ್ಯ ತಪಾಸಣೆ ನಡೆಸಿ ಇಬ್ಬರೂ ಕ್ಯಾನ್ಸರ್ ರೋಗಿಯನ್ನು ಹಾಗೂ 12 ಜನ ಮಧುಮೇಹ ರೋಗಿಯನ್ನು ಗುರುತಿಸಲಾಯಿತು,

# ಪರಿಸರ ಉಳಿಸಿ



**ಚಾಮರಾಜನಗರ:** ಕೇರಳರಾಜ್ಯದ ವೈನಾಡಿನಲ್ಲಿನ ನಡೆದ ಭೀಕರ ದುರಂತದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರವು ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಪರಿಸರವಾದಿ ಪುಣಜನೂರು ದೊರೆಸ್ವಾಮಿ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು. ನಗರದ ಜಿಲ್ಲಾಧಿಕಾರಿಗಳ ಕಛೇರಿಗೆ ಜಿಲ್ಲೆಯ ಪರಿಸರ ಕಾರ್ಯಕರ್ತರ ಸಂಘಟನೆಯ ಮುಖಂಡರು ಬುಧವಾರ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಿದರು.

ಪರಿಸರವಾದಿ ಪುಣಜನೂರು ದೊರೆಸ್ವಾಮಿ ಅವರು ಮಾತನಾಡಿ ಚಾಮರಾಜನಗರ ಜಿಲ್ಲೆ ಅತಿಹೆಚ್ಚು ಬೆಟ್ಟಗುಡ್ಡಗಳು ಮತ್ತು ಕಾಡು ಪ್ರದೇಶದಿಂದ ಕೂಡಿದೆ ಯಾವ ಸಂದರ್ಭದಲ್ಲಿಯಾದರು ಅನಾಹುತ ನಡೆಯಬಹುದು ಅದನ್ನು ತಡೆಯಲು ರಾಜ್ಯ ಸರ್ಕಾರ ಮತ್ತು ಜಿಲ್ಲಾಡಳಿತ ಮುಂದೆಬರಬೇಕಿದೆ. ಅರಣ್ಯ ಪ್ರದೇಶಗಳು ಒತ್ತವರಿ, ಅಕ್ರಮಗಣಿಗಾರಿಕೆ, ಅಕ್ರಮ ರೆಸಾರ್ಟ್‌ಗಳು ಹೋಮ್ ಸ್ಟೇ, ಹೋಟೆಲ್‌ಗಳು ಅಕ್ರಮ ನಿರ್ಮಾಣ ರಸ್ತೆ ಅಗಲೀಕರಣ , ಮರಗಳ ಕಡಿತ ಹಾಗೂ ಇನ್ನು ಅನೇಕ ಅಕ್ರಮ ಯೋಜನೆಗಳನ್ನು ನಡೆಸುತ್ತಿರುವುದು ಕಂಡು ಬಂದಿದೆ, ಇದರಿಂದ ಪರಿಸರಸ ಹನಿಯಾಗುವುದು ಕಂಡಿತ ಎಂದು ಹೇಳಿದರು.

**ನಮ್ಮ ಬೇಡಿಕೆಗಳು:** ಪಶ್ಚಿಮ ಘಟ ಪ್ರಧಿಕಾರವನ್ನು ರಚಿಸಬೇಕು, ಸೂಕ್ಷ್ಮ ಪರಿಸರ ವಲಯಗಳನ್ನು ಘೋಷಿಸಬೇಕು, ಸೂಕ್ಷ್ಮ ಪರಿಸರ ವಲಯಗಳಲ್ಲಿ ಗಣಿಗಾರಿಕೆ, ಕಲ್ಲು ಗಣಿಗಾರಿಕೆ ಮತ್ತು ಮರಳು ಗಣಿಗಾರಿಕೆಗಳನ್ನು ನಿಷೇಧಿಸಬೇಕು, ಸೂಕ್ಷ್ಮ ಪರಿಸರ ವಲಯಗಳಲ್ಲಿ ಕಟ್ಟಡ ನಿರ್ಮಾಣ, ಮೂಲಸೌಕರ್ಯ ನಿರ್ಮಾಣವನ್ನು ನಿರ್ಬಂಧಿಸಬೇಕು, ಪರಿಸರ ಪರಿಣಾಮ ಅಧ್ಯಯನವನ್ನು( ಇ,ಐ.ಎ) ಬಲಪಡಿಸಬೇಕು, ಸುಸ್ಥಿರಕೃಷಿ ಮತ್ತು ವನೀಕರಣವನ್ನು ಪ್ರೋತ್ಸಾಹಿಸಬೇಕು, ಪವಿತ್ರ ಬನಗಳನ್ನು ಮತ್ತು ಪಾರಂಪರಿಕ ಜ್ಞಾನವನ್ನು ರಕ್ಷಿಸಬೇಕು, ಪರಿಸರ ಸ್ನೇಹಿ ಪ್ರವಾಸೋದ್ಯಮವಕ್ಕೆ ಮಾರ್ಗಸೂಚಿ ತಯಾರಿಸಬೇಕು, ಪ್ರಕೃತಿ ಸಂರಕ್ಷಣೆಗಾಗಿ ನಿಧಿ ಕಾಯ್ದಿರಿಸಬೇಕು, ಹಾಗೂ ಉಸ್ತುವಾರು ವ್ಯವಸ್ಥೆಯನ್ನು ಸ್ಥಾಪಿಸಬೇಕು ಎಂದು ಮನವಿ ಮಾಡಿದರು. ಪರಿಸರ ಸಂಘಟನೆಯ ಸದಸ್ಯರಾದ ರಂಗಕರ್ಮಿ ಕೆ. ವೆಂಕಟರಾಜು, ಗಿರಿಜನ ಸಂಘದ ಅಧ್ಯಕ್ಷ ಮುತ್ತಯ್ಯ, ಡಾ. ವಿರಭದ್ರನಾಯ್ಕ್, ರಂಗಸ್ವಾಮಿ ನಾಯ್ಕ್, ಸಿ.ಎಂ.ವೆಂಕಟೇಶ್, ಅಬ್ರಾಹಮ್ ಡಿ.ಸಿಲ್ವ, ರೈತ ಸಂಘದ ಕಾಡಳ್ಳಿ ಚಿನ್ನಸ್ವಾಮಿ, ಗ್ರಾಪಂ ಸದಸ್ಯ ಚಂದ್ರು, ಹಾಗೂ ಇನ್ನು ಮುಂತಾದವರು ಹಾಜರಿದ್ದರು.

# 25ರಂದು ಎಸ್‌ಸಿ, ಎಸ್‌ಟಿ ಮುಖಂಡರ ಕುಂದು ಕೊರತೆ ಸಭೆ

**ಚಾಮರಾಜನಗರ:** ರಾಜ್ಯ ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ರವರ ಆದೇಶದಂತೆ ಜಿಲ್ಲಾಮಟ್ಟದ ಎಸ್.ಸಿ, ಎಸ್.ಟಿ ಮುಖಂಡರ ಕುಂದು ಕೊರತೆ ಸಭೆಯನ್ನು ಆಗಸ್ಟ್ 25ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಚಾಮರಾಜನಗರ ಜಿಲ್ಲೆಯ ಎಲ್ಲ ಪರಿಶಿಷ್ಟ, ಪರಿಶಿಷ್ಟ ಪಂಗಡದ (ಎಸ್.ಸಿ/ಎಸ್.ಟಿ) ಜನಾಂಗದವರು ಈ ಸಭೆಯ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲ ಆಪೊಲೀಸ್ ವರಿಷ್ಠಾಧಿಕಾರಿ ಕೋರಿದ್ದಾರೆ.

# ಸಾವಯವ ಕೃಷಿಯತ್ತ ಒಲವು ತೋರಿಸಿ

**ಚಿಕ್ಕಬಳ್ಳಾಪುರ:** ಮಣ್ಣಿನ ಆರೋಗ್ಯ ಕಾಪಾಡಲು ರಾಸಾಯನಿಕ ಗೊಬ್ಬರಗಳ ಬಳಕೆ ನಿಲ್ಲಿಸಬೇಕು, ತಾತ್ಕಾಲಿಕ ಇಳುವರಿಗಾಗಿ ರಾಸಾಯನಿಕ ಗೊಬ್ಬರಗಳನ್ನು ಬಳಸುವುದು ದೀರ್ಘಕಾಲೀನ ತೊಂದರೆಗಳಿಗೆ ಅವಕಾಶವಾಗುವುದರಿಂದ ಸಾವಯವ ಕೃಷಿಗೆ ರೈತರು ಒಲವು ತೋರಬೇಕೆಂದು ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ರವರು ಮನವಿ ಮಾಡಿದರು.

ಸಾವಯವ ಕೃಷಿ ಕೈಗೊಂಡು ಬಹುಬಗೆಯ ಬೆಳೆಗಳನ್ನು ಬೆಳೆದು ಲಾಭದಾಯಕ ಕೃಷಿ ಮಾಡುತ್ತಿರುವ ಚಿಕ್ಕಬಳ್ಳಾಪುರ ತಾಲ್ಲೂಕಿನ ಕೊತ್ತನೂರು ಗ್ರಾಮದ ಪ್ರಗತಿಪರ ರೈತ ಮಹಿಳೆ ಗೌರಮ್ಮ ಅವರ ಜಮೀನಿಗೆ ಬುಧವಾರ ಭೇಟಿ ನೀಡಿ ಅವರೊಂದಿಗೆ ಸಂವಾದ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಮಣ್ಣಿನ ಆರೋಗ್ಯಕ್ಕೆ ಮಾರಕವಾದ ರಸಗೊಬ್ಬರಗಳನ್ನು ತ್ಯಜಿಸಿ ರೈತರು ಸಾವಯವ ಗೊಬ್ಬರ ಬಳಸಿ ಸಾವಯವ ಕೃಷಿ ಕಡೆಗೆ ಒಲವು ತೋರಬೇಕು. ಸಾವಯವ ಕೃಷಿಯಿಂದ ಬೆಳೆದ ಬೆಳೆಗಳು ಮಣ್ಣಿನ ಆರೋಗ್ಯಕ್ಕೆ ಮಾತ್ರವಲ್ಲ, ಮನುಷ್ಯನ ಆರೋಗ್ಯಕ್ಕೂ ಪೂರಕವಾಗಿರುತ್ತವೆ. ರಸಗೊಬ್ಬರಗಳು ತಾತ್ಕಾಲಿಕ ಇಳುವರಿಗೆ ಕಾರಣವಾಗಿರಬಹುದಷ್ಟೇ. ಆದರೆ ಭವಿಷ್ಯದಲ್ಲಿ ದೀರ್ಘಕಾಲೀನ ಸಮಸ್ಯೆಗಳಿಗೆ, ತೊಂದರೆಗಳಿಗೆ ಕಾರಣವಾಗುತ್ತವೆ. ಈ ಹಿನ್ನೆಲೆಯಲ್ಲಿ ರೈತರು ರಸಗೊಬ್ಬರಗಳಿಗೆ ಹೊರತಾದ ಸಾವಯವ ಗೊಬ್ಬರಕ್ಕೆ ಆದ್ಯತೆ ನೀಡುವತ್ತ ಗಮನ ಹರಿಸಬೇಕು ಎಂದು ಮನವಿ ಮಾಡಿದರು. ಸಾವಯವ ಕೃಷಿಯಲ್ಲಿ ತೊಡಗಿರುವ ಪ್ರಗತಿಪರ ರೈತ ಮಹಿಳೆ ಗೌರಮ್ಮ ಬಹುಬೆಳೆಗಳನ್ನು ಬೆಳೆದು ಮಾದರಿ ರೈತರಾಗಿದ್ದಾರೆ. ಕೊತ್ತನೂರು ಗ್ರಾಮದ ಗೌರಮ್ಮ ಅವರು ಕೇವಲ 2 ಎಕರೆ ಸ್ವಂತ ಜಮೀನಿನಲ್ಲಿ ಸಾವಯವ ಕೃಷಿ ಕೈಗೊಂಡು ಮಹತ್ತರ ಹೆಸರು ಗಳಿಸಿ ನೆಮ್ಮದಿಯ ಜೀವನವನ್ನು ರೂಪಿಸಿಕೊಳ್ಳುವ ಮೂಲಕ ಇತರರಿಗೆ ಮಾದರಿಯ ಮಹಿಳೆಯಾಗಿದ್ದಾರೆ ಎಂದು ಸಚಿವರು ಗೌರಮ್ಮ ರವರಿಗೆ ಅಭಿನಂದನೆ ತಿಳಿಸಿದರು.

ಶಾಸಕರಾದ ಪ್ರದೀಪ್ ಈಶ್ವರ್ ರವರು ಮಾನತಾಡಿ, ಸಮಗ್ರ ಸಾವಯವ ಕೃಷಿಯಿಂದ ಹೆಚ್ಚಿನ ಇಳುವರಿ ಪಡೆಯಬಹುದು ಎಂಬುದನ್ನು ಗೌರಮ್ಮ ಅವರು ಸಾಧಿಸಿ ರಾಜ್ಯಕ್ಕೆ ತೋರಿಸಿಕೊಟ್ಟಿದ್ದಾರೆ. ಇಂತಹ ಪ್ರಗತಿ ಪರ ರೈತ ಮಹಿಳೆಗೆ ರಾಜ್ಯ ಮಟ್ಟದಲ್ಲಿ ಗುರುತಿಸಲು ಅವಕಾಶ ನೀಡುವಂತೆ ಕೃಷಿ ಸಚಿವರಲ್ಲಿ ಮನವಿ ಮಾಡಿದರು.

ಸಮಗ್ರ ಕೃಷಿ ಪದ್ದತಿ ಅನುಸರಿಸುತ್ತಿರುವ ಗೌರಮ್ಮ ನಂಜುಂಡಯ್ಯ ಅವರ ಜಮೀನಿಗೆ ಭೇಟಿ ನೀಡಿ ಪರಿಶೀಲಿಸಿದ ನಂತರ ಕೃಷಿ ಸಚಿವರು ಚಿಕ್ಕಬಳ್ಳಾಪುರ ತಾಲ್ಲೂಕಿನ ಬನ್ನಿಕುಪ್ಪೆ ಗ್ರಾಮದ ನರಸಮ್ಮ, ಯಲುವಹಳ್ಳಿ ಗ್ರಾಮದ ಮುನಿಶಾಮಪ್ಪ ಅವರ ಕೃಷಿ ತಾಕುಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಕೃಷಿಕ ದಂಪತಿಗಳ ಹೊಲದಲ್ಲಿ ಸುತ್ತುತ್ತಾ ಅವರ ಜೀವನಾನುಭವಗಳನ್ನು ಕೇಳುತ್ತಾ ಸಾಗಿದ ಸಚಿವರು ರೈತ ಕುಟುಂಬದ ಶ್ರಮದ ಸಾಧನೆಗೆ ಮೆಚ್ಚಿ, ಅಭಿಮಾನದಿಂದ ಅಭಿನಂದನೆ



ಸಲ್ಲಿಸಿದರು. ಸಾವಯವ ಸಮಗ್ರ ಕೃಷಿಯ ಸವಾಲು, ಅನುಕೂಲಗಳು ಮತ್ತು ಸಾಧನೆಗೆ ಪ್ರೇರಣೆಗಳ ಅನುಭವ ಕುರಿತು ಸಂವಾದ ನಡೆಸಿದರು. ನಂತರ ಚಿಕ್ಕಬಳ್ಳಾಪುರ ನಗರದ ಕರ್ನಾಟಕ ರಾಜ್ಯ ಬೀಜ ನಿಗಮದ ಕಟ್ಟಡದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಸೆಂಟರ್ ಆಫ್ ಎಕ್ಸಲೆನ್ಸಿ ಕಟ್ಟಡವನ್ನು ಕೃಷಿ ಸಚಿವರು ಲೋಕಾರ್ಪಣೆಗೊಳಿಸಿದರು.

ಆ ನಂತರ ಕೃಷಿ ಸಚಿವರು ನೇರವಾಗಿ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣಕ್ಕೆ ತೆರಳಿ ಬೆಂಗಳೂರು ಕಂದಾಯ ವಿಭಾಗದ ಜಿಲ್ಲೆಗಳ ಪ್ರಗತಿ ಪರಿಶೀಲನೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಈ ವರ್ಷ ರಾಜ್ಯದಲ್ಲಿ ಉತ್ತಮ ಮಳೆಯಾಗಿರುವುದರಿಂದ ದೊಡ್ಡ ದೊಡ್ಡ ಅಣೆಕಟ್ಟುಗಳು ತುಂಬಿವೆ. ಬಯಲು ಸೀಮೆ ಸೇರಿದಂತೆ ರಾಜ್ಯದಲ್ಲಿ ಶೇ.84 ರಷ್ಟು ಬಿತ್ತನೆ ಕಾರ್ಯ ನಡೆದಿದೆ. ಹಸಿರೆಲೆ ಗೊಬ್ಬರಕ್ಕಾಗಿ ಈ ವರ್ಷ 15 ಕೋಟಿ ರೂ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ರಾಜ್ಯದ ಎಲ್ಲಾ ತಾಲ್ಲುಕುಗಳಿಗೆ ಕೃಷಿ ಭಾಗ್ಯ ಯೋಜನೆಯನ್ನು ವಿಸ್ತರಿಸಲಾಗಿದೆ. ಬೆಳೆ ವಿಮೆ ಮಾಡಿಸಿದ ರಾಜ್ಯದ 17 ಲಕ್ಷ ರೈತರಿಗೆ 1,911 ಕೋಟಿ ಬೆಳೆ ವಿಮೆ ಪರಿಹಾರವನ್ನು ನೀಡಲಾಗಿದೆ. ಜೊತೆಗೆ ಈ ಬಾರಿಯೂ ಬೆಳೆ ವಿಮೆ ಪ್ರಕ್ರಿಯೆಯಲ್ಲಿ ಹಲವು ಬದಲಾವಣೆಗಳನ್ನು ಕೈಗೊಂಡು ಇ-ಸ್ಯಾಪ್ (ಜ-ಚಿಠಿ) ತಂತ್ರಜ್ಞಾನದ ಮೂಲಕ ಬೆಳೆ ನಷ್ಟದ ವಿವರವನ್ನು ಛಾಯಾಚಿತ್ರ ಸಮೇತವಾಗಿ ನಮೂದು ಮಾಡಬಹುದಾಗಿದ್ದು, ಈ ಆಪ್ ನಲ್ಲಿ ಕೃಷಿ ಬೆಳೆಗಳ ರೋಗಗಳಿಗೆ ಕೈಗೊಳ್ಳಬಹುದಾದ ಪರಿಹಾರ ಕ್ರಮಗಳನ್ನು ಪ್ರಕರಣವಾರು ರೈತರಿಗೆ ಆನ್ ಲೈನ್ ಮೂಲಕವೇ ಒದಗಿಸಲಾಗುತ್ತಿದೆ. ಈ ಕುರಿತು ಹೋಬಳಿ ಮಟ್ಟದಲ್ಲಿ ನೋಂದಣಿಗೆ ರೈತರಲ್ಲಿ ಅರಿವು ಮೂಡಿಸಲು ಹಾಗೂ ನಿಗದಿತವಾಗಿ ಮಣ್ಣಿನ ಪರೀಕ್ಷೆಯನ್ನು ಕೈಗೊಂಡು ರೈತರಿಗೆ ಸಲಹೆಗಳನ್ನು ನೀಡಲು ಅಧಿಕಾರಿಗಳಿಗೆ ತಿಳಿಸಲಾಗಿದೆ. ಬೆಳೆ ವಿಮೆ ಕಂಪನಿಗಳು ನೋಂದಣಿಯಾದ ಬೆಳೆ ವಿಮೆ ಹಣದ ಶೇ. 20 ಕ್ಕಿಂತ ಹೆಚ್ಚಿನ ಲಾಭಾಂಶವನ್ನು ತಮ್ಮಲ್ಲಿ ಇಟ್ಟುಕೊಳ್ಳದಂತೆ ನಿಯಮ ರೂಪಿಸಲಾಗಿದೆ. ಅಧಿಕಲಾಭಾಂಶ ಉಳಿಕೆಯಾದಲ್ಲಿ ಸರ್ಕಾರಕ್ಕೆ ಜಮೆ ಮಾಡಬೇಕು. ಇಲ್ಲವೇ ರೈತರಿಗೆ ಬೆಳೆ ವಿಮೆಯಾಗಿ ಪಾವತಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಬೆಳೆ ವಿಮೆ ಪರಿಹಾರ ಪಡೆಯಲು ರೈತರು ಹೆಚ್ಚಿನ ಆತಂಕ ಪಡುವ ಅಗತ್ಯವಿಲ್ಲ. ಎಲ್ಲಾ ರೈತರು ಬೆಳೆ ವಿಮೆ ಮಾಡಿಸಿಕೊಳ್ಳುವಂತೆ ಸಚಿವರು ಮನವಿ ಮಾಡಿದರು.

ಕೃಷಿ ಸಚಿವರ ಚಿಕ್ಕಬಳ್ಳಾಪುರ ಜಿಲ್ಲಾ ಪ್ರವಾಸದ ವೇಳೆ ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್, ಶಾಸಕ ಪ್ರದೀಪ್ ಈಶ್ವರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ಕೃಷಿ ಇಲಾಖೆ ಆಯುಕ್ತ ವೈ.ಎಸ್ ಪಾಟೀಲ್, ಜಲಾನಯನ ಇಲಾಖೆ ಆಯುಕ್ತ ಮಹೇಶ್ ಶಿರೂರು, ನಿರ್ದೇಶಕ ಪದ್ಮಯ್ಯ ನಾಯಕ್, ಕೃಷಿ ನಿರ್ದೇಶಕ ಡಾ ಜಿ.ಟಿ ಪುತ್ರ, ಸಾವಯವ ಕೃಷಿ ಅಪರ ಕೃಷಿ ನಿರ್ದೇಶಕ ವೆಂಕಟರೆಡ್ಡಿ ಜೆ ಪಾಟೀಲ್, ಕೃಷಿ ಇಲಾಖೆ ಉಪ ಕಾರ್ಯದರ್ಶಿ ಆರ್. ಮಹೇಶ್, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಉಪ ವಿಭಾಗಾಧಿಕಾರಿ ಅಪೂರ್ವ ಬಿದರಿ, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕಿ ಜಾವಿದಾ ನಾಸೀಮಾ ಖಾನಂ, ಕೃಷಿ ಉಪನಿರ್ದೇಶಕ ಚಂದ್ರಕುಮಾರ್, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೇಶವರೆಡ್ಡಿ, ಮಾಜಿ ಶಾಸಕ ಕೆ.ಪಿ.ಬಚ್ಚೇಗೌಡ, ಜಿ.ಪಂ. ಮಾಜಿ ಸದಸ್ಯ ಕೆ.ಎಂ.ಮುನೇಗೌಡ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ರಾಮನಗರ ನಗರಸಭೆಯು ಪಿ.ಎಂ. ಸ್ವಾ-ನಿಧಿಯ ಯೋಜನೆಯಡಿ ರಾಜ್ಯ ಪ್ರಶಸ್ತಿಗೆ ಆಯ್ಕೆ

**ರಾಮನಗರ:** ಡೇ-ನಲ್ಮ್ ಅಭಿಯಾನದ ಪಿ.ಎಂ ಸ್ವಾನಿಧಿ ಯೋಜನೆಯಡಿ ರಾಮನಗರ ನಗರಸಭೆಗೆ ಕೇಂದ್ರ, ಮಟ್ಟದಲ್ಲಿ ಉತ್ತಮ ಕಾರ್ಯ ನಿರ್ವಹಿಸಿದ್ದಕ್ಕಾಗಿ ಪಿ.ಎಂ. ಸ್ವಾನಿಧಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕೇಂದ್ರ, ಸರ್ಕಾರವು ರಾಮನಗರ ನಗರಸಭೆಯನ್ನು ಬೆಸ್ಟ್‌ಫರ್‌ಫಾರ್ಮಿಂಗ್ ಯುಎಲ್‌ಬಿ-ಇನ್ ಲೋನ್ ಫರ್ಫಾರ್ಮೆನ್ ಆಟ್ ಸ್ಟೇಟ್ ಲೆವೆಲ್ ಪ್ರಶಸ್ತಿಗೆ ಆಯ್ಕೆ ಮಾಡಿದೆ. ರಾಜ್ಯದಲ್ಲಿ ಪಿ.ಎಂ ಸ್ವಾನಿಧಿ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗುತ್ತಿರುವ ರಾಜ್ಯ ಮಟ್ಟದ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಆ. 22 ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ವಿಕಾಸಸೌಧದಲ್ಲಿ ಆಯೋಜಿಸಲಾಗಿದೆ. ರಾಮನಗರ ನಗರಸಭೆಯ ಸದಸ್ಯರು ಹಾಗೂ ಪೌರಾಯುಕ್ತರಾದ ಡಾ. ಜಯಣ್ಣ ಅವರು ಡೇ-ನಲ್ಮ್ ಯೋಜನೆಯ ಸಿಬ್ಬಂದಿ ವರ್ಗದ ಕಾರ್ಯಕ್ಕೆ ಹರ್ಷ ವ್ಯಕ್ತಪಡಿಸಿದ್ದಾರೆ. ಈ ಯೋಜನೆಯನ್ನು ಯಶಸ್ವಿಗೊಳಿಸಲು ಜಿಲ್ಲಾ ಯೋಜನಾ ನಿರ್ದೇಶಕರು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಅಭಿಯಾನ ವ್ಯವಸ್ಥಾಪಕರು, ಲೀಡ್ ಬ್ಯಾಂಕ್ ವ್ಯವಸ್ಥಾಪಕರು, ಎಲ್ಲಾ ಬ್ಯಾಂಕಿನ ಶಾಖಾ ವ್ಯವಸ್ಥಾಪಕರು, ಪಟ್ಟಣ ಮಾರಾಟ ಸಮಿತಿ ಸದಸ್ಯರು, ಸಮುದಾಯ ಸಂಘಟನಾಧಿಕಾರಿ, ಸಮುದಾಯ ಸಂಘಟಕರು, ನಗರ ಅಭಿಯಾನ ವ್ಯವಸ್ಥಾಪಕರು ಹಾಗೂ ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ ಅಭಿನಂದನೆಯನ್ನು ಸಲ್ಲಿಸಿರುತ್ತಾರೆ.

## ಸಿಸಿ ಟಿವಿ ಅಳವಡಿಕೆ, ರಿಪೇರಿ ತರಬೇತಿ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ 30 ದಿನಗಳ ಸಿಸಿ. ಟಿ.ವಿ ಅಳವಡಿಕೆ ಮತ್ತು ರಿಪೇರಿ ಉಚಿತ ತರಬೇತಿಯು ಬರುವ 18 ಅಕ್ಟೋಬರ್ 2024 ರಿಂದ ಆಯೋಜಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತ 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಪ್ರದೇಶದ ಆಧಾರ್ ಕಾರ್ಡ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ, ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 15 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ 8884554510, 9241482541, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ರಾಮನಗರ:** 2024-25ನೇ ಸಾಲಿನಲ್ಲಿ ಮಹಾರಾಷ್ಟ್ರ ರಾಜ್ಯದ ನಾಗಪುರದ ದೀಕ್ಷಾ ಭೂಮಿಯಲ್ಲಿ ಅಕ್ಟೋಬರ್ 12 ರಂದು ನಡೆಯುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ಅಕ್ಟೋಬರ್ 10 ರಿಂದ 14ರ ವರೆಗೆ ಪ್ರತಿ ವರ್ಷದಂತೆ ಕರ್ನಾಟಕ ರಾಜ್ಯದಿಂದ ಡಾ. ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಾಪುರದ ದೀಕ್ಷಾಭೂಮಿ ಯಾತ್ರೆ ಕೈಗೊಳ್ಳಲು ಸಾರಿಗೆ/ರೈಲಿನ ವ್ಯವಸ್ಥೆ ಕಲ್ಪಿಸುವ ಸಂಬಂಧ ಡಾ. ಬಿ.ಆರ್. ಅಂಬೇಡ್ಕರ್ ಅನುಯಾಯಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್‌ನಲ್ಲಿ ದೀಕ್ಷಾ ಭೂಮಿ ಯಾತ್ರಾ https://swdservice.karnataka.gov.inಲಿಂಕ್ ಬಳಕೆ ಮಾಡಿ ಇದೇ ಆ. 31ರೊಳಗೆ ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ, ಪಂಚಾಯತ್ ಭವನ, ರಾಮನಗರ ಹಾಗೂ ಸಂಬಂಧಪಟ್ಟ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ, ಚನ್ನಪಟ್ಟಣ, ಕನಕಪುರ ಹಾಗೂ ಮಾಗಡಿ ತಾಲ್ಲೂಕು ಇವರನ್ನು ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ರಾಮನಗರ:** 66/11 ಕೆವಿ ಗುರುವಿನಪುರ ವಿದ್ಯುತ್ ವಿತರಣಾ ಕೇಂದ್ರ, 66/11ಕೆವಿ ಬಿ.ವಿ ಹಳ್ಳಿ ಉಪವಿದ್ಯುತ್ ಕೇಂದ್ರ ಮತ್ತು 66 ಕೆವಿ ಟಿ.ಕೆ ಹಳ್ಳಿ ಲೈನ್-2ರಲ್ಲಿ ತ್ರೈಮಾಸಿಕಾ ನಿರ್ವಹಣೆ ಕಾಮಗಾರಿ ಪ್ರಯುಕ್ತ ಇದೇ ಆ.22ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಕಬ್ಬಾಳು ಪಂಚಾಯಿತಿ ವ್ಯಾಪ್ತಿಗೆ ಬರುವ ಸುತ್ತಮುತ್ತಲ ಗ್ರಾಮಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 27ರಂದು ದಿಶಾ ಸಭೆ

**ರಾಮನಗರ:** ಕೇಂದ್ರ, ಪುರಸ್ಕೃತ ಯೋಜನೆಗಳ ಜಿಲ್ಲಾ ಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಲೋಕಸಭಾ ಸದಸ್ಯರಾದ ಡಾ. ಸಿ.ಎನ್. ಮಂಜುನಾಥ ಅವರ ಅಧ್ಯಕ್ಷತೆಯಲ್ಲಿ ಇದೇ ಆ. 27ರ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಸಂಯೋಜಕರ ಹುದ್ದೆಗೆ ಅರ್ಜಿ ಆಹ್ವಾನ

**ಕೋಲಾರ:** ಪೋಷಣ್ ಅಭಿಯಾನ ಯೋಜನೆಯಡಿ ಶ್ರೀನಿವಾರಪುರ ಯೋಜನೆಯ ತಾಲ್ಲೂಕು ಸಂಯೋಜಕರ ಹುದ್ದೆಯು ಖಾಲಿ ಇದ್ದು, ವಿದ್ಯಾರ್ಹತೆ ಹೊಂದಿರುವಂತಹ ಅಭ್ಯರ್ಥಿಗಳಿಂದ ನೇರವಾಗಿ ಅರ್ಜಿ ಆಹ್ವಾನಿಸಲಾಗಿದೆ.

Graduate (preferably: ECE and CS/ IT engineering, BCA) Diploma in IT, At least 2 years of working with technology and software application support., Good oral and writtern communication in local language. Mandatorily local candidates are engaged. ಈ ಹುದ್ದೆಗೆ ಭರ್ತಿ ಮಾಡಬೇಕಾಗಿರುವುದರಿಂದ ವಿದ್ಯಾರ್ಹತೆಗಳನ್ನು ಹೊಂದಿರಬೇಕು.

ಆಸಕ್ತಿಯುಳ್ಳವರು ಅರ್ಜಿಗಳನ್ನು ಆಗಸ್ಟ್ 28ರ ಸಂಜೆ 5:30ರೊಳಗೆ ಉಪ ನಿರ್ದೇಶಕರ ಕಛೇರಿಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ದೂರವಾಣಿ ಸಂಖ್ಯೆ: 08152-222753, 223665 ರವರನ್ನು ಸಂಪರ್ಕಿಸಬಹುದುಯೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕೋಲಾರ ಜಿಲ್ಲೆಯನ್ನು ಅಂಧತ್ವ ಮುಕ್ತ ಜಿಲ್ಲೆಯಾನ್ನಾಗಿಸಿ ಮಾಡಲು ಹಾಗೂ ಕಣ್ಣಿನ ತೊಂದರೆ ಇರುವ ರೋಗಿಗಳಿಗೆ ಉಚಿತವಾಗಿ ಕನ್ನಡಕವನ್ನು ಒದಗಿಸಲು ಜಿಲ್ಲಾ ಆಸ್ಪತ್ರೆಯಲ್ಲಿ One Sight, Essilor luxottica Foundation Spectacles Dispensing Center ರವರು ಹಾಗೂ ಆರೋಗ್ಯ ಇಲಾಖೆಯ ಜಂಟಿ ಸಹಯೋಗದೊಂದಿಗೆ ಅಂಧತ್ವ ಮುಕ್ತ ಕೋಲಾರ ಮಾಡಲು ಚಾಲನೆ ನೀಡಲಾಯಿತು. ಸ್ಥಳೀಯ ಶಾಸಕರಾದ ಕೊತ್ತೂರು ಮಂಜುನಾಥ್, ಎಂಎಲ್ಸಿ ಅನಿಲ್ ಕುಮಾರ್, ಜಿಲ್ಲಾಧಿಕಾರಿಗಳು ಉಪಸ್ಥಿತರಿದ್ದರು.

## ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿಗೆ ಅರ್ಜಿ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ CET, NEET, D-CET, PGCET ಮೂಲಕ ಪದವಿ ಮತ್ತು ಸ್ನಾಯಕೋತ್ತರ ಕೋರ್ಸ್‌ಗಳಾದ ವೈದ್ಯಕೀಯ, ದಂತ ವೈದ್ಯಕೀಯ, ಆಯುಷ್, ಇಂಜಿನಿಯರಿಂಗ್ ಮತ್ತು ಟೆಕ್ನಾಲಜೀ, ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್ MBA, MCA, LLB, BSc in Horticulture, Agricultural Engineering, Dairy Technology, Forestry, Veterinary and animal technology, Fisheries, Sericulture, Home, Community Science Food Nutrition and Dietetics, B.Pharma, M-Pharma, Pharma D and D Pharmaಇಂತಹ ಪದವಿ ಕೋರ್ಸ್‌ಗಳಲ್ಲಿ ಆಯ್ಕೆಯಾದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಅರಿವು ರಿನಿವಲ್ ಸಾಲದ ಯೋಜನೆಯಡಿ ಸಾಲ ಪಡೆಯಲು ಅಪೇಕ್ಷಿಸುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಅಂದರೆ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದರು, ಸಿಖ್, ಪಾರ್ಸಿ ಇವರುಗಳು ಈ ಹಿಂದೆ ವರ್ಷದಲ್ಲಿ ಪಡೆದಿರುವ ಸಾಲದ ಮೊತ್ತದ ಶೇ.12 ರಷ್ಟನ್ನು ಪಾವತಿಸಿ ನಿಗಮದ ವೆಬ್‌ಸೈಟ್ kmdconline.karnataka.gov.in ನಲ್ಲಿ ಅರ್ಜಿಗಳನ್ನು ಅಕ್ಟೋಬರ್ 31 ರೊಳಗೆ ಸಲ್ಲಿಸಬಹುದು. ಈ ಹಿಂದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿದ್ದು, ಬೇರೆ ಬೇರೆ ವರ್ಷಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಅರಿವು ವಿದ್ಯಾಭ್ಯಾಸ ಸಾಲ ಪಡೆಯದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಸಲ್ಲಿಸಬಹುದು. ಇಂತಹ ವಿದ್ಯಾರ್ಥಿಗಳು ಯಾವುದೇ ರಿನಿವಲ್ ಮೊತ್ತವನ್ನು ಪಾವತಿಸುವ ಅಗತ್ಯವಿರುವುದಿಲ್ಲ ಹಾಗೂ ಸಲ್ಲಿಸಿದ ಅರ್ಜಿಯ ಹಾರ್ಡ್ ಕಾಪಿಗಳನ್ನು ಮತ್ತು ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಿರುವ Original New Idemnity Bond ಮತ್ತು ಇತರೆ ಮೂಲ ದಾಖಲಾತಿಗಳೊಂದಿಗೆ ಜಿಲ್ಲಾ ವ್ಯವಸ್ಥಾಪಕರ ಕಛೇರಿಗೆ ಸಲ್ಲಿಸಬಹುದುಯೆಂದು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಡಿತರ ಚೀಟಿದಾರರು ಇ-ಕೈವೈಸಿ ಮಾಡಿಸಲು ಅವಕಾಶ

**ಚಿಕ್ಕಬಳ್ಳಾಪುರ:** ಚಿಂತಾಮಣಿ ತಾಲ್ಲೂಕು ವ್ಯಾಪ್ತಿಯಲ್ಲಿ ಪಡಿತರ ಚೀಟಿಯಲ್ಲಿ ಬೆರಳಚ್ಚು ಪಡೆಯಲು ಆಗದೇ ಬಾಕಿ ಇರುವಂತಹ ಫಲಾನುಭವಿಗಳು ಖಖಖ ತಂತ್ರಾಂಶದ ಮೂಲಕ ಇಕೈವೈಸಿ ಸಂಗ್ರಹಣೆ ಕಾರ್ಯವನ್ನು ಆಗಸ್ಟ್ 31 ರೊಳಗೆ ಪೂರ್ಣಗೊಳಿಸುವಂತೆ ಚಿಂತಾಮಣಿ ತಾಲ್ಲೂಕು ತಹಶೀಲ್ದಾರ್ ರವರು ತಿಳಿಸಿದ್ದಾರೆ.

ಇ ಕೈವೈಸಿ ಕಾರ್ಯವನ್ನು ನ್ಯಾಯಬೆಲೆ ಅಂಗಡಿಗಳ ಮೂಲಕ ನ್ಯಾಯಬೆಲೆ ಅಂಗಡಿಯ ಕೆಲಸದ ವೇಳೆಯಲ್ಲಿ ನಿರ್ವಹಿಸಲಾಗುತ್ತದೆ. ಇ ಕೈವೈಸಿ ಮಾಡಿಸದ ಪಡಿತರ ಚೀಟಿದಾರರು ತಮ್ಮ ಕುಟುಂಬದ ಪಡಿತರ ಚೀಟಿಯಲ್ಲಿ ಇಕೈವೈಸಿ ಆಗದೇ ಇರುವಂತಹ ಸದಸ್ಯರು ಕಡ್ಡಾಯವಾಗಿ ತಮ್ಮ ವ್ಯಾಪ್ತಿಯ ಅಂದರೆ ತಮ್ಮ ಪಡಿತರ ಚೀಟಿ ನಿಯೋಜನೆಗೊಂಡಿರುವ ನ್ಯಾಯಬೆಲೆ ಅಂಗಡಿಗೆ ತಮ್ಮ ಆಧಾರ್ ಸಂಖ್ಯೆ ಕುಟುಂಬದ ಅಡುಗೆ ಅನಿಲ ಗ್ರಾಹಕ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆಯೊಂದಿಗೆ ಹೋಗಿ ಇಕೈವೈಸಿಯನ್ನು (ಬೆರಳಚ್ಚು ಮರು ದೃಢಿಕರಣ) ನೀಡಲು ಕೋರಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರು ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ನೀಡಬೇಕು. ಇ ಕೈವೈಸಿ ಕಾರ್ಯ ಸಂಪೂರ್ಣ ಉಚಿತವಾಗಿದ್ದು, ಯಾವುದೇ ಶುಲ್ಕವನ್ನು ಪಾವತಿ ಮಾಡುವಂತಿಲ್ಲ. ಇ ಕೈವೈಸಿ ಬಯೋಧೃಢೀಕರಣ ನೀಡಲು ಇದು ಅಂತಿಮ ಅವಕಾಶವಾಗಿರುತ್ತದೆ ಎಂದು ಚಿಂತಾಮಣಿ ತಹಶೀಲ್ದಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾರದರ್ಶಕ ಪರೀಕ್ಷೆಗಾಗಿ ಕಟ್ಟುನಿಟ್ಟಿನ ಕ್ರಮ

**ಕೋಲಾರ:** ಗೆಜೆಟೆಡ್ ಪ್ರೊಬೆಷನರಿ ಗ್ರೂಪ್ ಎ ಮತ್ತು ಬಿ ವೃಂದಕ್ಕಾಗಿ ಪರೀಕ್ಷೆಯನ್ನು ಪಾರದರ್ಶಕ ಹಾಗೂ ನಕಲು ಮುಕ್ತವಾಗಿ ನಡೆಸಲು ಕಟ್ಟುನಿಟ್ಟಿನ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಅಕ್ರಂ ಪಾಷಾ ಸೂಚಿಸಿದರು.

ಇಂದು ನಗರದ ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಗೆಜೆಟೆಡ್ ಪ್ರೊಬೆಷನರಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಆಗಸ್ಟ್ 27ರಂದು ಜಿಲ್ಲೆಯಲ್ಲಿ ಒಟ್ಟು 12 ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಲಿದ್ದು, ಸುಮಾರು 4422 ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆಯಲಿದ್ದಾರೆ. ಪರೀಕ್ಷೆಯಲ್ಲಿ ಯಾವುದೇ ಅಕ್ರಮಗಳು ನಡೆಯದಂತೆ ಅಗತ್ಯವಾದ ಕ್ರಮಗಳನ್ನು ತೆಗೆದುಕೊಳ್ಳಬೇಕು. ಪರೀಕ್ಷೆಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳನ್ನು ಫ್ರಿಸ್ಕಿಂಗ್ ಒಳಪಡಿಸಲಾಗುವುದು. ಪರೀಕ್ಷೆ ಬರೆಯುವ ಅಭ್ಯರ್ಥಿಗಳಿಗೆ ಸಮರ್ಪಕವಾಗಿ ಕುಡಿಯುವ ಶುದ್ಧ ನೀರು, ಬೆಂಚ್, ಮಧ್ಯಾಹ್ನ ಬಿಸಿಯೂಟ, ಸಾರಿಗೆ ವ್ಯವಸ್ಥೆ ಹಾಗೂ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವಂತೆ ಸೂಚಿಸಿದರು.

ಪರೀಕ್ಷಾ ದಿನದಂದು ಆಯಾ ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಿರುವ ಜಿಲ್ಲೆಯ ಹಿರಿಯ ಅಧಿಕಾರಿಗಳಿಗೆ ವಿಶೇ? ವಿಚಕ್ಷಣಾ ದಳದ ಕರ್ತವ್ಯಗಳನ್ನು ತಪ್ಪದೆ ನಿರ್ವಹಿಸಬೇಕು. ತಪ್ಪಿದಲ್ಲಿ ಪರೀಕ್ಷಾ ಮಂಡಳಿಯ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸುವುದರೊಂದಿಗೆ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅವರು ಹೇಳಿದರು. ಅಪರ ಜಿಲ್ಲಾಧಿಕಾರಿ ಮಂಗಳ ಅವರು ಮಾತನಾಡಿ ಪರೀಕ್ಷಾ ದಿನಗಳಂದು ಬೆಸ್ಕಾಂ ಇಲಾಖೆಯು ಸಮರ್ಪಕವಾಗಿ ವಿದ್ಯುತ್ ಪೂರೈಸುವುದರೊಂದಿಗೆ ವಿದ್ಯುತ್ ವ್ಯತ್ಯಯವಾಗದಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು. ಪರೀಕ್ಷಾ ಕೊಠಡಿ ಮುಖ್ಯ ಅಧೀಕ್ಷಕರು, ಪ್ರಶ್ನೆ ಪತ್ರಿಕೆ ಪಾಲಕರು, ಸ್ಥಾನಿಕ ಜಾಗೃತ ದಳ ಹಾಗೂ ಮೊಬೈಲ್ ಸ್ವಾಧೀನ ದಳಗಳ ಅಧಿಕಾರಿಗಳು ತಮಗೆ ವಹಿಸಿದ ಕರ್ತವ್ಯಗಳನ್ನು ಕಟ್ಟುನಿಟ್ಟಿನಿಂದ ಪಾಲಿಸಬೇಕು. ಪರೀಕ್ಷಾ ಕೊಠಡಿಗಳಲ್ಲಿ ಸಿ.ಸಿ ಕ್ಯಾಮರಾಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುವ ಕುರಿತು ನಿಗಾ ವಹಿಸಬೇಕು. ಬಾಡಿ ಕ್ಯಾಮೇರಗಳನ್ನು ಅಳವಡಿಸಲಾಗುತ್ತದೆ. ನಿರಂತರ ವಿದ್ಯುತ್ ಪೂರೈಕೆಗೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು. ಅದಕ್ಕೆ ಅನುಗುಣವಾಗಿ ವಿದ್ಯುತ್ ತೊಂದರೆಯಾಗದ ರೀತಿ ಜನರೇಟರ್ ಇಲ್ಲವೆ ಯು.ಪಿ.ಎಸ್ ವ್ಯವಸ್ಥೆ ಮಾಡಿಕೊಳ್ಳಬೇಕು. ಪರೀಕ್ಷೆ ಕೊಠಡಿಯ ಹೊರಗಡೆಯ 200ಮೀ ಪ್ರದೇಶ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ ಇದ್ದು, ಅದಕ್ಕೆ ಅವಶ್ಯಕವಾದ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲು ಪೊಲೀಸ್ ಅಧಿಕಾರಿಗಳು ಸಹಕಾರ ಕೋರುವಂತೆ ಅವರು ಸೂಚಿಸಿದರು.

ಸಭೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಮೂರ್ತಿ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಧಿಕಾರಿ ನಿಖಿಲ್ ಬಿ. ಹೆಸ್ಕಾಂ ಅಧಿಕಾರಿಗಳು, ಎಲ್ಲಾ ಬಿ.ಇ.ಒಗಳು, ಬಿ.ಆರ್.ಸಿ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಜೂಜಾಡುತ್ತಿದ್ದ ಆರು ಮಂದಿ ಬಂಧನ

**ಚಾಮರಾಜನಗರ:** ರಾಮಾಪುರ ಪೋಲೀಸ್ ಠಾಣಾ ಸರಹದ್ದು ವ್ಯಾಪ್ತಿಯ ಮುತ್ತುಶೆಟ್ಟಿಯೂರು ಗ್ರಾಮದ ಆಂಜನೇಯ ದೇವಸ್ಥಾನದ ಬಳಿ ಸಾರ್ವಜನಿಕ ಸ್ಥಳದಲ್ಲಿ ಅಂದರ್ ಬಾಹರ್ ಇಸ್ಪೀಟ್ ಜೂಜಾಟ ಆಡುತ್ತಿದ್ದ 6 ಜನ ಆರೋಪಿಗಳನ್ನು ಬಂಧಿಸಿ ನಗದು ವಶಪಡಿಸಿಕೊಳ್ಳಲಾಗಿದೆ.

ರಾಮಾಪುರ ಠಾಣೆಯ ಆರಕ್ಷಕ ಉಪನಿರೀಕ್ಷಕರಾದ ಎಂ.ಎನ್. ಈಶ್ವರ್ ಅವರು ಆಗಸ್ಟ್ 18 ರಂದು ಸಂಜೆ 5.30ರ ಸಮಯದಲ್ಲಿ ಸಿಬ್ಬಂದಿಗಳೊಡನೆ ಮುತ್ತುಶೆಟ್ಟಿಯೂರು ಗ್ರಾಮದ ಆಂಜನೇಯ ದೇವಸ್ಥಾನದ ಬಳಿ ಜೂಜಾಟವಾಡುತ್ತಿದ್ದ ಶಿವಕುಮಾರ್, ಮುತ್ತಪ್ಪ, ನಂದೀಶ್, ಶಿವಕುಮಾರ್, ನಾಗರಾಜು, ಪ್ರಸಾದ್ ಅವರನ್ನು ಬಂಧಿಸಿ 12,500 ರೂ. ಗಳ ನಗದು ವಶಪಡಿಸಿಕೊಂಡು ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ. ಕುದೇರು ಪೋಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರಾದ ಎಸ್. ಕುಮುದ ಅವರು ಆಗಸ್ಟ್ 17ರಂದು ಸಂಜೆ 4.45ರ ಸಮಯದಲ್ಲಿ ಸಿಬ್ಬಂದಿಗಳೊಂದಿಗೆ ಕುದೇರುಮೋಳೆ ಗ್ರಾಮದ ಬರಹಳ್ಳಿ ಸರ್ಕಾರಿ ಜಾಗದಲ್ಲಿ ಇಸ್ಪೀಟ್ ಜೂಜಾಟ ಆಡುತ್ತಿದ್ದ ಕುದೇರು ಗ್ರಾಮದ ಗುರಪ್ಪ, ಮೂಡಲ ಅಗ್ರಹಾರ ಗ್ರಾಮದ ಮೂರ್ತಿ, ಮಹದೇವಕುಮಾರ್, ನಿಂಗಶೆಟ್ಟಿ ಸೇರಿ 4 ಜನ ಆರೋಪಿಗಳನ್ನು ಬಂಧಿಸಿ, ಸ್ಥಳದಲ್ಲಿದ್ದ 12,340 ರೂ.ಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಅಕ್ರಮ ಗಾಂಜಾ ಸಾಗಾಣಿಕೆ ಆರೋಪಿ ಬಂಧನ

**ಕೊಳ್ಳೇಗಾಲ ಪಟ್ಟಣ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕರಾದ ಬಿ.ವಿ. ವರ್ಷರವರಿಗೆ ದೊರೆತ ಮಾಹಿತಿ ಮೇರೆಗೆ ಆಗಸ್ಟ್ 19ರಂದು ಸಂಜೆ 5.45ರ ಸಮಯದಲ್ಲಿ ಪಟ್ಟಣದಿಂದ ಕುರುಬನಕಟ್ಟೆಗೆ ಹೋಗುವ ರಸ್ತೆಯಲ್ಲಿ ಆರ್.ಎಂ ಚೌಲ್ಟ್ರಿ ಎದುರು ಸಾರ್ವಜನಿಕ ರಸ್ತೆಯಲ್ಲಿ ಓರ್ವ ವ್ಯಕ್ತಿ 3,260 ರೂ. ಮೌಲ್ಯದ 326 ಗ್ರಾಂ ತೂಕದ ಗಾಂಜಾ ಕೆನಬೀಸ್ ಅನ್ನು ಅಕ್ರಮವಾಗಿ ಮಾರಾಟ ಮಾಡಲು ಸಾಗಾಣಿಕೆ ಮಾಡುತ್ತಿದ್ದ ಆರೋಪಿ ಮಾದೇಗೌಡನನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.**

## ಜಾನುವಾರುಗಳ ಅಕ್ರಮ ಸಾಗಾಣಿಕೆ ಆರೋಪಿಗಳ ಬಂಧನ

**ಚಾಮರಾಜನಗರ ಜಿಲ್ಲೆ ಸಂತೇಮರಹಳ್ಳಿ ಠಾಣೆಯ ಆರಕ್ಷಕ ಉಪ ನಿರೀಕ್ಷಕರಾದ ಚಂದ್ರಶೇಖರ್ ಅವರು ಆಗಸ್ಟ್ 19ರಂದು ಬೆಳಿಗ್ಗೆ 8.40ರ ಸಮಯದಲ್ಲಿ ಕಾವುದವಾಡಿ ಗೇಟಿನ ಬಳಿ ಸಂತೇಮರಹಳ್ಳಿ ಕಡೆಗೆ ಅಕ್ರಮವಾಗಿ ಜಾನುವಾರುಗಳನ್ನು ಕೆ.ಎ.10-ಎ-3271 ಟಾಟಾ ಗೋಲ್ಡ್ ಏಸ್ ಗೂಡ್ಸ್ ವಾಹನದಲ್ಲಿ ಅಂದಾಜು 50 ಸಾವಿರ ರೂ. ಮೌಲ್ಯದ ಎಮ್ಮೆಗಳನ್ನು ತಮಿಳುನಾಡಿನ ಕಸಾಯಿಖಾನೆಗೆ ಸಾಗಾಣಿಕೆ ಮಾಡುತ್ತಿದ್ದ ಆರೋಪಿಗಳನ್ನು ಬಂಧಿಸಿ, ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.**

## ಸೆಪ್ಟೆಂಬರ್14 ರಂದು ರಾಷ್ಟ್ರೀಯ ಲೋಕ್ ಅದಾಲತ್

**ಮಂಡ್ಯ:** ರಾಜ್ಯಾದ್ಯಂತ ಸೆಪ್ಟೆಂಬರ್ 14 ರಂದು ರಾಷ್ಟ್ರೀಯ ಲೋಕ್ ಅದಾಲತ್ತನ್ನು ಹಮ್ಮಿಕೊಂಡಿದ್ದು, ಮಂಡ್ಯ ಜಿಲ್ಲೆಯಲ್ಲಿಯೂ ಸಹ ಲೋಕ್ ಅದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ನಿಟ್ಟಿನಲ್ಲಿ ಪೂರ್ವಭಾವಿ ಬೈಠಕ್ಗಳನ್ನು ನಡೆಸುತ್ತಿದೆ. ಆಸ್ತಿ ವಿವಾದಗಳನ್ನು ಒಳಗೊಂಡಂತೆ ಸಿವಿಲ್ ವ್ಯಾಜ್ಯಗಳು, ವಿಭಾಗದ ದಾವೆಗಳು, ಹಣವಸೂಲಾತಿ ದಾವೆಗಳು ನಿರ್ದಿಷ್ಟ ಪರಿಹಾರ ಕಾಯ್ದೆಯಡಿ ದಾಖಲಿಸಿರುವ ವ್ಯಾಜ್ಯಗಳು, ಮೋಟಾರು ವಾಹನಗಳ ಪ್ರಕರಣಗಳು, ಒಒಖಆ ಪ್ರಕರಣಗಳು, ಜೀವನಾಂಶ ಪ್ರಕರಣ, ದಾಂಪತ್ಯ ಪುನರ್ ಸ್ಥಾಪನೆ ಪ್ರಕರಣಗಳು, ರಾಜಿ ಆಗಬಹುದಾದಂತಹ ಕ್ರಿಮಿನಲ್ ಪ್ರಕರಣಗಳನ್ನು ಮತ್ತು ಚೆಕ್ ಬೌನ್ಸ್ ಪ್ರಕರಣಗಳನ್ನು ರಾಜಿಗೆ ತೆಗೆದುಕೊಂಡು ಆಯಾ ನ್ಯಾಯಾಲಯಗಳಲ್ಲಿ ಜನತಾ ನ್ಯಾಯಾಲಯಗಳನ್ನು ಮಾಡಿ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಪ್ರಯತ್ನ ಮಾಡಲಾಗುತ್ತಿದೆ. ಲೋಕ್ ಅದಾಲತ್ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಜೊತೆಗೆ ನ್ಯಾಯಾಲಯಕ್ಕೆ ದಾಖಲಾಗುವ ಮುನ್ನ ಅಂದರೆ, ವ್ಯಾಜ್ಯಪೂರ್ವ ಪ್ರಕರಣಗಳು (ಬ್ಯಾಂಕ್ ವಸೂಲಾತಿ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಕಾರ್ಮಿಕ ವಿವಾದ ಪ್ರಕರಣಗಳು) ಇಂತಹ ಪ್ರಕರಣಗಳಿಗೆ ಉಭಯ ಪಕ್ಷಗಾರರಿಗೆ ನೋಟಿಸ್ ನೀಡಿ ಕರೆಸಿ ಪ್ರಾಧಿಕಾರದ ವತಿಯಿಂದ ಪೂರ್ವಭಾವಿ ಬೈಠಕ್ ನಡೆಸಿ ಅದಾಲತ್ನಲ್ಲಿ ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ಇಂತಹ ಪ್ರಕರಣಗಳಿಗೆ ನ್ಯಾಯಾಲಯಕ್ಕೆ ಶುಲ್ಕ ಪಾವತಿಸುವ ಅವಶ್ಯಕತೆ ಇರುವುದಿಲ್ಲ. ವಕೀಲರ ಮುಖಾಂತರ ಅಥವಾ ಖುದ್ದಾಗಿ ಪ್ರಾಧಿಕಾರಕ್ಕೆ ಭೇಟಿ ನೀಡಿ ಪ್ರಕರಣವನ್ನು ರಾಜಿ ಮಾಡಿಕೊಳ್ಳಬಹುದಾಗಿರುತ್ತದೆ. ಈ ಬಾರಿಯ ಲೋಕ್-ಅದಾಲತ್ನಲ್ಲಿ ಕಕ್ಷಿದಾರರು ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸಿ ಕಕ್ಷಿದಾರರಿಗೆ ಅನುಕೂಲವಾಗುವ ರೀತಿಯಲ್ಲಿ ನ್ಯಾಯದಾನ ಮಾಡಬೇಕೆಂಬ ಇಚ್ಛೆಯಿಂದ ಈ ಮೇಲಿನ ಎಲ್ಲಾ ಪ್ರಕರಣಗಳನ್ನು ತೆಗೆದುಕೊಂಡಿದ್ದು, ಜನ ಸಾಮಾನ್ಯರು ಹಾಗೂ ಕಕ್ಷಿದಾರರು ಇದರ ಸದುಪಯೋಗವನ್ನು ಪಡೆದುಕೊಂಡು ಲೋಕ್ ಅದಾಲತ್ನಲ್ಲಿ ಭಾಗವಹಿಸಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವ ಮೂಲಕ ಲೋಕ್ ಅದಾಲತ್ ಅನ್ನು ಯಶಸ್ವಿಗೊಳಿಸಬೇಕು ಎಂದು ಮಂಡ್ಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಆನಂದ ಎಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಯೋಗಾಸನ ಪ್ರಾಣಾಯಾಮ ಶಿಬಿರ

**ತಿಪಟೂರು:** ನಗರದ ಪತಂಜಲಿ ಯೋಗ ಶಿಕ್ಷಣ ಸಮಿತಿ ತಿಪಟೂರು ಶಾಖಾವತಿಯಿಂದ ಬಲಿಜಗರ ವಸತಿ ನಿಲಯದಲ್ಲಿ 48 ದಿನಗಳ ಉಚಿತ ಯೋಗಾಸನ ಪ್ರಾಣಾಯಾಮ ಅಷ್ಟ ನಮಸ್ಕಾರಗಳು ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ಕಾರ್ಯಕ್ರಮದಲ್ಲಿ ಸಂಜೆ ಗೋಧೂಳಿ ಸಮಯದಲ್ಲಿ ಅಗ್ನಿ ಹೋತ್ರ ಮತ್ತು ಸಂಕಲ್ಪದೊಂದಿಗೆ ಅಮೃತವಚನ, ಪಂಚಾಂಗ ಪಠಣ, ವೈಯಕ್ತಿಕ ಪ್ರಾರ್ಥನೆ, ಸಾಮೂಹಿಕ ಪ್ರಾರ್ಥನೆ ನೆರವೇರಿಸಲಾಗುವುದು. ಶಿಬರವನ್ನು ಉದ್ಘಾಟಿಸಿ ಮಾತನಾಡಿದ ಸಮಿತಿಯ ಉಪಾಧ್ಯಕ್ಷ ಅಶೋಕ್ ಪ್ರತಿ ದಿನ ಯೋಗ ಅಭ್ಯಾಸ ಮಾಡುವುದರಿಂದ ರೋಗಮುಕ್ತರಾಗಿ ಜೀವನ ನಡೆಸಬಹುದು ಹಾಗೂ ಕ್ರಮಬದ್ಧತೆಯಿಂದ ಮಕ್ಕಳ ವಿದ್ಯಾಭ್ಯಾಸ ಮತ್ತು ಜ್ಞಾನಾರ್ಜನೆಗೆ ವೃದ್ಧಿಯಾಗುತ್ತದೆ ಎಂದರು. ಯೋಗ ಬಂಧು ಗಿರೀಶ್ ಮಾತನಾಡಿ ಯೋಗ ಅಭ್ಯಾಸದಿಂದ ಮನು?ನ ಚಂಚಲತೆ ನಿವಾರಣೆಯಾಗಿ ಏಕಾಗ್ರತೆ ಮೂಡಿ ಮನಸ್ಸು ಕೇಂದ್ರಿತದಿಂದ ಕೂಡಿದ್ದು ಮಾಡುವ ಕೆಲಸದಲ್ಲಿ ಸಫಲತೆಯನ್ನು ಕಾಣಬಹುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಯೋಗ ಬಂಧುಗಳಾದ ಬಸವರಾಜು, ವಿದ್ಯಾ ನಂದನ, ಹನುಮಣ್ಣ, ಸೃಷ್ಟಿ, ಪ್ರೀತಮ್, ಶಾಂತಕುಮಾರ್, ಹೇಮಂತ್, ಮಂಜುಳ, ಪಂಕಜ, ಸಂಗಣ್ಣ, ಕುಮಾರಸ್ವಾಮಿ, ಸೇರಿದಂತೆ 40ಕ್ಕೂ ಹೆಚ್ಚು ಯೋಗ ಬಂದುಗಳು ಭಾಗವಹಿಸಿದ್ದರು.

## ಐ ಟಿ ಐ ಪ್ರವೇಶಾತಿ: ಐ ಎಂ ಸಿ ಕೋಟಾದ 2 ಸ್ಥಾನಗಳಿಗೆ ಅರ್ಜಿ

**ಮಂಡ:** ಮದ್ದೂರು ತಾಲ್ಲೂಕಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಆಗಸ್ಟ 2024 ನೇ ಸಾಲಿಗೆ ಐ.ಟಿ.ಐ ಪ್ರವೇಶಾತಿಗೆ ಸಂಬಂಧಿಸಿದಂತೆ ಸಂಸ್ಥೆಯಲ್ಲಿ ಜೋಡಣೆಗಾರ ವೃತ್ತಿ ಕೋರ್ಸ್ನಲ್ಲಿ ಖಾಲಿ ಇರುವ ಐ.ಎಂ.ಸಿ ಕೋಟಾದ 02 ಸ್ಥಾನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಎಸ್.ಎಸ್.ಎಲ್.ಸಿ.ಯಲ್ಲಿ ತೇರ್ಗಡೆಯಾಗಿರುವ ಅರ್ಹ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳೊಂದಿಗೆ ಸಂಸ್ಥೆಗೆ ಖುದ್ದು ಹಾಜರಾಗಿ ಪ್ರವೇಶ ಪಡೆಯಬಹುದಾಗಿದೆ. ಮೊದಲು ಬಂದವರಿಗೆ ಮೊದಲ ಆದ್ಯತೆ ಆಧಾರದ ಮೇಲೆ ಪ್ರವೇಶ ನೀಡಲಾಗುವುದು ಎಂದು ಮದ್ದೂರು ತಾಲ್ಲೂಕಿನ ಕೆ ಎಂ ದೊಡ್ಡಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಪ್ರಜಾಪಿತಾ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ತಿಪಟೂರು ಶಾಖೆಯಿಂದ ಸರ್ಕಾರಿ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಹಣೆಗೆ ಆತ್ಮಸ್ಮೃತಿಯ ತಿಲಕವಿಟ್ಟು, ಕೈಗೆ ಸೋದರತ್ವದ ಹರಿಸಿನ ದಾರವನ್ನು ಕಟ್ಟಿ ರಕ್ಷಾ ಬಂಧನ ಹಬ್ಬವನ್ನು ಆಚರಣೆ ಮಾಡಿದರು.**

## ಕೆಎಂಪಿ ಕಿಡ್ಸ್ ಗ್ರೂಪ್‌ನಿಂದ ಚಿತ್ರಕಲಾ ಸ್ಪರ್ಧೆ

**ಮೈಸೂರು:** ನಗರದ ಕೃಷ್ಣಮೂರ್ತಿಪುರಂನ 5ನೇ ಕ್ರಾಸ್ನಲ್ಲಿರುವ ಕೆಎಂಪಿ ಕಿಡ್ಸ್ ಗ್ರೂಪ್ ವತಿಯಿಂದ ಮಾತೆ ಕಮಲಮ್ಮರವರ ಸ್ಮರಣಾರ್ಥ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಚಿತ್ರಕಲಾ ಸ್ಪರ್ಧೆ ಇತ್ತೀಚೆಗೆ ನಡೆಯಿತು. ಕಾರ್ಯಕ್ರಮದಲ್ಲಿ ಮಾನಸಿ ಮಾತೃಮಂಡಲಿ ಸಂಗೀತ ಶಿಕ್ಷಕಿಯಾದ ಶ್ರೀಮತಿ ಕೋಮಲಾರವರು ಮಾತನಾಡಿ, ಭಾರತೀಯರಿಗೆ ಖುಷಿ ತಂದು ಎಲ್ಲರೂ ಸಂಭ್ರಮಿಸುವ ಹಬ್ಬವೇ ಸ್ವಾತಂತ್ರ್ಯ ದಿನಾಚರಣೆ. ಮಕ್ಕಳಿಗೆ ಬಾವುಟದ ಮಹತ್ವವನ್ನು ಇಂದು ತಿಳಿಸಬೇಕಿದೆ. ಆ ಮೂಲಕ ಮಕ್ಕಳು ಚಿತ್ರ ಬಿಡಿಸುವುದರ ಮೂಲಕ ತಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಲು ಸಾಧ್ಯವಾಗುತ್ತದೆ ಎಂದರು. ಚಿತ್ರ ಬಿಡಿಸುವುದರಿಂದ ಮಕ್ಕಳಲ್ಲಿ ಏಕಾಗ್ರತೆ ಬೆಳೆಯುತ್ತದೆಂದು ತಿಳಿಸಿದರು.

ಶಿಕ್ಷಕಿ ಬಾವನಾರವರು ಮಾತನಾಡಿ, ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸುವುದು ಶಿಕ್ಷಕರ ಕರ್ತವ್ಯವಾಗಬೇಕು. ಇಂದು ನಾವು ಮಕ್ಕಳಿಗೆ ಮೊಬೈಲ್ ಹಾಗೂ ಲ್ಯಾಪ್‌ಟಾಪ್ ತೆಗೆದುಕೊಡುವುದರಿಂದ ಮಕ್ಕಳನ್ನು ದಾರಿ ತಪ್ಪಿಸುವ ಸ್ಥಿತಿಗೆ ತಲುಪಿಸುತ್ತಿದ್ದೇವೆ ಎಂಬ ಭಾವನೆ ಉಂಟಾಗುತ್ತದೆ. ಏಕೆಂದರೆ ಮಕ್ಕಳು ಆಧುನಿಕ ತಂತ್ರಜ್ಞಾನಗಳನ್ನು ಅಗತ್ಯಕ್ಕೆ ಮಾತ್ರ ಪೂರೈಸಿಕೊಳ್ಳಬೇಕೇ ಹೊರತು ಬೇಡವಾದ ವಿಚಾರಗಳನ್ನು ನೋಡದಂತೆ ಮನಸ್ಸು ಮಾಡಬೇಕು. ಶಿಕ್ಷಕರಾದವರು ಮಕ್ಕಳ ಪೋಷಕರನ್ನು ಕರೆದೇ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯ ಬಗ್ಗೆ ಮಾಹಿತಿ ಹಾಗೂ ತಿಳುವಳಿಕೆಯನ್ನು ನೀಡಿದರೆ ಸ್ವಲ್ಪ ಮಟ್ಟಿಗೆ ಇದರ ಹತೋಟಿಗೆ ಸಾಧ್ಯ ಎಂದರು. ಚಿತ್ರಕಲಾ ಸ್ಪರ್ಧೆ 2 ವಿಭಾಗಗಳಲ್ಲಿ ನಡೆದಿದ್ದು, ಹಿರಿಯರ ವಿಭಾಗದಲ್ಲಿ ಸಿಕೆಸಿ ಶಾಲೆಯ ಯಾಶೀಕಾ ಪಿ. ಪ್ರಥಮ ಸ್ಥಾನವನ್ನು, ಚೈತ್ರಾಂಜಲಿ ಡಿ.ಎ. ದ್ವಿತೀಯ ಸ್ಥಾನವನ್ನು, ಡಿಎವಿ ಪಬ್ಲಿಕ್ ಶಾಲೆಯ ಶಿವು ಎಸ್. ಕ್ರಮವಾಗಿ ತೃತೀಯ ಸ್ಥಾನವನ್ನು ಪಡೆದುಕೊಂಡರು. ಕಿರಿಯರ ವಿಭಾಗದಲ್ಲಿ ವಿದ್ಯೋದಯ ಶಾಲೆಯ ವಿಕಾಸ್ ಎಸ್. ಪ್ರಥಮ ಸ್ಥಾನ, ರೋಟರಿ ಶಿಶುವಿಹಾರದ ಅಹನ ಎಸ್. ದ್ವಿತೀಯ ಸ್ಥಾನ, ವೆಟ್ರಿವೇಲ್ ಪಿ. ತೃತೀಯ ಸ್ಥಾನವನ್ನು, ಪುಟಾಣಿಗಳ ವಿಭಾಗದಲ್ಲಿ ಯುಕೆಜಿಯ ಖುಜುಲ ಬಹುಮಾನವನ್ನು ಪಡೆದುಕೊಂಡರು.



## ಡಿ.ದೇವರಾಜು ಅರಸು ಅವರ 109ನೇ ಜನ್ಮ ದಿನಾಚರಣೆ

**ಕೋಲಾರ :** ನಗರದ ರಂಗಮಂದಿರದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ಹಿಂದುಳಿದ ವರ್ಗಗಳ ನೇತಾರ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಡಿ ದೇವರಾಜ್ ಅರಸ್ ಅವರ 109ನೇ ಜನ್ಮ ದಿನಾಚರಣೆ ಅಂಗವಾಗಿ ಡಿ ದೇವರಾಜ್ ಅರಸ್ ಅವರ ಭಾವಚಿತ್ರಕ್ಕೆ ಪುಷ್ಪಹಾರ ಅರ್ಪಿಸಿ ವಿಶೇಷ ಪೂಜೆ ಸಲ್ಲಿಸಿ ಸಿಹಿ ಹಂಚಿ ಜನ್ಮ ದಿನಾಚರಣೆಯನ್ನು ಆಚರಣೆ ಮಾಡಿದರು.

ನಂತರ ತಾಲೂಕು ತಹಸೀಲ್ದಾರರಾದ ಡಾಕ್ಟರ್ ನಯನ ಮಾತನಾಡಿ ದೇವರಾಜ ಅರಸು ಅವರು ಬಡವರ ಅಭಿವೃದ್ಧಿಗೆ ಅನೇಕ ಯೋಜನೆಗಳನ್ನು ಜಾರಿ ಮಾಡಿದ್ದಾರೆ. ಅವರು ಜಾತಿ ಧರ್ಮ ನೋಡುತ್ತಿರಲಿಲ್ಲ. ಎಲ್ಲಾ ಜನಾಂಗವನ್ನು ಸಮಾನತೆಯಿಂದ ಕಾಣುತ್ತಿದ್ದರು. ಬಡವರ ಏಳಿಗೆಯೇ ಅವರ ಮುಖ್ಯ ಗುರಿಯಾಗಿತ್ತು. ಅದೇ ರೀತಿ ವಿದ್ಯಾರ್ಥಿಗಳು ಒಳ್ಳೆಯ ಗುರಿ ಇಟ್ಟುಕೊಂಡು ನಿಮ್ಮ ವಿದ್ಯಾಭ್ಯಾಸ ಮುಂದುವರಿಸಿ. ನಿಮ್ಮ ಆಯ್ಕೆ ನಿಮಗೆ ಬಿಟ್ಟಿದ್ದು. ಸೂಕ್ತ ರೀತಿಯಲ್ಲಿ ಯೋಚಿಸಿ ಸಮಯ ವ್ಯರ್ಥ ಮಾಡದೇ ಹೆಚ್ಚಾಗಿ ಓದುವ ಮೂಲಕ ಒಂದು ಉನ್ನತ ಸ್ಥಾನಕ್ಕೆ ತಲುಪಿ ನಿಮ್ಮ ಕುಟುಂಬ ಪೋಷಣೆ ಮತ್ತು ದೇಶದ ಸೇವೆ ಮಾಡಿ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಡಿ ದೇವರಾಜ್ ಅರಸು ಮೆಟ್ರಿಕ್ ಪೂರ್ವ ಮತ್ತು ಮುರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರು ಎಸ್ಎಸ್ಎಲ್ಸಿ ಮತ್ತು ಪಿಯುಸಿಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದವರಿಗೆ, ಕ್ರೀಡಾ ಚಟುವಟಿಕೆಯಲ್ಲಿ ಭಾಗಿಯಾಗಿ ಗೆದ್ದವರಿಗೆ ಹಾಗೂ ಪ್ರಬಂಧ ಸ್ಪರ್ಧೆ ಯಲ್ಲಿ ಭಾಗಿಯಾಗಿ ವಿಜೇತರದವರಿಗೆ ಸನ್ಮಾನ ಮಾಡಿ ಪದಕ ನೀಡುವ ಮೂಲಕ ಗೌರವಿಸಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ಜಿ ಮುರಳಿ, ಮ್ಯಾನೇಜರ್ ರಾಜರೆಡ್ಡಿ, ಇಲಾಖೆ ಸಿಬ್ಬಂದಿಗಳಾದ ಮಂಜುನಾಥ್, ಶ್ರೀನಿವಾಸ್, ಸಿದ್ದಪ್ಪದಡ್ಡಿ, ಬ್ಲಾಕ್ ಕಾಂಗ್ರೆಸ್ ಪ್ರಸಾದ್ ಬಾಬು, ಪಾಲ್ಗುಣ, ವಿಷ್ಣು,ಯುವರಾಜ್, ಡೆಕೋರೇಷನ್ ಕೃಷ್ಣ, ಮುನಿಕೃಷ್ಣ, ರಾಜಾರಾವ್, ತ್ಯಾಗರಾಜ್, ಎಸ್ ಮಂಜುನಾಥ್, ಗೋಪಾಲ್, ಶಂಕರ್ ಕೊಂಡೆ, ಗೋವಿಂದ ರಾಜು, ಸೇರಿದಂತೆ ಇತರರು ಇದ್ದರು.



### ಕಕಜವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡ ಒತ್ತಾಯ

# ಕೆರೆಗಳಿಗೆ ನೀರು ಹರಿಸಿ

**ಚನ್ನಪಟ್ಟಣ:** ಮಂಡ್ಯ ಕೆರೆಗಳಿಗೆ ನೀರನ್ನು ತುಂಬದೆ ಮುಂದೆ ಮಳೆ ಬರದಿದ್ದರೆ ಜನರು ಸಾಯುವ ಪರಿಸ್ಥಿತಿ ನಿರ್ಮಾಣ ಆಗುತ್ತದೆ ಎಂಬುದು ಸರ್ಕಾರ ಮನಗಂಡು ಕೂಡಲೇ ಕೆರೆಗಳಿಗೆ ನೀರನ್ನು ಬಿಡಬೇಕು ಎಂದು ಕಕಜವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡ ಎಚ್ಚರಿಕೆ ನೀಡಿದರು.

ಕೆಆರ್‌ಎಸ್‌ನಿಂದ ಶಿಂಷಾ ನದಿಗೆ ನೀರು ಹರಿಸಲು ಅನುಮತಿ ಇದ್ದರೂ ಸಹ ಕಾವೇರಿ ನೀರಾವರಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದರಿಂದ ಜಿಲ್ಲೆಯ ಕೆರೆಕಟ್ಟೆಗಳು ನೀರಿಲ್ಲದೆ ಬರಿದಾಗಿದ್ದು ಇದನ್ನು ಖಂಡಿಸಿ ಅಧಿಕಾರಿಗಳು ಬೇಜವಾಬ್ದಾರಿ ವಿರುದ್ಧ ಮಂಗಳವಾರ ತಾಲೂಕು ಕಚೇರಿ ಮುಂದೆ ಕಕಜವೇದಿಕೆಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಅವರು ಮಾತನಾಡಿ,

ಕಾವೇರಿ ವಿಚಾರದಲ್ಲಿ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯವನು ಎಚ್ಚರಿಸುವ ನಿಟ್ಟಿನಲ್ಲಿ ಕಕಜ ವೇದಿಕೆಯಿಂದ 321 ದಿನಗಳಿಂದ ನಿರಂತರ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸದ ಆರಂಭದಲ್ಲಿ ಕನ್ನಡಪರ ಸಂಘಟನೆಗಳು ಆರಂಭದಲ್ಲಿ ಉತ್ತುಂಗದ ಸ್ಥಿತಿಯಲ್ಲಿ ಹೋರಾಟ ಮಾಡುತ್ತಾರೆ ಆದರೆ ಅವರು ಮರೆತು ಬಿಡುತ್ತಾರೆ. ಅಧಿಕಾರಿಗಳು ನಮಗೂ ಇದಕ್ಕೂ ಸಂಬಂದ ಇಲ್ಲ ಎಂದು ಮೌನವಾಗುತ್ತಾರೆ ಈ ಮೂಲಕ ತಮಿಳುನಾಡಿಗೆ ಲಕ್ಷಾಂತರ ಕ್ಯೂಸೆಕ್ಸ್ ನೀರು ಹರಿದರೂ ಪ್ರಶ್ನೆ ಮಾಡದ ಪರಿಸ್ಥಿಯನ್ನು ನಾವು ನಿರ್ಮಾಣ ಮಾಡಿಕೊಂಡಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು. ನಿವೃತ್ತ ಪ್ರಾಂಶುಪಾಲರು ಹಾಗೂ ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷರಾದ ನಿಂಗೇಗೌಡರು(ಎನ್‌ಜಿ), ಮಾತನಾಡಿ, ರಾಜ್ಯದಲ್ಲಿ ಮಳೆ ಹೆಚ್ಚಾದಾಗ ತಮಿಳುನಾಡಿಗೆ ಹರಿಸುವ ನೀರಿನಲ್ಲಿ ವ್ಯರ್ಥವಾಗಿ ಸಮುದ್ರದ ಪಾಲಾಗುವ ನೀರನ್ನು ಸಂಗ್ರಹಿಸಿ ಕುಡಿಯುವ ನೀರಿಗೆ ಹಾಗೂ ಜಲವಿದ್ಯುತ್ ಉತ್ಪಾದನೆಗೆ ಬಳಕೆ ಮಾಡಿಕೊಳ್ಳಲು ಮೇಕೆದಾಟು ಅಣೆಕಟ್ಟೆ ನಿರ್ಮಾಣ ಮಾಡಬೇಕು ಎಂದು ಆಗ್ರಹಿಸಿ ಕಕಜ ವೇದಿಕೆ ರಮೇಶ್‌ಗೌಡರು 321 ದಿನಗಳಿಂದ ಕಾವೇರಿ ಸರ್ಕಲ್‌ನಲ್ಲಿ ನಿರಂತರ ಹೋರಾಟ ಮಾಡುತ್ತಾ ಬಂದಿದ್ದಾರೆ. ಈ ಹೋರಾಟವನು ಪ್ರತಿನಿತ್ಯ ನೂರಾರು ಜನತೆ ನೋಡಿಕೊಂಡು ಹೋಗುತ್ತಿದ್ದಾರೆ ಆದರೆ ಏಕೆ ಈ ಹೋರಾಟ ಎಂದು ಯಾರೂ ಚಿಂತನೆ ಮಾಡುತ್ತಿಲ್ಲ. ರಾಜಕೀಯ ಕೆಸರೆರೆಚಾಟದಲ್ಲಿ ಮುಳುಗಿರುವ ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷದ ಜನಪ್ರತಿನಿಧಿಗಳಿಗೆ ಜನರ ಹಿತಕಾಯುವ ಚಿಂತನೆ ಇಲ್ಲ. ಈ ನಿಟ್ಟಿನಲ್ಲಿ ಅಧಿಕಾರಿಗಳು ಯಾವುದೇ ಕೆಲಸಗಳತ್ತ ಗಮನ ನೀಡದೆ ಲರ್ಕಕ್ಷ್ಯ ವಹಿಸುತ್ತಾ ಬಂದಿದ್ದು, ಈ ನಿಟ್ಟಿನಲ್ಲಿ ಇಂದು ತಾಲೂಕಿನ ಕೆರೆಗಳು ಬರಿದಾಗಿವೆ. ಇಂದು ತಾಲೂಕು ಕಚೇರಿ ಬಳಿ ನಾವು ಪ್ರತಿಭಟನೆ ಮಾಡುತ್ತಿದ್ದೇವೆ ಎಂದರೆ ಅದಕ್ಕೆ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣವಾಗಿದೆ. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಎಚ್ಚೆತ್ತು ಕೆರೆಗಳಿಗೆ ನೀರನ್ನು ತುಂಬಿಸಲು ಕ್ರಮ ಕೈಗೊಳ್ಳಲಿ. ಜೊತೆಗೆ ರಾಜ್ಯದ ಸಂಸದರು ಮೇಕೆದಾಟು ಅಣೆಕಟ್ಟೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರದಿಂದ ಅನುಮತಿ ಕೊಡಿಸಲು ಶ್ರಮಿಸಲಿ ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ರಂಜಿತ್ ಗೌಡ, ರಾಜ್ಯ ಯುವ ಘಟಕದ ಅಧ್ಯಕ್ಷ ಮಣಿ, ರಾಜ್ಯ ಸಂಘಟನಾ ಕಾರ್ಯದರ್ಶಿ ಕೃಷ್ಣೇಗೌಡ, ಚಾಮರಾಜ ನಗರ ಜಿಲ್ಲಾಧ್ಯಕ್ಷ ಮಲ್ಲು, ತಾಲ್ಲೂಕು ಉಪಾಧ್ಯಕ್ಷ ಮಹೇಶ್ ಮೆಣಸಿಗನಹಳ್ಳಿ, ವೇದಿಕೆಯ ಪದಾಧಿಕಾರಿಗಳಾದ ನಾಗವಾರ ಶಿವಲಿಂಗೇಗೌಡ, ಜಯರಾಮು, ರಾಮಕೃಷ್ಣಯ್ಯ ಸಿಂಗರಾಜಿಪುರ, ರಾಮೇಗೌಡ ಚಕ್ಕೆರೆ, ವೇಣುಗೋಪಾಲಸ್ವಾಮಿ ರೈತ ಸಂಘದ ಚಾಮರಾಜು, ಶಂಕರ್, ಬೋರೇಗೌಡ, ರಮೇಸ್ ಎಸ್.ಟಿ., ಪ್ರಸನ್ನಕುಮಾರ್, ಚಾಮರಾಜನಗರದ ಮಹದೇವಶೆಟ್ಟಿ, ಮೋಹನ್, ಅಶೋಕ್ ಕುಮಾರ್ ಹಾಜರಿದ್ದರು.



### ಗರಕಹಳ್ಳಿ ಪಂಪ್‌ಹೌಸ್‌ನ ಮೋಟಾರ್ ಚಾಲನೆಯಾಗಿದೆ

**ಹೋರಾಟದ ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಕಾವೇರಿ ನೀರಾವರಿ ನಿಗಮದ ಎಇಇ ಸುರೇಶ್ ಅವರು ಮಾತನಾಡಿ, ಕೆಆರ್‌ಎಸ್‌ನಿಂದ ಶಿಂಷಾ ನದಿಗೆ ನೇರವಾಗಿ ನೀರು ಬರುವ ಕಾಲುವೆಗಳಿಲ್ಲ. ಮಂಡ್ಯ ಜಿಲ್ಲೆಯ ಕೆರೆಗಳು ತುಂಬಿದ ಬಳಿಕ ಶಿಂಷಾ ನದಿಗೆ ನೀರು ಹರಿದು ಅಲ್ಲಿಂದ ಬರುವ ಸೋರಿಕೆ ನೀರಿನಿಂದ ಇಗ್ಗಲೂರು ಜಲಾಶಯಕ್ಕೆ ನೀರು ಬರುತ್ತದೆ. ಕಳೆದ ವರ್ಷ ಮಳೆ ಇಲ್ಲದ ಕಾರಣ ಮಂಡ್ಯ ಜಿಲ್ಲೆಯ ಎಲ್ಲಾ ಕೆರೆಗಳು ನೀರಿಲ್ಲದ ಒಣಗಿದ್ದವು, ಈ ನಿಟ್ಟಿನಲ್ಲಿ ಅಲ್ಲಿನ ಕೆರೆಗಳು ಭರ್ತಿಯಾಗಿ ಕೋಡಿ ಬಿದ್ದು ಮುಂದಿನ ಕೆರೆಗಳ ಮೂಲಕ ಶಿಂಷಾ ನದಿಗೆ ಹರಿಯಲು ತಡವಾಗಿದೆ. ಇಗ್ಗಲೂರು ಜಲಾಶಯದಲ್ಲಿ 5 ಅಡಿ ಡೆಡ್ ಸ್ಟೋರೇಜ್ ನೀರಿತ್ತು. ಇದೀಗ 17.6 ಅಡಿ ನೀರು ಹೆಚ್ಚಾಗಿದೆ. ಈ ನಿಟ್ಟಿನಲ್ಲಿ ಗರಕಹಳ್ಳಿ ಪಂಪ್‌ಹೌಸ್‌ನ ಕೆರೆಗಳಿಗೆ ನೀರನ್ನು ತುಂಬಲು ಮೋಟಾರ್‌ಗಳನ್ನು ಆನ್ ಮಾಡಲಾಗಿದೆ. ನೀರಿನ ಲಭ್ಯತೆ ಮೇರೆಗೆ ಕಣ್ವಾ ಪಂಪ್‌ಹೌಸ್ ಮೋಟಾರ್‌ಗಳನ್ನು ಆನ್ ಮಾಡಿ ತಾಲೂಕಿನ ಇತರೆ ಕೆರೆಗಳಿಗೆ ನೀರನ್ನು ತುಂಬಿಸಲಾಗುತ್ತದೆ ಎಂದು ಭರವಸೆ ನೀಡಿದರು.**

## ಅರಸು ಚಿಂತನೆ ಅಳವಡಿಸಿಕೊಳ್ಳಿ

**ಮಂಡ್ಯ:** ಪ್ರತಿಯೊಬ್ಬರೂ ಕೂಡ ಡಿ ದೇವರಾಜು ಅರಸು ಅವರ ಚಿಂತನೆ ಹಾಗೂ ಆದರ್ಶಗಳನ್ನು ತಮ್ಮ ವೈಯಕ್ತಿಕ ಬದುಕಿನಲ್ಲಿ ಅಳವಡಿಸಿಕೊಳ್ಳಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಸಲಹೆ ನೀಡಿದರು.

ಅವರು ಇಂದು ನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಸಾಮಾಜಿಕ ಪರಿವರ್ತನೆಯ ಹರಿಕಾರ, ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ ದೇವರಾಜ ಅರಸುರವರ 109 ನೇ ಜನ್ಮ ದಿನಾಚರಣೆಯನ್ನು ದೀಪ ಬೆಳಗಿಸುವುದರ ಮುಖಾಂತರ ಉದ್ಘಾಟಿಸಿ ಮಾತನಾಡಿದರು.

ಸಾಮಾಜಿಕ ಪರಿವರ್ತನೆಯ ಹರಿಕಾರ ಡಿ ದೇವರಾಜು ಅರಸು ಅವರನ್ನು ಅವರು ಕೇವಲ ಒಬ್ಬ ರಾಜಕಾರಣಿ ಅಲ್ಲ ಆದರ್ಶ ವ್ಯಕ್ತಿತ್ವವುಳ್ಳವರು, ಅವರ ಚಿಂತನೆಯಲ್ಲಿ, ಸಮಾಜವಾದಿ ತತ್ವ, ಅಭಿವೃದ್ಧಿಪರ ಚಿಂತನೆ, ಸಾಮಾಜಿಕ ನ್ಯಾಯ ಹಾಗೂ ಸಾಮಾಜಿಕ ಸುಧಾರಣೆಯಂತಹ ದೃಷ್ಟಿಕೋನವನ್ನು ಇಟ್ಟುಕೊಂಡಿದ್ದವರು. ಅವರನ್ನು ಒಬ್ಬ ಮಹಾನ್ ಧೀಮಂತ ನಾಯಕ ಎಂದು ಕರೆಯಬಹುದು ಎಂದರು.

ಕರ್ನಾಟಕ ರಾಜ್ಯದಲ್ಲಿ ಸುಮಾರು 8 ವರ್ಷಗಳ ಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ಅರಸು ಅವರು, ಕೇವಲ ರಾಜಕೀಯ ಚಿಂತನೆಯಲ್ಲದೆ ಕರ್ನಾಟಕ ರಾಜ್ಯಕ್ಕೆ ಆರ್ಥಿಕ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿಪಥದ ಯೋಜನೆ ಹಾಕಿಕೊಟ್ಟಂತಹ ವ್ಯಕ್ತಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿದವರು ಅರಸು. ಇಂದು ಕರ್ನಾಟಕ ರಾಜ್ಯದ ಸಂಭ್ರಮ 50ರ ಗಡಿ ದಾಟಿದ ಸಂಭ್ರಮದಲ್ಲಿ ನಾವಿದ್ದೇವೆ. 50 ವರ್ಷಗಳ ಹಿಂದೆ ಅವರು ಹಾಕಿ ಕೊಟ್ಟಿರುವ ಚಿಂತನೆಗಳು ಹಾಗೂ ಕೊಡುಗೆಗಳು ಇವತ್ತಿಗೂ ಪ್ರಸ್ತುತ. ಹೀಗಾಗಿ, ನಾವು ಅವರನ್ನು ಇಂದಿಗೂ ಪೂಜ್ಯ ಭಾವನೆಯಿಂದ ಕಾಣುತ್ತೇವೆ ಎಂದರು.

ದೇವರಾಜ ಅರಸುರವರ ಚಿಂತನೆಗಳು ಇಂದಿನ ಸಮಾಜಕ್ಕೆ ಅತ್ಯಾವಶ್ಯಕವಾಗಿದೆ. ಅಸಮಾನತೆ, ಅಸ್ಪೃಶ್ಯತೆಯನ್ನು ಹೋಗಲಾಡಿಸಿ ಸಾಮಾಜಿಕ ನ್ಯಾಯವನ್ನು ದೊರಕಿಸುವ ಮೂಲಕ ಅನೇಕ ಕೊಡುಗೆಯನ್ನು ನೀಡಿದ್ದಾರೆ ಎಂದರು.

ಭೂ ಸುಧಾರಣೆ ಕಾಯ್ದೆಯು ಜಾರಿಗೆ ಬಂದಂತಹ ಸಂದರ್ಭದಲ್ಲಿ ಅದನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದಂತಹ ಏಕೈಕ ರಾಜ್ಯವೆಂದರೆ ಅದು ಕರ್ನಾಟಕ ರಾಜ್ಯ. ಅಂದಿನ ಕಾಲಘಟ್ಟದಲ್ಲಿ ದೊಡ್ಡ ದೊಡ್ಡ ಭೂ ಹಿಡುವಳಿದಾರರು, ಜಮೀನ್ದಾರರು ಹಾಗೂ ಶ್ರೀಮಂತರ ವಿರೋಧ ಕಟ್ಟಿಕೊಂಡು ಭೂ ಮಾಲೀಕರ ಸ್ಥಾನದಲ್ಲಿ ಗೇಣಿದಾರರನ್ನು ಕೂರಿಸಿ ಬಡವರಿಗೆ ಸಹಾಯ ಮಾಡುವುದು ಅಷ್ಟು ಸುಲಭದ ಮಾತಗಿರಲಿಲ್ಲ. ಅದನ್ನು ಯಶಸ್ವಿಯಾಗಿ ನಿರ್ವಹಿಸಿ ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ಬಡವರಿಗೆ ನ್ಯಾಯ ಕೊಡಿಸುವ ಕೆಲಸ ಮಾಡಿದ್ದರು ಎಂದು ಸ್ಮರಿಸಿದರು. ಇಂದು ನಾನು ಈ ವೇದಿಕೆಯ ಮೇಲೆ ಜಿಲ್ಲಾಧಿಕಾರಿಯಾಗಿ ಮಾತನಾಡುತ್ತಿದ್ದೀನಿ ಎಂದರೆ ಅದಕ್ಕೆ ಬಹುಮುಖ್ಯ ಕಾರಣ ನಾನು ಓದಿ ಬೆಳೆದಂತಹ ಬಿಸಿಎಂ ಹಾಸ್ಟೆಲ್. ಏಕೆಂದರೆ ಒಂದು ವೇಳೆ ನನಗೆ ಬಿಸಿಎಂ ಹಾಸ್ಟೆಲ್ ನಲ್ಲಿ ಸೀಟು ಸಿಗದಿದ್ದರೆ, ಕಲಿಯುವ ಸೌಲಭ್ಯ ಇಲ್ಲದಿದ್ದರೆ, ನಾನು ಹಳ್ಳಿಯಿಂದ ಬಂದು ನಗರದಲ್ಲಿ ಓದಲಿಕ್ಕೆ ಸಾಧ್ಯವಾಗುತ್ತಿರಲಿಲ್ಲ. ಇಡೀ ನನ್ನ ಶಿಕ್ಷಣವನ್ನು ನಾನು ಬಿಸಿಎಂ ಹಾಸ್ಟೆಲ್ ನಲ್ಲಿ ಪಡೆದಿದ್ದೇನೆ. ನಾನು ಈ ಹಾಸ್ಟೆಲ್ ಅನ್ನು ಕೇವಲ ಕಟ್ಟಡ ಎಂದು ನೋಡುವುದಿಲ್ಲ. ಅದೊಂದು ಜ್ಞಾನದ ದೇಗುಲ ಎಂದು ಭಾವಿಸುತ್ತಿದ್ದೆ ಎಂದರು.




## ದೇವರಾಜ ಅರಸು, ನಾರಾಯಣ ಗುರು ಜಯಂತಿ

**ಟೇಕಲ್:** ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಬಹುದೊಡ್ಡ ಕೊಡುಗೆ ನೀಡಿದ ನಾಯಕ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್‌ರವರು ಮೊದಲ ಬಾರಿಗೆ ಭೂಸುಧಾರಣೆ ಕಾಯ್ದೆ ಜಾರಿಗೆ ಮೂಲಕ ಉಳುವವನೇ ಭೂ ಒಡೆಯ ಕಾನೂನು ಜಾರಿಗೆ ತಂದವರು ಅರಸುರವರು ಮನುಕುಲಕ್ಕೆ ಒಂದೇ ಜಾತಿ ಒಂದೇ ಮತ, ಒಂದೇ ದೇವರು ಸಾರಿದ ಬ್ರಹ್ಮಶ್ರೀ ನಾರಾಯಣ ಗುರುಗಳು ಸಮಾಜ ಸುಧಾರಕರಾಗಿ, ಸಮಾಜದ ತಾರತಮ್ಯಗಳನ್ನು ಕಡಿಮೆ ಮಾಡಲು ಇಡೀ ಜೀವನ ಮುಡಿಪಾಗಿಟ್ಟರು ಎಂದು ಟೇಕಲ್‌ನ ಕೆ.ಜಿ.ಹಳ್ಳಿ ಗ್ರಾ.ಪಂ.ಅಧ್ಯಕ್ಷ ಎಸ್.ಆರ್.ಯಲ್ಲಪ್ಪ ತಿಳಿಸಿದರು. ಅವರು ಪಂಚಾಯ್ತಿ ಆವರಣದಲ್ಲಿ ದೇವರಾಜು ಅರಸು ಹಾಗೂ ನಾರಾಯಣ ಗುರು ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡುತ್ತಿದ್ದರು. ಇಬ್ಬರ ಆದರ್ಶಗಳನ್ನು ಇಂದಿನ ಯುವ ಪೀಳಿಗೆ ಅಳವಡಿಸಿಕೊಳ್ಳಬೇಕೆಂದರು. ಈ ಸಂದರ್ಭದಲ್ಲಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಎಂ.ಸಿ.ವೆಂಕಟೇಶ, ಅಕ್ಷರಧಾಮ ಸಂಸ್ಥೆಗಳ ಕಾರ್ಯದರ್ಶಿ ರಂಜಿತ್‌ಕುಮಾರ್ ದೊಡ್ಡಪ್ಪಯ್ಯ, ಗ್ರಂಥಾಲಯ ಮೇಲ್ವಿಚಾರಕಿ ಮುನಿರತ್ನಮ್ಮ, ಪಂಚಾಯ್ತಿ ಗಣಕಯಂತ್ರ ತಜ್ಞ ಬೈರಪ್ಪ, ಇನ್ನೂ ಮುಂತಾದವರು ಉಪಸ್ಥಿತರಿದ್ದರು.




**ಮಾಲೂರು ತಾಲೂಕಿನ ಟೇಕಲ್‌ನ ಕೆ.ಜಿ.ಹಳ್ಳಿ ಗ್ರಾ.ಪಂ.ನಲ್ಲಿ ಪಂಚಾಯ್ತಿ ಅಧ್ಯಕ್ಷ ಎಸ್.ಆರ್.ಯಲ್ಲಪ್ಪ ಅವರ ಅಧ್ಯಕ್ಷತೆಯಲ್ಲಿ ದೇವರಾಜ ಅರಸು ಹಾಗೂ ನಾರಾಯಣ ಗುರುರವರ ಜಯಂತಿ ಆಚರಿಸಲಾಯಿತು.**

## ವಿದ್ಯಾರ್ಥಿ ವೇತನ ಪಡೆಯಲು ಅರ್ಜಿ ಆಹ್ವಾನ

**ಮಂಡ್ಯ:** 2024-25ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯ ವಿವಿಧ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನ ಪಡೆಯಲು ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹಿಂದಿನ ತರಗತಿಯಲ್ಲಿ ಶೇಕಡ 40% ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾಗಿರುವ ವಿಕಲಚೇತನ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಜಿಯನ್ನು ಅಗತ್ಯ ದಾಖಲಾತಿಗಳಾದ ಅಂಗವಿಕಲರ ವಿಶಿಷ್ಟ ಗುರುತಿನ ಚೀಟಿ (ಯು.ಡಿ.ಐ.ಡಿ ಕಾರ್ಡ್) ಅಂಕಪಟ್ಟಿ, ಭಾವಚಿತ್ರ, ಆಧಾರ ಕಾರ್ಡ್ ಜೆರಾಕ್ಸ್, ಪೋಷಕರ ಆಧಾರ ಕಾರ್ಡ್ ಜೆರಾಕ್ಸ್, ಸ್ಯಾಟ್ಸ್ ನಂಬರ್, ಆದಾಯ ಪ್ರಮಾಣ ಪತ್ರ, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರ, ದಾಖಲಾತಿಯೊಂದಿಗೆ ಹೊಸದಾಗಿ ಅರ್ಜಿ ಹಾಕುವ ಪೋಸ್ಟ್ ಮೆಟ್ರಿಕ್ ವಿದ್ಯಾರ್ತಿಗಳಿಗೆ https://ssp.postmatric.karnataka.gov.in ವೆಬ್ ಸೈಟ್ ಮೂಲಕ ಸಲ್ಲಿಸುವುದು. ವಿಕಲಚೇತನ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವಾಗ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ (disability welfare Department) ಆಯ್ಕೆ ಮಾಡಿ ಅರ್ಜಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-231090 / 239234 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರತದ ಸಂವಿಧಾನ ಜಗತ್ತಿನಲ್ಲೇ ಶ್ರೇಷ್ಠ

**ಚಾಮರಾಜನಗರ:** ಡಾ.ಬಿ.ಆರ್.ಅಂಬೇಡ್ಕರ್‌ಅವರು ರಚಿಸಿರುವ ಭಾರತದ ಸಂವಿಧಾನಜಗತ್ತಿನಲ್ಲೇ ಶ್ರೇಷ್ಠ ಸಂವಿಧಾನವಾಗಿದೆಎಂದು ಹಿರಿಯ ಸಾಹಿತಿ ಸೋಮಶೇಖರ್ ಬಿಸಲವಾಡಿಅಭಿಪ್ರಾಯಪಟ್ಟರು. ನಗರದ ಬಾಲಕಿಯರಸರ್ಕಾರಿಪದವಿ ಪೂರ್ವಕಾಲೇಜಿನಲ್ಲಿ ಜನಹಿತಾಶಕ್ತಿ ಹೋರಾಟ ವೇದಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಸರ್ಕಾರಿ ಪದವಿ ಪೂರ್ವ ಮಹಿಳಾ ಕಾಲೇಜುಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ 'ಸಂವಿಧಾನಅರಿವು'ಕಾರ್ಯಕ್ರಮದಲ್ಲಿ ವಿಚಾರ ಮಂಡಿಸಿದರು. ದೇಶದಇತರೇ ಧರ್ಮಗಳಾದ ಕುರಾನ್, ಬೈಬಲ್, ಭಗವದ್ಗೀತೆ ಹಾಗೂ ಇನ್ನಿತರೆಧರ್ಮ ಗ್ರಂಥಗಳಿಗಿಂತಲೂ ಸಂವಿಧಾನ ಪವಿತ್ರಗ್ರಂಥವಾಗಿದೆ. ದೇಶದ ಪ್ರತಿಯೊಬ್ಬ ನಾಗರೀಕರು ಸಂವಿಧಾನದ ನೆರಳಿನಲ್ಲೇ ಇದ್ದಾರೆಎಂದು ತಿಳಿಸಿದರು. ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಮಾತನಾಡಿ, ನಮ್ಮ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ವ್ಯವಸ್ಥೆ ಹೇಗೆ ಕರ್ತವ್ಯ ನಿರ್ವಹಿಸುತ್ತದೆಎನ್ನುವುದನ್ನು ಅರಿತುಕೊಳ್ಳಲು ಸಂವಿಧಾನದಜ್ಞಾನಅಗತ್ಯವಾಗಿದೆದೇಶದಲ್ಲಿರುವ ಹಲವು ಧರ್ಮಗಳಿಗೆ ಅದರದ್ದೇಆದಧರ್ಮ ಗ್ರಂಥಗಳು ಇದೆ. ಆದರೇ ಭಾರತೀಯರು ಎಂದು ಗುರುತಿಸಿಕೊಳ್ಳಲು ಅಂಬೇಡ್ಕರ್ ರಚಿಸಿರುವ ಸಂವಿಧಾನವೇ ಪವಿತ್ರಗ್ರಂಥವಾಗಿದೆ.ಪ್ರತಿಯೊಬ್ಬ ಭಾರತೀಯರು ಸಂವಿಧಾನವನ್ನು ಸ್ಪಷ್ಟವಾಗಿ ತಿಳಿದುಕೊಳ್ಳಬೇಕಿದೆ ಎಂದರು. ಶಾಲಾಶಿಕ್ಷಣಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಮಂಜುನಾಥ್‌ಪ್ರಸನ್ನ ಮಾತನಾಡಿ, ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನದೇಶದಆತ್ಮವಾಗಿದೆ. ಅದುಯಾವಾಗಲೂ ಒಳ್ಳೆಯದನ್ನೇ ಬಯಸುತ್ತದೆ.ಜತೆಗೆದೇಶದ ನಾಡಿಮಿಡಿತದ ಮೇಲೆ ಕಾರ್ಯಪ್ರವೃತ್ತವಾಗಿದೆಎಂದರು. ಸರ್ಕಾರಿ ಬಾಲಕಿಯರ ಪದವಿ ಪೂರ್ವಕಾಲೇಜಿನ ಪ್ರಾಂಶುಪಾಲೆಎಚ್.ಪಿ.ನಿರ್ಮಲಾ, ಜನಹಿತಾಶಕ್ತಿ ಹೋರಾಟ ವೇದಿಕೆ ಜಿಲ್ಲಾಧ್ಯಕ್ಷರಾಮಸಮುದ್ರ ಸುರೇಶ್, ಪ್ರಧಾನ ಕಾರ್ಯದರ್ಶಿ ಕಾಡಹಳ್ಳಿ ನಾಗರಾಜ್, ಸಿದ್ಧಾರ್ಥ ಪದವಿಪೂರ್ವಕಾಲೇಜಿನ ಪ್ರಾಂಶುಪಾಲ ರಂಗಸ್ವಾಮಿ ಇದ್ದರು.




### ರಾಮನಗರ ಶಾಸಕ ಎಚ್.ಎ.ಇಕ್ಬಾಲ್ ಹುಸೇನ್ ಅಭಿಮತ

# ಅಭಿವೃದ್ಧಿಯ ಹರಿಕಾರ ದೇವರಾಜ ಅರಸು

**ರಾಮನಗರ;** ಡಿ. ದೇವರಾಜ ಅರಸು ಅವರು ಮುಖ್ಯಮಂತ್ರಿಗಳಾಗಿದ್ದಾಗ ರಾಜ್ಯದಲ್ಲಿ ಭೂ ಸುಧಾರಣೆ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ, ಉಳುವವನೇ ಭೂ ಒಡೆಯನನ್ನಾಘಿ ಪರಿವರ್ತಿಸಿದರು, ಇದರಿಂದ ಭೂಮಿ ಇಲ್ಲದವರಿಗೆ ಉಳುಮೆಗಾಗಿ ಕೃಷಿ ಭೂಮಿ ದೊರೆಯಿತು, ಭೂಮಿ ಇಲ್ಲದವರಿಗೆ, ಬಡವರಿಗೆ ನ್ಯಾಯ ದೊರಕಿತು, ನಿವೇಶನ ರಹಿತರಿಗೆ ನಿವೇಶನಗಳು ಮಂಜೂರಾಯಿತು ಎಂದು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ.ಇಕ್ಬಾಲ್ ಹುಸೇನ್ ಅವರು ಹೇಳಿದರು.



ಅವರು ಆ. 20ರ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದ್ದ ಡಿ. ದೇವರಾಜ ಅರಸು ಅವರ 109ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಈ ಹಿಂದೆ ಹಲವು ನಾಯಕರು ರಾಜ್ಯದಲ್ಲಿ ಆಡಳಿತ ನಡೆಸಿ ಹೋಗಿದ್ದಾರೆ, ಆದರೆ ಡಿ. ದೇವರಾಜ ಅರಸು ರವರು 1969-1979 ರವರೆಗೆ ನಡೆಸಿದ ಆಡಳಿತ ಅರಸು ಯುಗವಾಗಿತ್ತು, ಹೆಣ್ಣು ಮಕ್ಕಳ ಶಿಕ್ಷಣಕ್ಕೆ ವಸತಿ ನಿಲಯಗಳನ್ನು ಸ್ಥಾಪಿಸಿದರು. 1973 ನವೆಂಬರ್ 1 ಮೈಸೂರು ರಾಜ್ಯವನ್ನು ಕರ್ನಾಟಕ ರಾಜ್ಯವೆಂದು ಮರುನಾಮಕರಣ ಮಾಡಿದರು ಎಂದು ಹೇಳಿದರು.

ಜೀತಪದ್ಧತಿಯನ್ನು ತೊಲಗಿಸಿ ಜೀತಮುಕ್ತಿ ಪದ್ದತಿಯನ್ನು ಜಾರಿಗೆ ತಂದು ಬಡವರ ಬಾಳಲ್ಲಿ ಬೆಳಕಾದರು. ಬಡವರು ಮುಕ್ತವಾಗಿ ಬದುಕಲು ಅವಕಾಶ ಮಾಡಿಕೊಟ್ಟರು. ಮಲ ಹೊರುವ ಪದ್ಧತಿಯನ್ನು ರದ್ದು ಮಾಡಿದರು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಪ್ರಧಾನ ಭಾಷಣಕಾರರಾಗಿ ಆಗಮಿಸಿದ್ದ ಹಿರಿಯ ಸಾಹಿತಿ, ಪತ್ರಕರ್ತರಾದ ಮಾರಣ್ಣ ಅವರು ಮಾತನಾಡಿ, ಸಾರ್ವಜನಿಕರ ತೊಂದರೆಗಳನ್ನು ನಿವಾರಿಸುವಲ್ಲಿ ಡಿ.ದೇವರಾಜ ಅರಸು ಅವರ ಪಾತ್ರ ಬಹು ದೊಡ್ಡದು, ಕೃಷಿಕರು, ಬಡವರು, ಕೂಲಿ ಕಾರ್ಮಿಕರು ನೆಲೆ ಕಾಣಲು ಕಾರಣರಾದರು. ಮೀಸಲಾತಿ ವಿಸ್ತರಣೆ ತಂದರು, ಭೂಸುಧಾರಣೆ ಕಾಯ್ದೆ, ಜೀತಮುಕ್ತಿ ಪದ್ಧತಿ, ಕೃಷಿ, ಹೈನುಗಾರಿಕೆಯಲ್ಲಿ ಹೀಗೆ ಅನೇಕ ಸುಧಾರಣೆಗಳನ್ನು ತಮ್ಮ ಆಡಳಿತಾವಧಿಯಲ್ಲಿ ಜಾರಿಗೆ ತಂದರು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಕಲೆ, ಸಾಹಿತ್ಯ ಮತ್ತು ಇನ್ನಿತರ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವ್ಯಕ್ತಿಗಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ರಾಮನಗರ ಜಿಲ್ಲಾ ಕ್ರೀಡಾಂಗಣದಿಂದ ಡಾ.ಬಿ.ಆರ್. ಅಂಬೇಡ್ಕರ್ ಭವನದವರೆಗೂ ಡಿ. ದೇವರಾಜ ಅರಸು ಅವರ ಭಾವಚಿತ್ರದೊಂದಿಗೆ ವಿವಿಧ ಕಲಾತಂಡಗಳ ಪ್ರದರ್ಶನದೊಂದಿಗೆ ಅದ್ದೂರಿ ಮೆರವಣಿಗೆ ಜರುಗಿತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಿಗ್ವಿಜಯ್ ಬೋಡ್ಕೆ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಬಿಲಾಲ್, ಜಿಲ್ಲಾ ಮಟ್ಟದ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮುಖಂಡರುಗಳಾದ ಜಿ. ನಾಗರಾಜು (ರೈಡ್), ಉಮೇಶ್ ಚಾರ್, ಆರ್. ರಂಗಪ್ಪ, ಸೀತಾರಾಮ್ ಮಾಗಡಿ, ಬಿ. ರಂಗಸ್ವಾಮಿ, ಚಂದ್ರ ಶೇಖರ್, ರಂಗನಾಥ, ಸಿದ್ದಪ್ಪಾಜಿ, ವೀರಭದ್ರಯ್ಯ, ಗಣೇಶ್, ಸಂದೀಪ್, ಮಣಿಕಂಠ, ಚಂದ್ರಶೇಖರ್, ಸತೀಶ್ ಭಾಗವಹಿಸಿದ್ದರು.

## ಅರ್ಜಿ ಆಹ್ವಾನ

**ರಾಮನಗರ:** ಹಾರೋಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಶೇ. 24.10, ಶೇ 7.25 ಹಾಗೂ ಶೇ. 5ರ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಇತರೆ ಬಡ ಜನರು ಮತ್ತು ವಿಕಲಚೇತನ ವರ್ಗಕ್ಕೆ ಸೇರಿದ ಅರ್ಹ ಫಲಾನುಭವಿಗಳಿಂದ ಮುಖ್ಯಮಂತ್ರಿಗಳ ಅಮೃತ್ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ ಹಂತ-4 ರಡಿ ವಿವಿಧ ಕಾರ್ಯಕ್ರಮಗಳಡಿ ವ್ಯಕ್ತಿಗಳ ಸವಲತ್ತುಗಳನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹರು ಹಾರೋಹಳ್ಳಿ ಪಟ್ಟಣ ಪಂಚಾಯಿತಿಯ ಕಚೇರಿಯ ಟಪಾಲು/ಸಾರ್ವಜನಿಕ ಕುಂದು-ಕೊರತೆ ದೂರು ಘಟಕದಿಂದ ಅರ್ಜಿ ಪಡೆದು ಇದೇ ಆ. 30ರ ಸಂಜೆ 5 ಗಂಟೆಯೊಳಗೆ ಸಮಗ್ರ ಮಾಹಿತಿಯನ್ನು ಭರ್ತಿ ಮಾಡಿ, ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಪಟ್ಟಣ ಪಂಚಾಯಿತಿ ಕಾರ್ಯಾಲಯ, ಹಾರೋಹಳ್ಳಿ, ರಾಮನಗರ ಜಿಲ್ಲೆ ಈ ಕಚೇರಿಯನ್ನು ಸಂಪರ್ಕಿಸುವಂತೆ ಹಾರೋಹಳ್ಳಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೂ ಸುಧಾರಣೆ ಕಾಯ್ದೆ ಜಾರಿ ಮಾಡಿದ ಜೀವಂತ ನಾಯಕ ಅರಸು

**ಚಿಕ್ಕಬಳ್ಳಾಪುರ:** ಭಾರತ ದೇಶದಲ್ಲಿ ಪ್ರಪ್ರಥಮ ಬಾರಿಗೆ ಭೂ ಸುಧಾರಣೆ ಕಾಯ್ದೆಯನ್ನು ಜಾರಿಗೆ ತಂದ ಮೊದಲ ಮುಖ್ಯ ಮಂತ್ರಿ ದೇವರಾಜ ಅರಸು ಎಂದು ಅಪರ ಜಿಲ್ಲಾಧಿಕಾರಿ ಡಾ. ಎನ್ ಭಾಸ್ಕರ್ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ನಗರದ ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಡಿ. ದೇವರಾಜ ಅರಸು ರವರ 109ನೇ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಅರಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಉಳುವವನೇ ಭೂಮಿಯ ಒಡೆಯನೆಂದು ದೇವರಾಜ ಅರಸು ಅವರು ಭೂ ಸುಧಾರಣೆ ತಂದರು. ಈ ಕಾರ್ಯವನ್ನು ಬೇರೆ ಯಾವುದೇ ನಾಯಕರು, ಬೇರೆ ರಾಜ್ಯಗಳಲ್ಲಿ ಜಾರಿಗೆ ತಂದಿದ್ದರೆ ರಾಜಕೀಯವಾಗಿ ಸಂಕಷ್ಟಕ್ಕೆ ಸಿಲುಕುತ್ತಿದ್ದರು. ಅಂತಹ ದಿಟ್ಟ ಆಡಳಿತ ಕ್ರಮ ಕೈಗೊಂಡ ಧೀಮಂತ ಮತ್ತು ಜೀವಂತ ನಾಯಕ ದೇವರಾಜ ಅರಸು ಸಾಮಾಜಿಕ ಹರಿಕಾರರಾಗಿ, ಎಲ್ಲರಿಗೂ ಸಮಾನತೆಯನ್ನು ನೀಡಲು ಶಿಕ್ಷಣ ಮತ್ತು ರಾಜಕೀಯ ಅಧಿಕಾರ ನೀಡಿದಾಗ ಮಾತ್ರ ಸಾಧ್ಯ ಎಂಬುದನ್ನು ಅರಿತ ಅರಸು ರವರು ಆ ನಿಟ್ಟಿನಲ್ಲಿ ಹಲವಾರು ಕ್ರಮಗಳನ್ನು ಅನುಷ್ಠಾನ ಮಾಡಿದರು.ಪ್ರಸ್ತುತದ ಆಡಳಿತದ ಕ್ರಮಗಳಲ್ಲಿ ಅರಸುರವರ ಕೊಡುಗೆಗಳೇ ಹೆಚ್ಚು. ವಿದ್ಯಾರ್ಥಿಗಳು ಅವರ ಪುಸ್ತಕಗಳನ್ನು ಓದಬೇಕು ಹಾಗೂ ಅವರ ಸಾಧನೆಗಳನ್ನು ಅರಿತು ಅವರ ವಿಚಾರಗಳನ್ನು ಜೀವನದಲ್ಲಿ ರೂಢಿಸಿಕೊಳ್ಳಬೇಕು ಎಂದರು.

ಕನ್ನಡ ಸಾಹಿತಿ ಪರಿಷತ್ ಜಿಲ್ಲಾಧ್ಯಕ್ಷ ಕೋಡಿರಂಗಪ್ಪ ರವರು ಮಾತನಾಡಿ, ಅರಸು ರವರಿಂದ 70ರ ದಶಕದಲ್ಲಿ ಕರ್ನಾಟಕ ಸುವರ್ಣ ಯುಗಕ್ಕೆ ಸಾಕ್ಷಿಯಾಯಿತು.



ಕರ್ನಾಟಕ ಪುನರ್ ನಿರ್ಮಾಣದಲ್ಲಿ ಅವರ ಕ್ರಾಂತಿಕಾರಕ ದಿಟ್ಟ ಆಡಳಿತ ಕ್ರಮಗಳು ಜನಮಾನಸದಲ್ಲಿ ಸುಧಾರಣೆ ತಂದವು, ಜೀತಪದ್ಧತಿ, ಬಾಲಕಾರ್ಮಿಕ ಪದ್ಧತಿ, ಮಲಹೊರುವ ಪದ್ಧತಿಗಳನ್ನು ನಿಲ್ಲಿಸಲು ಕಟ್ಟುನಿಟ್ಟಿನ ಕ್ರಮ ಜಾರಿಗೆ ತಂದರು. ಭೂಸುಧಾರಣೆ ಕಾಯ್ದೆ ಜಾರಿಗೆ ತಂದು ಉಳುವವನಿಗೆ ಭೂಮಿ ಕೊಟ್ಟರಲ್ಲದೆ, ಕೊಟ್ಟ ಭೂಮಿ ರಕ್ಷಣೆಗೆ ಭೂ ನ್ಯಾಯ ಮಂಡಳಿ ಸ್ಥಾಪಿಸಿದರು. ಬಡವರು, ದಲಿತರು, ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ತೊಡೆದು ಹಾಕಿ ಸಮ ಸಮಾಜ ನಿರ್ಮಿಸಲು ಯಾವುದೇ ಹೊಸ ಕಾನೂನು ತರಲು ಸಿದ್ದ ಅಲ್ಲದೆ ಅವರಿಗೆ ಮಾರಕ ವಾಗಿರುವ ಕಾನೂನುಗಳನ್ನು ತೆಗೆದು ಹಾಕಲು ಸಿದ್ದಿನಿದ್ದೇನೆ ಎಂದು ಬದ್ದವಾಗಿದ್ದವರು ಅರಸು ಎಂದು ಬಣ್ಣಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮುನಿರತ್ನಮ್ಮ ಅವರು ಮಾತನಾಡಿ, ಸಮಾಜದಲ್ಲಿ ಹಲವಾರು ಪಿಡುಗುಗಳನ್ನು ತೊಡೆದು ಹಾಕುವ ಜೊತೆಗೆ ಭೂ ಸುಧಾರಣೆ ಕಾಯ್ದೆ ಯನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದ ಜೀವಂತ ನಾಯಕ ದೇವರಾಜ ಅರಸು ರವರು ಅವರ ಆಡಳಿತ ಸುಧಾರಣೆಯಿಂದ ನಾನು ಈ ಸ್ಥಾನದಲ್ಲಿ ಇದ್ದೇನೆ.ಅವರ ಕೊಡುಗೆ ಯಿಂದ ಜಿಲ್ಲೆಯಲ್ಲಿ 58 ವಿದ್ಯಾರ್ಥಿ ನಿಲಯಗಳು ನಡೆಯುತ್ತಿದ್ದು 6123 ಮಕ್ಕಳಿಗೆ ಉಚಿತ ಊಟ,ವಸತಿ ಮತ್ತು ಶಿಕ್ಷಣ ದೊರಕುತ್ತಿದೆ.3 ವಸತಿ ಶಾಲೆಗಳಿವೆ.30 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಜಿಲ್ಲೆಯಲ್ಲಿ ವಿದ್ಯಾರ್ಥಿ ವೇತನ ಸಿಗುತ್ತಿದೆ. ಇವರ ಜಯಂತಿ ಒಂದು ದಿನಕ್ಕೆ ಮತ್ತು ವರ್ಗಕ್ಕೆ ಸೀಮಿತ ಆಗಬಾರದು. ಎಲ್ಲ ವರ್ಗಗಳ ನಿತ್ಯೋತ್ಸವ ಆಗಬೇಕು ಎಂದು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಅತಿ ಹೆಚ್ಚು ಅಂಕಗಳನ್ನು ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ತಹಸೀಲ್ದಾರ್ ರವಿ, ಪೌರಾಯುಕ್ತ ಉಮಾ ಶಂಕರ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಮುನೇಗೌಡ, ಉಪ್ಪಾರ್ ಸಂಘದ ವೆಂಕಟೇಶ್, ಯಾದವ ಸಂಘದ ಅಧ್ಯಕ್ಷ ಆರ್. ವೆಂಕಟೇಶ್, ಎನ್ ಶ್ರೀನಿವಾಸ್, ರಾಜೇಶ್ವರಿ, ಸೈಯದ್ ಇಸ್ಮೈಲ್, ಸಮುದಾಯದ ಪದಾಧಿಕಾರಿಗಳು ಹಾಗೂ ಮುಖಂಡರು, ಹಾಸ್ಟೆಲ್ ಮತ್ತು ವಸತಿ ಶಾಲೆಗಳ ವಾರ್ಡನ್ ಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅದ್ದೂರಿ ಮೆರವಣಿಗೆ ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಚಿಕ್ಕಬಳ್ಳಾಪುರ ನಗರದ ಜೈ ಭೀಮ್ ಹಾಸ್ಟೆಲ್ ನಿಂದ ಪ್ರಾರಂಭ ವಾದ ದೇವರಾಜ ಅರಸು ರವರ ಪಲ್ಲಕ್ಕಿ ಮೆರವಣಿಗೆ, ಬೃಹತ್ ಭಾವಚಿತ್ರ ಪ್ರದರ್ಶನ, ಕುಂಭ ಮೇಳ, ಕಲಾತಂಡಗಳೊಂದಿಗೆ ಅದ್ದೂರಿ ಮೆರವಣಿಗೆಯು ನಗರದ ಮುಖ್ಯ ಬೀದಿಗಳಲ್ಲಿ ಮೂಲಕ ಅಂಬೇಡ್ಕರ್ ಭವನದವರೆಗೆ ಸಾಗಿತು.

# ಮಹಾತ್ಮ ಗಾಂಧೀಜಿ 155ನೇ ಜಯಂತಿ : ಜಿಲ್ಲಾ, ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

**ಚಾಮರಾಜನಗರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಅಕ್ಟೋಬರ್ 2ರಂದು ಆಚರಿಸಲಾಗುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ವಿವಿಧ ವಿ?ಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಲಾಗಿದೆ. ವಿಜೇತರಿಗೆ ರಾಜ್ಯಮಟ್ಟದಲ್ಲಿ ಪ್ರಥಮ 31 ಸಾವಿರ ರೂ., ದ್ವಿತೀಯ 21 ಸಾವಿರ ರೂ. ಮತ್ತು ತೃತೀಯ 11 ಸಾವಿರ ರೂ. ಹಾಗೂ ಜಿಲ್ಲಾಮಟ್ಟದಲ್ಲಿ ಪ್ರಥಮ 3 ಸಾವಿರ ರೂ., ದ್ವಿತೀಯ 2 ಸಾವಿರ ರೂ. ಮತ್ತು ತೃತೀಯ 1 ಸಾವಿರ ರೂ. ಬಹುಮಾನ ನೀಡಲಾಗುವುದು.

ಪ್ರೌಢ ಶಾಲಾ ವಿಭಾಗದಲ್ಲಿ 1. ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ, 2. ಗಾಂಧೀಜಿಯವರ ವಿಚಾರದಲ್ಲಿ ಸತ್ಯಾಗ್ರಹ, 3. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, 4. ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ, ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಪೂರ್ವ ಶಿಕ್ಷಣ ವಿಭಾಗದಲ್ಲಿ 1. ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ, 2. ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು, 3. ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ, 4. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದಲ್ಲಿ 1. ಇಂದಿನ ಪ್ರಜಾಪ್ರಭುತ್ವದಲ್ಲಿ ಸತ್ಯಾಗ್ರಹದ ಮಹತ್ವ, 2. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು, 3. ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು, 4. ಗಾಂಧೀಜಿಯವರ ವಿಚಾರದಲ್ಲಿ ಸತ್ಯದ ಪರಿಕಲ್ಪನೆ, 5. ಗಾಂಧೀಜಿ ಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು. ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಐದು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ಸೆಪ್ಟೆಂಬರ್ 6 ರೊಳಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಜಿಲ್ಲಾಡಳಿತದ ಸಹಯೋಗದೊಂದಿಗೆ ಸ್ಪರ್ಧೆ ಏರ್ಪಡಿಸಿ ಸೆಪ್ಟೆಂಬರ್ 10ರೊಳಗಾಗಿ ಮೌಲ್ಯಮಾಪನ ಮಾಡಿ ವಿಜೇತರ ವಿವರಗಳು ಹಾಗೂ ಪ್ರಬಂಧಗಳನ್ನು ಕೇಂದ್ರ ಕಚೇರಿಗೆ ಕಳುಹಿಸಲಿದೆ. ಜಿಲ್ಲಾಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರುಮೌಲ್ಯಮಾಪನ ಮಾಡಿ, ರಾಜ್ಯಮಟ್ಟದ ಫಲಿತಾಂಶ ಘೋಷಿಸಲಾಗುವುದು.

ಪ್ರತಿ ವಿಭಾಗದಲ್ಲಿನ ಅತ್ಯುತ್ತಮವಾದ ಮೂರು 3 ಪ್ರಬಂಧಗಳಿಗೆ ಅಕ್ಟೋಬರ್ 2 ರಂದು ಜಿಲ್ಲಾ ಮಟ್ಟದ ಗಾಂಧಿ ಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುವುದು.

ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು, ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಆಕರವಾಗಿ ಬಳಸಿದ ಪರಾಮರ್ಶನ/ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ/ಆಧಾರ ಗ್ರಂಥಗಳು/ ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ್ ಸಲಹೆ

# ಮಕ್ಕಳ ರಕ್ಷಣೆ ಎಲ್ಲರ ಜವಾಬ್ದಾರಿ

**ಚಾಮರಾಜನಗರ:** ಮಕ್ಕಳ ರಕ್ಷಣೆ ಎಲ್ಲರ ಜವಾಬ್ದಾರಿ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರಾದ ಈಶ್ವರ್ ಅವರು ತಿಳಿಸಿದರು.

ಹೊಂಡರಬಾಳು ನವೋದಯ ಶಾಲೆಯಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಇಲಾಖೆ, ಹೊಂಡರಬಾಳು ಜವಾಹರ್ ನವೋದಯ ಶಾಲೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಕ್ಕಳ ಹಬ್ಬ ಮತ್ತು ಬೇಟಿ ಪಡಾವೋ ಬೇಟಿ ಬಚಾವೋ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಉತ್ತಮ ಸಮಾಜ ಕಟ್ಟುವ ನಿಟ್ಟಿನಲ್ಲಿ ಮಕ್ಕಳನ್ನು ಮೌಲ್ಯಯುತ ಶಿಕ್ಷಣ ನೀಡಿ ಬೆಳೆಸಬೇಕಿದೆ. ತಾಯಂದಿರಿಗೆ ಮಕ್ಕಳಿಗಿಂತ ದೊಡ್ಡ ಆಸ್ತಿ ಬೇರೊಂದಿಲ್ಲ. ಹೀಗಾಗಿ ಪೋಷಕರು ಸದಾ ಮಕ್ಕಳನ್ನು ಪ್ರೀತಿ, ಗೌರವದಿಂದ ಕಾಣಬೇಕು. ಎಳೆವಯಸ್ಸಿನಲ್ಲೇ ಮಕ್ಕಳಿಗೆ ಉನ್ನತ ಹುದ್ದೆಗೆ ಏರುವಂತಹ ಕನಸುಗಳನ್ನು ರೂಪಿಸಬೇಕು. ವಿದ್ಯಾರ್ಥಿಗಳು ಟಿ.ವಿ, ಮೊಬೈಲ್ ಗಳ ದಾಸರಾಗದೆ ಶಿಕ್ಷಣದ ಕಡೆಗೆ ಹೆಚ್ಚಿನ ಗಮನ ನೀಡಬೇಕು ಎಂದು ತಿಳಿಸಿದರು.

ಸಮಾಜದಲ್ಲಿ ಭ್ರೂಣ ಹತ್ಯೆ, ವರದಕ್ಷಿಣೆ, ಬಾಲ್ಯವಿವಾಹ, ಅತ್ಯಾಚಾರಗಳಿಂದ ಮಹಿಳೆಯರಿಗೆ ಇಂದಿನ ಆಧುನಿಕ ಯುಗದಲ್ಲೂ ಅಭದ್ರತೆ ಕಾಡುತ್ತಿದೆ. ಲೈಂಗಿಕ ದೌರ್ಜನ್ಯ ಶಿಕ್ಷಾರ್ಹ ಅಪರಾಧ ಎಂದು ತಿಳಿದಿದ್ದರೂ



ಅಪರಾಧಗಳಾಗುತ್ತಿವೆ. ಜನರಿಗೆ ಶಿಕ್ಷೆಯ ತೀವ್ರತೆಯ ಬಗ್ಗೆ ಅರಿವು ಇಲ್ಲವೇ ಎಂಬ ಸಂದೇಹ ಮೂಡುತ್ತದೆ ಎಂದರು.

ಪೋಕ್ಸೋ ಕಾಯ್ದೆ ಸೇರಿದಂತೆ ಮಕ್ಕಳ ರಕ್ಷಣೆಯ ಕಾನೂನಿನ ಬಗ್ಗೆ ಸಾರ್ವಜನಿಕರು, ಪೋಷಕರು, ಅಧಿಕಾರಿಗಳು ಹಾಗೂ ಶಿಕ್ಷಕರಿಗೆ ಅರಿವು ಮೂಡಿಸುವ ಅವಶ್ಯಕತೆ ಇದೆ. ಹೆಣ್ಣು ಮಗುವಿನ ಸುರಕ್ಷತೆ ಮತ್ತು ಶಿಕ್ಷಣದ ಬಗ್ಗೆ ಪ್ರತಿಯೊಬ್ಬರೂ ಚಿಂತನೆ ನಡೆಸಬೇಕು. ಮಕ್ಕಳು ತಮಗೆ ಸಮಸ್ಯೆ ಆದಾಗ ಮಕ್ಕಳ ಸಹಾಯವಾಣಿ (1098) ಕರೆಮಾಡಿ ಎಂದು ನ್ಯಾಯಾಧೀಶರಾದ ಈಶ್ವರ್ ಅವರು ತಿಳಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಮಂಜುನಾಥ್ ಅವರು ಮಾತನಾಡಿ ಬೇಟಿ ಬಚಾವೋ ಬೇಟಿ ಪಡಾವೋ ಎಂಬುದು ಒಂದು ಜಾಗೃತಿ ಅಭಿಯಾನವಾಗಿದ್ದು, ಹೆಣ್ಣು ಮಕ್ಕಳನ್ನು ಉಳಿಸುವುದು ಮತ್ತು ಅವರಿಗೆ ಶಿಕ್ಷಣ ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ. ಅಭಿಯಾನವು ಹೆಣ್ಣು ಮಗುವನ್ನು ರಕ್ಷಿಸುವ ಮತ್ತು ಹೆಣ್ಣುಮಕ್ಕಳ ಜನನ ಪ್ರಮಾಣವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಹೆಣ್ಣು ಭ್ರೂಣಹತ್ಯೆ ತಡೆಯಬೇಕು, ಹೆಣ್ಣುಮಕ್ಕಳ ಮೇಲಿನ ಶೋಷಣೆಗೆ ಕಡಿವಾಣ ಹಾಕಿ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಬೇಕಿದೆ ಎಂದರು. ಜಿಲ್ಲಾ ಬಾಲನ್ಯಾಯ ಮಂಡಳಿ ಸದಸ್ಯರಾದ ಟಿ.ಜೆ. ಸುರೇಶ್ ಅವರು ಮಾತನಾಡಿ ಎಲ್ಲಿಯವರೆಗೆ ಹೆಣ್ಣು ಭ್ರೂಣಹತ್ಯೆ ಮಹಾಪಾಪ ಎಂದು ತಾಯಿಯಂದಿರಲ್ಲಿ ಅರಿವು ಮೂಡುವುದಿಲ್ಲವೋ ಅಲ್ಲಿಯವರೆಗೆ ಲಿಂಗಾನುಪಾತದಲ್ಲಿ ಸುಧಾರಣೆ ಸಾಧ್ಯವಿಲ್ಲ. ಗರ್ಭಪೂರ್ವ ಮತ್ತು ಪ್ರಸವಪೂರ್ವ ಲಿಂಗಪತ್ತೆ ಮಾಡುವುದು ಹಾಗೂ ಹೆಣ್ಣುಭ್ರೂಣ ಹತ್ಯೆ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಇದನ್ನು ಉಲ್ಲಂಘಿಸಿದಲ್ಲಿ ಮೂರು ವರ್ಷಗಳವರೆಗೆ ಜೈಲುಶಿಕ್ಷೆಯ ಜೊತೆಗೆ ಹತ್ತು ಸಾವಿರ ರೂ. ದಂಡ ವಿಧಿಸಲಾಗುತ್ತದೆ ಎಂದು ತಿಳಿಸಿದರು.

ಜವಾಹರ್ ನವೋದಯ ಶಾಲೆಯ ಪ್ರಾಂಶುಪಾಲರಾದ ಪ್ರೀತಾಜೇ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

# 27 ರಂದು ಜಿಲ್ಲಾ ಮಟ್ಟದ ಮ್ಯಾರಥಾನ್ ಸ್ಪರ್ಧೆ

**ಕೋಲಾರ:** ಕೋಲಾರ ನಗರದ ಪ್ರವಾಸಿ ಮಂದಿರ ಮುಂಭಾಗದಲ್ಲಿ ಆಗಸ್ಟ್ 27 ರಂದು ಜಿಲ್ಲಾ ಮಟ್ಟದ ಮ್ಯಾರಥಾನ್ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಅದರಂತೆ ಸ್ಪರ್ಧೆಯು ಬೆಳಿಗ್ಗೆ 6.00 ಗಂಟೆಗೆ ಪ್ರಾರಂಭವಾಗುವುದು.

ಈ ಸ್ಪರ್ಧೆಯ ಮಾರ್ಗವು ಪ್ರವಾಸಿ ಮಂದಿರದಿಂದ ಪ್ರಾರಂಭಗೊಂಡು-ಬಂಗಾರಪೇಟೆ ಸರ್ಕಲ್-ಖಾಸಗಿ ಬಸ್ ನಿಲ್ದಾಣ, ಮೆಕ್ಕೆ ಸರ್ಕಲ್-ಸರ್ಕಾರಿ ಬಸ್ ನಿಲ್ದಾಣ-ಕ್ಲಾಕ್ ಟವರ್-ಡೂಂ ಲೈಟ್ ಸರ್ಕಲ್-ಎಸ್.ಎನ್.ಆರ್ ಆಸ್ಪತ್ರೆ, ಪ್ರವಾಸಿ ಮಂದಿರ ಮುಂಭಾಗದಲ್ಲಿ ಅಂತ್ಯಗೊಳ್ಳುವುದು.

ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಯ ಕಾಲೇಜಿನ ಗುರುತಿನ ಪತ್ರ ಕಡ್ಡಾಯವಾಗಿರುತ್ತದೆ ಬೆ.5.30ಕ್ಕೆ ಪ್ರವಾಸಿ ಮಂದಿರಕ್ಕೆ ಆಗಮಿಸುವುದು. 5ಕಿ.ಮೀ ಮ್ಯಾರಥಾನ್ ಸ್ಪರ್ಧೆ ನಡೆಯುವುದು. 17 ರಿಂದ 25 ವರ್ಷದ ಜಿಲ್ಲೆಯ ಕಾಲೇಜು ವಿದ್ಯಾರ್ಥಿಗಳು ಮಾತ್ರ ಮ್ಯಾರಥಾನ್‌ನಲ್ಲಿ ಭಾಗವಹಿಸುವುದು. ಪ್ರತಿ ಕಾಲೇಜಿನಿಂದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿ ಭಾಗವಹಿಸುವುದು. ಪ್ರತ್ಯೇಕವಾಗಿ ವಿಜೇತ ವಿದ್ಯಾರ್ಥಿಗಳಿಗೆ ಮೊದಲನೇ ಬಹುಮಾನ ರೂ.5000, ಎರಡನೇ ಬಹುಮಾನ ರೂ.3500, ಮೂರನೇ ಬಹುಮಾನ ರೂ.2500 ಹಾಗೂ 8 ಸಮಾಧಾನಕರ ಬಹುಮಾನ 4ಜನ ತಲಾ ರೂ.1000 ಗಳನ್ನು ನೀಡಲಾಗುವುದು. ಆಗಸ್ಟ್ 20 ರಿಂದ ಆನ್ ಲೈನ್‌ನಲ್ಲಿ ವಿದ್ಯಾರ್ಥಿಗಳು ದಾಖಲಾತಿ ಮಾಡುವುದು. ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಬಹುದುಯೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ಸ್ನೇಹಿಯಾಗಿ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬ ಆಚರಿಸಿ

**ಚಾಮರಾಜನಗರ:** ಸ್ವರ್ಣಗೌರಿ ಹಾಗೂ ಗಣೇಶಚತುರ್ಥಿ ಹಬ್ಬವು ಸಮೀಸುತ್ತಿದ್ದು, ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣದ ವಿಗ್ರಹಗಳನ್ನು ತಯಾರಿಸಬಾರದು. ಪಿಒಪಿ, ಬಣ್ಣ ಲೇಪಿತ ವಿಗ್ರಹಗಳನ್ನು ಕೆರೆ, ಇನ್ನಿತರ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ. ಸ್ವರ್ಣಗೌರಿ ಹಾಗೂ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬದ ಸಂದರ್ಭದಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣದ ವಿಗ್ರಹಗಳನ್ನು ತಯಾರಿಸಬಾರದು. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಲ ಮಾಲಿನ್ಯ (ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ 1974ರ ಪ್ರಕಾರ ಕಲಂ 33(ಎ) ಅನ್ವಯ ರಾಜ್ಯದ ಯಾವುದೇ ಜಲ ಮೂಲಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣ ಲೇಪಿತ ವಿಗ್ರಹಗಳನ್ನು ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಆದೇಶವನ್ನು ಉಲ್ಲಂಘಿಸಿದ್ದಲ್ಲಿ ಐ.ಪಿ.ಎಸ್ ಸೆಕ್ಷನ್ 1860ರ ಪ್ರಕಾರ ಕ್ರಮ ತೆಗೆದುಕೊಳ್ಳಲಾಗುವುದು. ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಒ.ಪಿ) ಮತ್ತು ಬಣ್ಣದ ವಿಗ್ರಹಗಳನ್ನು ಸ್ಥಾಪಿಸಿ ಪೂಜಿಸಿದ ನಂತರ ಕೆರೆ, ಬಾವಿ ಹಾಗೂ ಇನ್ನಿತರೆ ನೈಸರ್ಗಿಕ ಜಲಮೂಲಗಳಿಗೆ ವಿಸರ್ಜಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ.



ಇದರಿಂದ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಸಾರ್ವಜನಿಕ ಆರೋಗ್ಯಕ್ಕೂ ದಕ್ಕೆ ಉಂಟಾಗುತ್ತದೆ. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಸದರಿ ಹಬ್ಬದ ಆಚರಣೆಯಿಂದ ನೈಸರ್ಗಿಕ ಜಲ ಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ ದಿನಾಂಕ 20.07.2016 ರಂದು ಅಧಿಸೂಚನೆ ಹೊರಡಿಸಿದ್ದು, ಪ್ಲಾಸ್ಟರ್ ಆಫ್ ಪ್ಯಾರಿಸ್(ಪಿ.ಒ.ಪಿ) ಮತ್ತು ಬಣ್ಣ ಲೇಪಿತವಾದ ವಿಗ್ರಹಗಳನ್ನು ಇನ್ನು ಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೆ ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ನೈಸರ್ಗಿಕ ಜಲಸಂಪ್ಮೂಲಗಳನ್ನು ಸಂರಕ್ಷಿಸಲು ಸಹಕರಿಸಬೇಕಾಗಿ ಕೋರಿದೆ. ಗೌರಿ-ಗಣೇಶ ಹಬ್ಬದ ಸಂದರ್ಭದಲ್ಲಿ ಬಣ್ಣ ರೈಹಿತ ಮಣ್ಣಿನ, ನೈಸರ್ಗಿಕ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ ತದನಂತರ ನಗರಸಭೆ, ಪುರಸಭೆ ವತಿಯಿಂದ ನಿಗಧಿಪಡಿಸಿರುವ ಸ್ಥಳಗಳಲ್ಲಿ ಮೂರ್ತಿಗಳನ್ನು ವಿಸರ್ಜಿಸಬೇಕು. ಮೂರ್ತಿಗಳನ್ನು ವಿಸರ್ಜಿಸುವ ಸಂದರ್ಭದಲ್ಲಿ ಹಸಿ ಕಸ (ಹೂ, ಹಣ್ಣು, ಬಾಳೆ ಕಂಬ, ಮಾವಿನ ತೋರಣ ಇತ್ಯಾದಿ ಆಲಂಕಾರಿಕ ವಸ್ತುಗಳು) ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೇ ನಗರಸಭೆ, ಪುರಸಭೆಯ ಕಸ ಸಂಗ್ರಹಣ ವಾಹನಕ್ಕೆ ನೀಡಬೇಕು. ಸಾರ್ವಜನಿಕವಾಗಿ ನಡೆಸುವ ಗಣೇಶಮೂರ್ತಿಯ ಉತ್ಸವದ ಚಪ್ಪರಕ್ಕೆ ಪರಿಸರ ಸ್ನೇಹಿ ವಸ್ತುಗಳನ್ನೇ ಬಳಸಬೇಕು. ನಿಷೇಧಿತ ಪ್ಲಾಸ್ಟಿಕ್ ವಸ್ತುಗಳ ಬಳಕೆ ಮಾಡಬಾರದು ಎಂದು ತಿಳಿಸಿದ್ದಾರೆ.

# ಎನ್.ಎಂ.ಎಂ.ಎಸ್ ಪರೀಕ್ಷೆಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನ

**ಚಾಮರಾಜನಗರ:** ನವದೆಹಲಿಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮಾರ್ಗಸೂಚಿಯಂತೆ ಎನ್‌ಎಂಎಂಎಸ್ ಪರೀಕ್ಷೆಯನ್ನು 2024ನೇ ಡಿಸೆಂಬರ್ 8 ರಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಎನ್‌ಎಂಎಂಎಸ್ ಪರೀಕ್ಷೆಯನ್ನು ಸರ್ಕಾರಿ, ಅನುದಾನಿತ ಮತ್ತು ಸ್ಥಳೀಯ ಸಂಸ್ಥೆ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿದ್ದು, ವಿದ್ಯಾರ್ಥಿವೇತನ ನೀಡುವುದು ಈ ಯೋಜನೆಯ ಉದ್ದೇಶವಾಗಿದೆ. ಅರ್ಜಿ ಸಲ್ಲಿಕೆಯು ಈಗಾಗಲೇ ಪ್ರಾರಂಭವಾಗಿದ್ದು, ಸದರಿ ಪರೀಕ್ಷೆಯ ಆನ್‌ಲೈನ್ ಅರ್ಜಿಯು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ವೆಬ್‌ಸೈಟ್ https://kseab.karnataka.gov.in/ ನಲ್ಲಿ ಲಭ್ಯವಿದೆ. ಶಾಲಾ ಮುಖ್ಯ ಶಿಕ್ಷಕರು ತಮ್ಮ ಶಾಲೆಯ ವಿದ್ಯಾರ್ಥಿಗಳ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಮಂಡಳಿಯ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಎನ್‌ಎಂಎಂಎಸ್ ಲಾಗಿನ್‌ನಲ್ಲಿ ಸಲ್ಲಿಸಬೇಕು. ಆನ್ ಲೈನ್ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 5 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಂಡಳಿಯ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಸುತ್ತೋಲೆಯನ್ನು ಗಮನಿಸಬಹುದು ಹಾಗೂ ಕೆ.ಎಸ್.ಕ್ಯು.ಎ.ಎ.ಸಿ ಕಚೇರಿ ದೂ.ಸಂ 080-23341615 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ 2024-25ನೇ ಸಾಲಿನ ಅರಿವು (ರಿನ್ಯೂವಲ್) ವಿದ್ಯಾಭ್ಯಾಸ ಸಾಲ ಯೋಜನೆಯಡಿ ವಿದ್ಯಾಭ್ಯಾಸ ಸಾಲವನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುತ್ತದೆ. ಈ ಸಾಲವನ್ನು ಮುಸ್ಲಿಂ, ಕ್ರಿಶ್ಚಿಯನ್, ಜೈನ್ಸ್, ಆಂಗ್ಲೋ ಇಂಡಿಯನ್ ಸಮುದಾಯದವರಿಗೆ ಹೊಸದಾಗಿ (ಸಿಇಟಿ/ಡಿ-ಸಿಇಟಿ/ಪಿಜಿ-ಸಿಇಟಿ/ನೀಟ್ ಮುಖಾಂತರ) ಮೂಲಕ ಪದವಿ ಮತ್ತು ಎಂ.ಬಿ.ಬಿ.ಎಸ್/ ಎಂ.ಡಿ.ಎಸ್/ ದಂತ ವೈದ್ಯಕೀಯ/ ಆಯುಷ್(ಬಿ.ಆಯುಷ್, ಎಂ.ಆಯುಷ್)/ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್ /ಬ್ಯಾಚುಲರ್ ಆಫ್ ಇಂಜಿನಿಯರಿಂಗ್/ಬ್ಯಾಚುಲರ್ ಆಫ್ ಟೆಕ್ನಾಲಜಿ ಎಲ್.ಎಲ್.ಬಿ ಕೋರ್ಸ್ಗಳಿಗೆ ಶಿಕ್ಷಣ ವ್ಯಾಸಂಗ ಮಾಡಬಯಸುವ ವಿದ್ಯಾರ್ಥಿಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸುವಾಗ ನಿಗಮದಿಂದ ಈ ಹಿಂದಿನ ವರ್ಷದಲ್ಲಿ ಪಡೆದಿರುವ ಸಾಲದ ಮೊತ್ತದ ಶೇ.12% ರಷ್ಟು ಮೊತ್ತವನ್ನು ಆನ್ಲೈನ್ ಮುಖಾಂತರ ಪಾವತಿಸಬೇಕಾಗಿರುತ್ತದೆ. ಮುಂದುವರೆದು ಈ ಹಿಂದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿದ್ದು ಬೇರೆ ಬೇರೆ ವರ್ಷಗಳಲ್ಲಿ ವಿಧ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಅರಿವು ವಿದ್ಯಾಭ್ಯಾಸ ಸಾಲ ಪಡೆಯದಿದ್ದಲ್ಲಿ ಅಂತಹ ಆಸಕ್ತಿ ವಿದ್ಯಾರ್ಥಿಗಳು https://kmdconline.karnataka.gov.inವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಅಕ್ಟೋಬರ್ 31 ರೊಳಗೆ ಆನ್ಲೈನ್ನಲ್ಲಿ ಭರ್ತಿಮಾಡಿದ ಅರ್ಜಿಯನ್ನು ಪ್ರಿಂಟ್ ತೆಗೆದು ಇತರೆ ದಾಖಲಾತಿಗಳೊಂದಿಗೆ ಮಂಡ್ಯ ಜಿಲ್ಲಾ ಕಛೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ 08232-220186 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಕರ್ನಾಟಕ ಅಲ್ಪಸಂಖ್ಯಾತರ ಅಭಿವದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ಮಂಡ್ಯ:** ಸಾಮಾಜಿಕ ನ್ಯಾಯ ಸಚಿವಾಲಯ ಮತ್ತು ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆ ವತಿಯಿಂದ 2024-25 ನೇ ಸಾಲಿಗೆ ನ್ಯಾಷನಲ್ ಇ ಸ್ಕಾಲರ್ ಶೀಪ್ ಯೋಜನೆಯಡಿ ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಪ್ರೀ ಮೆಟ್ರಿಕ್ ವಿದ್ಯಾರ್ಥಿಗಳಿಗೆ ಆಗಸ್ಟ್ 31 ಹಾಗೂ ಪೋಸ್ಟ್ ಮೆಟ್ರಿಕ್ ಮತ್ತು ಟಾಪ್ ಕ್ಲಾಸ್ ವಿದ್ಯಾರ್ಥಿಗಳಿಗೆ ಅಕ್ಟೋಬರ್ 31 ಕೊನೆಯ ದಿನಾಂಕವಾಗಿದ್ದು, https://scholarship.gov.in/ವೈಬ್ ಸೈಟ್ನ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿಕಲ ಚೇತನರ ವಿದ್ಯಾರ್ಥಿಗಳು NSP (National Scholarship Portal) ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಎಲ್ಲಾ ಶಾಲಾ ಕಾಲೇಜುಗಳ ಮುಖ್ಯಸ್ಥರುಗಳನ್ನು ಸಂಪರ್ಕಿಸುವುದು ಎಂದು ಮಂಡ್ಯ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** 2024-25 ನೇ ಸಾಲಿನಲ್ಲಿ ಮಹಾರಾಷ್ಟ್ರ ರಾಜ್ಯದ ನಾಗಪುರದಲ್ಲಿನ ದೀಕ್ಷಾಭೂಮಿಯಲ್ಲಿ ನಡೆಯುವ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ಅಕ್ಟೋಬರ್ 10 ರಿಂದ 14ರವರೆಗೆ ಪ್ರತಿ ವರ್ಷದಂತೆ ಕರ್ನಾಟಕ ರಾಜ್ಯದಿಂದ ಡಾ ಬಿ ಆರ್ ಅಂಬೇಡ್ಕರ್ ಅನುಯಾಯಿಗಳನ್ನು ಇಲಾಖೆ ವತಿಯಿಂದ ನಾಗಪುರ ದೀಕ್ಷಾ ಭೂಮಿಗೆ ಯತ್ರೆ ಕೈಗೊಳ್ಳಲು ಸಾರಿಗೆ ವ್ಯವಸ್ಥೆ ಕಲ್ಪಿಸುವ ಸಂಬಂಧ ಅರ್ಹ ಯಾತ್ರಾರ್ಥಿಗಳನ್ನು ಆಯ್ಕೆ ಮಾಡಲು ಆನ್ ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದ್ದು, ಸಮಾಜ ಇಲಾಖೆಯ ವೆಬ್ ಸೈಟ್ https://swdservices.karnataka.gov.inನಲ್ಲಿ ಅರ್ಜಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಹಾಗೂ ತಾಲ್ಲೂಕುಗಳ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರು ಸರಬರಾಜು ವ್ಯತ್ಯಯ

**ಮಂಡ್ಯ:** ಶ್ರೀರಂಗಪಟ್ಟಣ ಸಮೀಪವಿರುವ ಮೂಲ ಸ್ಥಾವರದಲ್ಲಿ 508 ಮಿ.ಮೀ ವ್ಯಾಸದ ಎಂ.ಎಸ್. ಮುಖ್ಯ ನೀರು ಸರಬರಾಜು ಕೊಳವೆ ಮಾರ್ಗದಲ್ಲಿ ಹಾಗೂ ಮಂಡ್ಯ ನಗರಕ್ಕೆ ಹೊಂದಿಕೊಂಡಂತಿರುವ ಕಿರಗಂದೂರು ರಸ್ತೆಯಲ್ಲಿನ 406 ಮಿ.ಮೀ ವ್ಯಾಸದ ಎಂ.ಎಸ್ ಫಿಡರ್ ಕೊಳವೆ ಮಾರ್ಗದಲ್ಲಿ ಗಣನೀಯ ಪ್ರಮಾಣದಲ್ಲಿ ನೀರು ಸೋರುವಿಕೆ ಕಂಡು ಬಂದಿದ್ದು, ಸದರಿ ಕೊಳವೆ ಮಾರ್ಗದ ದುರಸ್ತಿ ಕಾಮಗಾರಿಯನ್ನು ಆಗಸ್ಟ್ 21 ರಂದು ಕೈಗೊಳ್ಳಬೇಕಾಗಿರುವುದರಿಂದ ಸದರಿ ದಿನದಂದು ನೀರನ್ನು ಪಂಪು ಮಾಡಲು ಸಾಧ್ಯವಾಗುವುದಿಲ್ಲ, ಮಂಡ್ಯ ನಗರದ ಸಾರ್ವಜನಿಕರಿಗೆ ಆಗಸ್ಟ್ 21 ಹಾಗೂ 22 ರಂದು ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ನೀರು ಬಂದ ವೇಳೆ ಶೇಖರಿಸಿಟ್ಟುಕೊಂಡು ಜಲಮಂಡಳಿಯೊಂದಿಗೆ ಸಹಕರಿಸಬೇಕೆಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮಂಡ್ಯ ನಿರ್ವಹಣಾ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 23 ರಂದು ಕೆ.ಡಿ.ಪಿ ಸಭೆ

**ರಾಮನಗರ:** 2024-25ನೇ ಸಾಲಿನ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮಗಳೂ ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯನ್ನು ಸಾರಿಗೆ, ಮುಜರಾಯಿ ಸಚಿವರು ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಇದೇ ಆ. 23 ರಂದು ಬೆಳಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಪಂ ಪ್ರಕಟಣೆ ತಿಳಿಸಿದೆ.

# ಸಮಾನತೆ ಕನಸು ಕಂಡಿದ್ದವರು ನಾರಾಯಣ ಗುರು

**ರಾಮನಗರ:** ಸಾಮಾಜಿಕ ಪಿಡುಗಾದ ಜಾತಿ ಪದ್ಧತಿ ಮತ್ತು ಮೂಢನಂಬಿಕೆಗಳ ವಿರುದ್ಧ ಹೋರಾಡಿ ಸಮಾಜದಲ್ಲಿ ಸಮಾನತೆಯನ್ನು ನಿರ್ಮಿಸುವಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಅವರು ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಸೊಲೂರು ಮಠದ ಶ್ರೀ ಶ್ರೀ ವಿಖ್ಯಾತಾನಂದ ಸ್ವಾಮೀಜಿಗಳು ತಿಳಿಸಿದರು.

ಅವರು ಆ. 20ರ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಂದಾಯ ಭವನದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಕೇರಳದಲ್ಲಿ ದಲಿತರು ಮತ್ತು ಮಹಿಳೆಯರ ಮೇಲೆ ನಡೆಯುತ್ತಿದ್ದ ದೌರ್ಜನ್ಯವನ್ನು ವಿರೋಧಿಸಿ ಸಮಾನತೆಯ ಚಳುವಳಿ ರೂಪಿಸಿದರು. ಶಿಕ್ಷಣದಿಂದ ಮಾತ್ರದಿಂದಲೇ ದಲಿತರು ಮತ್ತು ಹಿಂದುಳಿದ ವರ್ಗದವರು ಅಭಿವೃದ್ಧಿ ಸಾಧ್ಯ ಎಂಬುವುದನ್ನು ಅರಿತು ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡಿದ ಬ್ರಹ್ಮಶ್ರೀ ನಾರಾಯಣ ಗುರು ಅವರು ಈ ಯುಗದ ಧಾರ್ಮಿಕ ಸಂತರೆನಿಸಿದ್ದಾರೆ ಎಂದರು. ಕೇರಳಾದಾದ್ಯಂತ ಕರಕುಶಲ ಕೇಂದ್ರಗಳನ್ನು ತೆರೆದು ದಲಿತರಿಗೆ ತರಬೇತಿಯನ್ನು ನೀಡುವ ಮುಖಾಂತರ ಸ್ವಾಭಿಮಾನದಿಂದ ಜೀವನ ನಡೆಸಲು ಅವಕಾಶ ಮಾಡಿಕೊಟ್ಟಿದ್ದರು. ಶಿಕ್ಷಣವನ್ನು ಪಡೆಯುವ ಮುಖಾಂತರ ನಾವೆಲ್ಲಾರೂ ಅಸಮಾನತೆಯ ವಿರುದ್ಧ ಹೋರಾಡೋಣ ಎಂದು ನಾಡಿನಾದ್ಯಂತ ಸಂಚರಿಸಿ ಅರಿವು ಮೂಡಿಸುವಲ್ಲಿ ಯಶಸ್ವಿಯಾಗಿದ್ದರು ಎಂದು ತಿಳಿಸಿದರು.

ವಿಶೇಷ ಉಪನ್ಯಾಸ ನೀಡಿದ ಬಾಬು ಅವರು ಬ್ರಹ್ಮಶ್ರೀ ನಾರಾಯಣ ಗುರು ಅವರು ಬಸವಣ್ಣನ ನಂತರದ ಸಾಮಾಜಿಕ ಸುಧಾರಣೆಯನ್ನು ತುಂಬಾ ವ್ಯಾಪಕವಾಗಿ ಮಾಡಿದವರಲ್ಲಿ ಮೊದಲಿಗರು, ಅವರ ಆದರ್ಶ ಗುಣಗಳನ್ನು ಇಂದಿನ ತಲೆಮಾರಿನ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ. ಎಸ್. ಸತೀಶ್ ಸದ್ಭಾವನಾ ಪ್ರತಿಜ್ಞೆ ಬೋಧಿಸಿದರು.

ಇದೇ ಸಂದರ್ಭದಲ್ಲಿ ಎಸ್. ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದ 17 ವಿದ್ಯಾರ್ಥಿಗಳಿಗೆ ತಲಾ 5 ಸಾವಿರ ರೂ.ಗಳ ಪ್ರೋತ್ಸಾಹ ಧನವನ್ನು ಜಿಲ್ಲಾ ಈಡಿಗ ಸಮುದಾಯದ ವತಿಯಿಂದ ನೀಡಲಾಯಿತು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಚಂದ್ರಯ್ಯ ಅವರು ಬ್ರಹ್ಮ ಶ್ರೀ ನಾರಾಯಣ ಗುರು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಮಂಜುನಾಥ್, ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ರಾಮಕೃಷ್ಣಪ್ಪ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಕುಮಾರ್, ಜಿಲ್ಲಾ ಗ್ರಂಥಪಾಲಕ ಅಧಿಕಾರಿ ಚನ್ನಕೇಶವ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕರಾದ ರಮೇಶ್ ಬಾಬು, ಸಮುದಾಯದ ಮುಖಂಡರುಗಳಾದ ಸುಧೀರ್, ಲಕ್ಷಿ?ಮೀಪತಿ, ರವಿಕುಮಾರ್, ಸೂರ್ಯ ನಾರಾಯಣ, ನಾಗೇಶ್, ನಾಗರಾಜು, ಚಂದ್ರಶೇಖರ್, ಲಿಂಗರಾಜು, ಆರ್ ರಮೇಶ್, ಗೋಪಾಲಸ್ವಾಮಿ, ಎಮ್. ಜಿ ಗೋಪಾಲ್, ಜಗನ್ನಾಥ್, ರಾಮರಾಜು, ಇನ್ನೂ ಮುಂತಾದ ಸಮುದಾಯದ ಮುಖಂಡರುಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು, ಇತರರು ಉಪಸ್ಥಿತರಿದ್ದರು.

# ಜಿಲ್ಲಾಡಳಿತದಿಂದ ನಾರಾಯಣ ಗುರು ಜಯಂತಿ

**ಚಿಕ್ಕಬಳ್ಳಾಪುರ:** ಸಾಮಾಜಿಕ ಅಸಮಾನತೆಯನ್ನು ತೊಡೆದು ಹಾಕುವ ಸಲುವಾಗಿ ಅನ್ಯಾಯದ ವಿರುದ್ಧ ಚಳುವಳಿಯನ್ನು ನಡೆಸಿದವರು ಬ್ರಹ್ಮ ಶ್ರೀ ನಾರಾಯಣ ಗುರುಎಂದು ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ಅಧಿಕಾರಿ ಅರುಂಧತಿ ತಿಳಿಸಿದರು.

ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಬ್ರಹ್ಮ ಶ್ರೀ ನಾರಾಯಣಗುರು ಜಯಂತಿ ಆಚರಣೆಯ ಕಾರ್ಯಕ್ರಮದಲ್ಲಿ ಶ್ರೀ ನಾರಾಯಣಗುರುಗಳ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಸಂಸ್ಕೃತದಲ್ಲಿ ಅದ್ವಿತೀಯ ಪಂಡಿತರಾಗಿದ್ದ ನಾರಾಯಣ ಗುರುಗಳು ಕೇರಳ ಸಮಾಜದಲ್ಲಿ ಅಂದು ಬೇರೂರಿದ್ದ ಅಸ್ಪೃಶ್ಯತೆಯ ಪಿಡುಗನ್ನು ತೊಲಗಿಸಲು ಹೋರಾಡಿದರು. ದೇಶ ಸೇವೆಯೇ ಈಶ ಸೇವೆಯೆಂದು ನಂಬಿ ಅದನ್ನು ಜನರಿಗೆ ಬೋಧಿಸಿದರು ಎಂದರು.

ಉಪನ್ಯಾಸಕರಾದ ಸುದರ್ಶನ್ ಅವರು ಮಾತನಾಡಿ ಬ್ರಹ್ಮ ಶ್ರೀ ನಾರಾಯಣ ಗುರುಗಳು ಅವರ ಜೀವಿತದ ಅವಧಿಯಲ್ಲಿನ ಸಮಾಜದ ತಾರತಮ್ಯಗಳನ್ನು, ಅಂಕು ಡೊಂಕುಗಳನ್ನು ತಿದ್ದಲು ತಮ್ಮ ಜೀವನವನ್ನು ಮುಡಿಪಾಗಿಟ್ಟು ಸಮಾಜ ಸುಧಾರಕರಾದರು. ಜಗತ್ತಿನಲ್ಲಿರುವುದು ಒಂದೇ ಜಾತಿ ಒಂದೇ ಮತ ಹಾಗೂ ಒಂದೇ ದೇವರು ಎಂಬ ಸತ್ಯವಾಕ್ಯವನ್ನು ಅವರು ಪ್ರತಿಪಾದಿಸಿದರು.



ಅಸ್ಪೃಶ್ಯರು ಮತ್ತು ಸ್ತ್ರೀಯರ ಮೇಲೆ ನಡೆಯುತ್ತಿದ್ದ ಅಮಾನುಷ ಶೋಷಣೆ ಮತ್ತು ದೌರ್ಜನ್ಯವನ್ನು ಖಂಡಿಸಿದರು. ಜಾತಿಪದ್ಧತಿ, ಅಸ್ಪ್ರಶ್ಯತೆ ತೊಡೆದು ಹಾಕಲು ಶ್ರಮಿಸಿದರು. ಇಂತಹ ಜಾತೀಯತೆ ಅಸ್ಪ್ರಶ್ಯತೆ ಎಂಬ ಕೊಳಕಿನಿಂದ ಸಮಾಜ ಕೊಳೆಯುತ್ತಿರುವಾಗ ನಾರಾಯಣ ಗುರುಗಳು ಅವತಾರ ಪುರುಷರಂತೆ ಉದಯಿಸಿ ಸಮಾಜ ಸುಧಾರಣೆ ಮಾಡಿದರು. ನಾರಾಯಣ ಗುರುಗಳು ಸಮಸ್ತ ಅಸ್ಪ್ರಶ್ಯ ನಿಮ್ನ ವರ್ಗದವರನ್ನು ಮೇಲೆ ತರಲು ಮಾಡಿದ ಅವರ ಪ್ರಯತ್ನವನ್ನು ಅವರ ಬದುಕಿನ ಮಹಾ ಸಾಧನೆಯಾಗಿದೆ. ಇಂತಹ ಸಾಧಕರ ತತ್ವಾದರ್ಶಗಳನ್ನು ಎಲ್ಲರೂ ಜೀವನದಲ್ಲಿ ರೂಢಿಸಿಕೊಳ್ಳಬೇಕು ಎಂದು ತಿಳಿಸಿದರು. ಜಿಲ್ಲಾ ಆರ್ಯ ಈಡಿಗರ ಸಂಘದ ಜಿಲ್ಲಾಧ್ಯಕ್ಷ ದೇವರಾಜು, ಕಾರ್ಯದರ್ಶಿ ಆರ್. ಲಕ್ಷ್ಮೀನಾರಾಯಣ್, ಸಮುದಾಯದ ಮುಖಂಡರಾದ ದೇವೇಂದ್ರಸ್ವಾಮಿ, ಸಮುದಾಯದ ಪದಾಧಿಕಾರಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಖತ್ ಟ್ರೋಲ್ ಆದ ನಟಿ ಊರ್ವಶಿ ರೌಟೇಲಾ

ಬಾಲಿವುಡ್ ನಟಿ ಊರ್ವಶಿ ರೌಟೇಲಾ ಸದಾ ಒಂದಲ್ಲ ಒಂದು ಕಾರಣಕ್ಕೆ ಸದ್ದು ಮಾಡುತ್ತಲೆ ಇರುತ್ತಾರೆ. ಇತ್ತೀಚೆಗೆ ತಮ್ ಬಾತ್ ರೂಂ ವಿಡಿಯೋ ಹರಿಬಿಟ್ಟು ಸದ್ದು ಮಾಡಿದ್ದ ನಟಿ ಇದೀಗ ಆಸ್ಪತ್ರೆ ಸೇರಿದ್ದಾರೆ. ಆದರೆ ಆಸ್ಪತ್ರೆ ಸೇರಿರುವ ನಟಿಯ ಆರೋಗ್ಯ ವಿಚಾರಣೆ ಬದಲು ನೆಟ್ಟಿಗರು ಆಕೆಯನ್ನು ಸಖತ್ ಟ್ರೋಲ್ ಮಾಡುತ್ತಿದ್ದಾರೆ. ಕಾರಣವಿಷ್ಟೇ.. ಆಸ್ಪತ್ರೆಯಲ್ಲಿ ಆಕ್ಸಿಜನ್ ಮಾಸ್ಕ್ ಧರಿಸಿರುವ ವೀಡಿಯೋವನ್ನ ಊರ್ವಶಿ ಪೋಸ್ಟ್ ಮಾಡಿ ತನಗಾಗಿ ಪ್ರಾರ್ಥಿಸಿ ಎಂದು ಮನವಿ ಮಾಡಿದ್ದಾರೆ. ಊರ್ವಿಶಿ ಕೈಬೆರಳಿಗೆ ಸಣ್ಣದೊಂದು ಗಾಯವಾಗಿದೆ. ಇದೇ ಕಾರಣಕ್ಕೆ ಆಕೆ ಆಸ್ಪತ್ರೆಗೆ ಸೇರಿದ್ದಾಳೆ ಎನ್ನಲಾಗುತ್ತಿದೆ. ಚಿಕ್ಕ ಗಾಯಕ್ಕೆ ಆಸ್ಪತ್ರೆಗೆ ಅಡ್ಮಿಟ್ ಆಗಿ ಆಕ್ಸಿಜನ್ ಮಾಸ್ಕ್ ಹಾಕಿಕೊಂಡಿರೋ ಊರ್ವಶಿ ಟ್ರೋಲ್ ಆಗಿದ್ದು ಚಿಕ್ಕ ಗಾಯಕ್ಕೆ ಇಷ್ಟೊಂದು ಪಾಟಿ ಟ್ರೀಟ್ಮೆಂಟ್ ಅಗತ್ಯವಿತ್ತೇ ಎಂದು ನೆಟ್ಟಿಗರು ಪ್ರಶ್ನೆ ಮಾಡ್ತಿದ್ದಾರೆ. ಇನ್ಸ್ಟಾಗ್ರಾಂನಲ್ಲಿ ವೀಡಿಯೋ ಹಂಚಿಕೊಂಡಿರುವ ಊರ್ವಶಿ 'ನನಗಾಗಿ ಪ್ರಾರ್ಥಿಸಿ' ಎಂಬ ಸಂದೇಶದೊಂದಿಗೆ ಗಾಯದ ವೀಡಿಯೋ ಜೊತೆಗೆ ಚಿಕಿತ್ಸೆ ಪಡೆದುಕೊಳ್ಳುತ್ತಿರುವ ವೀಡಿಯೋ ಹಂಚಿಕೊಂಡಿದ್ದಾರೆ. ಅಸಲಿಗೆ ಊರ್ವಶಿ ಹಂಚಿಕೊಂಡ ವೀಡಿಯೋವನ್ನೇ ನೋಡಿದರೆ ಅದೊಂದು ಸಾಮಾನ್ಯ ಗಾಯದಂತೆ ಕಾಣುತ್ತೆ. ಇಂಥಹ ಸಣ್ಣಪುಟ್ಟ ಗಾಯಕ್ಕೆ ಆಸ್ಪತ್ರೆಗೆ ಹೋಗಿ ಬ್ಯಾಂಡೇಜ್ ಹಾಕೊಂಡು ಬರೋದೇ ದೊಡ್ಡದು. ಅಂಥದ್ರಲ್ಲಿ ಆಸ್ಪತ್ರೆಗೆ ದಾಖಲಾಗೋದ್ರ ಜೊತೆ ಆಕ್ಸಿಜನ್ ಮಾಸ್ಕ್ ಧರಿಸಿ ಚಿಕಿತ್ಸೆ ಪಡೆಯುವ ಅನಿವಾರ್ಯತೆ ಏನಿತ್ತು ಎಂದಿದ್ದಾರೆ. ನನಗಾಗಿ ಪ್ರಾರ್ಥಿಸಿ ಎಂದು ಕೇಳಿಕೊಂಡಿರುವ ಊರ್ವಶಿಗೆ ಓವರ್ ಆಯಕ್ಟಿಂಗ್ ನಿಲ್ಲಿಸು ಎಂದು ಕಾಮೆಂಟ್ ಮಾಡಿದ್ದಾರೆ ನೆಟ್ಟಿಗರು. ಈ ಜಗತ್ತಿನಲ್ಲಿ ನಿಗಗೊಬ್ಬಳಿಗೇ ಇಂಥಹ ಗಂಭೀರ ಗಾಯವಾಗಿದ್ದು ಎಂದು ಇನ್ನೊಬ್ಬರು ಕಾಲೆಳೆದಿದ್ದಾರೆ. ಇನ್ನು ಅನೇಕರು ಇಂಥಹ ವೀಡಿಯೋ ಪೋಸ್ಟ್ ಮಾಡಿ ಏನು ಸಿಂಪತಿ ಗಿಟ್ಟಿಸಿಕೊಳ್ಳುವ ಕೆಲಸ ಮಾಡ್ಬೇಡ ಎಂದು ಕೆಲವರು ಕಾಮೆಂಟ್ ಮಾಡಿದ್ದಾರೆ.



## ಅಲೋವೆರಾ ಜ್ಯೂಸ್

ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅಲೋವೆರಾ-1 ಕೋಡು, ನಿಂಬೆ ರಸ ಸ್ವಲ್ಪ, ಶುಂಠಿ- ಸ್ವಲ್ಪ, ಕರಿಮೆಣಸು 1 ರಿಂದ 2

### ಮಾಡುವ ವಿಧಾನ

ಅಲೋವೆರಾದ ಒಳಗಿರುವ ಜೆಲ್ಲಿಯಂತಹ ವಸ್ತುವನ್ನು ತೆಗೆಯಬೇಕು. ಇದಕ್ಕೆ ಸ್ವಲ್ಪ ಶುಂಠಿ, ಕರಿಮೆಣಸು ಸ್ವಲ್ಪ ನೀರು ಹಾಕಿ ನುಣ್ಣಗೆ ರುಬ್ಬಿಕೊಳ್ಳಬೇಕು.

ಬಳಿಕ ರುಬ್ಬಿಕೊಂಡಿರುವ ಈ ರಸಕ್ಕೆ 2 ಕಪ್ ಆಗುವಷ್ಟು ನೀರು ಸೇರಿಸಿ. ಸ್ವಲ್ಪ ಉಪ್ಪು, ಅರ್ಧ ನಿಂಬೆರಸ ಹಾಕಿ ಬೆರೆಸಬೇಕು. ಜೇನುತುಪ್ಪ 2 ಟೀ ಸ್ಪೂನ್ ಹಾಕಿ ಮಿಕ್ಸ್ ಮಾಡಿಕೊಳ್ಳಬೇಕು. ಸಿಹಿಗೆ ಸಕ್ಕರೆ ಅಥವಾ ಬೆಲ್ಲದ ಬದಲು ಜೇನುತುಪ್ಪ ಹಾಕಬಹುದು.

ಚೆನ್ನಾಗಿ ಮಿಕ್ಸ್ ಮಾಡಿದ ನಂತರ ಒಂದು ಗ್ಲಾಸ್ ಗೆ ಹಾಕಿ ಸರ್ವ್ ಮಾಡಿದರೆ ಆರೋಗ್ಯಕ್ಕೆ ಹಿತವಾದ ಅಲೋವೇರಾ ಜ್ಯೂಸ್ ರೆಡಿ.

## ನೆಟ್ ವರ್ಕ್ ವಿಸ್ತರಣೆ ಮಾಡಿದ ಉತ್ಕರ್ಷ್ ಸ್ಮಾಲ್ ಫೈನಾನ್ಸ್ ಬ್ಯಾಂಕ್

# ವೈಟ್ ಫೀಲ್ಡ್‌ನಲ್ಲಿ ಹೊಸ ಶಾಖೆ

ಉತ್ಕರ್ಷ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್ (ಉತ್ಕರ್ಷ್ ಎಸ್‌ಎಫ್‌ಬಿಎಲ್) ಇಂದು ಬೆಂಗಳೂರಿನ ವೈಟ್‌ಫೀಲ್ಡ್ ನಲ್ಲಿ ತನ್ನ ಹೊಸ ಮಳಿಗೆಯನ್ನು ಉದ್ಘಾಟಿಸಿದೆ. ಈ ಶಾಖೆಯನ್ನೂ ಸೇರಿಸಿ ಬ್ಯಾಂಕ್ ಕರ್ನಾಟಕದಲ್ಲಿ ಒಟ್ಟು 10 ಬ್ಯಾಂಕಿಂಗ್ ಶಾಖೆಗಳನ್ನು ಮತ್ತು ದೇಶಾದ್ಯಂತ 935 ಬ್ಯಾಂಕಿಂಗ್ ಶಾಖೆಗಳನ್ನು ಹೊಂದಿದಂತಾಗಿದೆ.

ಹೊಸ ಶಾಖೆಯ ಉದ್ಘಾಟನೆ ಸಂದರ್ಭದಲ್ಲಿ ಮಾತನಾಡಿದ ಉತ್ಕರ್ಷ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್‌ನ ಎಂಡಿ ಮತ್ತು ಸಿಇಓ ಶ್ರೀ ಗೋವಿಂದ್ ಸಿಂಗ್ ಅವರು, ಕರ್ನಾಟಕದಲ್ಲಿ ನಮ್ಮ ಬ್ಯಾಂಕಿಂಗ್ ನೆಟ್‌ವರ್ಕ್ ಅನ್ನು ವಿಸ್ತರಣೆ ಮಾಡಲು ನಾವು ಉತ್ಸುಕರಾಗಿದ್ದೇವೆ. ತಂತ್ರಜ್ಞಾನ, ಸ್ಟಾರ್ಟ್-ಅಪ್‌ಗಳು ಮತ್ತು ನಾವೀನ್ಯತಾ ಕ್ಷೇತ್ರದಲ್ಲಿ ಪ್ರಮುಖ ಕೇಂದ್ರವಾಗಿರುವ ವೈಟ್‌ಫೀಲ್ಡ್ ಅಭಿವೃದ್ಧಿ ಪಥದಲ್ಲಿ ಸಾಗಲು ಉತ್ತಮ ಕೊಡುಗೆ ನೀಡುತ್ತದೆ. ಈ ಹೊಸ ಶಾಖೆಯ ಮೂಲ ಬ್ಯಾಂಕಿಂಗ್ ಸೇವೆ ಒದಗಿಸುವುದು ಮಾತ್ರವಲ್ಲ, ಅದರ ಜೊತೆಗೆ ಈ ಪ್ರದೇಶದ ಆರ್ಥಿಕ ಬೆಳವಣಿಗೆ, ಆರ್ಥಿಕ ಒಳಗೊಳ್ಳುವಿಕೆ ಮತ್ತು ಸಮುದಾಯದ ಸಬಲೀಕರಣ ವಿಚಾರದಲ್ಲಿ ಕೂಡ ಶಾಖೆಯು ಮಹತ್ವದ ಪಾತ್ರ ವಹಿಸಲಿದೆ ಎಂದು ಹೇಳಿದರು.

ಬ್ಯಾಂಕ್ ತನ್ನ ಗ್ರಾಹಕರಿಗೆ ಸೇವಿಂಗ್ಸ್ ಅಕೌಂಟ್ ಮತ್ತು ಕರೆಂಟ್ ಅಕೌಂಟ್, ಫಿಕ್ಸ್‌ಡ್ ಡೆಪಾಸಿಟ್ ಮತ್ತು ರಿಕರಿಂಗ್ ಡೆಪಾಸಿಟ್ ಗಳು ಸೇರಿದಂತೆ ಹಲವಾರು ಹಣಕಾಸು ಸಂಬಂಧಿತಕ ಉತ್ಪನ್ನ ಮತ್ತು ಸರ್ವೀಸ್ ಗಳ ವ್ಯಾಪಕ ಶ್ರೇಣಿಯನ್ನು ಒದಗಿಸುತ್ತದೆ. ತನ್ನ ಗ್ರಾಹಕರ ಆಸೆ ಆಕಾಂಕ್ಷೆಗಳನ್ನು ಪೂರೈಸುವ ಸಲುವಾಗಿ ಈ ಬ್ಯಾಂಕ್




ವಸತಿ ಸಾಲಗಳು, ವ್ಯಾಪಾರ ಸಾಲಗಳು ಮತ್ತು ಆಸ್ತಿಯ ಮೇಲಿನ ಸಾಲಗಳಂತ ವಿವಿಧ ರೀತಿಯ ಸಾಲಗಳನ್ನು ಒದಗಿಸುತ್ತದೆ.

ಅತ್ಯುತ್ತಮ ಬ್ಯಾಂಕಿಂಗ್ ಮೂಲಸೌಕರ್ಯ, ಡಿಜಿಟಲ್ ಬ್ಯಾಂಕಿಂಗ್ ಸಾಮರ್ಥ್ಯ ಮತ್ತು ವಿಸ್ತೃತ ಎಟಿಎಂ ನೆಟ್‌ವರ್ಕ್ ಗಳನ್ನು ಹೊಂದಿರುವ ಈ ಬ್ಯಾಂಕ್ ಸಮಗ್ರ ಗ್ರಾಹಕ ಸೇವೆಯನ್ನು ಒದಗಿಸುತ್ತದೆ. ಇವುಗಳ ಹೊರತಾಗಿ ಬ್ಯಾಂಕ್ ಇಂಟರ್ ನೆಟ್ ಬ್ಯಾಂಕಿಂಗ್, ಮೊಬೈಲ್ ಬ್ಯಾಂಕಿಂಗ್, ಯುನಿಫೈಡ್ ಪೇಮೆಂಟ್ ಇಂಟರ್ ಫೇಸ್ (ಯುಪಿಐ) ಮತ್ತು ಕಾಲ್ ಸೆಂಟರ್ ಗಳಂತಹ ಸೇವೆಗಳನ್ನೂ ಒದಗಿಸುತ್ತದೆ.

ಉತ್ಕರ್ಷ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್ ಸಮಾಜದಸಾಮಾನ್ಯ ವರ್ಗಗಳ ಜೊತೆಜೊತೆಗೆ ಹಿಂದುಳಿದ ವರ್ಗದ ಜನ ಸಮುದಾಯಕ್ಕೂ ಮೈಕ್ರೋ-ಬ್ಯಾಂಕಿಂಗ್ ಸಾಲಗಳು (ಜೆ ಎಲ್ ಜಿ ಸಾಲಗಳು), ಎಂಎಸ್‌ಎಂಇ ಸಾಲಗಳು, ಗೃಹ ಸಾಲಗಳು ಮತ್ತು ಆಸ್ತಿಯ ಮೇಲಿನ ಸಾಲ ಇತ್ಯಾದಿಗಳ ಒಳಗೊಂಡು ಹಲವಾರು ಹಣಕಾಸು ಸೇವೆಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ. ವಿಶೇಷವಾಗಿ ಟ್ಯಾಬ್ಲೆಟ್ ಆಧಾರಿತ ಅಪ್ಲಿಕೇಶನ್ ಅಸಿಸ್ಟೆಡ್ ಮಾಡೆಲ್ ಡಿಜಿ ಆನ್-ಬೋರ್ಡಿಂಗ್ ಮೂಲಕ ಶಾಖೆಗೆ ಭೇಟಿ ನೀಡದೆಯೇ ಬ್ಯಾಂಕ್ ಖಾತೆಯನ್ನು ತೆರೆಯುವ ಸೌಲಭ್ಯವನ್ನು ಬ್ಯಾಂಕ್ ಗ್ರಾಹಕರಿಗೆ ಒದಗಿಸುತ್ತದೆ.

## ಬೇಯಿಸಿದ ಆಲೂಗಡ್ಡೆಯ ಆರೋಗ್ಯ ಪ್ರಯೋಜನ

ಹೆಲ್ತ್ ಟಿಪ್ಸ್



ಆಲೂಗಡ್ಡೆಯನ್ನು ... ಪ್ರಮುಖ ಮೂಲವೆಂದು ಪರಿಗಣಿಸಲಾಗುತ್ತದೆ, ಆದರೆ ಇದು ಅನೇಕ ಪೋಷಕಾಂಶಗಳಲ್ಲಿ ಸಮೃದ್ಧವಾಗಿದೆ. ಬೇಯಿಸಿದ ಆಲೂಗಡ್ಡೆ ಇತರ ರೀತಿಯಲ್ಲಿ ಹುರಿದ ಅಥವಾ ಬೇಯಿಸಿದ ಆಲೂಗಡ್ಡೆಗಿಂತ ಆರೋಗ್ಯಕರವಾಗಿರುತ್ತದೆ.

ಬೇಯಿಸಿದ ಆಲೂಗಡ್ಡೆ ತಿನ್ನುವುದರಿಂದ ಆಗುವ ಆರೋಗ್ಯ ಪ್ರಯೋಜನಗಳ ಬಗ್ಗೆ ತಿಳಿಯಿರಿ.

ಜೀರ್ಣಾಂಗ ವ್ಯವಸ್ಥೆಗೆ ಪ್ರಯೋಜನಕಾರಿ: ಬೇಯಿಸಿದಆಲೂಗಡ್ಡೆಉತ್ತಮ ಪ್ರಮಾಣದ ಫೈಬರ್ ಅನ್ನು ಹೊಂದಿರುತ್ತದೆ, ಇದು ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ಇದು ಮಲಬದ್ಧತೆಯ ಸಮಸ್ಯೆಯಿಂದ ಪರಿಹಾರವನ್ನು ನೀಡುತ್ತದೆ ಮತ್ತು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ.

ತೂಕ ನಷ್ಟಕ್ಕೆ ಸಹಾಯಕ: ಆಲೂಗಡ್ಡೆ ತೂಕವನ್ನು ಹೆಚ್ಚಿಸುತ್ತದೆ ಎಂದು ಅನೇಕ ಜನರು ನಂಬುತ್ತಾರೆ, ಆದರೆ ಇದು ನಿಜವಲ್ಲ. ಬೇಯಿಸಿದ ಆಲೂಗಡ್ಡೆಯಲ್ಲಿ ಕಡಿಮೆ ಕ್ಯಾಲೋರಿ ಮತ್ತು ಹೆಚ್ಚಿನ ಫೈಬರ್ ಇರುತ್ತದೆ, ಇದು ನಿಮ್ಮನ್ನು ದೀರ್ಘಕಾಲದವರೆಗೆ ಹೊಟ್ಟೆ ತುಂಬಿದಂತೆ ಇರಿಸುತ್ತದೆ. ಇದು ಆಗಾಗ್ಗೆ ತಿನ್ನುವ ಬಯಕೆಯನ್ನು ಕಡಿಮೆ ಮಾಡುತ್ತದೆ ಮತ್ತು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ.

ಸ್ನಾಯುಗಳಿಗೆ ಪ್ರಯೋಜನಕಾರಿ: ಬೇಯಿಸಿದ ಆಲೂಗಡ್ಡೆ ಉತ್ತಮ ಪ್ರಮಾಣದ ಪೊಟ್ಯಾಸಿಯಮ್ ಹೊಂದಿರುತ್ತದೆ, ಇದು ಸ್ನಾಯುವಿನ ಕಾರ್ಯಕ್ಕೆ ಅವಶ್ಯಕವಾಗಿದೆ. ಇದು ಸ್ನಾಯು ನೋವು ಮತ್ತು ಸೆಳೆತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಹೃದಯದ ಆರೋಗ್ಯಕ್ಕೆ ಒಳ್ಳೆಯದು: ಬೇಯಿಸಿದ ಆಲೂಗಡ್ಡೆಯಲ್ಲಿ ವಿಟಮಿನ್ ಃ6 ಇದ್ದು, ಇದು ಹೃದಯದ ಆರೋಗ್ಯಕ್ಕೆ ಒಳ್ಳೆಯದು. ಇದು ಹೋಮೋಸಿಸ್ಟೈನ್ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಇದು ಹೃದ್ರೋಗಕ್ಕೆ ಅಪಾಯಕಾರಿ ಅಂಶವಾಗಿದೆ.

ಚರ್ಮಕ್ಕೆ ಪ್ರಯೋಜನಕಾರಿ: ಬೇಯಿಸಿದ ಆಲೂಗೆಡ್ಡೆಯು ವಿಟಮಿನ್ ಅಯನ್ನು ಹೊಂದಿರುತ್ತದೆ, ಇದು ಚರ್ಮವನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ಇದು ಕಾಲಜನ್ ಉತ್ಪಾದನೆಯನ್ನು ಹೆಚ್ಚಿಸುತ್ತದೆ, ಇದು ತ್ವಚೆಯನ್ನು ಹೊಳೆಯುವಂತೆ ಮತ್ತು ಯೌವನವಾಗಿರಿಸುತ್ತದೆ.

ರಕ್ತದೊತ್ತಡವನ್ನು ನಿಯಂತ್ರಿಸುತ್ತದೆ: ಬೇಯಿಸಿದ ಆಲೂಗಡ್ಡೆ ಉತ್ತಮ ಪ್ರಮಾಣದ ಪೊಟ್ಯಾಸಿಯಮ್ ಅನ್ನು ಹೊಂದಿರುತ್ತದೆ, ಇದು ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದು ಅಧಿಕ ರಕ್ತದೊತ್ತಡಕ್ಕೆ ಸಂಬಂಧಿಸಿದ ಅಪಾಯಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಮೆದುಳಿನ ಆರೋಗ್ಯಕ್ಕೆ ಒಳ್ಳೆಯದು: ಬೇಯಿಸಿದ ಆಲೂಗಡ್ಡೆಯಲ್ಲಿ ವಿಟಮಿನ್ ಃ6 ಇದ್ದು, ಇದು ಮೆದುಳಿನ ಆರೋಗ್ಯಕ್ಕೆ ಒಳ್ಳೆಯದು. ಇದು ಮೆದುಳಿನ ಕಾರ್ಯವನ್ನು ಹೆಚ್ಚಿಸುತ್ತದೆ ಮತ್ತು ಸ್ಮರಣೆಯನ್ನು ಸುಧಾರಿಸುತ್ತದೆ.

## ಅಮೆಜಾನ್ ಫ್ಯೂಚರ್ ಇಂಜಿನಿಯರ್ ಕಾರ್ಯಕ್ರಮ

# 500 ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನ ನೀಡಲು ಅರ್ಜಿ

ಅಮೆಜಾನ್ ಸಂಸ್ಥೆಯು ಇಂದು ತನ್ನ ಅಮೆಜಾನ್ ಫ್ಯೂಚರ್ ಇಂಜಿನಿಯರ್ ಸ್ಕಾಲರ್‌ಶಿಪ್ ಕಾರ್ಯಕ್ರಮಕ್ಕೆ ಅರ್ಹ ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಿದೆ. ಭಾರತದ ತಂತ್ರಜ್ಞಾನ ಕ್ಷೇತ್ರದಲ್ಲಿ ವೃತ್ತಿಜೀವನವನ್ನು ಆರಂಭಿಸಲು ಬಯಸುವ ಯುವತಿಯರು ಈ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ತಂತ್ರಜ್ಞಾನ ಕ್ಷೇತ್ರದ ಉದ್ಯೋಗಗಳಲ್ಲಿ ಲಿಂಗ ಅಸಮಾನತೆಯನ್ನು ಕಡಿಮೆ ಮಾಡುವ ಸಲುವಾಗಿ ಅಮೆಜಾನ್ ಸಂಸ್ಥೆಯು ಕಂಪ್ಯೂಟರ್ ಸೈನ್ಸ್ ಮತ್ತು ಅದಕ್ಕೆ ಸಂಬಂಧಿಸಿದ ಪದವಿ ಪಡೆಯುವ 500 ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನದ ಮೂಲಕ ನೆರವು ನೀಡುವ ಗುರಿಯನ್ನು ಹೊಂದಿದೆ.

ಆಯ್ಕೆಯಾದ ಪ್ರತಿಯೊಬ್ಬ ವಿದ್ಯಾರ್ಥಿನಿಯು ತಮ್ಮ ಶೈಕ್ಷಣಿಕ ವೆಚ್ಚಗಳಿಗಾಗಿ ನಾಲ್ಕು ವರ್ಷಗಳಲ್ಲಿ ರೂ.2 ಲಕ್ಷಗಳ ವಿದ್ಯಾರ್ಥಿವೇತನ ಪಡೆಯುತ್ತಾರೆ. ಆರ್ಥಿಕ ನೆರವಿನ ಜೊತೆಗೆ ಈ ಕಾರ್ಯಕ್ರಮವು ವಿದ್ಯಾರ್ಥಿನಿಯರ ಸಮಗ್ರ ಅಭಿವೃದ್ಧಿ ಯೋಜನೆಯನ್ನು ಕೂಡ ಹೊಂದಿದೆ. ಈ ಯೋಜನೆಗಳು ಈ ಕೆಳಗಿನಂತಿವೆ-

ಎ) ಅಮೆಜಾನ್ ಉದ್ಯೋಗಿಗಳಿಂದ ಮೆಂಟರ್ ಶಿಪ್ ಮತ್ತು ಮಾರ್ಗದರ್ಶನ- ಅಮೆಜಾನ್ ಉದ್ಯೋಗಿಗಳು ವಿದ್ಯಾರ್ಥಿನಿಯರ ಜೊತೆ ವೃತ್ತಿ ಸಮಾಲೋಚನೆ ನಡೆಸಲಿದ್ದಾರೆ. ಈ ಮೂಲಕ ವಿದ್ಯಾರ್ಥಿನಿಯರು ಪರಿಣತರಿಂದ ಶೈಕ್ಷಣಿಕ ಮತ್ತು ವೃತ್ತಿ ಜೀವನದ ಪ್ರಯಾಣ ಕುರಿತು ಸಲಹೆ ಸೂಚನೆ ಪಡೆಯುತ್ತಾರೆ.

ಬಿ) ಕೌಶಲ್ಯ ಅಭಿವೃದ್ಧಿ- 10 ತಿಂಗಳ ಟೆಕ್ನಿಕಲ್ ಬೂಟ್ಕ್ಯಾಂಪ್ ನಡೆಸಲಾಗುತ್ತದೆ. ಇದರಲ್ಲಿ ವಿದ್ಯಾರ್ಥಿನಿಯರಿಗೆ ಉದ್ಯಮ ಕ್ಷೇತ್ರದ ಬೇಡಿಕೆಗೆ ತಕ್ಕಂತೆ ಕೌಶಲ್ಯಗಳನ್ನು ಕಲಿಸಲಾಗುತ್ತದೆ ಮತ್ತು ಅವರನ್ನು ಯಶಸ್ವಿ ವೃತ್ತಿ ಜೀವನ ಆರಂಭಿಸಲು ಸಿದ್ಧಗೊಳಿಸಲಾಗುತ್ತದೆ.

ಸಿ) ಪ್ರಾಯೋಗಿಕ ಅನುಭವ- ಪದವಿಯ 2ನೇ ವರ್ಷದ ಬಳಿಕ ಅಮೆಜಾನ್ ನಲ್ಲಿ ವೇತನ ಸಹಿತ ಇಂಟರ್ನ್‌ಶಿಪ್ ಅವಕಾಶ ಒದಗಿಸಲಾಗುತ್ತದೆ. ಇಲ್ಲಿ ವಿದ್ಯಾರ್ಥಿನಿಯರು ವೇತನ ಪಡುವ ಜೊತೆಗೆ




ಕಲಿಕೆಯಲ್ಲಿ ತೊಡಗಿಕೊಳ್ಳಲಿದ್ದಾರೆ. ಈ ಮೂಲಕ ವಿದ್ಯಾರ್ಥಿಗಳು ವಾಸ್ತವ ಜಗತ್ತಿನ ಸವಾಲುಗಳನ್ನು ಎದುರಿಸುವ ಮತ್ತು ವಿವಿಧ ಇಂಜಿನಿಯರಿಂಗ್ ಹುದ್ದೆಗಳನ್ನು ತಿಳಿಯುವ ಪ್ರಾಯೋಗಿಕ ಅನುಭವ ಗಳಿಸುತ್ತಾರೆ.

ವಿದ್ಯಾರ್ಥಿವೇತನಕ್ಕೆ ಭರವಸೆಯ ವಿದ್ಯಾರ್ಥಿಗಳನ್ನು ಗುರುತಿಸುವ ಸಲುವಾಗಿ ಕಠಿಣ ಮೌಲ್ಯಮಾಪನ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಈ ಸಲುವಾಗಿ ಅಮೆಜಾನ್ ಸಂಸ್ಥೆಯು ಫೌಂಡೇಶನ್ ಫಾರ್ ಎಕ್ಸಲೆನ್ಸ್ (ಎಫ್‌ಎಫ್‌ಇ) ಜೊತೆಗೆ ಸಹಯೋಗ ಮಾಡಿಕೊಂಡಿದೆ. ಶೈಕ್ಷಣಿಕ ಅರ್ಹತೆ, ಹಣಕಾಸಿನ ಅಗತ್ಯತೆ ಮತ್ತು ನಾಯಕತ್ವ ಸಾಮರ್ಥ್ಯದ ಆಧಾರದಲ್ಲಿ ವಿದ್ಯಾರ್ಥಿವೇತನಕ್ಕೆ ವಿದ್ಯಾರ್ಥಿನಿಯರನ್ನು ಆಯ್ಕೆ ಮಾಡಲಾಗುತ್ತದೆ. ಆಯ್ಕೆಯಾದ ವಿದ್ಯಾರ್ಥಿನಿಯರು ಸುಲಭವಾಗಿ ತಾಂತ್ರಿಕ ಸೌಲಭ್ಯ ಪಡೆಯುವಂತೆ ಆಗಲು ಮತ್ತು ಅವರು ಅಧ್ಯಯನ ನಡೆಸಲು, ಪ್ರಾಜೆಕ್ಟ್ ಮಾಡಲು ನೆರವಾಗಲು ಎಲ್ಲರಿಗೂ ಲ್ಯಾಪ್ ಟಾಪ್ ಅನ್ನು ಒದಗಿಸಲಾಗುತ್ತದೆ.

ಈ ಕುರಿತು ಮಾತನಾಡುವ ಅಮೆಜಾನ್ ಫ್ಯೂಚರ್ ಇಂಜಿನಿಯರ್ ಕಾರ್ಯಕ್ರಮದ ಇಂಡಿಯಾ ಲೀಡ್ ಅಕ್ಷಯ್ ಕಶ್ಯಪ್ ಅವರು, ಪ್ರತಿಭೆ ಮತ್ತು ಅವಕಾಶಗಳ ನಡುವೆ ಇರುವ ಅಂತರವನ್ನು ಕಡಿಮೆ ಮಾಡುವುದು ನಮ್ಮ ಉದ್ದೇಶವಾಗಿದೆ. ಅರ್ಹ ವಿದ್ಯಾರ್ಥಿನಿಯರು ಅದರಲ್ಲೂ ವಿಶೇಷವಾಗಿ ಹಿಂದುಳಿದ ವರ್ಗದ ವಿದ್ಯಾರ್ಥಿನಿಯರಿಗೆ ಅವರು ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಯಶಸ್ವಿ ವೃತ್ತಿ ಜೀವನ ಕೈಗೊಳ್ಳಲು ಅಗತ್ಯವಿರುವ ಸಂಪನ್ಮೂಲಗಳು ಮತ್ತು ನೆರವನ್ನು ಈ ಮೂಲಕ ಒದಗಿಸಲಾಗುತ್ತದೆ. ಆರ್ಥಿಕ ಮತ್ತು ಸಂಪನ್ಮೂಲಗಳ ಕೊರತೆಯಿಂದ ಪೋಷಕರು ಮಕ್ಕಳ ವಿದ್ಯಾಭ್ಯಾಸ ಕಡಿತಗೊಳಿಸಿರುವ ಅನೇಕ ಉದಾಹರಣೆ ನಮ್ಮ ಕಣ್ಣ ಮುಂದಿದೆ. ಹಾಗಾಗಿ ಈ ಉತ್ತಮ ಅವಕಾಶವನ್ನು ಬಳಸಿಕೊಂಡು ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ತಮ್ಮ ವೃತ್ತಿ ಜೀವನ ಆರಂಭಿಸುವ ಎಲ್ಲಾ ವಿದ್ಯಾರ್ಥಿನಿಯರಿಗೆ ನಾವು ಪ್ರೋತ್ಸಾಹ ನೀಡಲಿದ್ದೇವೆ. ಈ ಯೋಜನೆಯ ಮೂಲಕ ಭಾರತದ ಹಿಂದುಳಿದ ವರ್ಗದ ಹೆಣ್ಣು ಮಕ್ಕಳ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ಉಂಟು ಮಾಡಲು ನಾವು ಎದುರು ನೋಡುತ್ತಿದ್ದೇವೆ'' ಎಂದು ಹೇಳಿದರು.

ಅಮೆಜಾನ್ ಫ್ಯೂಚರ್ ಇಂಜಿನಿಯರ್ ಸ್ಕಾಲರ್ ಶಿಪ್ ಪ್ರೋಗ್ರಾಂ ಆರಂಭವಾದಾಗಿನಿಂದಲೂ ಅನೇಕ ವಿದ್ಯಾರ್ಥಿನಿಯರು ಇದರ ಲಾಭ ಪಡೆದಿದ್ದಾರೆ. ಇಲ್ಲಿಯವರಿಗೆ ಸುಮಾರು 1,200ಕ್ಕೂ ಹೆಚ್ಚು ಹುಡುಗಿಯರಿಗೆ ಈ ವಿದ್ಯಾರ್ಥಿವೇತನ ಕಾರ್ಯಕ್ರಮದ ಮೂಲಕ ನೆರವು ನೀಡಲಾಗಿದೆ. ಅವರು ಯಶಸ್ವಿ ಜೀವನ ನಡೆಸಲು ಬೇಕಾದ ಸಾಧನಗಳು ಮತ್ತು ಅವಕಾಶಗಳನ್ನು ಒದಗಿಸಿದೆ. ಈ ವಿದ್ಯಾರ್ಥಿ ವೇತನ ಕಾರ್ಯಕ್ರಮದ ಮೂಲಕ 198 ಮಂದಿ ವಿದ್ಯಾರ್ಥಿನಿಯರು ಅಮೆಜಾನ್ ನ ಸಾಫ್ಟ್‌ವೇರ್ ಡೆವಲಪ್ ಮೆಂಟ್ ಇಂಜಿನಿಯರ್, ಕ್ವಾಲಿಟಿ ಅಶ್ಯೂರೆನ್ಸ್ ಇಂಜಿನಿಯರ್, ಡೇಟಾ ಇಂಜಿನಿಯರ್ ಮತ್ತು ಸಪೋರ್ಟ್ ಇಂಜಿನಿಯರ್ ಮುಂತಾದ ಹುದ್ದೆಗಳಲ್ಲಿ ಇಂಟರ್ನ್ ಶಿಪ್ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿನಿಯರಿಗೆ ಇನ್ನೂ ಹೆಚ್ಚಿನ ವೃತ್ತಿ ದಾರಿಗಳನ್ನು ತೆರೆಯುವ ಸಲುವಾಗಿ ಅಮೆಜಾನ್ ಸಂಸ್ಥೆಯು ಈಗ ಪ್ರೋಗ್ರಾಂ ಬಿಸಿನೆಸ್ ಇಂಟೆಲಿಜೆನ್ಸ್ ಇಂಜಿನಿಯರ್, ಸಾಫ್ಟ್‌ವೇರ್ ಡೆವಲಪ್ ಮೆಂಟ್ ಇಂಜಿನಿಯರ್ ಇನ್ ಟೆಸ್ಟ್, ಸಿಸ್ಟಮ್ ಡೆವಲಪ್ ಮೆಂಟ್ ಇಂಜಿನಿಯರ್ ಮತ್ತು ಪ್ರೋಗ್ರಾಮರ್ ಅನಾಲಿಸ್ಟ್ ಸೇರಿದಂತೆ ಹಲವಾರು ಹೆಚ್ಚಿನ ಹುದ್ದೆಗಳಲ್ಲಿಯೂ ಇಂಟರ್ನ್‌ಶಿಪ್‌ಗಳನ್ನು ನೀಡುತ್ತದೆ.

### ಅರ್ಜಿ ಸಲ್ಲಿಸಲು ಬೇಕಾದ ಅರ್ಹತಾ ಮಾನದಂಡಗಳು

- **ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ಅಥವಾ ಅದಕ್ಕೆ ಸಂಬಂಧಿತ ವಿಚಾರದಲ್ಲಿ ಪದವಿಯನ್ನು ಓದುತ್ತಿರುವ ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದು.**
- **ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡಿರಬೇಕು ಮತ್ತು ನಾಯಕತ್ವ ಸಾಮರ್ಥ್ಯ ಹೊಂದಿರಬೇಕು.**
- **ಹಣಕಾಸಿನ ಅಗತ್ಯತೆ ಇರುವವರಾಗಿರಬೇಕು.**

### ಆಯ್ಕೆ ಪ್ರಕ್ರಿಯೆ ಹೇಗಿರುತ್ತೆ?

- **ಅಮೆಜಾನ್ ಮತ್ತು ಎಫ್‌ಎಫ್‌ಇ ಪ್ರತಿನಿಧಿಗಳನ್ನು ಒಳಗೊಂಡ ಆಯ್ಕೆ ಸಮಿತಿಯು ಅರ್ಜಿಗಳನ್ನು ಪರಿಶೀಲಿಸುತ್ತದೆ.**
- **ಶಾರ್ಟ್‌ಲಿಸ್ಟ್ ಆದ ವಿದ್ಯಾರ್ಥಿನಿಯರು ಶೈಕ್ಷಣಿಕ ದಾಖಲೆಗಳು, ಪ್ರಬಂಧ ಬರವಣಿಗೆ ಮತ್ತು ಸಂದರ್ಶನಗಳನ್ನು ಒಳಗೊಂಡು ಕಠಿಣ ಮೌಲ್ಯಮಾಪನ ಪ್ರಕ್ರಿಯೆ ಎದುರಿಸಬೇಕಾಗುತ್ತದೆ.**
- **ಅಭ್ಯರ್ಥಿಯ ಅರ್ಹತೆ ಮತ್ತು ಸಾಮರ್ಥ್ಯವನ್ನು ಸಮಗ್ರವಾಗಿ ಮೌಲ್ಯಮಾಪನ ಮಾಡಿದ ಬಳಿಕವೇ ಅಂತಿಮವಾಗಿ ವಿದ್ಯಾರ್ಥಿವೇತನಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಅಮೆಜಾನ್ ಫ್ಯೂಚರ್ ಇಂಜಿನಿಯರ್ ಸ್ಕಾಲರ್ ಶಿಪ್ ಕಾರ್ಯಕ್ರಮಕ್ಕಾಗಿ ಈಗಾಗಲೇ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 2024ರ ಅಕ್ಟೋಬರ್ 31. 2025ರ ಜನವರಿ ತಿಂಗಳಲ್ಲಿ ವಿದ್ಯಾರ್ಥಿವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿನಿಯರ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗುವುದು. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಈ ವೆಬ್ ಸೈಟ್ ಭೇಟಿ ನೀಡಿ** https://www.amazonfutureengineer.in/scholarship

## ಮುಖವನ್ನು ಅಂದವಾಗಿಸಲು ಮೊಸರು ಬಳಸಿ

ಬ್ಯೂಟಿ ಟಿಪ್ಸ್



ಮೊಸರು ದೇಹದ ಆರೋಗ್ಯಕ್ಕೆ ಎಷ್ಟು ಒಳ್ಳೆಯದೋ ನಮ್ಮ ತ್ವಚೆಯ ಆರೋಗ್ಯಕ್ಕೂ ಅಷ್ಟೇ ಒಳ್ಳೆಯದು. ಮೊಸರನ್ನು ನಮ್ಮ ಮುಖಕ್ಕೆ ಬಳಸುವುದರಿಂದ ಮುಖದ ಕಾಂತಿ ಹೆಚ್ಚಿಸಿಕೊಳ್ಳಬಹುದು. ತ್ವಚೆಯ ಟ್ಯಾನ್ ಅನ್ನು ನಿವಾರಿಸುವಲ್ಲಿ ಇದು ಸಹಾಯಕಾರಿ. ಸುಲಭವಾಗಿ ನಮ್ಮ ಅಡುಗೆ ಮನೆಯಲ್ಲಿಯೇ ಸಿಗುವ ಮೊಸರಿನಿಂದ ಹೇಗೆಲ್ಲಾ ತ್ವಚೆಯ ರಕ್ಷಣೆ ಮಾಡಿಕೊಳ್ಳಬಹುದು ಎಂಬುದಕ್ಕೆ ಇಲ್ಲಿದೆ ನೋಡಿ ಮಾಹಿತಿ.

ಮೊಸರಿನಲ್ಲಿ ಲ್ಯಾಕ್ಟಿಕ್ ಆಯಸಿಡ್ ಅಂಶ ಹೆಚ್ಚಿದೆ. ಇದರಲ್ಲಿ ವಿಟಮಿನ್ಸ್ ಹಾಗೂ ಮಿನರಲ್ಸ್ ಹೇರಳವಾಗಿದೆ. ಮುಖದ ಅಂದಕ್ಕೆ ಇದು ಹೇಳಿ ಮಾಡಿಸಿದ ಒಂದು ಸೌಂದರ್ಯ ವರ್ಧಕ ಎನ್ನಬಹುದು. 1 ದೊಡ್ಡ ಚಮಚ ಮೊಸರು ತೆಗೆದುಕೊಂಡು ಹತ್ತು ನಿಮಿಷಗಳ ಕಾಲ ನಿಮ್ಮ ಮುಖಕ್ಕೆ ನಿಧಾನವಾಗಿ ಮಸಾಜ್ ಮಾಡಿ. 10 ನಿಮಿಷ ಹಾಗೇ ಬಿಟ್ಟು ನಂತರ ಮುಖ ತೊಳೆದುಕೊಳ್ಳಿರಿ. ಇದರಿಂದ ನಿಮ್ಮ ಮುಖದ ರಂಧ್ರಗಳು ಮುಚ್ಚುತ್ತವೆ.

ಅರ್ಧ ಕಪ್ ತುರಿದ ಸೌತೆಕಾಯಿಗೆ 2 ದೊಡ್ಡ ಚಮಚ ಮೊಸರು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ. ಈ ಪ್ಯಾಕ್ ಅನ್ನು ನಿಮ್ಮ ಮುಖಕ್ಕೆ ಹಚ್ಚಿಕೊಳ್ಳಿ. ನಂತರ 20 ನಿಮಿಷ ಬಿಟ್ಟು ಮುಖ ತೊಳೆಯಿರಿ. ಇದು ಕೂಡ ಮುಖವನ್ನು ಹೈಡ್ರೇಟ್ ಆಗಿ ಇಡುತ್ತದೆ. 2 ಚಮಚ ಓಟ್ಸ್ ಪುಡಿ, 2 ಚಮಚ ಜೇನುತುಪ್ಪ, 2 ಚಮಚ ಮೊಸರು ಇವಿಷ್ಟನ್ನು ಚೆನ್ನಾಗಿ ಮಿಶ್ರಣ ಮಾಡಿ. ಮುಖವನ್ನು ಮೊದಲಿಗೆ ಚೆನ್ನಾಗಿ ತೊಳೆದುಕೊಂಡು ಈ ಮಿಶ್ರಣವನ್ನು ಹಚ್ಚಿಕೊಳ್ಳಿ. 20 ನಿಮಿಷ ಬಿಟ್ಟು ಮುಖ ತೊಳೆಯಿರಿ. ಇದು ಎಲ್ಲಾ ವಿಧದ ಚರ್ಮದವರಿಗೂ ಹೇಳಿ ಮಾಡಿಸಿದ್ದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ದೈವ ಮತ್ತು ಆಧ್ಯಾತ್ಮಿಕ ಚಿಂತನೆಗಳು, ಅಧಿಕ ಖರ್ಚು, ನಿದ್ರಾಭಂಗ, ಪುಣ್ಯ ಕ್ಷೇತ್ರಗಳ ದರ್ಶನ ಭಾಗ್ಯ.

**ವೃಷಭ:** ಮಿತ್ರರಿಂದ ಅನುಕೂಲ, ಪಾಲುದಾರಿಕೆಯಲ್ಲಿ ಕಿರಿಕಿರಿ, ಮಾನಸಿಕ ಗೊಂದಲ ಮತ್ತು ಸಂಕಟ.

**ಮಿಥುನ:** ಉತ್ತಮ ಧನಾಗಮನ, ಉದ್ಯೋಗ ಸ್ಥಳದಲ್ಲಿ ಕಿರಿಕಿರಿ, ಕೋರ್ಟ್ ಕೇಸುಗಳಲ್ಲಿ ಸಮಸ್ಯೆ.

**ಕಟಕ:** ಉದ್ಯೋಗದಲ್ಲಿ ಯಶಸ್ಸು, ತಂದೆ ಮಕ್ಕಳಲ್ಲಿ ಕಿರಿಕಿರಿ, ಆಸೆ-ಆಕಾಂಕ್ಷೆಗಳಿಗೆ ಬಲಿಯಾಗುವಿರಿ.

**ಸಿಂಹ:** ವಿಪರೀತ ರಾಜಯೋಗದ ದಿವಸ, ಆಲಸ್ಯ ಸೋಮಾರಿತನ ಜಿಗುಪ್ಸೆ, ಕಾಲಿಗೆ ಪೆಟ್ಟು ಎಚ್ಚರಿಕೆ.

**ಕನ್ಯಾ:** ಬಂಧುಗಳಿಂದ ತೊಂದರೆ, ನೆರೆಹೊರೆಯವರಿಂದ ನಿದ್ರಾಭಂಗ, ವಿಚ್ಛೇದನ ಕೇಸುಗಳಲ್ಲಿ ಜಯ.

**ತುಲಾ:** ಉದ್ಯೋಗ ನಷ್ಟ, ಆರೋಗ್ಯದ ಮೇಲೆ ದುಷ್ಪರಿಣಾಮ, ಕಾನೂನುಬಾಹಿರ ಧನ ಸಂಪಾದನೆ, ಆರ್ಥಿಕ ಸಂಕಷ್ಟ.

**ವೃಶ್ಚಿಕ:** ಹೆಣ್ಣುಮಕ್ಕಳಿಂದ ಅನುಕೂಲ, ಆರೋಗ್ಯದಲ್ಲಿ ಏರುಪೇರು, ಕೆಲಸ ಕಾರ್ಯಗಳಲ್ಲಿ ನಿರಾಸಕ್ತಿ, ಆರ್ಥಿಕವಾಗಿ ಅನುಕೂಲ.

**ಧನಸ್ಸು:** ಮಕ್ಕಳಿಗೆ ಉತ್ತಮ ಅವಕಾಶ, ಧನ ನಷ್ಟ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ, ವಾಹನ ಅಪಘಾತಗಳಾಗುವ ಸಂಭವ ಎಚ್ಚರಿಕೆ.

**ಮಕರ:** ಶುಭಯೋಗ ಪ್ರಾಪ್ತಿ, ಕಾನೂನುಬಾಹಿರ ಧನ ಸಂಪಾದನೆ, ಉತ್ತಮ ಸ್ನೇಹಿತರ ಪರಿಚಯ.

**ಕುಂಭ:** ಅಧಿಕ ಖರ್ಚು, ಸಾಲ ಮಾಡುವ ಪರಿಸ್ಥಿತಿ, ಕಾರ್ಮಿಕರಿಂದ ಸಮಸ್ಯೆ.

**ಮೀನ:** ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ, ಬಂಧುಗಳಿಂದ ಮಾನಹಾನಿ, ಆಧ್ಯಾತ್ಮಿಕ ಮತ್ತು ದೈವ ಚಿಂತನೆ.

## ವಿಶ್ವ ಸಸ್ಯ ಹಾಲು ದಿನ

ಆಗಸ್ಟ್ 22 ರಂದು, ನಾವು ವಿಶ್ವ ಸಸ್ಯ ಹಾಲು ದಿನವನ್ನು ಆಚರಿಸುತ್ತೇವೆ ಏಕೆಂದರೆ ನಿಮಗೆ ತಿಳಿದಿರಲಿ ಅಥವಾ ತಿಳಿಯದೇ ಇರಲಿ, ಸಸ್ಯ ಹಾಲು ಡೈರಿ ಹಾಲಿಗೆ ಉತ್ತಮ, ಸಮರ್ಥನೀಯ, ಪರ್ಯಾಯವಾಗಿದೆ. ಸಸ್ಯ ಹಾಲು ನಿಮ್ಮ ದೇಹಕ್ಕೆ ಪ್ರಮುಖ ಪೋಷಕಾಂಶಗಳು ಮತ್ತು ಖನಿಜಗಳನ್ನು ಸುರಕ್ಷಿತವಾಗಿ ಒದಗಿಸುತ್ತದೆ, ನಿಮ್ಮ ಜೀವನವನ್ನು ಪೂರ್ಣವಾಗಿ ಬದುಕಲು ಶಕ್ತಿ ಮತ್ತು ಸಹಿಷ್ಣುತೆಯನ್ನು ನೀಡುತ್ತದೆ.

ಸಸ್ಯ ಹಾಲು ಕುಡಿಯುವುದರಿಂದ ಇತರ ಪ್ರಯೋಜನಗಳಿವೆ ಎಂದು ವಿಶ್ವ ಸಸ್ಯ ಹಾಲು ದಿನವು ನಮಗೆ ನೆನಪಿಸುತ್ತದೆ. ಪ್ರಾಣಿ ಹಿಂಸೆಯನ್ನು ತೊಡೆದುಹಾಕಲು ಮತ್ತು ಜಾಗತಿಕ ತಾಪಮಾನವನ್ನು ಕಡಿಮೆ ಮಾಡಲು ನೀವು ಸಹಾಯ ಮಾಡುತ್ತೀರಿ - ಕೇವಲ ಒಂದು ಲೋಟ ಹಾಲು ಕುಡಿಯುವ ಮೂಲಕ! ಆದ್ದರಿಂದ, ನಿಮ್ಮ ಸ್ವಂತ ಆರೋಗ್ಯ ಮತ್ತು ನಮ್ಮ ಪ್ರಪಂಚದ ಆರೋಗ್ಯಕ್ಕಾಗಿ ಟೋಸ್ಟ್‌ನಲ್ಲಿ ತಣ್ಣನೆಯ, ನೊರೆಭರಿತ ಗಾಜಿನ ರುಚಿಕರವಾದ ಸಸ್ಯ ಹಾಲನ್ನು ಹೆಚ್ಚಿಸುವ ಮೂಲಕ ನಿಮ್ಮ ದೇಹ ಮತ್ತು ಜಗತ್ತಿಗೆ ಸ್ವಲ್ಪ ಒಳ್ಳೆಯದನ್ನು ಮಾಡಿ.

ಸಸ್ಯ ಆಧಾರಿತ ಹಾಲು ಲ್ಯಾಕ್ಟೋಸ್ ಮುಕ್ತವಾಗಿದೆ ಮತ್ತು ಹಸುವಿನ ಹಾಲಿಗೆ ಉತ್ತಮ ಪರ್ಯಾಯವಾಗಿದೆ. ವಿಶ್ವ ಸಸ್ಯ ಹಾಲು ದಿನವನ್ನು 2017 ರಲ್ಲಿ ಪ್ಲಾಂಟ್ ಬೇಸ್ಡ್ ನ್ಯೂಸ್ನ ಸಹ-ಸಂಸ್ಥಾಪಕ ರಾಬಿ ಲಾಕಿ ರಚಿಸಿದ್ದಾರೆ. ಈ ದಿನವು 2018 ರಲ್ಲಿ ಃಇಓ ಮತ್ತು ಕಡಿಂಗಿಜರ ನಡುವಿನ ಸಹಯೋಗದ ಪ್ರಯತ್ನವಾಯಿತು, ಅಭಿಯಾನವು ಪ್ರಪಂಚದಾದ್ಯಂತದ ಲಕ್ಷಾಂತರ ಜನರನ್ನು ಡೈರಿ ಹಾಲಿನಿಂದ ಸಸ್ಯ ಆಧಾರಿತ ಪರ್ಯಾಯಗಳಿಗೆ ಬದಲಾಯಿಸುವಂತೆ ಉತ್ತೇಜಿಸುತ್ತದೆ.

ಸಸ್ಯ ಆಧಾರಿತ ಹಾಲನ್ನು ಸೇವಿಸಲು ದೊಡ್ಡ ಕಾರಣವೆಂದರೆ ಅದು ಲ್ಯಾಕ್ಟೋಸ್-ಮುಕ್ತವಾಗಿದೆ, ಇದು ಲ್ಯಾಕ್ಟೋಸ್ ಅಸಹಿಷ್ಣುತೆ ಹೊಂದಿರುವವರಿಗೆ ಸೂಕ್ತವಾಗಿದೆ. ಆದರೆ ಅದು ಅಷ್ಟೆ ಅಲ್ಲ, ಸಸ್ಯ ಮೂಲದ ಹಾಲು ಉತ್ತಮ ರುಚಿ, ಕಡಿಮೆ ಕೊಬ್ಬು ಮತ್ತು ಸಸ್ಯಾಹಾರಿಗಳಿಗೆ ಸೂಕ್ತವಾಗಿದೆ. ಸಸ್ಯ ಆಧಾರಿತ ಹಾಲು ಪೋಷಕಾಂಶಗಳಲ್ಲಿ ಸಮೃದ್ಧವಾಗಿದೆ ಮತ್ತು ಅಗತ್ಯವಾದ ಜೀವಸತ್ವಗಳು ಮತ್ತು ಖನಿಜಗಳ ದೈನಂದಿನ ಅಗತ್ಯವನ್ನು ಹೊಂದಿರುತ್ತದೆ. ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸುವ ಅಪಾಯವು ಕಡಿಮೆಯಾಗಿದೆ ಮತ್ತು ಹಾಲಿನ ಸ್ಥಿರತೆಯು ಜೀರ್ಣಾಂಗ ವ್ಯವಸ್ಥೆಯ ಮೇಲೆ ಭಾರವಾಗಿರುವುದಿಲ್ಲ.

ಬಾದಾಮಿ ಹಾಲು, ಸೋಯಾ ಹಾಲು, ಗೋಡಂಬಿ ಹಾಲು, ಅಕ್ಕಿ ಹಾಲು, ಸೆಣಬಿನ ಹಾಲು ಮತ್ತು ಅಗಸೆ ಹಾಲು ಈ ದಿನಗಳಲ್ಲಿ ಹೆಚ್ಚಿನ ಸೂಪರ್ಮಾರ್ಕೆಟ್‌ಗಳಲ್ಲಿ ಸುಲಭವಾಗಿ ಲಭ್ಯವಿರುವ ಕೆಲವು ಜನಪ್ರಿಯ ಸಸ್ಯ ಆಧಾರಿತ ಹಾಲು ವಿಧಗಳಾಗಿವೆ. ಸಸ್ಯ ಆಧಾರಿತ ಹಾಲಿನ ಉತ್ಪಾದನೆಯು ಕ್ರೌರ್ಯ ಮುಕ್ತವಾಗಿದೆ, ಇದು ಸ್ವಿಚ್ ಮಾಡಲು ಮತ್ತೊಂದು ಉತ್ತಮ ಕಾರಣವಾಗಿದೆ. ಈ ರೀತಿಯ ಬದಲಾವಣೆಗಳು ಅತ್ಯಲ್ಪ ಫಲಿತಾಂಶಗಳೊಂದಿಗೆ ಚಿಕ್ಕದಾಗಿ ಕಾಣಿಸಬಹುದು ಆದರೆ, ದೀರ್ಘಾವಧಿಯಲ್ಲಿ, ಅವು ಖಂಡಿತವಾಗಿಯೂ ನಮ್ಮ ಇಂಗಾಲದ ಹೆಜ್ಜೆಗುರುತನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಮತ್ತು ನಮ್ಮ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ.



## ಮೋದಿ ಸರ್ಕಾರದಿಂದ ಮಹತ್ವದ ನಿರ್ಧಾರ

# ಜನಗಣತಿ ಆರಂಭ ಸಾಧ್ಯತೆ

**ನವದೆಹಲಿ:** ಹಲವು ವರ್ಷಗಳಿಂದ ಬಾಕಿ ಉಳಿದಿರುವ ಭಾರತದ ಜನಗಣತಿ ಪ್ರಕ್ರಿಯೆಯನ್ನು ಸೆಪ್ಟೆಂಬರ್‌ನಲ್ಲಿ ನಡೆಸಲು ಕೇಂದ್ರ ಸರ್ಕಾರಮುಂದಾಗಿದೆ ಎನ್ನಲಾಗಿದೆ. ಈ ವಿಷಯದ ಬಗ್ಗೆ ತಿಳಿದಿರುವ ಇಬ್ಬರು ವ್ಯಕ್ತಿಗಳನ್ನು ಉಲ್ಲೇಖಿಸಿ ರಾಯಿಟರ್ಸ್ ವರದಿ ಮಾಡಿದೆ.

ಈ ಹತ್ತು ವರ್ಷಗಳಿಗೊಮ್ಮೆ ನಡೆಯುವ ಜನಗಣತಿಯನ್ನು 2021 ರಂದು ನಡೆಸಲು ನಿಗದಿಪಡಿಸಲಾಗಿತ್ತು. ಆದರೆ ಕೋವಿಡ್ -19 ಸಾಂಕ್ರಾಮಿಕ ರೋಗದಿಂದಾಗಿ ಮುಂದೂಡಲಾಗಿತ್ತು. ಇದೀಗ ಮುಂದಿನ ತಿಂಗಳು ಜನಗಣತಿ ನಡೆಯುವ ಸಾಧ್ಯತೆ ಇದ್ದು, ಪ್ರಧಾನಿ ನರೇಂದ್ರ ಮೋದಿ ಯವರ ಮೂರನೇ ಅವಧಿಯ ಅಧಿಕಾರದಲ್ಲಿ ಗಮನಾರ್ಹ ದತ್ತಾಂಶ ಅಂತರವನ್ನು ಪರಿಹರಿಸಲು ಸಹಾಯ ಮಾಡುತ್ತದೆ.

ರಾಯಿಟರ್ಸ್ ಪ್ರಕಾರ, ಈ ಪ್ರಕ್ರಿಯೆಯಲ್ಲಿ ನೇರವಾಗಿ ಭಾಗಿಯಾಗಿರುವ ಇಬ್ಬರು ಸರ್ಕಾರಿ ಅಧಿಕಾರಿಗಳು ಸಮಗ್ರ ಸಮೀಕ್ಷೆಯು ಪೂರ್ಣಗೊಳ್ಳಲು ಸುಮಾರು 18 ತಿಂಗಳುಗಳನ್ನು ತೆಗೆದುಕೊಳ್ಳುತ್ತದೆ ಎಂದು ದೃಢಪಡಿಸಿದರು, ಮಾರ್ಚ್ 2026 ರ ವೇಳೆಗೆ ಫಲಿತಾಂಶಗಳು ಬಿಡುಗಡೆಯಾಗುವ ನಿರೀಕ್ಷೆಯಿದೆ. ಜನಗಣತಿಯ ವಿಳಂಬವು ಮುಂದುವರೆದಿರುವ ವಿಚಾರ ಅನೇಕ ಟೀಕೆಗೆ ಗುರಿಯಾಗಿದೆ. ಈ ವಿಳಂಬವು ಆರ್ಥಿಕ ದತ್ತಾಂಶ, ಹಣದುಬ್ಬರ ಮತ್ತು ಉದ್ಯೋಗದ ಅಂದಾಜುಗಳು ಸೇರಿದಂತೆ ವಿವಿಧ ಅಂಕಿಅಂಶಗಳ ಸಮೀಕ್ಷೆಗಳ ನಿಖರತೆ ಮತ್ತು ಪ್ರಸ್ತುತತೆಗೆ ಧಕ್ಕೆ ತಂದಿದೆ ಎಂದು ಅರ್ಥಶಾಸ್ತ್ರಜ್ಞರು ವಾದಿಸಿದ್ದಾರೆ.

ಪ್ರಸ್ತುತ, ಈ ಡೇಟಾ ಸೆಟ್ಗಳಲ್ಲಿ ಹೆಚ್ಚಿನವು ಹಳೆಯದಾದ 2011 ರ ಜನಗಣತಿಯ ಮೇಲೆ ಅವಲಂಬಿತವಾಗಿದೆ, ಇದು ಅನೇಕ ಸರ್ಕಾರಿ ಯೋಜನೆಗಳು ಮತ್ತು ನೀತಿಗಳ ಮೇಲೆ ಪರಿಣಾಮ ಬೀರುತ್ತಿದೆ. ಗೃಹ ವ್ಯವಹಾರಗಳ ಸಚಿವಾಲಯ ಮತ್ತು ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯವು ವರದಿಯ ಪ್ರಕಾರ ಜನಗಣತಿಗಾಗಿ ವಿವರವಾದ ಟೈಮ್‌ಲೈನ್‌ನಲ್ಲಿ ಕಾರ್ಯನಿರ್ವಹಿಸುತ್ತಿದೆ. ಆದರೆ, ಪ್ರಧಾನಿ ಕಾರ್ಯಾಲಯದಿಂದ ಅಂತಿಮ ಅನುಮೋದನೆಗೆ ಕಾಯಲಾಗುತ್ತಿದೆ.

## ವಿಶ್ವಸಂಸ್ಥೆ ಮಾನವ ಹಕ್ಕುಗಳ ವಿಶೇಷ ವರದಿಗಾರನಿಗೆ ತಾಲಿಬಾನ್ ನಿಷೇಧ

ವಿಶ್ವಸಂಸ್ಥೆ ನೇಮಿಸಿರುವ ವಿಶೇಷ ವರದಿಗಾರ ರಿಚರ್ಡ್ ಬೆನ್ನೆಟ್ ಅಫ್ಘಾನಿಸ್ತಾನದ ವಿರುದ್ಧ ಅಪಪ್ರಚಾರ ಮಾಡುತ್ತಿರುವುದಾಗಿ ಆರೋಪ ಕೇಳಿ ಬಂದಿದೆ. ಈ ಹಿನ್ನೆಲೆಯಲ್ಲಿ ರಿಚರ್ಡ್ ಅವರನ್ನು ತಾಲಿಬಾನ್ ಅಫ್ಘಾನಿಸ್ತಾನ ಪ್ರವೇಶಿಸುವುದನ್ನು ನಿಷೇಧಿಸಿದೆ ಎಂದು ವರದಿಗಳು ಉಲ್ಲೇಖಿಸಿವೆ.

2021ರಲ್ಲಿ ಅಫ್ಘಾನಿಸ್ತಾನ ತಾಲಿಬಾನ್ ನಿಯಂತ್ರಣಕ್ಕೆ ಬಂದ ಬಳಿಕ ಆ ದೇಶದಲ್ಲಿನ ಮಾನವ ಹಕ್ಕುಗಳ ಪರಿಸ್ಥಿತಿಯ ಮೇಲ್ವಿಚಾರಣೆ ಮಾಡಲು ಬೆನೆಟ್‌ರನ್ನು 2022ರಲ್ಲಿ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿ ನೇಮಕಗೊಳಿಸಿತ್ತು. ತಾಲಿಬಾನ್‌ಗಳು ಮಹಿಳೆಯರು ಮತ್ತು ಹುಡುಗಿಯರನ್ನು ನಡೆಸಿಕೊಳ್ಳುವುದು ಮಾನವೀಯತೆಯ ವಿರುದ್ಧದ ಅಪರಾಧಕ್ಕೆ ಕಾರಣವಾಗಬಹುದು ಎಂದು ಹೇಳಿದ್ದ ಬೆನೆಟ್ ಅಫ್ಘಾನಿಸ್ತಾನದಿಂದ ಹೊರಗೆ ನೆಲೆಸಿದ್ದಾರೆ. ಆದರೆ ಪರಿಸ್ಥಿತಿಯನ್ನು ಪರಾಮರ್ಶಿಸಲು ಹಲವು ಬಾರಿ ಅಫ್ಘಾನಿಸ್ತಾನಕ್ಕೆ ಭೇಟಿ ನೀಡಿದ್ದಾರೆ. ಕೆಲಸದ ಸಮಯದಲ್ಲಿ ವೃತ್ತಿಪರತೆಗೆ ಬದ್ಧವಾಗಿರಲು ಬೆನೆಟ್ಗೆ ಪದೇ ಪದೇ ವಿನಂತಿಸಿದ ನಂತರವೂ, ಅವರ ವರದಿಗಳು ಪೂರ್ವಾಗ್ರಹ ಪೀಡಿತವಾಗಿದ್ದು ಅಫ್ಘಾನಿಸ್ತಾನ ಮತ್ತು ಅಫ್ಘಾನಿಸ್ತಾನದ ಜನತೆಯ ಹಿತಾಸಕ್ತಿಗಳಿಗೆ ಹಾನಿಕಾರಕವಾದ ಉಪಾಖ್ಯಾನಗಳನ್ನು ಆಧರಿಸಿವೆ ಎಂದು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅವರು ಅಫ್ಘಾನಿಸ್ತಾನಕ್ಕೆ ಪ್ರಯಾಣಿಸಲು ವೀಸಾ ಪಡೆಯಲು ಸಾಧ್ಯವಾಗದು ಎಂದು ಅಫ್ಘಾನಿಸ್ತಾನದ ವಿದೇಶಾಂಗ ಸಚಿವಾಲಯದ ವಕ್ತಾರ ಅಬ್ದುಲ್ ಖಹರ್ ಬಲ್ಖಿಯನ್ನು ಉಲ್ಲೇಖಿಸಿ ರಾಯ್ಟರ್ಸ್ ವರದಿ ಮಾಡಿದೆ.




## ಫಾರ್ಮಾ ಕಂಪನಿಯಲ್ಲಿ ಸ್ಫೋಟ

# ಮೃತರ ಸಂಖ್ಯೆ 18ಕ್ಕೇರಿಕೆ

**ಅಮರಾವತಿ :** ಆಂಧ್ರಪ್ರದೇಶದಲ್ಲಿನ ಔಷಧ (ಫಾರ್ಮಾ) ಕಂಪನಿಯೊಂದರಲ್ಲಿ ಸಂಭವಿಸಿದ ಭಾರೀ ಸ್ಫೋಟಕ್ಕೆ ಮೃತರ ಸಂಖ್ಯೆಯು 18ಕ್ಕೆ ಏರಿಕೆಯಾಗಿದೆ. 40ಕ್ಕೂ ಅಧಿಕ ಮಂದಿ ಗಂಭೀರ ಗಾಯಗೊಂಡವರ ಆಸ್ಪತ್ರೆಗೆ ದಾಖಲಿಸಲಾಗಿದೆ. ಅನಕಪಲ್ಲಿ ಜಿಲ್ಲೆಯ ಅಚ್ಯುತಪುರಂ ವಿಶೇಷ ಆರ್ಥಿಕ ವಲಯ ದಲ್ಲಿರುವ ಕಂಪನಿಯಲ್ಲಿ ಎಸ್ಸೆಂಟಿಯಾ ಫಾರ್ಮಾ ಕಂಪನಿಯ ಘಟಕದಲ್ಲಿ ಸ್ಫೋಟ ಸಂಭವಿಸಿತ್ತು.ಗಾಯಾಳುಗಳ ಚಿಕಿತ್ಸೆಗಾಗಿ ಎನ್ಟಿಆರ್ ಆಸ್ಪತ್ರೆಗೆ ರವಾನಿಸಲಾಗಿದೆ. ಮಧ್ಯಾಹ್ನ ಊಟದ ವೇಳೆ ಈ ಅವಘಡ ಸಂಭವಿಸಿದ್ದು, ಸ್ಫೋಟಕ್ಕೆ ಸೂಕ್ತ ಕಾರಣ ಏನೆಂಬುದು ತಿಳಿದು ಬಂದಿಲ್ಲ. ಸ್ಥಳದಿಂದ ಬಂದ ದೃಶ್ಯಗಳು ರಿಯಾಕ್ಟರ್‌ನಿಂದ ಹೊಗೆ ಹೊರ ಬರುತ್ತಿತ್ತು ಮತ್ತು ಸುತ್ತಮುತ್ತಲಿನ ಹಳ್ಳಿಗಳಲ್ಲಿ ಆವರಿಸಿತು. ಸ್ಥಳಕ್ಕೆ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳು ದೌಡಾಯಿಸಿ ಪರಿಸ್ಥಿತಿ ಅವಲೋಕಿಸಿದ್ದಾರೆ. ಇನ್ನು ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

**ಇಂದು ಮುಖ್ಯಮಂತ್ರಿ ಭೇಟಿ:** ದುರ್ಘಟನೆ ಬಗ್ಗೆ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಅವರು ಟೆಲಿಕಾನ್ಫರೆನ್ಸ್ ನಡೆಸಿ ಪರಿಸ್ಥಿತಿಯ ಅವಲೋಕನ ನಡೆಸಿದ್ದು, ಉನ್ನತ ಮಟ್ಟದ ತನಿಖೆ ನಡೆಸಿ ಸಮಗ್ರ ವರದಿಯನ್ನು ಸಿದ್ಧಪಡಿಸುವಂತೆ ಸೂಚಿಸಿದ್ದಾರೆ. ಗಾಯಾಳು ಕಾರ್ಮಿಕರಿಗೆ ಸಾಂತ್ವನ ಹೇಳಲು ಸಿಎಂ ಇಂದು ಅನಕಾಪಲ್ಲಿಗೆ ಭೇಟಿ ನೀಡಲಿದ್ದಾರೆ.

ಜೀವಹಾನಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಮೃತರ ಕುಟುಂಬಸ್ಥರಿಗೆ ಸರ್ಕಾರ ನೆರವಾಗಲಿದೆ ಎಂದಿದ್ದಾರೆ. ಈ ವರೆಗೆ 17 ಮಂದಿ ಮೃತಪಟ್ಟಿದ್ದು, ಗಾಯಗೊಂಡವರಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡಲು ಎಲ್ಲಾ ವೈದ್ಯಕೀಯ ಸಿಬ್ಬಂದಿಯನ್ನು ಸಜ್ಜುಗೊಳಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.



### ಮೋದಿ' ಸಂತಾಪ, ಮೃತರ ಕುಟುಂಬಗಳಿಗೆ ತಲಾ 2 ಲಕ್ಷ ಪರಿಹಾರ ಘೋಷಣೆ.!

**ನವದೆಹಲಿ : ಆಂಧ್ರಪ್ರದೇಶದ ಅನಕಪಲ್ಲಿಯಲ್ಲಿರುವ ಫಾರ್ಮಾ ಕಂಪನಿಯಲ್ಲಿ ಸಂಭವಿಸಿದ ದುರಂತ ರಿಯಾಕ್ಟರ್ ಸ್ಫೋಟದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ ತಲಾ 2 ಲಕ್ಷ ರೂ., ಗಾಯಗೊಂಡವರಿಗೆ 50,000 ರೂ.ಗಳ ಪರಿಹಾರವನ್ನು ಪ್ರಧಾನಿ ಕಚೇರಿ (ಪಿಎಂಒ) ಘೋಷಿಸಿದೆ. ಪಿಎಂ ಮೋದಿ ತಮ್ಮ ಸಂತಾಪವನ್ನು ವ್ಯಕ್ತಪಡಿಸಿದ್ದು ಮತ್ತು ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಎಕ್ಸ್ ನಲ್ಲಿ ಹಾರೈಸಿದರು. ''ಅನಕಪಲ್ಲಿಯ ಕಾರ್ಖಾನೆಯಲ್ಲಿ ಸಂಭವಿಸಿದ ಅಪಘಾತದಲ್ಲಿ ಜೀವಹಾನಿಯಾಗಿರುವುದು ನೋವುಂಟು ಮಾಡಿದೆ, ತಮ್ಮ ಹತ್ತಿರದ ಮತ್ತು ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸುತ್ತೇನೆ. ಗಾಯಾಳುಗಳು ಶೀಘ್ರ ಗುಣಮುಖರಾಗಲಿ. ಮೃತರ ಕುಟುಂಬಗಳಿಗೆ ಪಿಎಂಎನ್‌ಆರ್‌ಎಫ್ನಿಂದ 2 ಲಕ್ಷ ರೂ. ಗಾಯಗೊಂಡವರಿಗೆ 50,000 ರೂ.ಗಳನ್ನು ನೀಡಲಾಗುವುದು'' ಎಂದು ಪಿಎಂಒ ಪೋಸ್ಟ್‌ನಲ್ಲಿ ತಿಳಿಸಿದೆ.**



## ಪ್ರಧಾನಿ ಮೋದಿ ಸ್ಥಾನ ತೆರವು, ಸುಬ್ರಮಣಿಯನ್ ಸ್ವಾಮಿ ಸ್ಫೋಟಕ ಮಾಹಿತಿ

**ನವದೆಹಲಿ :** RSS ಅಳವಡಿಸಿಕೊಂಡಿರುವ ನಿಯಮಗಳ ಪ್ರಕಾರ ನರೇಂದ್ರ ಮೋದಿ ಅವರು ತಮ್ಮ ಪ್ರಧಾನಿ ಹುದ್ದೆಗೆ ನಿವೃತ್ತಿ ಘೋಷಿಸಬೇಕಾಗುತ್ತದೆ ಎಂದು ಬಿಜೆಪಿ ಹಿರಿಯ ನಾಯಕ ಸುಬ್ರಮಣಿಯನ್ ಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ. ಟ್ವೀಟ್ ಮಾಡಿ, ಒಂದು ವೇಳೆ ಮೋದಿ ಅವರು ಪ್ರಧಾನಿ ಸ್ಥಾನದಿಂದ ಕೆಳಗೆ ಇಳಿಯದೇ ಹೋದಲ್ಲಿ ಪಕ್ಷದ ನಿಯಮಗಳ ಪ್ರಕಾರ ಅವರು ಬೇರೆ ವಿಧಾನಗಳ ಮೂಲಕ ಕುರ್ಚಿ ಕಳೆದುಕೊಳ್ಳಲಿದ್ದಾರೆ ಎಂದೂ ಸ್ಫೋಟಕ ಅಂಶಗಳನ್ನು ಉಲ್ಲೇಖಿಸಿದ್ದಾರೆ. ಮುಂಬರಲಿರುವ ಸೆ.17ರ ನಂತರ ಪ್ರಧಾನಿ ಮೋದಿ ಅವರು 75 ವರ್ಷಕ್ಕೆ ಕಾಲಿಡಲಿದ್ದಾರೆ. ಆಗ ಖಖಖ ಪ್ರಚಾರಕನ ಸಂಸ್ಕಾರಕ್ಕೆ ಬದ್ಧರಾಗಿ ಮೋದಿ ಅವರು ನಿವೃತ್ತಿ ಘೋಷಿಸಬೇಕಾಗುತ್ತದೆ. ಇಲ್ಲವಾದಲ್ಲಿ ತಮ್ಮ ಕುರ್ಚಿ ಕಳೆದುಕೊಳ್ಳುತ್ತಾರೆ ಎಂದು ಎಚ್ಚರಿಕೆ ನೀಡಿದಿದ್ದಾರೆ. ಇನ್ನು 75 ವರ್ಷ ತುಂಬಿದ ನಂತರ ಸಕ್ರಿಯ ರಾಜಕಾರಣದಿಂದ ಅನೇಕ ಬಿಜೆಪಿ ನಾಯಕರು ದೂರ ಸರಿದ ಬಗ್ಗೆ ಹಲವು ಉದಾಹರಣೆಗಳಿವೆ ಎಂದೂ ಸುಬ್ರಮಣಿಯನ್ ಸ್ವಾಮಿ ಹೇಳಿದ್ದಾರೆ. ಲೋಕಸಭೆ ಚುನಾವಣೆಯ ಪ್ರಚಾರದ ವೇಳೆ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಅವರೂ, ಪ್ರಧಾನಿ ಮೋದಿ ಅವರು 75ನೇ ವರ್ಷಕ್ಕೆ ಕಾಲಿಟ್ಟ ಮೇಲೆ ಅವರ ಪಕ್ಷದ ನಿಯಮದಂತೆ ನಿವೃತ್ತಿಯಾಗಬೇಕು. ನಂತರ ಮೋದಿ ಬದಲು ಅಮಿತ್ ಶಾ ಪ್ರಧಾನಿಯಾಗಲಿದ್ದಾರೆ ಎಂದು ಹೇಳಿಕೆ ನೀಡಿದ್ದರು.



## ವಿವಾದಿತ ಬೋಧಕ ಝಾಕೀರ್ ನಾಯ್ಕ್ ಭಾರತಕ್ಕೆ ಹಸ್ತಾಂತರಿಸಲು ಮಲೇಷ್ಯಾ ಸುಳಿವು

**ನವದೆಹಲಿ :** ವಿವಾದಿತ ಇಸ್ಲಾಮಿಕ್ ಬೋಧಕ ಝಾಕೀರ್ ನಾಯ್ಕ್ ನನ್ನು ಭಾರತಕ್ಕೆ ಹಸ್ತಾಂತರಿಸಲು ಸೂಕ್ತ ಸಾಕ್ಷ್ಯಾಧಾರಗಳನ್ನು ಒದಗಿಸಿದರೆ ಸಾಕು ಎಂದು ಹಸ್ತಾಂತರ ಕುರಿತು ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಸುಳಿವನ್ನು ನೀಡಿದ್ದಾರೆ. ಝಾಕೀರ್ ನಾಯ್ಕ್ ನ ಹಸ್ತಾಂತರ ಮಾಡಿ ಎಂಬುವುದು ಭಾರತದ ಮನವಿಯನ್ನು ತಮ್ಮ ಸರ್ಕಾರ ಪರಿಗಣಿಸಲಿದೆ ಎಂದು ಅನ್ವರ್ ಇಬ್ರಾಹಿಂ ಭರವಸೆ ಕೊಟ್ಟಿದ್ದಾರೆ ಎಂದು ವರದಿಯಾಗಿದೆ. ಹಸ್ತಾಂತರಿಸುವುದರಿಂದ ಉಭಯ ರಾಷ್ಟ್ರಗಳ ದ್ವಿಪಕ್ಷೀಯ ಸಂಬಂಧಕ್ಕೆ ಧಕ್ಕೆಯಾಗದಿರಲು ಸಹಾಯವಾಗಲಿದೆ ಎಂಬ ಅಭಿಪ್ರಾಯಗಳು ವ್ಯಕ್ತವಾಗಿವೆ. 2022ರಿಂದ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ನಂತರ ಮೊದಲ ಬಾರಿ ಅನ್ವರ್ ಇಬ್ರಾಹಿಂ ಭಾರತಕ್ಕೆ 3 ದಿನಗಳ ಭಾರತ ಪ್ರವಾಸ ಕೈಗೊಂಡಿದ್ದಾರೆ. ಇಂಡಿಯನ್ ಕೌನ್ಸಿಲ್ ಆಫ್ ವರ್ಲ್ಡ್ ಅಫೇರ್ಸ್‌ನಲ್ಲಿ ನಡೆದ ಅಧಿವೇಶನದಲ್ಲಿ ಝಾಕೀರ್ ನಾಯ್ಕ್ ಹಸ್ತಾಂತರ ಸಂಬಂಧ ಕುರಿತು ಅವರು ಪ್ರತಿಕ್ರಿಯೆ ನೀಡಿದ್ದಾರೆ. 2016 ರಲ್ಲಿ ಭಾರತ ತೊರೆದಿದ್ದ ಝಾಕಿರ್ ನಾಯ್ಕ್, ಅಕ್ರಮ ಹಣ ವರ್ಗಾವಣೆ ಮತ್ತು ದ್ವೇಷದ ಭಾಷಣಗಳಿಂದ ಉಗ್ರವಾದವನ್ನು ಪ್ರಚೋದಿಸುವ ಆರೋಪದ ಮೇಲೆ ಭಾರತೀಯ ಅಧಿಕಾರಿಗಳಿಗೆ ಅವನು ಅಗತ್ಯವಾಗಿ ಬೇಕಾಗಿದ್ದಾನೆ.

## ಇಸ್ರೇಲ್ ವಿರುದ್ಧ ಹೆಜ್ಬುಲ್ಲಾ 50ಕ್ಕೂ ಅಧಿಕ ರಾಕೆಟ್ ದಾಳಿ

**ಜೆರುಸಲೇಂ:** ಇಸ್ರೇಲ್ ವಿರುದ್ಧ ಸದಾ ದ್ವೇಷದ ಮಾತುಗಳನ್ನಾಡುತ್ತಿರುವ ಹೆಜ್ಬುಲ್ಲಾ ಉಗ್ರ ಸಂಘಟನೆ ಗೋಲನ್ ಹೈಟ್ಸ್ ಮೇಲೆ 50ಕ್ಕೂ ಅಧಿಕ ರಾಕೆಟ್ಗಳನ್ನು ಉಡಾಯಿಸಿದೆ. ಗೋಲನ್ ಹೈಟ್ಸ್ ಎನ್ನುವುದು ಸಿರಿಯಾದ ಒಂದು ಭಾಗವಾಗಿದ್ದು, ಅದನ್ನು ಇಸ್ರೇಲ್ ತನ್ನ ವಶಕ್ಕೆ ಪಡೆದುಕೊಂಡಿದೆ. ಮಂಗಳವಾರ ಇಸ್ರೇಲ್ ನಡೆಸಿದ ದಾಳಿಯಲ್ಲಿ 19 ಮಂದಿಗೆ ಗಾಯ ಮತ್ತು ಒಬ್ಬ ಅಸುನೀಗಿದ್ದಕ್ಕೆ ಪ್ರತೀಕಾರವಾಗಿ ಈ ದಾಳಿ ನಡೆಸಲಾಗಿದೆ ಎಂದು ಹೆಜ್ಬುಲ್ಲಾ ಹೇಳಿಕೊಂಡಿದೆ. ಗಾಜಾ ಪಟ್ಟಿಯಲ್ಲಿ ಕದನ ವಿರಾಮ ಜಾರಿ ಬಗ್ಗೆ ಅಮೆರಿಕ ವಿದೇಶಾಂಗ ಸಚಿವ ಆಯಂಟನಿ ಬ್ಲಿಂಕನ್ ಈಜಿಪ್ಟ್ ಮತ್ತು ಕತಾರ್ಗಳಲ್ಲಿ ಸಂಧಾನಕಾರರ ಜತೆಗೆ ಮಾತುಕತೆ ನಡೆಸಿದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ.

## ಜೆಕ್ ಗಣರಾಜ್ಯದಲ್ಲಿ ಬಾಂಬ್ ಸ್ಫೋಟದ ಬೆದರಿಕೆ

**ಜೆಕ್:** ಸ್ಫೋಟಗೊಳ್ಳದ ಬಾಂಬ್ ಪತ್ತೆಯಾದ ನಂತರ ಸ್ಫೋಟದ ಹೆಚ್ಚಿನ ಅಪಾಯದಿಂದಾಗಿ ಜೆಕ್ ಪೊಲೀಸರು ದೇಶದ ವಾಯುವ್ಯ ಪ್ರದೇಶದ ರಾಸಾಯನಿಕ ಸ್ಥಾವರದ ಸುತ್ತಮುತ್ತಲಿನ 582 ಜನರನ್ನು ಸ್ಥಳಾಂತರಿಸಿದ್ದಾರೆ. ಮೋಸ್ಟ್ ಜಿಲ್ಲೆಯ ಲಿಟ್ವಿನೋವ್ ಬಳಿಯ ಓರ್ಲೆನ್ ಯುನಿಪೆಟ್ರೋಲ್ ಸ್ಥಾವರದ ದೂರದ ಭಾಗದಲ್ಲಿ ಉತ್ಖನನ ಕಾರ್ಯದ ಸಮಯದಲ್ಲಿ ಎರಡನೇ ಮಹಾಯುದ್ಧದ ಸ್ಫೋಟಗೊಳ್ಳದ ವೈಮಾನಿಕ ಬಾಂಬ್ ಪತ್ತೆಯಾಗಿದೆ ಎಂದು ಜೆಕ್ ಸಂಸ್ಕರಣೆ ಮತ್ತು ಪೆಟ್ರೋಕೆಮಿಕಲ್ ಕಂಪನಿ ಬುಧವಾರ ತನ್ನ ವೆಬ್ಸೈಟ್‌ನಲ್ಲಿ ಹೇಳಿಕೆಯಲ್ಲಿ ತಿಳಿಸಿದೆ. ಪೊಲೀಸರು ಮತ್ತು ಪ್ರಾದೇಶಿಕ ಅಗ್ನಿಶಾಮಕ ರಕ್ಷಣಾ ಇಲಾಖೆಯ ತಜ್ಞರು ಮಧ್ಯಪ್ರವೇಶಿಸಿದರು ಮತ್ತು ಸ್ಥಾವರದ ಸಂಸ್ಕರಣಾ ಭಾಗದಲ್ಲಿ ಭಾಗಶಃ ಸ್ಥಳಾಂತರಿಸಲು ಆದೇಶಿಸಲಾಗಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. 250 ಕೆಜಿ ತೂಕದ ಬಾಂಬ್ ಆಗಸ್ಟ್ 27 ರವರೆಗೆ ಜಾರಿಯಲ್ಲಿರುತ್ತದೆ. ಮುಂದಿನ ಕ್ರಮದ ಬಗ್ಗೆ ನಿರ್ಧರಿಸಲು ಬಿಕ್ಕಟ್ಟು ತಂಡವು ಈಗ ಸಭೆ ಸೇರುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜೆಕ್ ಸುದ್ದಿ ಸಂಸ್ಥೆಯ ಪ್ರಕಾರ, ಎರಡನೇ ಮಹಾಯುದ್ಧದ ಸ್ಫೋಟಗೊಳ್ಳದ ಶಸ್ತ್ರಾಸ್ತ್ರಗಳು ಈ ಹಿಂದೆ ಮೋಸ್ಟ್ ಡಿಸ್ಟ್ರಿಕ್ಟ್‌ನಲ್ಲಿ ಪದೇ ಪದೇ ಕಂಡುಬಂದಿವೆ. ಮೇ 2021 ರಲ್ಲಿ, ರಾಸಾಯನಿಕ ಸ್ಥಾವರದ ಆವರಣದಲ್ಲಿ ವೈಮಾನಿಕ ಬಾಂಬ್ ಪತ್ತೆಯಾದ ನಂತರ 5,400 ಜನರನ್ನು ಸ್ಥಳಾಂತರಿಸಬೇಕಾಯಿತು.

## ಪೋಲೆಂಡ್‌ನಲ್ಲಿ ಭರ್ಜರಿ ಸ್ವಾಗತ ಸ್ವೀಕರಿಸಿದ ಮೋದಿಯಿಂದ ಮಕ್ಕಳೊಂದಿಗೆ 'ಸಂವಾದ'

**ವಾರ್ಸಾ(ಪೋಲೆಂಡ್):** ಪ್ರಧಾನಿ ನರೇಂದ್ರ ಮೋದಿ ಅವರು ಎರಡು ದಿನಗಳ ಭೇಟಿಗಾಗಿ ಸೋಮವಾರ ಪೋಲೆಂಡ್ ಗೆ ಆಗಮಿಸಿದ್ದಾರೆ.

'ಮೋದಿ, ಮೋದಿ' ಘೋಷಣೆಗಳನ್ನು ಕೂಗಿದ ಭಾರತೀಯ ಸಮುದಾಯದ ಸದಸ್ಯರಿಂದ ಅವರಿಗೆ ಆತ್ಮೀಯ ಸ್ವಾಗತ ದೊರೆತಿದೆ. ಕಳೆದ 45 ವರ್ಷಗಳಲ್ಲಿ ಭಾರತದ ಪ್ರಧಾನಿಯೊಬ್ಬರು ಪೋಲೆಂಡ್ಗೆ ಭೇಟಿ ನೀಡುತ್ತಿರುವುದು ಇದೇ ಮೊದಲು.

ಭಾರತೀಯ ಡಯಾಸ್ಪೋರಾ ಸದಸ್ಯರು ಪ್ರಧಾನಿ ಮೋದಿಯವರನ್ನು ಸ್ವಾಗತಿಸಿದರು. ಪ್ರಧಾನಿಯವರು ಸಭಿಕರತ್ತ ಕೈಬೀಸಿ ಅಲ್ಲಿದ್ದ ಕೆಲವರಿಗೆ ಹಸ್ತಲಾಘವ ಮಾಡಿದರು. ಭಾರತೀಯ ಸಮುದಾಯದ ಸದಸ್ಯರು ಪ್ರಧಾನಿ ಮೋದಿಯವರನ್ನು ಶ್ಲಾಘಿಸಿ ''ಭಾರತ್ ಮಾತಾ ಕಿ ಜೈ'' ಘೋಷಣೆಗಳನ್ನು ಕೂಗಿದ್ದಾರೆ.

ವರ್ಣರಂಜಿತ ಭಾರತೀಯ ಉಡುಪುಗಳನ್ನು ಧರಿಸಿದ್ದ ಕಲಾವಿದರ ಪ್ರದರ್ಶನವನ್ನು ಅವರು ವೀಕ್ಷಿಸಿದರು. ಪ್ರಧಾನ ಮಂತ್ರಿಗಳು ಪ್ರದರ್ಶನವನ್ನು ಶ್ಲಾಘಿಸಿದರು ಮತ್ತು ಕಲಾವಿದರೊಂದಿಗೆ ಫೋಟೋ ತೆಗೆಸಿಕೊಂಡಿದ್ದಾರೆ.

ವಾರ್ಸಾದ ಹೋಟೆಲ್ಗೆ ಆಗಮಿಸಿದ ಪ್ರಧಾನಿ ಮಕ್ಕಳೊಂದಿಗೆ ಸಂವಾದ ನಡೆಸಿದರು.

ಪ್ರಧಾನಿ ಮೋದಿ ಮತ್ತು ಅವರ ತಾಯಿಯ ಫೋಟೋವನ್ನು ತಂದಿದ್ದ ವಾರ್ಸಾದಲ್ಲಿರುವ ಭಾರತೀಯ ಡಯಾಸ್ಪೊರಾ ಸದಸ್ಯೆ ಪ್ರಿಯಾಂಕಾ ಪಟೇಲ್ ಅವರು ಸಹಿ ಪಡೆದುಕೊಂಡಿದ್ದಾರೆ.

ನನಗೆ ತುಂಬಾ ಸಂತೋಷವಾಗಿದೆ. ಅವರು ಫೋಟೋಗೆ ಸಹಿ ಮಾಡಿದರು. ಅವರು ನನ್ನ ರಾಖಿಯನ್ನೂ ಸ್ವೀಕರಿಸಿದರು ಎಂದು ಪ್ರಿಯಾಂಕಾ ಹೇಳಿದ್ದಾರೆ. ಇದಕ್ಕೂ ಮುನ್ನ ವಾರ್ಸಾ ವಿಮಾನ ನಿಲ್ದಾಣದಲ್ಲಿ ಪ್ರಧಾನಿ ಮೋದಿಯವರಿಗೆ ವಿಧ್ಯುಕ್ತ ಸ್ವಾಗತ ನೀಡಲಾಯಿತು. ಪೋಲೆಂಡ್ಗೆ ಬಂದಿಳಿದೆ. ಇಲ್ಲಿನ ವಿವಿಧ ಕಾರ್ಯಕ್ರಮಗಳನ್ನು ಎದುರು ನೋಡುತ್ತಿದ್ದೇನೆ. ಈ ಭೇಟಿಯು ಭಾರತ-ಪೋಲೆಂಡ್ ಸ್ನೇಹಕ್ಕೆ ವೇಗವನ್ನು ನೀಡುತ್ತದೆ ಮತ್ತು ನಮ್ಮ ರಾಷ್ಟ್ರಗಳ ಜನರಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.



## ಬಾಂಬ್ ಬೆದರಿಕೆ ಕರೆ: ಕೇರಳದ ತಿರುವನಂತಪುರ ವಿಮಾನ ನಿಲ್ದಾಣದಲ್ಲಿ ತುರ್ತು ಸ್ಥಿತಿ ಹೇರಿಕೆ




**ತಿರುವನಂತಪುರಂ:** ಮುಂಬೈನಿಂದ ಬಂದ ಏರ್ ಇಂಡಿಯಾ ವಿಮಾನಕ್ಕೆ ಬಾಂಬ್ ಬೆದರಿಕೆ ಬಂದ ಹಿನ್ನೆಲೆಯಲ್ಲಿ ಇಂದು ಗುರುವಾರ ತಿರುವನಂತಪುರಂ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸಂಪೂರ್ಣ ತುರ್ತು ಪರಿಸ್ಥಿತಿ ಘೋಷಿಸಲಾಗಿದೆ ಎಂದು ವಿಮಾನ ನಿಲ್ದಾಣದ ಮೂಲಗಳು ತಿಳಿಸಿವೆ.

135 ಪ್ರಯಾಣಿಕರಿದ್ದ ವಿಮಾನವನ್ನು ಬೆಳಿಗ್ಗೆ 8 ಗಂಟೆ ಸುಮಾರಿಗೆ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿಸಿ ಪ್ರತ್ಯೇಕ ಕಡೆಗೆ ಸ್ಥಳಾಂತರಿಸಲಾಯಿತು. ಬೆಳಗ್ಗೆ 8.44ರ ವೇಳೆಗೆ ಪ್ರಯಾಣಿಕರನ್ನು ಸುರಕ್ಷಿತವಾಗಿ ವಿಮಾನದಿಂದ ಹೊರತರಲಾಯಿತು. ವಿಮಾನವು ತಿರುವನಂತಪುರಂ ವಿಮಾನ ನಿಲ್ದಾಣವನ್ನು ಸಮೀಪಿಸುತ್ತಿದ್ದಂತೆ ಪೈಲಟ್ ಗೆ ಬೆಳಗ್ಗೆ 7.30 ಕ್ಕೆ ಬಾಂಬ್ ಬೆದರಿಕೆ ಬಗ್ಗೆ ತಿಳಿಸಲಾಯಿತು ಎಂದು ಮೂಲಗಳು ತಿಳಿಸಿವೆ.

ತರುವಾಯ, ಬೆಳಗ್ಗೆ 7.36 ಕ್ಕೆ ವಿಮಾನ ನಿಲ್ದಾಣದಲ್ಲಿ ಸಂಪೂರ್ಣ ತುರ್ತು ಪರಿಸ್ಥಿತಿಯನ್ನು ಘೋಷಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದರು.

ಬೆದರಿಕೆಯ ಮೂಲದ ವಿವರಗಳು ಮತ್ತು ಇತರ ಮಾಹಿತಿಯನ್ನು ನಿರೀಕ್ಷಿಸಲಾಗುತ್ತಿದೆ ಎಂದು ಅವರು ಹೇಳಿದರು.

## 7 ದಿನ ಖಾಸಗಿ ಚಾನೆಲ್ ಪ್ರಸಾರ ಸ್ಥಗಿತ: ಬಾಂಗ್ಲಾ ಹೈಕೋರ್ಟ್

**ಢಾಕಾ:** ಖಾಸಗಿ ಚಾನೆಲ್ ಸೊಮೊಯ್ ಟಿವಿಯ ಪ್ರಸಾರವನ್ನು 7 ದಿನಗಳ ಕಾಲ ಸ್ಥಗಿತಗೊಳಿಸುವಂತೆ ಬಾಂಗ್ಲಾದೇಶದ ಹೈಕೋರ್ಟ್ ಆದೇಶಿಸಿದೆ.

ಸೊಮೊಯ್ ಮೀಡಿಯಾ ಲಿಮಿಟೆಡ್ನ ವ್ಯವಸ್ಥಾಪಕ ನಿರ್ದೇಶಕ ಶಂಪಾ ರೆಹಮಾನ್ ಅವರು ಸಲ್ಲಿಸಿದ ರಿಟ್ ಅರ್ಜಿಯ ನಂತರ ಹೈಕೋರ್ಟ್, ಸೊಮೊಯ್ ಟಿವಿಯ ಪ್ರಸಾರವನ್ನು 7 ದಿನಗಳ ಕಾಲ ಸ್ಥಗಿತಗೊಳಿಸಿದೆ.ಚಾನೆಲ್ನ ನಿರ್ವಹಣೆಯಲ್ಲಿ ಇತ್ತೀಚಿನ ಬದಲಾವಣೆಗಳ ನಂತರ ಅಮಾನತುಗೊಳಿಸಲಾಗಿದೆ. ಆಗಸ್ಟ್ 14 ರಂದು ಸೊಮೊಯ್ ಟಿವಿಯ ಎಂಡಿ ಮತ್ತು ಸಿಇಒ ಸ್ಥಾನದಿಂದ ಅಹ್ಮದ್ ಜುಬೇರ್ ಅವರನ್ನು ತೆಗೆದುಹಾಕಲಾಯಿತು. ಸಿಟಿ ಗ್ರೂಪ್ ಪರವಾಗಿ ಶಂಪಾ ರೆಹಮಾನ್ ಅವರನ್ನು ನೇಮಿಸಲಾಯಿತು. ಚಾನೆಲ್ ಸಿಟಿ ಗ್ರೂಪ್ನ ಅಂಗಸಂಸ್ಥೆಯಾದ ಸೊಮೊಯ್ ಮೀಡಿಯಾ ಲಿಮಿಟೆಡ್ನ ಒಡೆತನದಲ್ಲಿದೆ.

## 12 ಪ್ರಕರಣಗಳಲಿ ಮಾಜಿ ಪ್ರಧಾನಿ ಇಮ್ರಾನ್ ಪತ್ನಿ ಖುಲಾಸೆ

**ಇಸ್ಲಾಮಾಬಾದ್ :** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ಖಾನ್ ಅವರ ಪತ್ನಿ ಬುಷ್ರಾ ಬೀಬಿಯನ್ನು 2023ರ ಗಲಭೆಗೆ ಸಂಬಂಧಿಸಿದ 12 ಪ್ರಕರಣಗಳಲ್ಲಿ ವಿಶೇಷ ನ್ಯಾಯಾಲಯ ಖುಲಾಸೆಗೊಳಿಸಿರುವುದಾಗಿ ವರದಿಯಾಗಿದೆ.

ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿ ವಿಚಾರಣೆ ನಡೆಸಲು ಕಳೆದ ವರ್ಷ ಇಮ್ರಾನ್ಖಾನ್‌ರನ್ನು ಇಸ್ಲಾಮಾಬಾದ್‌ನಲ್ಲಿ ಅಧಿಕಾರಿಗಳು ಬಂಧಿಸಿದ ಬಳಿಕ ಅವರ ಪಕ್ಷದ(ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್ ಅಥವಾ ಪಿಟಿಐ) ಬೆಂಬಲಿಗರು ಸೇನೆಯ ಪ್ರಧಾನ ಕಚೇರಿ ಸೇರಿದಂತೆ ಹಲವು ಸರಕಾರಿ ಸಂಸ್ಥೆಗಳ ಕಚೇರಿ ಮೇಲೆ ದಾಳಿ ನಡೆಸಿದ್ದರು. ಈ ಗಲಭೆಗೆ ಇಮ್ರಾನ್ಖಾನ್ ಹಾಗೂ ಅವರ ಪತ್ನಿ ಪ್ರಚೋದನೆ ನೀಡಿದ್ದರು ಎಂದು ಪ್ರಕರಣ ದಾಖಲಾಗಿತ್ತು.ಬುಷ್ರಾ ಬೀಬಿಯ ವಿರುದ್ಧ ದಾಖಲಾಗಿದ್ದ 12 ಪ್ರಕರಣಗಳ ವಿಚಾರಣೆಗೆ ಅವರ ಖುದ್ದು ಹಾಜರಾತಿ ಕೋರಿ ಪೊಲೀಸರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಅಡಿಯಾಲಾ ಜೈಲಿನ ವಿಶೇಷ ನ್ಯಾಯಾಲಯ, ಪೊಲೀಸರ ಮನವಿಯನ್ನು ತಿರಸ್ಕರಿಸಿ ಬುಷ್ರಾ ಬೀಬಿಯನ್ನು ಎಲ್ಲಾ 12 ಪ್ರಕರಣಗಳಿಂದಲೂ ಖುಲಾಸೆಗೊಳಿಸಿರುವುದಾಗಿ ಅವರ ವಕೀಲರು ಹೇಳಿದ್ದಾರೆ.



## ಪತ್ರಕರ್ತರ ಬಂಧನ, ಹಿಂದೂ ಶಿಕ್ಷಕರ ರಾಜೀನಾಮೆಗೆ ಒತ್ತಡ

# ಇನ್ನೂ ಸಹಜ ಸ್ಥಿತಿಗೆ ಬಾರದ ಬಾಂಗ್ಲಾದೇಶ

**ನವದೆಹಲಿ:** ಸುಮಾರು ಎರಡು ವಾರಗಳ ಹಿಂದೆ ಬಾಂಗ್ಲಾದೇಶದಲ್ಲಿ ಮಧ್ಯಂತರ ಸರ್ಕಾರ ರಚನೆಯಾಗಿದ್ದರೂ, ಪರಿಸ್ಥಿತಿ ಇನ್ನೂ ಸಹಜ ಸ್ಥಿತಿಗೆ ಮರಳಿಲ್ಲ. ಪತ್ರಕರ್ತರನ್ನು ಬಂಧಿಸಲಾಗುತ್ತಿದೆ ಮತ್ತು ಹಿಂದೂ ಶಿಕ್ಷಕರು ಕೆಲಸ ಕಳೆದುಕೊಳ್ಳುತ್ತಿದ್ದಾರೆ.

ಇದಲ್ಲದೆ, ವಿದ್ಯಾರ್ಥಿಗಳು ಜಾಗೃತ ಗುಂಪುಗಳನ್ನು ರಚಿಸಿಕೊಂಡಿದ್ದು, ತಮ್ಮನ್ನು ಹೇಗೆ ನಡೆಸಿಕೊಳ್ಳಬೇಕೆಂದು ನಾಗರಿಕರಿಗೆ ಉಪದೇಶ ನೀಡುತ್ತಿದ್ದಾರೆ. ಮಾಜಿ ಪ್ರಧಾನಿ ಶೇಕ್ ಹಸೀನಾ ನೇತೃತ್ವದ ಆಡಳಿತಕ್ಕೆ ನಿಕಟವಾಗಿದ್ದ ಪತ್ರಕರ್ತರನ್ನು ಅಪರಾಧಿಗಳೆಂದು ಪರಿಗಣಿಸಲಾಗುತ್ತಿದೆ.

ಖಾಸಗಿ ಚಾನೆಲ್‌ನ ಮಾಜಿ ಸಂಪಾದಕ ಶಕೀಲ್ ಅಹ್ಮದ್ ಮತ್ತು ಅವರ ಪತ್ನಿ ಫರ್ಜಾನಾ ರೂಪಾ ಹಾಗೂ ಮತ್ತೊಬ್ಬ ಪತ್ರಕರ್ತರನ್ನು ಬುಧವಾರ ಫ್ರಾನ್ಸ್‌ಗೆ ತೆರಳಲು ಪ್ರಯತ್ನಿಸುತ್ತಿದ್ದಾಗ ಅವರನ್ನು ಢಾಕಾ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿದೆ.

ಏತನ್ಮಧ್ಯೆ, ವಿವಿಧ ಶಾಲಾ-ಕಾಲೇಜುಗಳ ಸುಮಾರು 70 ಹಿಂದೂ ಶಿಕ್ಷಕರಿಗೆ ರಾಜೀನಾಮೆ ನೀಡುವಂತೆ ಒತ್ತಾಯಿಸಲಾಗಿದೆ. ಇವರಲ್ಲಿ ಅಜೀಂಪುರ ಸರ್ಕಾರಿ ಬಾಲಕಿಯರ ಶಾಲೆ ಮತ್ತು ಕಾಲೇಜಿನ ಪ್ರಾಂಶುಪಾಲೆ ಗೀತಾಂಜಲಿ ಬರುವಾ ಅವರಿಗೆ ರಾಜೀನಾಮೆ ನೀಡುವಂತೆ ಒತ್ತಾಯಿಸಿ ವಿದ್ಯಾರ್ಥಿನಿಯರು ಮರಕ್ಕೆ ಕಟ್ಟಿ ಹಾಕಿದ್ದರು. ಸೇನೆ ಮಧ್ಯಪ್ರವೇಶಿಸಿ ಅವರನ್ನು ರಕ್ಷಿಸಿದೆ.

ಅದೇ ರೀತಿ ಮತ್ತೊಬ್ಬ ಹಿಂದೂ ಶಿಕ್ಷಕಿ ಸೋನಾಲಿ ರಾಣಿ ದಾಸ್ ಅವರಿಗೂ ರಾಜೀನಾಮೆ ನೀಡುವಂತೆ ಒತ್ತಡ ಹೇರಲಾಗಿದ್ದು, ಅವರು ಹಾಲಿ ರೆಡ್ ಕ್ರೆಸೆಂಟ್ ನರ್ಸಿಂಗ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾಗಿದ್ದಾರೆ.

ಈ ಎಲ್ಲಾ ಘಟನೆಗಳನ್ನು ಗಮನಿಸಿದರೆ ಬಾಂಗ್ಲಾದೇಶ ಇನ್ನೂ ಸಹಜ ಸ್ಥಿತಿಗೆ ಮರಳಿಲ್ಲ. ಜನರು ತಮ್ಮ ಹಿಂದಿನ ದಿನಚರಿಗೆ ಮರಳಲು ಮನೆಗಳಿಂದ ಹೊರಬರುತ್ತಿದ್ದರೂ ಉದ್ವಿಗ್ನತೆ ಇದೆ ಎಂದು ರಾಜಕೀಯ ವಿಶ್ಲೇಷಕ ಪ್ರೊಫೆಸರ್ ನಜ್ಮುಲ್ ಅಹ್ಸಾನ್ ಕಲ್ಲಿಮ್ಮುಲ್ಲಾ ಅವರು ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ಗೆ ತಿಳಿಸಿದ್ದಾರೆ.



## ಶರದ್ ಪವಾರ್‌ಗೆ ಕೇಂದ್ರದಿಂದ ಝಡ್ ಪ್ಲಸ್ ಭದ್ರತೆ

**ಮುಂಬೈ:** ನ್ಯಾಶನಲಿಸ್ಟ್ ಕಾಂಗ್ರೆಸ್ ಪಾರ್ಟಿ-ಎಸ್‌ಪಿ ಮುಖ್ಯಸ್ಥ ಶರದ್ ಪವಾರ್ ಅವರಿಗೆ ಕೇಂದ್ರ ಸರ್ಕಾರ ಬುಧವಾರ ಅತ್ಯುನ್ನತ ವರ್ಗದ ಸಶಸ್ತ್ರ ವಿಐಪಿ ಭದ್ರತೆ ಝಡ್ ಪ್ಲಸ್ ಭದ್ರತೆ ಒದಗಿಸಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಕೇಂದ್ರ ಗೃಹ ಸಚಿವಾಲಯವು 83 ವರ್ಷದ ಮಹಾರಾಷ್ಟ್ರ ಮಾಜಿ ಮುಖ್ಯಮಂತ್ರಿಗೆ ಝಡ್ ಪ್ಲಸ್ ಭದ್ರತೆ ಒದಗಿಸುವಂತೆ ಕೇಂದ್ರ ಮೀಸಲು ಪೊಲೀಸ್ ಪಡೆಗೆ ಸೂಚಿಸಿದೆ.

ಶರದ್ ಪವಾರ್ ಅವರ ಭದ್ರತೆಗಾಗಿ 55 ಶಸ್ತ್ರಸಜ್ಜಿತ ಸಿಆರ್‌ಪಿಎಫ್ ಸಿಬ್ಬಂದಿಯ ತಂಡವನ್ನು ನಿಯೋಜಿಸಲಾಗಿದೆ. ಕೇಂದ್ರ ಗುಪ್ತಚರ ಸಂಸ್ಥೆಗಳು, ಶರದ್ ಪವಾರ್ ಅವರಿಗೆ ಕೆಲವು ಸಮಾಜ ಘಾತುಕ ಶಕ್ತಿಗಳಿಂದ ಅಪಾಯವಿದೆ ಎಂಬ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಅವರಿಗೆ ಝಡ್ ಪ್ಲಸ್ ಭದ್ರತೆಯನ್ನು ಒದಗಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಶರದ್ ಪವಾರ್ ಅವರಿಗೆ ಝಡ್ ಪ್ಲಸ್ ಭದ್ರತೆ ಒದಗಿಸಲು ಸಿಆರ್‌ಪಿಎಫ್ ತಂಡ ಈಗಾಗಲೇ ಮಹಾರಾಷ್ಟ್ರದಲ್ಲಿದೆ ಎಂದು ಅವರು ಹೇಳಿದ್ದಾರೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಅತಿಕಾಯ' ಸಿನಿಮಾದ ಮಾಸ್ ಲುಕ್‌ನಲ್ಲಿ ನಿರೂಪ್ ಭಂಡಾರಿ



ಚಾಕೋಲೇಟ್ ಬಾಯ್, ಲವರ್ ಬಾಯ್ ಗೆಟಪ್‌ನಲ್ಲಿ ಮಿಂಚುತ್ತಿದ್ದ ನಿರೂಪ್ ಭಂಡಾರಿ, ಇದೀಗ ಮಾಸ್ ಲುಕ್‌ನಲ್ಲಿ ಕಾಣಿಸಿಕೊಂಡು ಅಚ್ಚರಿ ಮೂಡಿಸಿದ್ದಾರೆ. ರಕ್ತಸಿಕ್ತ ಮುಖ, ಲಾಂಗ್ ಹಿಡಿದು ನಿರೂಪ್ ಕ್ಯಾಮೆರಾ ಎದುರಿಸಿದ್ದಾರೆ. ಇದು ಯಾವ ಚಿತ್ರಕ್ಕಾಗಿ ಅಂತೀರಾ? ನಿರೂಪ್ 'ಅತಿಕಾಯ' ಎನ್ನುವ ಹೊಸ ಸಿನಿಮಾದಲ್ಲಿ ಕಾಣಿಸಿಕೊಳ್ಳುತ್ತಿದ್ದು ಸಿಕ್ಕಾಪಟ್ಟೆ ರಗಡ್ ಆಗಿ ದರ್ಶನ ಕೊಡಲು ಸಜ್ಜಾಗಿದ್ದಾರೆ.

ಅಂದಹಾಗೆ ಅತಿಕಾಯ ಸಿನಿಮಾ ನಾಗರಾಜ್ ಪೀಣ್ಯ ನಿರ್ದೇಶನದಲ್ಲಿ ಮೂಡಿ ಬರುತ್ತಿದೆ. ಈ ಹಿಂದೆ ಪದೇ ಪದೇ, ನಮಕ್‌ಹರಾಮ್ ಮೊದಲಾದ ವಿಭಿನ್ನ ರೀತಿಯ ಸಿನಿಮಾಗಳನ್ನು ನಿರ್ದೇಶಿಸಿದ್ದ ನಾಗರಾಜ್ ಪೀಣ್ಯ, ಸಣ್ಣ ಗ್ಯಾಪ್‌ನ ಬಳಿಕ 'ಅತಿಕಾಯ'ನಿಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಈ ಬಾರಿ ಹೊಸ ರೀತಿಯ ಕಥೆ ಸಿದ್ಧಪಡಿಸಿಕೊಂಡು ಅಖಾಡಕ್ಕಿಳಿದಿರುವ ನಾಗರಾಜ್, ಈಗಾಗಲೇ ಮೊದಲ ಹಂತದ ಶೂಟಿಂಗ್ ಮುಗಿಸಿದ್ದಾರೆ. ಮತ್ತೊಂದು ಹಂತದ ಚಿತ್ರೀಕರಣಕ್ಕೆ ಅಣಿಯಾಗುತ್ತಿದೆ ಚಿತ್ರತಂಡ.

ಈವರೆಗೂ ಬೆಂಗಳೂರಿನ ಜನಜಂಗುಳಿ ಪ್ರದೇಶಗಳಲ್ಲೇ ಬಹುತೇಕ ಚಿತ್ರೀಕರಣ ನಡೆಸಲಾಗಿದ್ದು, ನೈಜವಾಗಿ ಮೂಡಿಬರಬೇಕೆಂಬ ಕಾರಣದಿಂದ ರಿಯಲಿಸ್ಟಿಕ್ ಆಗಿಯೇ ಶೂಟ್ ಮಾಡಲಾಗಿದೆಯಂತೆ. ಇದೀಗ ಚಿತ್ರದ ಫಸ್ಟ್‌ಲುಕ್ ಬಿಡುಗಡೆ ಮಾಡಲಾಗಿದ್ದು, ನಿರೂಪ್ ಮಾಸ್ ಗೆಟಪ್ ಅನಾವರಣಗೊಂಡಿದೆ. ನಿರೂಪ್ ಅವರ ಈ ಲುಕ್ ನೋಡಿ ಸಿನಿ ಅಭಿಮಾನಿಗಳು ಕೂಡ ಅಚರಚರಿಗೊಂಡಿದ್ದಾರೆ.

'ಈ ಚಿತ್ರಕ್ಕಾಗಿ ನಿರೂಪ್ ಭಂಡಾರಿ ಸಾಕಷ್ಟು ತಯಾರಿ ಮಾಡಿಕೊಂಡಿದ್ದಾರೆ. ವರ್ಕೌಟ್ ಮಾಡಿ ದೇಹ ದಂಡಿಸಿದ್ದಾರೆ. ಪಾತ್ರಕ್ಕಾಗಿ ಗೆಟಪ್ ಸಹ ಬದಲಾಯಿಸಿಕೊಂಡಿದ್ದಾರೆ. ಅವರು ಈವರೆಗೂ ಕಾಣಿಸಿಕೊಂಡಿರದ ಲುಕ್‌ನಲ್ಲಿ 'ಅತಿಕಾಯ' ಮೂಲಕ ಎಂಟ್ರಿ ಕೊಡಲಿದ್ದಾರೆ ಎಂಬುದು ವಿಶೇಷ. ಡೈಲಾಗ್ ಡೆಲಿವರಿ ಕೂಡ ಭಿನ್ನವಾಗಿರಲಿದೆ. ಒಟ್ಟಾರೆ ಅವರು ಔಟ್ ಆಂಡ್ ಔಟ್ ಬದಲಾದ ರೂಪದಲ್ಲಿ ಕಾಣಸಿಗುತ್ತಾರೆ. ಸಿನಿಮಾ ಕೂಡ ತುಂಬಾ ರಗಡ್ ಆಗಿರಲಿದೆ' ಎಂದು ವಿವರಿಸುತ್ತಾರೆ ನಿರ್ದೇಶಕ ನಾಗರಾಜ್ ಪೀಣ್ಯ. ಉದಯಲೀಲ ಛಾಯಾಗ್ರಹಣವಿರುವ ಈ ಚಿತ್ರಕ್ಕೆ ಶ್ರೀನಿವಾಸ್ ಪಿ ಬಾಬು ಸಂಕಲನ, ಸತೀಶ್ ಆರ್ಯನ್ ಸಂಗೀತ ಸಂಯೋಜಿಸುತ್ತಿದ್ದಾರೆ.



# 'ಲಂಗೋಟಿ ಮ್ಯಾನ್' ಚಿತ್ರದ ಟೀಸರ್ ರಿಲೀಸ್ ಮಾಡಿದ ಶರಣ್



ತ್ರಿನು ಟಾಕೀಸ್ ಲಾಂಛನದಲ್ಲಿ ನಿರ್ಮಾಣವಾಗಿರುವ ಹಾಗೂ ಸಂಜೋತ ಭಂಡಾರಿ ಕಥೆ ಬರೆದು ನಿರ್ದೇಶಿಸಿರುವ ''ಲಂಗೋಟಿ ಮ್ಯಾನ್'' ಚಿತ್ರದ ಟೀಸರ್ ಇತ್ತೀಚೆಗೆ ಬಿಡುಗಡೆಯಾಯಿತು. ನಟ ಶರಣ್ ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರದ ಟೀಸರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ನಾನು ಹತ್ತು ವರ್ಷಗಳ ಹಿಂದೆ ''ಮಿರ್ಚಿ ಮಂಡಕ್ಕಿ ಖಡಕ್ ಚಾಯ್'' ಚಿತ್ರವನ್ನು ನಿರ್ದೇಶಿಸಿದ್ದೆ. ಇದು ಎರಡನೇ ಚಿತ್ರ ಎಂದು ಮಾತನಾಡಿದ ನಿರ್ದೇಶಕಿ ಸಂಜೋತ ಭಂಡಾರಿ, ನಾನು ಬೇರೆ ಒಂದು ಚಿತ್ರದ ಕಥೆ ಮಾಡುತ್ತಿದ್ದಾಗ ಈ ಕಾನ್ಸೆಪ್ಟ್ ಬಂತು. ಆ ಚಿತ್ರದ ಕಥೆ ಮಾಡುತ್ತಿದ್ದಾಗಲೂ ನನಗೆ ಇದೇ ಕಥೆ ತಲೆಗೆ ಬರುತ್ತಿತ್ತು. ಕೊನೆಗೆ ''ಲಂಗೋಟಿ ಮ್ಯಾನ್'' ಸಿನಿಮಾ ಸ್ವರೂಪ ಪಡೆದುಕೊಂಡಿತು. ಈ ಚಿತ್ರದಲ್ಲಿ ನಿಜವಾದ ಹೀರೋ ಅಂದರೆ ''ಲಂಗೋಟಿ'' ನೇ. ಆಕಾಶ್ ರಾಂಬೊ, ಧೀರೇಂದ್ರ, ಮಹಾಲಕ್ಷ್ಮಿ, ಹುಲಿ ಕಾರ್ತಿಕ್, ಸಂಹಿತ ವಿನ್ಯ, ಗಿಲ್ಲಿ ನಟ, ಸ್ನೇಹ ಋಷಿ, ಪವನ್, ಆಟೋ ನಾಗರಾಜ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಕಥೆ ಹಾಗೂ ಸಂಭಾಷಣೆಯಲ್ಲೂ ಅನೇಕ ಮಿತ್ರರು ಸಹಾಯ ಮಾಡಿದ್ದಾರೆ. ಚಿತ್ರ ಗೆಲುವ ವಿಶ್ವಾಸ ನನಗಂತೂ ಇದೆ. ಟೀಸರ್ ಬಿಡುಗಡೆ ಮಾಡಿಕೊಟ್ಟ ಶರಣ್ ಅವರಿಗೆ ಹಾಗೂ ಸಹಕಾರ ನೀಡಿದ ನನ್ನ ತಂಡಕ್ಕೆ ಧನ್ಯವಾದ ಎಂದರು.

ಈ ಸಮಾರಂಭಕ್ಕೆ ಬಂದು ನಿರ್ದೇಶಕರ ಮಾತು ಕೇಳಿದ ಮೇಲೆ ಅವರಿಗೆ ಚಿತ್ರದ ಮೇಲಿರುವ ಭರವಸೆ ಹಾಗೂ ತಾವೊಬ್ಬರೆ ಕ್ರೆಡಿಟ್ ತೆಗೆದುಕೊಳ್ಳದೆ, ಚಿತ್ರತಂಡದ ಪ್ರತಿಯೊಬ್ಬರನ್ನು ಪರಿಚಯಿಸಿದ ರೀತಿ ಕಂಡು ಸಂತೋಷವಾಯಿತು. ಈಗಂತೂ ಕಂಟೆಂಟ್ ಓರಿಯಂಟೆಡ್ ಚಿತ್ರಗಳನ್ನೇ ಜನ ಹೆಚ್ಚು ಇಷ್ಟಪಡುತ್ತಿದ್ದಾರೆ. ಆ ಸಾಲಿಗೆ ಲಂಗೋಟಿ ಮ್ಯಾನ್'' ಸಹ ಸೇರಲಿ ಎಂದು ಶರಣ್ ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸೌತ್ ಡಿಸಿಸಿ ಪ್ರೆಸಿಡೆಂಟ್ ಓ ಮಂಜುನಾಥ್ ಅವರು ಚಿತ್ರತಂಡಕ್ಕೆ ಶುಭ ಹಾರೈಸಿದರು. ಚಿತ್ರದಲ್ಲಿ ನಟಿಸಿರುವ ಆಕಾಶ್ ರಾಂಬೊ, ಧೀರೇಂದ್ರ, ಸಂಹಿತ ವಿನ್ಯ ಮುಂತಾದ ಕಾಲವಿದರು ಚಿತ್ರದ ಕುರಿತು ಮಾತನಾಡಿದರು. ''ಲಂಗೋಟಿ ಮ್ಯಾನ್'' ಚಿತ್ರದ ಟೀಸರ್ ಹಾಗೂ ಪೋಸ್ಟರ್ ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಟೀಸರ್ ನೋಡಿದಾಗ ಮನೋರಂಜನಾ ಪ್ರಧಾನ ಚಿತ್ರ ಎನಿಸಿದರೂ, ಚಿತ್ರದ ಮೂಲಕ ಬೇರೊಂದು ವಿಷಯವನ್ನು ಹೇಳ ಹೊರಟಿರುವುದು ತಿಳಿಯುತ್ತದೆ.

# 'ಕಾಂತಾರ 1' ಸಿನಿಮಾದ ಬಿಗ್ ಅಪ್‌ಡೇಟ್




ರಾಷ್ಟ್ರ ಪ್ರಶಸ್ತಿ ವಿಜೇತ ರಿಷಬ್ ಶೆಟ್ಟಿ ನಟಿಸಿ, ನಿರ್ದೇಶನ ಮಾಡುತ್ತಿರುವ 'ಕಾಂತಾರ ಚಾಪ್ಟರ್ 1' ಸಿನಿಮಾ ಎಲ್ಲಿಯವರೆಗೆ ಬಂತು ಎಂಬುದರ ಬಗ್ಗೆ ಇದೀಗ ಇಂಟರೆಸ್ಟಿಂಗ್ ಅಪ್‌ಡೇಟ್ ಸಿಕ್ಕಿದೆ. ಇದೇ ಆಗಸ್ಟ್ ಕೊನೆಯ ವಾರದಲ್ಲಿ ಮತ್ತೆ 'ಕಾಂತಾರ 1' ಶೂಟಿಂಗ್ ಶುರುವಾಗಲಿದೆ ಎಂಬ ಮಾಹಿತಿ ಸಿಕ್ಕಿದೆ.

ಹೊಂಬಾಳೆ ಸಂಸ್ಥೆ ನಿರ್ಮಾಣದ ಬಹುನಿರೀಕ್ಷಿತ ಚಿತ್ರವು 2025ರ ಆರಂಭದಲ್ಲಿ ಚಿತ್ರಮಂದಿರಗಳಿಗೆ ಬರುವ ನಿರೀಕ್ಷೆಯಿದೆ. ಆಗಸ್ಟ್ ಕೊನೆಯ ವಾರದಲ್ಲಿ 4ನೇ ಹಂತದ ಶೂಟಿಂಗ್ ಶುರುವಾಗಲಿದೆ.

4ನೇ ಹಂತದ ಚಿತ್ರೀಕರಣದಲ್ಲಿ ಕಂಪ್ಲಿಟ್ ಹೈವೋಲ್ಟೇಜ್ ಆ್ಯಕ್ಷನ್ ದೃಶ್ಯಗಳು ಶೂಟ್ ಮಾಡಲಾಗುತ್ತದೆ. ಚಿತ್ರವು ಪೂರ್ಣಗೊಳ್ಳುವ ಹಂತದಲ್ಲಿದೆ. ಅದಕ್ಕಾಗಿ ತೆರೆಮರೆಯಲ್ಲಿ ಭಾರೀ ತಯಾರಿ ನಡೆಯುತ್ತಿವೆ.

'ಕಾಂತಾರ ಚಾಪ್ಟರ್ 1' ಸಿನಿಮಾ ಕಾಂತಾರದ ಹಿಂದಿನ ಕತೆಯಾಗಿದೆ. ಕದಂಬ ಯುಗದ ಪಂಜುರ್ಲಿ ದೇವತೆಯ ಕಥೆಯನ್ನು ಇದು ಹೊಂದಿದೆ. ಕಾಂತಾರ ಮೊದಲ ಭಾಗದ ಮೇಲೆ ಅಭಿಮಾನಿಗಳಿಗೆ ಬೆಟ್ಟದಷ್ಟು ನಿರೀಕ್ಷೆಯಿದೆ.

# ಇಂಗ್ಲೆಂಡ್ ವಿರುದ್ಧ ಪುಟಿದೆದ್ದ ಶ್ರೀಲಂಕಾ



ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫೋರ್ಡ್ ಮೈದಾನದಲ್ಲಿ ನಡೆಯುತ್ತಿರುವ ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಶ್ರೀಲಂಕಾ 236 ರನ್ ಕಲೆಹಾಕಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಲಂಕಾ ತಂಡವು ಬ್ಯಾಟಿಂಗ್ ಆಯ್ದುಕೊಂಡಿತು. ಆದರೆ ನಿರೀಕ್ಷಿತ ಆರಂಭ ಪಡೆಯಲು ಸಾಧ್ಯವಾಗಲಿಲ್ಲ. ಆರಂಭಿಕರಾದ ನಿಶಾಂಕ್ ಮದುಷ್ಕ (4) ಹಾಗೂ ಕರುಣರತ್ನೆ (2) 6 ರನ್ ಗಳಿಸುವಷ್ಟರಲ್ಲಿ ಪೆವಿಲಿಯನ್ ಸೇರಿದರು.

ಇನ್ನು ಆ ಬಳಿಕ ಬಂದ ಅನುಭವಿ ಏಂಜೆಲೊ ಮ್ಯಾಥ್ಯೂಸ್ (0) ಸೊನ್ನೆ ಸುತ್ತಿ ಹಿಂತಿರುಗಿದ್ದರು. ಇದರ ನಡುವೆ ಕುಸಾಲ್ ಮೆಂಡಿಸ್ 24 ರನ್ ಬಾರಿಸಿದರೆ, ಚಂಡಿಮಲ್ 17 ರನ್‌ಗಳ ಕೊಡುಗೆ ನೀಡಿದರು.

ಅತ್ತ 92 ರನ್‌ಗಳಿಗೆ 6 ವಿಕೆಟ್ ಉರುಳಿಸಿ ಇಂಗ್ಲೆಂಡ್ ಬೌಲರ್‌ಗಳು ಪಂದ್ಯದ ಮೇಲೆ ಹಿಡಿತ ಸಾಧಿಸಿದ್ದರು. ಈ ಹಂತದಲ್ಲಿ ಜೊತೆಗೂಡಿದ ಧನಂಜಯ ಡಿಸಿಲ್ವಾ ಹಾಗೂ ಮಿಲನ್ ರತ್ನಾಯಕೆ ಅತ್ಯುತ್ತಮ ಜೊತೆಯಾಟ ಪ್ರದರ್ಶಿಸಿದರು.

ಅಲ್ಪ ಮೊತ್ತಕ್ಕೆ ಕುಸಿಯುತ್ತಿದ್ದ ಶ್ರೀಲಂಕಾ ತಂಡಕ್ಕೆ ಆಸರೆಯಾಗಿ ನಿಂತ ಈ ಜೋಡಿ 63 ರನ್‌ಗಳನ್ನು ಕಲೆಹಾಕಿದರು. ಆದರೆ ತಂಡದ ಮೊತ್ತ 176 ರನ್ ಆಗಿದ್ದಾಗ ಧನಂಜಯ ಡಿಸಿಲ್ವಾ (74) ಶೊಯೇಬ್ ಬಶೀರ್ ಎಸೆತದಲ್ಲಿ ಔಟಾದರು.

ಇದಾಗ್ಯೂ ಏಕಾಂಗಿ ಹೋರಾಟ ಮುಂದುವರೆಸಿದ ಮಿಲನ್ 72 ರನ್‌ಗಳನ್ನು ಬಾರಿಸುವ ಮೂಲಕ ತಂಡದ ಮೊತ್ತವನ್ನು 200ರ ಗಡಿದಾಟಿಸಿದರು. ಅಂತಿಮವಾಗಿ ಶ್ರೀಲಂಕಾ ತಂಡವು 236 ರನ್‌ಗಳಿಸಿ ಆಲೌಟ್ ಆಯಿತು. ಇಂಗ್ಲೆಂಡ್ ಪರ ಸ್ಪಿನ್ನರ್ ಶೊಯೇಬ್ ಬಶೀರ್ 3 ವಿಕೆಟ್ ಕಬಳಿಸಿದರೆ, ವೇಗಿ ಮಾರ್ಕ್ ವುಡ್ 3 ವಿಕೆಟ್ ಉರುಳಿಸಿದರು.

ಇನ್ನು ಮೊದಲ ದಿನದಾಟದ ಅಂತ್ಯದ ವೇಳೆ ಇನಿಂಗ್ಸ್ ಆರಂಭಿಸಿರುವ ಇಂಗ್ಲೆಂಡ್ ತಂಡವು ಯಾವುದೇ ವಿಕೆಟ್ ನಷ್ಟವಿಲ್ಲದೆ 22 ರನ್‌ಗಳಿಸಿದೆ. ಸದ್ಯ ಬೆನ್ ಡಕೆಟ್ (13) ಹಾಗೂ ಡೇನಿಯಲ್ ಲಾರೆನ್ಸ್ (9) ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ.

ಇಂಗ್ಲೆಂಡ್ ಪ್ಲೇಯಿಂಗ್ 11: ಡೇನಿಯಲ್ ಲಾರೆನ್ಸ್ , ಬೆನ್ ಡಕೆಟ್ , ಒಲೀ ಪೋಪ್ (ನಾಯಕ) , ಜೋ ರೂಟ್ , ಹ್ಯಾರಿ ಬ್ರೂಕ್ , ಜೇಮೀ ಸ್ಮಿತ್ (ವಿಕೆಟ್ ಕೀಪರ್) , ಕ್ರಿಸ್ ವೋಕ್ಸ್ , ಗಸ್ ಅಟ್ಕಿನ್ಸನ್ , ಮ್ಯಾಥ್ಯೂ ಪಾಟ್ಸ್ , ಮಾರ್ಕ್ ವುಡ್ , ಶೋಯೆಬ್ ಬಶೀರ್.

ಶ್ರೀಲಂಕಾ ಪ್ಲೇಯಿಂಗ್ 11: ದಿಮುತ್ ಕರುಣಾರತ್ನೆ , ನಿಶಾನ್ ಮದುಷ್ಕ , ಕುಸಲ್ ಮೆಂಡಿಸ್ , ಏಂಜೆಲೊ ಮ್ಯಾಥ್ಯೂಸ್ , ದಿನೇಶ್ ಚಂಡಿಮಲ್ (ವಿಕೆಟ್ ಕೀಪರ್) , ಧನಂಜಯ ಡಿ ಸಿಲ್ವಾ (ನಾಯಕ) , ಕಮಿಂದು ಮೆಂಡಿಸ್ , ಪ್ರಭಾತ್ ಜಯಸೂರ್ಯ , ಅಸಿತ ಫೆರ್ನಾಂಡೋ , ವಿಶ್ವ ಫೆರ್ನಾಂಡೋ , ಮಿಲನ್ ರತ್ನಾಯಕೆ.

### ಕಾಂಗ್ರೆಸ್ ವಿರುದ್ಧ ಹೆಚ್‌ಡಿ ಕುಮಾರಸ್ವಾಮಿ ವಾಗ್ದಾಳಿ

# ಇದಕ್ಕೆಲ್ಲಾ ನಾನು ಹೆದರುವುದಿಲ್ಲ



**ಬೆಂಗಳೂರು:** ನೋಡೋಣ, ಇದಕ್ಕೆಲ್ಲಾ ನಾನು ಹೆದರುವುದಿಲ್ಲ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಹೇಳಿದರು. ತಮ್ಮ ವಿರುದ್ಧ ಪ್ರಾಸಿಕ್ಯೂಷನ್‌ಗೆ ಎಸ್‌ಐಟಿ ಅನುಮತಿ ಕೇಳಿದ ವಿಚಾರವಾಗಿ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು. ಜತೆಗೆ, ತನಿಖೆ ಮುಗಿದಿದ್ದರೆ ಯಾಕೆ ಸುಪ್ರೀಂ ಕೋರ್ಟ್‌ಗೆ ವರದಿ ಸಲ್ಲಿಸಿಲ್ಲ ಎಂದು ಪ್ರಶ್ನಿಸಿದರು.

ಗಣಿ ಅಕ್ರಮಗಳ ಪ್ರಕರಣದ ತನಿಖೆ ಶುರುವಾಯ್ತು. 2010 / 12ರಲ್ಲಿ ಸರ್ಕಾರಕ್ಕೆ ಎರಡು ಮೂರು ಟ್ರಂಕ್‌ಗಳಲ್ಲಿ ತಂದು ವರದಿ ಸಲ್ಲಿಸಿದರು. ಮೂರು ಜನ ಮಾಜಿ ಸಿಎಂಗಳ ಬಗ್ಗೆ ಕೆಲವು ವಿಷಯಗಳನ್ನ ಪ್ರಸ್ತಾಪ ಮಾಡಿದ್ದಾರೆ. ಎಸ್‌ಎಂ ಕೃಷ್ಣ, ಧರ್ಮಸಿಂಗ್ ಹಾಗೂ ನನ್ನದೂ ಸೇರಿ ಚಾಪ್ಟರ್ ಗಳಿವೆ. ಜಂತಕಲ್ ಮತ್ತು ಸಾಯಿ ವೆಂಕಟೇಶ್ವರ ಬಗ್ಗೆ ಯುವಿ ಸಿಂಗ್ ಕೊಟ್ಟಿರುವ ವರದಿಯಲ್ಲಿ, ಎರಡು ಪ್ರಕರಣಗಳಲ್ಲಿ ಯಾವುದೇ ಕ್ರಮಕ್ಕೆ ಶಿಫಾರಸು ಮಾಡುವುದಿಲ್ಲ, ಮುಂದಿನದ್ದು ಸರ್ಕಾರಕ್ಕೆ ಬಿಟ್ಟಿದ್ದು ಎಂದಿತ್ತು. ಅವತ್ತಿನ ಸರ್ಕಾರದ ಮೇಲೆ ದಾಖಲೆಗಳ ಸಮೇತ ಜನತೆ ಮುಂದೆ ಇಟ್ಟೆ ಎಂದು ಅವರು ತಿಳಿಸಿದರು.

2008ರಲ್ಲಿ ಸಿಎಂ ಆದ ಎರಡೇ ತಿಂಗಳಲ್ಲಿ ಗಣಿ ಮಾಲೀಕರಿಂದ 150 ಕೋಟಿ ರೂ. ಸಂಗ್ರಹ ಮಾಡಿದ್ದೇನೆ ಎಂದು ಬೆಂಬಲ ಕೊಟ್ಟ ಮೊತ್ತೊಬ್ಬ ಶಾಸಕರು ಆರೋಪ ಮಾಡಿದ್ದರು. ವಿರೋಧ ಪಕ್ಷವಾಗಿದ್ದ ಕಾಂಗ್ರೆಸ್ ದೊಡ್ಡ ಮಟ್ಟದಲ್ಲಿ ನನ್ನ ಸಿಲುಕಿಸಬೇಕಂತ ಹೊರಟಿತ್ತು. ಶಾಸಕರ ರಕ್ಷಣೆ ಪಡೆದು ನನ್ನ ಮೇಲೆ ಇದ್ದ ಅಪಾದನೆಯನ್ನ ಏಕಾಂಗಿಯಾಗಿ ಹೋರಾಟ ನಡೆಸಲು ಸಿದ್ದನಿದ್ದೇನೆ ಎಂದು ಹೇಳಿದ್ದೆ. ಚರ್ಚೆಯೂ ನಡೆಯಿತು. ಅದಕ್ಕೆ ದೊಡ್ಡ ಇತಿಹಾಸ ಇದೆ ನ್ಯಾಯಾಂಗ ತನಿಖೆಗೆ ಯಾರೂ ಅರ್ಜಿ ಹಾಕಲಿಲ್ಲ. ವಿರೋಧ ಪಕ್ಷದವರೂ ಹಾಕಲಿಲ್ಲ ನಮ್ಮ ಬೆಂಬಲಿತ ಶಾಸಕರು ಹಾಕಲಿಲ್ಲ. ಲೋಕಯುಕ್ತ ತನಿಖೆಗೂ ಆದೇಶ ಆಯ್ತು. ಆ ಆದೇಶ ಮಾಡಿದ್ದು ನಾನೇ ಎಂದು ಕುಮಾರಸ್ವಾಮಿ ಹೇಳಿದರು.

ಲೋಕಾಯುಕ್ತದಲ್ಲಿ ಸಿದ್ದರಾಮಯ್ಯ ವಿರುದ್ಧ 61 ಕೇಸ್‌ಗಳು ಇವೆಯಂತೆ. ತನಿಖೆಯಾಗದೆ 50 ಕೇಸ್ ಬಾಕಿ ಉಳಿದಿವೆ. ಅವರು (ಸಿದ್ದರಾಮಯ್ಯ) ನನ್ನದು ತೆರೆದ ಪುಸ್ತಕ, ಹಿಂದುಳಿದ ನಾಯಕ ಎಂದಿದ್ದಾರೆ. ಸರ್ಕಾರ ಬೀಳಿಸುವುದಕ್ಕೆ ಪ್ಲ್ಯಾನ್ ಮಾಡುತ್ತಿದ್ದಾರೆಂದು ಆರೋಪಿಸಿದ್ದಾರೆ. ಅವರು ಸರಿ ಇದ್ದಿದ್ದರೆ ವಿರೋಧ ಪಕ್ಷದವರು ಏನು ಮಾಡುತ್ತಾರೆ ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

2017ರಲ್ಲಿ ನನಗೆ ಎಸ್‌ಐಟಿ ಅಧಿಕಾರಿಗಳು ನೋಟಿಸ್ ಕೊಟ್ಟರು. 2018ರಲ್ಲಿ ನಾನು ಮನಸ್ಸು ಮಾಡಿದ್ರೆ ಕೇಸ್ ಮುಚ್ಚಿ ಹಾಕಿಸಬಹುದಿತ್ತು. ಒಬ್ಬ ಅಧಿಕಾರಿಯ ಮೂಲಕ ಹೆಚ್‌ಡಿಕೆ ಬಂಧಿಸಬೇಕೆಂದು ಪ್ಲ್ಯಾನ್ ನಡೆದಿದೆ. ವಕೀಲರ ಸೂಚನೆಯಂತೆ ಜಾಮೀನು ಪಡೆದುಕೊಂಡು ಹೋದೆ. ಇದಕ್ಕೇಕೆ ಜಾಮೀನು ಪಡೆದ್ರಿ ಎಂದು ಅಧಿಕಾರಿಗಳು ಹೇಳಿದ್ದರು. 3 ತಿಂಗಳಲ್ಲಿ ತನಿಖೆ ಮುಗಿಸಿ ಎಂದು ಸುಪ್ರೀಂ ಕೋರ್ಟ್ ಹೇಳಿತ್ತು. 2018ರಲ್ಲಿ ಎಸ್‌ಐಟಿ ಅಧಿಕಾರಿಗಳು ರಿಪೋರ್ಟ್ ಸಲ್ಲಿಸಿದ್ದಾರೆ. ಇಷ್ಟಾದ್ರೂ ಕಾಂಗ್ರೆಸ್ಸಿಗರ ಜತೆ ಸೇರಿ ಸರ್ಕಾರ ಮಾಡಬೇಕಾಯ್ತು ಎಂದರು.

ಸಿಎಂ ಸಿದ್ದರಾಮಯ್ಯ ಕಾನೂನು ಅಲಹೆಗಾರ ಪೊನ್ನಣ್ಣ ವಿರುದ್ಧ ವಾಗ್ದಾಳಿ ನಡೆಸಿದ ಕುಮಾರಸ್ವಾಮಿ, ಪೊನ್ನಣ್ಣ ಅವರೇ ನೀವೊಬ್ಬರೇ ಅಲ್ಲ ಕಾನೂನು ತಜ್ಞರು. ಮುಖ್ಯಮಂತ್ರಿಗಳ ಮನೆಯಿಂದಲೇ ನನಗೆ ಮಾಹಿತಿ ಕೊಡುತ್ತಾರೆ. ಸರ್ಕಾರದ ಮಟ್ಟದಲ್ಲಿ ಈ ದಾಖಲೆ ಇದೆಯೋ ಇಲ್ವೋ ಗೊತ್ತಿಲ್ಲ. ತನಿಖೆ ನಡೆಸುತ್ತಿರುವ ಎಸ್‌ಐಟಿ ಬಳಿ ಇದೆಯೋ ಇಲ್ವೋ ಗೊತ್ತಿಲ್ಲ. ನಾನು ದಾಖಲೆಗಳನ್ನು ಭದ್ರವಾಗಿ ಇಟ್ಟುಕೊಂಡಿದ್ದೇನೆ ಎಂದರು.

ರಾಜ್ಯಪಾಲರ ಹತ್ತಿರ ಅನುಮತಿ ಕೇಳಿ ಎಂದು ಕೇಳಿದ್ರಾ ಎಂದು ಪ್ರಶ್ನಿಸಿದ ಅವರು, ಸಾಯಿ ವೆಂಕಟೇಶ್ವರ ಕೇಸ್‌ಗೆ ಸಂಬಂಧಿಸಿದ ಎಲ್ಲಾ ದಾಖಲೆಗಳಿವೆ. ಸಾಯಿ ವೆಂಕಟೇಶ್ವರ ಮಿನರಲ್ಸ್ ನಲ್ಲಿ ನನ್ನ ಸಹಿ ಬಗ್ಗೆ ತನಿಖೆ ನಡೆಯುತ್ತಿದೆ. ಸಾಯಿ ವೆಂಕಟೇಶ್ವರ ಮಿನರಲ್ಸ್ ಕೋರ್ಟನ್ನೇ ಯಾಮಾರಿಸಿದೆ ಎಂದರು.

# ಐಸಿಸಿ ಅಧ್ಯಕ್ಷರಾಗಿ ಜಯ್ ಶಾ ಅವಿರೋಧ ಆಯ್ಕೆ ಸಾಧ್ಯತೆ



ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿಯ ನೂತನ ಅಧ್ಯಕ್ಷರಾಗಿ ಜಯ್ ಶಾ ಅವಿರೋಧವಾಗಿ ಆಯ್ಕೆಯಾಗುವ ಸಾಧ್ಯತೆಯಿದೆ ಎಂದು ವರದಿಯಾಗಿದೆ. ಮುಂಬರುವ ಐಸಿಸಿ ಚುನಾವಣೆಯಲ್ಲಿ ಜಯ್ ಶಾ ಸ್ಪರ್ಧಿಸುವುದು ಬಹುತೇಕ ಖಚಿತವಾಗಿದೆ. ಆದರೆ ಶಾ ಅವರಿಗೆ ಪ್ರತಿಸ್ಪರ್ಧಿಯಾಗಿ ಕಣಕ್ಕಿಳಿಯಲು ಯಾರು ಕೂಡ ಆಸಕ್ತಿ ಹೊಂದಿಲ್ಲ. ಹೀಗಾಗಿ ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಐಸಿಸಿ ಚುಕ್ಕಾಣಿ ಹಿಡಿಯುವುದು ಖಚಿತ ಎನ್ನಲಾಗುತ್ತಿದೆ.

ಪ್ರಸ್ತುತ ಐಸಿಸಿ ಅಧ್ಯಕ್ಷರಾಗಿರುವ ಗ್ರೆಗ್ ಬಾರ್ಕ್ಲೇ ಅವರ ಕಾರ್ಯಾವಧಿ ನವೆಂಬರ್ 30 ಕ್ಕೆ ಮುಗಿಯಲಿದೆ. ಅದಕ್ಕೂ ಮುನ್ನ ಅಧ್ಯಕ್ಷ ಸ್ಥಾನಕ್ಕಾಗಿ ಚುನಾವಣೆ ನಡೆಯಬೇಕಿದ್ದು, ಇದಕ್ಕಾಗಿ ಆಗಸ್ಟ್ 27 ರೊಳಗೆ ನಾಮಪತ್ರ ಸಲ್ಲಿಸಬೇಕು. ಇತ್ತ ಜಯ್ ಶಾ ಹೆಸರು ಐಸಿಸಿ ಹುದ್ದೆಗೆ ಕೇಳಿಬಂದರೂ, ಪ್ರತಿಸ್ಪರ್ಧಿಯಾಗಿ ಯಾರೂ ಸಹ ಈವರೆಗೆ ನಾಮಪತ್ರ ಸಲ್ಲಿಸಿಲ್ಲ ಎಂಬುದು ವಿಶೇಷ.

ಹೀಗಾಗಿ ಜಯ್ ಶಾ ನಾಮಪತ್ರ ಸಲ್ಲಿಸಿದರೆ ಅವಿರೋಧವಾಗಿ ಆಯ್ಕೆಯಾಗುವುದು ಬಹುತೇಕ ಖಚಿತ. ಇದಕ್ಕೂ ಮುನ್ನ ಗ್ರೆಗ್ ಬಾರ್ಕ್ಲೇ ಅವರನ್ನು 2020 ರಲ್ಲಿ ಅವಿರೋಧವಾಗಿ ಆಯ್ಕೆ ಮಾಡಲಾಗಿತ್ತು. ಇದಾದ ಬಳಿಕ 2022ರಲ್ಲಿ ಅವರು ಮರು ಚುನಾಯಿತರಾಗಿದ್ದರು. ಇದೀಗ ಅವರ ಕಾರ್ಯಾವಧಿ ಮುಗಿಯುತ್ತಿದ್ದು, ಹೀಗಾಗಿ ಈ ಬಾರಿ ಚುನಾವಣೆ ನಡೆಸಲು ನಿರ್ಧರಿಸಲಾಗಿದೆ.

**ಚುನಾವಣೆ ನಡೆದರೆ ಎಷ್ಟು ಮತ ಪಡೆಯಬೇಕು?:** ಐಸಿಸಿ ಅಧ್ಯಕ್ಷರ ಆಯ್ಕೆಯು ಸಾಮಾನ್ಯವಾಗಿ 16 ಮತಗಳನ್ನು ಹೊಂದಿರುತ್ತದೆ. ವಿಜೇತರನ್ನು ನಿರ್ಧರಿಸಲು, ಒಂಬತ್ತು ಮತಗಳ ಬಹುಮತದ ಅಗತ್ಯವಿದೆ (51%). ಈ ಹಿಂದೆ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡವರಿಗೆ ಮೂರನೇ ಎರಡರಷ್ಟು ಬಹುಮತವಿತ್ತು. ಇದೀಗ ಇತರೆ ಕ್ರಿಕೆಟ್ ಮಂಡಳಿಗಳ ಬೆಂಬಲದೊಂದಿಗೆ ಜಯ್ ಶಾ ಅಂತಾರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್‌ನ ಪ್ರಧಾನ ಹುದ್ದೆಗೇರುವ ನಿರೀಕ್ಷೆಯಲ್ಲಿದ್ದಾರೆ.

ಒಂದು ವೇಳೆ 35 ವರ್ಷದ ಜಯ್ ಶಾ ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿಯ ಅಧ್ಯಕ್ಷ ಸ್ಥಾನಕ್ಕೇರಿದರೆ, ಐಸಿಸಿ ಮುಖ್ಯಸ್ಥರಾದ ಅತ್ಯಂತ ಕಿರಿಯ ವ್ಯಕ್ತಿ ಎನಿಸಿಕೊಳ್ಳಲಿದ್ದಾರೆ. ಅಲ್ಲದೆ ಈ ಹುದ್ದೆಯನ್ನು ಅಲಂಕರಿಸಿದ ಐದನೇ ಭಾರತೀಯ ಎಂಬ ಹೆಗ್ಗಳಿಕೆಗೂ ಪಾತ್ರರಾಗಲಿದ್ದಾರೆ.

**ಐಸಿಸಿ ಅಧ್ಯಕ್ಷರಾದ ಭಾರತೀಯರು ಯಾರೆಲ್ಲಾ?:** ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿಯ ಅಧ್ಯಕ್ಷ ಸ್ಥಾನದಲ್ಲಿ ಈವರೆಗೆ ನಾಲ್ವರು ಭಾರತೀಯರು ಕಾಣಿಸಿಕೊಂಡಿದ್ದಾರೆ. ಅವರೆಂದರೆ, ಜಗಮೋಹನ್ ದಾಲ್ಮಿಯಾ, ಶರದ್ ಪವಾರ್, ಎನ್ ಶ್ರೀನಿವಾಸನ್ ಮತ್ತು ಶಶಾಂಕ್ ಮನೋಹರ್. ಈ ಬಾರಿಯ ಚುನಾವಣೆಯಲ್ಲಿ ಜಯ್ ಶಾ ಸ್ಪರ್ಧಿಸಿ ಗೆದ್ದರೆ ಈ ಸ್ಥಾನಕ್ಕೇರಿದ ಐದನೇ ಭಾರತೀಯ ಎನಿಸಿಕೊಳ್ಳಲಿದ್ದಾರೆ.

# ವಿಜಯೇಂದ್ರ ಟಿಕೆಟ್ ಕೊಡಿಸುವ ಮಾತು ಕೊಟ್ಟಿದ್ದಾರೆ



**ರಾಮನಗರ:** ಚನ್ನಪಟ್ಟಣ ಮೈತ್ರಿ ಟಿಕೆಟ್ ಕಗ್ಗಂಟು ಮುಂದುವರಿದಿದ್ದು, ಟಿಕೆಟ್ ಗಿಟ್ಟಿಸಿಕೊಳ್ಳಲು ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಪದೇ ಪದೇ ದೆಹಲಿ ಪ್ರವಾಸ ಮಾಡುತ್ತಿದ್ದಾರೆ. ರಾಜ್ಯ ಬಿಜೆಪಿ ನಾಯಕರ ಜೊತೆ ಸಿ.ಪಿ.ಯೋಗೇಶ್ವರ್ ಸೋಮವಾರ ದೆಹಲಿಗೆ ತೆರಳಲಿದ್ದಾರೆ.

ಟಿಕೆಟ್ ವಿಚಾರವಾಗಿ ವರಿಷ್ಠರ ಜೊತೆ ಸಭೆ ನಡೆಯಲಿದ್ದು, ಸಭೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ, ಬಸವರಾಜ್ ಬೊಮ್ಮಾಯಿ, ಡಾ.ಅಶ್ವಥ್ ನಾರಾಯಣ್, ಸಿ.ಟಿ.ರವಿ, ಅರವಿಂದ್ ಬೆಲ್ಲದ್ ಸಭೆಯಲ್ಲಿ ಭಾಗಿಯಾಗಲಿದ್ದಾರೆ. ಅಮಿಶ್ ಶಾ ಹಾಗೂ ಜೆ.ಪಿ.ನಡ್ಡಾ ನೇತೃತ್ವದಲ್ಲಿ ಸಭೆ ನಡೆಸಿ ಬಳಿಕ ಕುಮಾರಸ್ವಾಮಿ ಜೊತೆಗೂ ಬಿಜೆಪಿ ನಾಯಕರು ಚರ್ಚೆ ನಡೆಸಲಿದ್ದಾರೆ.

ಇನ್ನೂ ಈ ಕುರಿತು ಚನ್ನಪಟ್ಟಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಟಿಕೆಟ್ ಸಿಗುವ ವಿಶ್ವಾಸ ವ್ಯಕ್ತಪಡಿಸಿದರು. ರಾಜ್ಯ ಬಿಜೆಪಿ ನಾಯಕರು ಜವಾಬ್ದಾರಿ ತೆಗೆದುಕೊಂಡು ಈ ಚುನಾವಣೆ ನಡೆಸಬೇಕು. ಇದರಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಹೆಚ್‌ಡಿಕೆ ಹೊಣೆಗಾರಿಕೆ ಇದೆ. ಚನ್ನಪಟ್ಟಣ ಕ್ಷೇತ್ರದಲ್ಲಿ ಮೈತ್ರಿ ಅಭ್ಯರ್ಥಿ ಗೆಲ್ಲಬೇಕು. ಮುಂದಿನ ವಾರ ಎಲ್ಲಾ ಗೊಂದಲಕ್ಕೂ ತೆರೆ ಬೀಳಲಿದೆ. 100ಕ್ಕೆ 100ರಷ್ಟು ನನಗೆ ಟಿಕೆಟ್ ಸಿಗುವ ಭರವಸೆ ಇದೆ ಎಂದರು.

ಮೊದಲು ಎರಡೂ ಪಕ್ಷದ ನಾಯಕರ ಸಮನ್ವಯ ಸಭೆ ಆಗಬೇಕು. ಈ ಸಂಬಂಧ ಇಂದು ದೆಹಲಿಗೆ ಹೋಗಬೇಕಿತ್ತು. ಆದರೆ ಕೆಲಸ ರಾಜಕೀಯ ವಿದ್ಯಮಾನಗಳಿಂದ ಪ್ರವಾಸ ಮುಂದೂಡಿದ್ದೇವೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನನಗೆ ಟಿಕೆಟ್ ಕೊಡುವ ಮಾತು ಕೊಟ್ಟಿದ್ದಾರೆ. ಆದರೆ ಇದು ಕುಮಾರಸ್ವಾಮಿ ಅವರ ಕ್ಷೇತ್ರ. ಹಾಗಾಗಿ ವರಿಷ್ಠರ ಜೊತೆ ಮಾತನಾಡಿ ತೀರ್ಮಾನ ಮಾಡುತ್ತೇವೆ ಎಂದಿದ್ದಾರೆ. ಈ ವಿಚಾರದಲ್ಲಿ ರಾಜ್ಯ ಬಿಜೆಪಿ ನಾಯಕರು ನನ್ನ ಜೊತೆ ಇದ್ದಾರೆ. ಹಳೇ ಮೈಸೂರು ಭಾಗದಲ್ಲಿ ಬಿಜೆಪಿ ಗೆಲ್ಲುವ ಏಕೈಕ ಕ್ಷೇತ್ರ ಇದು. ಹಾಗಾಗಿ ಎರಡು ಪಕ್ಷದ ನಾಯಕರಿಗೆ ಟಿಕೆಟ್ ಕೊಡಿ ಅಂತ ಕೇಳಿದ್ದೇನೆ. ಹೆಚ್‌ಡಿಕೆಯನ್ನು ಎರಡು ಬಾರಿ ಭೇಟಿ ಮಾಡಿದ್ದೇನೆ. ಅವರು ಕೂಡ ಟಿಕೆಟ್ ಕೊಡಲು ಒಪ್ಪಿದ್ದಾರೆ. ನಾನು ಚುನಾವಣೆ ಸ್ಪರ್ಧೆ ಮಾಡೇ ಮಾಡುತ್ತೇನೆ. ನನ್ನ ಮೊದಲ ಆಧ್ಯತೆ ಮಾತೃಪಕ್ಷ ಬಿಜೆಪಿಗೆ. ಇಲ್ಲವಾದರೇ ಮುಂದಿನ ಯೋಚನೆ ಮಾಡುತ್ತೇನೆ ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com